ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಜುಲೈ 23 ಬುಧವಾರ 2025

ಸಂಪುಟ: 46 | ಸಂಚಿಕೆ: 97 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ರೈತರಿಗೆ 40 ಸಾವಿರ ಸೌರ ಕೃಷಿ ಪಂಪ್‌ಸೆಟ್

ಕುಸುಮ್-ಬಿ ಯೋಜನೆಯಡಿ ಅನುಷ್ಠಾನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ





ಸಿದ್ದರಾಮಯ್ಯ

ಬೆಂಗಳೂರು, ಜು.22– ಸೌರ ಕೃಷಿ ಪಂಪ್ ಸೆಟ್ ಯೋಜನೆ ಕುಸುಮ್–ಬಿ ಅಡಿ 40 ಸಾವಿರ ಪಂಪ್‌ಸೆಟ್‌ಗಳ ಅಳವಡಿಕೆಗೆ ಅನುಮೋದನೆ ನೀಡಲಾಗಿದ್ದು, ತ್ವರಿತ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಇಂದು ಕುಸುಮ್–ಬಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಿಎಂ, ಕುಸುಮ್–ಬಿ ಯೋಜನೆ ಅನುಷ್ಠಾನವನ್ನು ತ್ವರಿತಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಸಭೆಯಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್, ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕುಸುಮ್–ಬಿ ಪ್ರಧಾನ ಮಂತ್ರಿ ಕಿಸಾನ್ ಉರ್ಜಾ ಸುರಕ್ಷಾ ಏವಂ ಉತ್ಥಾನ ಮಹಾಭಿಯಾನ(ಪಿಎಂ ಕುಸುಮ್) ಯೋಜನೆಯ ಬಿ ಘಟಕವಾಗಿದ್ದು, ಇದು ನೀರಾವರಿಗಾಗಿ 14 ಲಕ್ಷ ಸ್ಟ್ಯಾಂಡ್–ಅಲೋನ್ ಸೌರ ಕೃಷಿ ಪಂಪ್‌ಸೆಟ್‌ಗಳ ಸ್ಥಾಪನೆಯ ಮೇಲೆ ಕೇಂದ್ರೀಕರಿಸುತ್ತದೆ.

ಈ ಯೋಜನೆಯಡಿಯಲ್ಲಿ, ಸೋಲಾರ್ ಕೃಷಿ ಪಂಪ್‌ಸೆಟ್ ಅಳವಡಿಸಲು ಕೇಂದ್ರ ಸರ್ಕಾರ ಶೇ.30 ರಷ್ಟು, ರಾಜ್ಯ ಸರ್ಕಾರ ಶೇ.50ರಷ್ಟು ಸಬ್ಸಿಡಿ ಒದಗಿಸುತ್ತಿದ್ದು, ಫಲಾನುಭವಿಗಳು ಶೇ. 20ರಷ್ಟು ಭರಿಸಬೇಕಿದೆ.

ಇಂದು ನಡೆದ ಸಭೆಯಲ್ಲಿ ಮುಖ್ಯಮಂತ್ರಿಗಳು, 40,000 ಪಂಪ್‌ಸೆಟ್‌ಗಳ ಅಳವಡಿಕೆಗೆ ಅನುಮೋದನೆ ನೀಡಿರುವುದನ್ನು ಗಮನಿಸಿದರು ಮತ್ತು ಅವುಗಳ ಅನುಷ್ಠಾನಕ್ಕೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಈ ಯೋಜನೆಯಡಿಯಲ್ಲಿ ಹೆಚ್ಚುವರಿಯಾಗಿ 25,000 ರೈತರು ಅರ್ಜಿ ಸಲ್ಲಿಸಿದ್ದಾರೆ ಮತ್ತು ರಾಜ್ಯ ಸರ್ಕಾರವು ಇದಕ್ಕಾಗಿ 752 ಕೋಟಿ ರೂ.ಗಳನ್ನು ಖರ್ಚು ಮಾಡಲಿದೆ. ಯೋಜನೆ ಸಮರ್ಪಕ ಅನುಷ್ಠಾನಗೊಳಿಸಿದ ಬಳಿಕ ಸಬ್ಸಿಡಿ ಮೊತ್ತ ಕಡಿಮೆಯಾಗಲಿದೆ.

4.5 ಲಕ್ಷ ಅನಧಿಕೃತ ಐಪಿ ಸೆಟ್‌ಗಳ ಪೈಕಿ 2 ಲಕ್ಷ ಐಪಿ ಸೆಟ್ ಸಂಪರ್ಕ ಅಧಿಕೃತಗೊಳಿಸಲಾಗಿದೆ. ಈ ಅನಧಿಕೃತ ಐಪಿ ಸೆಟ್‌ಗಳನ್ನು ಕುಸುಮ್–ಬಿ ಯೋಜನೆಯಡಿ ಆದ್ಯತೆ ಮೇರೆಗೆ ತರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ.

ರೈತರಿಗೆ ಸ್ವಂತ ವಿದ್ಯುತ್ ಮೂಲಸೌಕರ್ಯ ಕಲ್ಪಿಸಲು ಅವಕಾಶ ಕಲ್ಪಿಸಲಾಗುತ್ತಿದ್ದು, ಟ್ರಾನ್ಸ್‌ಫಾರ್ಮರ್‌ಗಳನ್ನು ಇಲಾಖೆ ಒದಗಿಸಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ನೀರಾವರಿ ಪಂಪ್‌ಸೆಟ್‌ಗಳಿಗೆ 2024–25ರ ಸಾಲಿನಲ್ಲಿ 12,785 ಕೋಟಿ ರೂಪಾಯಿಗಳ ಅನುದಾನ ಹಂಚಿಕೆ ಆಗಿದ್ದು, ಫೆಬ್ರವರಿ 2025ರ ವರೆಗೆ ರೂ. 11,720 ಕೋಟಿ ಬಿಡುಗಡೆ ಆಗಿದೆ. 2025–26ರಲ್ಲಿ 16,021ಕೋಟಿ ರೂ.ಗಳ ಆಯವ್ಯಯ ಹಂಚಿಕೆ ಆಗಿದೆ.

ಧರ್ಮಸ್ಥಳ ಪ್ರಕರಣ

ಎಸ್‌ಐಟಿಯಿಂದ ಇಂದಿನಿಂದ ತನಿಖೆ

ಮಂಗಳೂರು, ಜು.22– ಧರ್ಮಸ್ಥಳದಲ್ಲಿ ಶವಗಳ ಹೂತಿಟ್ಟ ಪ್ರಕರಣ ಬಗ್ಗೆ ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿದ್ದು, ನಾಳೆಯಿಂದ (ಜು.23) ಎಸ್‌ಐಟಿ ತಂಡ ತನಿಖೆ ಆರಂಭಿಸಲಿದೆ.

ಹಿರಿಯ ಐಪಿ ಎಸ್ ಅಧಿಕಾರಿ ಪ್ರಣವ್ ಮೊಹಾಂತಿ ನೇತೃತ್ವದ ವಿಶೇಷ ತನಿಖಾ ತಂಡ ನಾಳೆ ಧರ್ಮಸ್ಥಳಕ್ಕೆ ತೆರಳಲಿದೆ. ಈ ವೇಳೆ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಅನಾಮಿಕ ವ್ಯಕ್ತಿ ನೀಡಿದ ದೂರಿನ ತನಿಖೆ ನಡೆಸಲಿದೆ. ಮೊದಲಿಗೆ ಧರ್ಮಸ್ಥಳ ಪೊಲೀಸ್ ಠಾಣೆಗೆ ಆಗಮಿಸಲಿರೋ ಎಸ್‌ಐಟಿ ಅಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲಾ ಎಸ್‌ಪಿ, ಧರ್ಮಸ್ಥಳ ಪೊಲೀಸ್ ▶ 6ನೇ ಪುಟಕ್ಕೆ



ಪ್ರಣವ್ ಮೊಹಾಂತಿ

ಸಸ್ಯ ಸಂಪತ್ತು ನಾಶ; ವನ್ಯಜೀವಿಗಳ ಜೀವಕ್ಕೆ ಸಂಚಕಾರ ಹಿನ್ನೆಲೆ

ಅರಣ್ಯಗಳಲ್ಲಿ ಸಾಕುಪ್ರಾಣಿ ಪ್ರವೇಶ ನಿಷಿದ್ಧ



ಸಂಗ್ರಹ ಚಿತ್ರ

ಬೆಂಗಳೂರು, ಜು.22– ರಾಜ್ಯದ ಎಲ್ಲಾ ಅರಣ್ಯ ಪ್ರದೇಶದೊಳಗೆ ದನ–ಕರು, ಮೇಕೆ, ಕುರಿ ಮೇಯಿಸುವುದನ್ನು ನಿಷೇಧಿಸಲು ನಿಯಮಾನುಸಾರ ಕ್ರಮ ವಹಿಸುವಂತೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ಈ ಸಂಬಂಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸೂಚನೆ ನೀಡಿರುವ ಅವರು, ದೊಡ್ಡ ಸಂಖ್ಯೆಯಲ್ಲಿ ಜಾನುವಾರುಗಳನ್ನು ಅರಣ್ಯ ಪ್ರದೇಶದೊಳಗೆ ಮೇಯಲು ಬಿಡುವುದರಿಂದ ಕಾಡಿನಲ್ಲಿ ಆಗಷ್ಟೇ ಮೊಳಕೆ ಒಡೆದ ಚಿಕ್ಕಪುಟ್ಟ ಸಸಿಗಳು ಸಾಕುಪ್ರಾಣಿಗಳಿಗೆ ಆಹಾರವಾಗಿ, ಅರಣ್ಯದಲ್ಲಿ ಹೊಸ ಗಿಡಗಳು ಬೆಳೆಯದೇ ಅರಣ್ಯ ಸಂವರ್ಧನೆಗೆ ಅಡ್ಡಿಯಾಗುತ್ತಿದೆ ಎಂದು ಪರಿಸರ ಪ್ರೇಮಿಗಳು ಅಭಿಪ್ರಾಯಪಟ್ಟಿರುವುದಾಗಿ ತಿಳಿಸಿದ್ದಾರೆ.



ದೊಡ್ಡ ಸಂಖ್ಯೆಯ ಸಾಕುಪ್ರಾಣಿಗಳು ಕಾಡಿನಲ್ಲಿ ಮೇಯುವುದರಿಂದ ಕಾಡಿನಲ್ಲಿರುವ ಸಸ್ಯಾಹಾರಿ ಪ್ರಾಣಿಗಳಿಗೂ ಮೇವಿನ ಕೊರತೆ ಉಂಟಾಗುತ್ತದೆ. ಮಿಗಿಲಾಗಿ ಊರಿನಿಂದ ಕಾಡಿಗೆ ಮೇಯಲು ಹೋಗುವ ಪ್ರಾಣಿಗಳಿಂದ ವನ್ಯಜೀವಿಗಳು ಸಾಂಕ್ರಾಮಿಕ ರೋಗಗಳಿಗೆ ತುತ್ತಾಗುವ ಸಾಧ್ಯತೆಯೂ ಇರುತ್ತದೆ ಎಂಬ ಅಂಶವನ್ನೂ ಉಲ್ಲೇಖಿಸಿದ್ದಾರೆ.

ಅರಣ್ಯ ಸಂವರ್ಧನೆಯಾಗದಿದ್ದರೆ ಅದು ಆ ಅರಣ್ಯದಲ್ಲಿ ಹರಿಯುವ ನದಿಗಳ ಮೇಲೂ ಪರಿಣಾಮ ಬೀರುತ್ತದೆ. ಇದರಿಂದ ವನ್ಯಜೀವಿ–ಮಾನವ ಸಂಘರ್ಷ ಹೆಚ್ಚಳವಾಗುತ್ತದೆ. ಕಾಡಿನೊಳಗೆ ಹೋಗುವ ದನಗಾಹಿಗಳು ವನ್ಯಜೀವಿ ದಾಳಿಯಿಂದ ಮೃತಪಟ್ಟರೆ ಪರಿಹಾರ ನೀಡಲೂ ನಿಯಮದಲ್ಲಿ ಅವಕಾಶ ಇರುವುದಿಲ್ಲ. ಹೀಗಾಗಿ ಕೂಡಲೇ ಅಭಯಾರಣ್ಯಗಳಲ್ಲಿ ▶ 6ನೇ ಪುಟಕ್ಕೆ

ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಆ.1ಕ್ಕೆ ರಾಜ್ಯದ ಎಲ್ಲಾ ಡಿಸಿ ಕಚೇರಿ ಮುಂದೆ ಪ್ರತಿಭಟನೆಗೆ ಮಾದಿಗರ ಸಂಘಟನೆಗಳ ನಿರ್ಧಾರ

ಆ.16ರೊಳಗೆ ಜಾರಿ ಮಾಡದಿದ್ದರೆ 'ಕರ್ನಾಟಕ ಬಂದ್'ಗೂ ಕರೆ ನೀಡುವ ಅನಿವಾರ್ಯತೆ

ಬೆಂಗಳೂರು, ಜು.22(ಕೆಎಂಶಿ)– ಒಳ ಮೀಸಲಾತಿ ಜಾರಿಗೆ ರಾಜ್ಯ ಸರ್ಕಾರದ ಗಮನ ಸೆಳೆಯಲು ಆಗಸ್ಟ್ 1ರಂದು ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಲು ಮಾದಿಗರ ಸಂಘಟನೆಗಳು ತೀರ್ಮಾನಿಸಿವೆ ಎಂದು ಮಾಜಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಇಂದಿಲ್ಲಿ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಗಸ್ಟ್ 1ಕ್ಕೆ ನ್ಯಾಯಮೂರ್ತಿ ಚಂದ್ರಚೂಡ್ ತೀರ್ಪು ಕೊಟ್ಟು ಒಂದು ವರ್ಷ ಆಗಲಿದೆ. ಕ್ಯಾಬಿನೆಟ್ ತೀರ್ಮಾನ ಮಾಡಿ ಸದನದಲ್ಲಿ ಮಂಡಿಸದಿದ್ದರೆ ಕರ್ನಾಟಕ ಬಂದ್‌ಗೆ ಮಾದಿಗರು ಸಭೆ ನಡೆಸಿ ತೀರ್ಮಾನಿಸಲಿದ್ದಾರೆ ಎಂದರು.

ಮುಂದುವರೆದು, ಅಸಹಕಾರ ಚಳವಳಿ ನಡೆಸಲಾಗುವುದು. ಸರ್ಕಾರ ನಡೆಸಲು ಬಿಡುವುದಿಲ್ಲ. ಒಳ ಮೀಸಲಾತಿ ಜಾರಿ ಮಾಡದ್ದರಿಂದಾಗಿ ಕಾಂಗ್ರೆಸ್ ಸೋತಿತು ಎಂಬುದಾಗಿ ಈ ಹಿಂದೆ ಮುಖ್ಯಮಂತ್ರಿ ಹೇಳಿದ್ದರು. ಸೋಲು ಮತ್ತೊಮ್ಮೆ ಮರುಕಳಿಸುವಂತೆ ಮಾದಿಗ ಸಮುದಾಯ ಮಾಡಲಿದೆ.



ಒಳ ಮೀಸಲಾತಿಗೆ ಮಾದಿಗರ ಸಮಿತಿ ಮೂರೂವರೆ ದಶಕಗಳಿಂದ ಹೋರಾಟ ಮಾಡುತ್ತಿದೆ. ತೆಲಂಗಾಣದಲ್ಲಿ ಮಾದಿಗರ ಮೀಸಲಾತಿ ಅನ್ಯಾಯ ಸರಿಪಡಿಸಲು 1999ರಲ್ಲಿ ಒಳ ಮೀಸಲಾತಿ ಜಾರಿ ಮಾಡಲಾಯಿತು. ನಂತರ 2004ರಲ್ಲಿ ಸ್ಥಳೀಯ ಹೈಕೋರ್ಟ್ ಒಳಮೀಸಲಾತಿ ಅವಶ್ಯಕತೆ ಇದೆ ಎಂದಿತ್ತು. ಕಾಂಗ್ರೆಸ್, ಒಳ ಮೀಸಲಾತಿ ಅವಶ್ಯಕತೆ ಇಲ್ಲವೆಂದು ಅವಕಾಶ ನಿರಾಕರಿಸಿತ್ತು. ಸುಪ್ರೀಂಕೋರ್ಟ್ ತೀರ್ಪಿನ ನಂತರವೂ ಶೋಷಿತರಲ್ಲಿ ಶೋಷಿತರು, ವಂಚಿತರಲ್ಲಿ ವಂಚಿತರು, ಅಸ್ಪೃಶ್ಯರಲ್ಲಿ ಅಸ್ಪೃಶ್ಯರಿಗೆ ಮೀಸಲಾತಿ ನೀಡಿ ಬದ್ಧತೆ ಪ್ರದರ್ಶಿಸಲಿಲ್ಲ. ರಾಜ್ಯದಲ್ಲಿ ಅನೇಕ ವರ್ಷ ಆಡಳಿತ ನಡೆಸಿದ ಕಾಂಗ್ರೆಸ್ ಹಾಗೂ ಇತರ ಪಕ್ಷಗಳು ಮಾದಿಗರನ್ನು ಮರೆತಿವೆ. ತೆಲಂಗಾಣ, ಆಂಧ್ರಪ್ರದೇಶ, ಪಂಜಾಬ್‌ನಲ್ಲಿ ಒಳ ಮೀಸಲಾತಿ ಜಾರಿಗೆ ತರಲಾಗಿದೆ. ಕರ್ನಾಟಕ ಸರಕಾರ ಮೀನಾಮೇಷ ಎಣಿಸುತ್ತಿದೆ ಎಂದರು.

ಬೆಳಗಾವಿಯಲ್ಲಿ ಮಾದಿಗರು ನಡೆಸಿದ ಹೋರಾಟ ವೇಳೆ 3 ತಿಂಗಳಲ್ಲಿ ಒಳ ಮೀಸಲಾತಿ ಜಾರಿ ಮಾಡುವುದಾಗಿ ಸಚಿವರು ಆಶ್ವಾಸನೆ ಕೊಟ್ಟಿದ್ದರು. ▶ 6ನೇ ಪುಟಕ್ಕೆ

ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು ಜಿಲ್ಲಾ ವ್ಯಾಪ್ತಿ ಜಿಎಸ್‌ಟಿ ನೋಂದಣಿ ಸಂಬಂಧ 1314 ವರ್ತಕರಿಗೆ ನೋಟಿಸ್

- ವಾಣಿಜ್ಯ ತೆರಿಗೆಗಳ ಇಲಾಖೆ ಪ್ರಭಾರ ಜಂಟಿ ಆಯುಕ್ತೆ ಪಿ.ಡಿ.ಶೋಭಾ ಮಾಹಿತಿ
- ವಹಿವಾಟು ಆಧರಿಸಿ ತೆರಿಗೆ ವ್ಯಾಪ್ತಿಗೆ ತರಲು ನೋಟಿಸ್ ಜಾರಿ

ಮೈಸೂರು,ಜು.22(ಪಿಎಂ)– ವಾಣಿಜ್ಯ ತೆರಿಗೆಗಳ ಇಲಾಖೆಯಿಂದ ಮೈಸೂರು ವಿಭಾಗದಲ್ಲಿ (ಮೈಸೂರು, ಚಾಮರಾಜನಗರ, ಮಂಡ್ಯ ಮತ್ತು ಕೊಡಗು) ಒಟ್ಟು 1,314 ಪ್ರಕರಣಗಳಲ್ಲಿ ಜಿಎಸ್‌ಟಿ ನೋಂದಣಿ ಸಂಬಂಧ ನೋಟಿಸ್ ನೀಡಲಾಗಿದೆ ಎಂದು ವರ್ತಕರಿಗೆ ನೀಡಿರುವ ನೋಟಿಸ್ ಕುರಿತು ಇಲಾಖೆಯ ಪ್ರಭಾರ ಜಂಟಿ ಆಯುಕ್ತರಾದ (ಆಡಳಿತ ವಿಭಾಗ) ಪಿ.ಡಿ.ಶೋಭಾ ಮಾಹಿತಿ ನೀಡಿದರು.



ಪಿ.ಡಿ.ಶೋಭಾ

ತಮ್ಮ ಕಚೇರಿಯಲ್ಲಿ ಮಂಗಳವಾರ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಅವರು, ಅರ್ಹ ವರ್ತಕರನ್ನು ಜಿಎಸ್‌ಟಿಗೆ ನೋಂದಣಿ ಮಾಡಿಸುವುದು ಇಲಾಖೆಯ ನಿರಂತರ ಪ್ರಕ್ರಿಯೆ. ನೋಂದಣಿಯಾಗದ ವರ್ತಕರ ಸಂಬಂಧ ಇಲಾಖೆ ಸರ್ವೇ ಸಹ ನಡೆಸುತ್ತದೆ. ಹೊಸ ಮಳಿಗೆಗಳು ಆರಂಭವಾದಾಗ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸುವ ಪ್ರಕ್ರಿಯೆ ಸಹ ನಡೆಸಲಾಗುತ್ತದೆ. ಸದ್ಯ ಯುಪಿಐ ಮತ್ತು ಫೋನ್‌ಪೇ ಸೇರಿದಂತೆ ಡಿಜಿಟಲ್ ಪ್ಲಾಟ್‌ಫಾರಂ ಮೂಲಕ ಜಿಎಸ್‌ಟಿ ನೋಂದಣಿಯಾಗದ ವರ್ತಕರ ಮಾಹಿತಿ ಸಂಗ್ರಹ ಮಾಡಲಾಗಿದೆ ಎಂದರು.

ಏಕೀಕೃತ ಪಾವತಿ ವ್ಯವಸ್ಥೆ (ಯುಪಿಐ) ಮೂಲಕ ವರ್ಷಕ್ಕೆ ಸೇವೆಗಳ ಪೂರೈಕೆ 20 ಲಕ್ಷ ಮೇಲ್ಪಟ್ಟು, ಸರಕು ಪೂರೈಕೆ 40 ಲಕ್ಷ ಮೇಲ್ಪಟ್ಟು ನಡೆದ ವಹಿವಾಟಿನ ಆಧಾರದಲ್ಲಿ ವರ್ತಕರ ಮಾಹಿತಿ ಕಲೆ ಹಾಕಿ ನೋಟಿಸ್ ನೀಡಲಾಗಿದೆ. ಈ ಪ್ರಕರಣ ಗಳ ಸಂಬಂಧ ಇಲಾಖೆಯು ಪ್ರಾಥಮಿಕ ಹಂತದಲ್ಲಿ ವರ್ತಕರಿಗೆ ಇಂಟಿಮೇಷನ್ (ಸೂಚನಾ ಪತ್ರ) ಕಳುಹಿಸಲಿದ್ದು, ಜಿಎಸ್‌ಟಿ ನೋಂದಣಿಗೆ ಒಳಪಡುವ ಮಾಹಿತಿ ನೀಡುವ ಪ್ರಕ್ರಿಯೆ ನಡೆಸುತ್ತಿದೆ. ಆದಾಗ್ಯೂ ▶ 6ನೇ ಪುಟಕ್ಕೆ

ತೆರಿಗೆ ವಿನಾಯಿತಿ ಉತ್ಪನ್ನಗಳಿಗೆ ಜಿಎಸ್‌ಟಿ ನೋಂದಣಿ ಅಗತ್ಯವಿಲ್ಲ

ಮೈಸೂರು, ಜು.22(ಪಿಎಂ)– ಯುಪಿಐ ಆನ್‌ಲೈನ್ ಪೇಮೆಂಟ್ ದತ್ತಾಂಶದ ಆಧಾರದಲ್ಲಿ ವರ್ತಕರ ಮಾಹಿತಿ ಕಲೆ ಹಾಕಲಾಗಿದೆ. ಹೀಗಾಗಿ ಯಾವ ವರ್ತಕರು ಯಾವ ರೀತಿಯ ಉತ್ಪನ್ನ ಮಾರಾಟ ಮಾಡುತ್ತಿದ್ದಾರೆ ಎಂಬ ಮಾಹಿತಿ ಸದ್ಯ ಲಭ್ಯವಿರುವುದಿಲ್ಲ. ತೆರಿಗೆ ವಿನಾಯಿತಿ ಉತ್ಪನ್ನಗಳ ವರ್ತಕರನ್ನು ಪರಿಶೀಲನೆ ವೇಳೆ ಜಿಎಸ್‌ಟಿ ನೋಂದಣಿಯಿಂದ ಕೈಬಿಡಲಾಗುವುದು ಎಂದು ಪಿ.ಡಿ.ಶೋಭಾ ತಿಳಿಸಿದರು.

ಪ್ಯಾನ್ ನಂಬರ್ ಹಾಗೂ ವಿಳಾಸದ ಮಾಹಿತಿ ಮಾತ್ರ ಲಭ್ಯವಾದ ಹಿನ್ನೆಲೆಯಲ್ಲಿ ನೋಟಿಸ್ ನೀಡಲಾಗಿದೆ. ತೆರಿಗೆ ವ್ಯಾಪ್ತಿಗೆ ಬಾರದ ಉತ್ಪನ್ನಗಳನ್ನು ಮಾರಾಟ ಮಾಡುವ ವರ್ತಕರಿದ್ದರೆ, ಅವರು ತೆರಿಗೆಯಿಂದ ಹೊರಗುಳಿಯಲಿದ್ದಾರೆ. ಅಂತೆಯೇ ಇಂತಹ ಸಾಕಷ್ಟು ವರ್ತಕರು ಇಲಾಖೆಗೆ ಮಾಹಿತಿ ಸಲ್ಲಿಸಿದ್ದಾರೆ. ಹಾಗಾಗಿ ಅವರು ತೆರಿಗೆಯಿಂದ ಹೊರಗುಳಿಯಲಿದ್ದಾರೆ ಎಂದರು. ಫೋನ್ ಮೂಲಕ ತಮ್ಮ ವಹಿವಾಟಿನ ಉತ್ಪನ್ನದ (ತೆರಿಗೆ ವಿನಾಯಿತಿ ಉತ್ಪನ್ನ) ಬಗ್ಗೆ ಮಾಹಿತಿ ನೀಡಿದರೆ ನಮ್ಮ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಂತಹ ವರ್ತಕರನ್ನು ಜಿಎಸ್‌ಟಿ ನೋಂದಣಿ ಅಗತ್ಯವಿಲ್ಲದರ ಬಗ್ಗೆ ಕ್ರಮ ವಹಿಸಲಿದ್ದಾರೆ ಎಂದು ತಿಳಿಸಿದರು. ▶ 6ನೇ ಪುಟಕ್ಕೆ

ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆ ನಾಳೆಗೆ ಮುಂದೂಡಿಕೆ

ನವದೆಹಲಿ, ಜು.22– ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿಯಾಗಿರುವ ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆಯನ್ನು ಸುಪ್ರೀಂಕೋರ್ಟ್ ಗುರುವಾರ(ಜು.24)ಕ್ಕೆ ಮುಂದೂಡಿದೆ.



ನಟ ದರ್ಶನ್ ಪರ ಇಂದು ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಲಿಲ್ಲ. ಅವರು ಗೈರಾದ ಕಾರಣ ನಟನ ಪರ ಸಿದ್ಧಾರ್ಥ್ ದವೆ ಹಾಜರಾದರು. ಕಪಿಲ್ ಸಿಬಲ್ ಅವರು ಕೇಸಿನ ಬಗ್ಗೆ ಮಾಹಿತಿ ಕಲೆ ಹಾಕಲು ಸಮಯ ಬೇಕೆಂದು ಕೇಳಿದ್ದಕ್ಕೆ ಗುರುವಾರಕ್ಕೆ ವಿಚಾರಣೆ ಮುಂದೂಡಲಾಗಿದೆ. ಕಪಿಲ್ ಸಿಬಲ್ ಗೈರು ಹಿನ್ನೆಲೆ ವಾದ ಮಂಡನೆಗೆ ಕಾಲಾವಕಾಶ ಕೋರಲಾಗಿದೆ. ಲಿಖಿತ ರೂಪದಲ್ಲಿ ದಾಖಲೆ ತಯಾರಿಸಲು ▶ 6ನೇ ಪುಟಕ್ಕೆ

ರಸಗೊಬ್ಬರದ ಆತಂಕ ಬೇಡ

ಬೆಂಗಳೂರು, ಜು.22(ಕೆಎಂಶಿ)– ರಸಗೊಬ್ಬರಕ್ಕಾಗಿ ರೈತರು ಆತಂಕಪಡುವ ಅಗತ್ಯವಿಲ್ಲ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಇಂದಿಲ್ಲಿ ತಿಳಿಸಿದ್ದಾರೆ.

ರಸಗೊಬ್ಬರ ಮತ್ತು ಬಿತ್ತನೆ ಬೀಜ ಪೂರೈಕೆಗೆ ಸಂಬಂಧಿಸಿದಂತೆ ಪರಿಶೀಲನಾ ಸಭೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇರಾನ್ ಯುದ್ಧದಿಂದಾಗಿ ಇಡೀ ರಾಷ್ಟ್ರದಲ್ಲಿ ರಸಗೊಬ್ಬರ ಸಮಸ್ಯೆ ಎದುರಾಗಿದೆ.



ಚಲುವರಾಯಸ್ವಾಮಿ

ಚೀನಾ ಸಹ ನಮಗೆ ರಸಗೊಬ್ಬರ ಪೂರೈಕೆ ಸ್ಥಗಿತಗೊಳಿಸಿರುವುದು ಸಮಸ್ಯೆಗೆ ಕಾರಣವಾಗಿದ್ದು, ಕೇಂದ್ರದಿಂದ ನಮಗೆ ಬರಬೇಕಿದ್ದ ಪಾಲು ಸಮರ್ಪಕವಾಗಿ ಪೂರೈಕೆಯಾಗಿಲ್ಲ.

ಮುಂಗಾರು ಪೂರ್ವ ಮಳೆಯಿಂದಾಗಿ ರೈತರು ಮುಂಚಿತವಾಗಿಯೇ ಕೃಷಿ ಚಟುವಟಿಕೆ ಆರಂಭಿಸಿದ್ದು, ಗೊಂದಲಕ್ಕೆ ಕಾರಣಗಳಲ್ಲಿ ಒಂದಾಗಿದೆ.

ಬಿತ್ತನೆ ಬೀಜ ಹಾಗೂ ಯೂರಿಯಾಕ್ಕೆ ರೈತರು ಆತಂಕಪಡುವ ಅಗತ್ಯವಿಲ್ಲ. ಕೆಲವು ಜಿಲ್ಲೆಗಳಲ್ಲಿ ಸಣ್ಣಪುಟ್ಟ ಸಮಸ್ಯೆ ಇದೆ. ಉಳಿದಂತೆ ನಮ್ಮ ಬಳಿ 8 ಲಕ್ಷ ಮೆಟ್ರಿಕ್ ಟನ್ ಹೆಚ್ಚುವರಿ ಯೂರಿಯಾ



ದಾಸ್ತಾನು ಇದೆ. ಸಿಗುವುದೋ, ಇಲ್ಲವೋ ಎಂಬ ಧಾವಂತದಿಂದ ರೈತರು ಮುಗಿಬೀಳುತ್ತಿದ್ದು, ಆತಂಕ ಬೇಡ. ನಿಮಗೆ ಅಗತ್ಯವಿರುವಷ್ಟು ರಸಗೊಬ್ಬರ ಪೂರೈಕೆ ಮಾಡುವುದಾಗಿ ಭರವಸೆ ನೀಡಿದರು.

ಅಧಿಕಾರಿಗಳು ರೈತರಿಗೆ ಮನವರಿಕೆ ಮಾಡುವ ಕೆಲಸ ಮಾಡಿದ್ದಾರೆ. ಆದರೂ ಕೆಲವರು ದುಗುಡದಿಂದ ಖರೀದಿಗೆ ಮುಂದಾಗುತ್ತಿದ್ದಾರೆ.

ನಮಗೆ ಮತ್ತಷ್ಟು ರಾಸಾಯನಿಕ ಗೊಬ್ಬರ ಕಳುಹಿಸುವಂತೆ ಕೇಂದ್ರಕ್ಕೆ ಪತ್ರ ಬರೆದಿದ್ದೇವೆ. ಅಧಿಕಾರಿಗಳು ಸಂಪರ್ಕದಲ್ಲಿದ್ದು, ದಾಸ್ತಾನು ಪಡೆಯಲು ಕ್ರಮಕೈಗೊಂಡಿದ್ದಾರೆ. ಅತಿವೃಷ್ಟಿ, ಅನಾವೃಷ್ಟಿಯಿಂದ ಬೆಳೆ ಕಳೆದುಕೊಂಡ ರೈತರಿಗೆ ಪರಿಹಾರ ಒದಗಿಸಲು ಕಂದಾಯ ಮತ್ತು ನಮ್ಮ ಇಲಾಖಾ ಅಧಿಕಾರಿಗಳು ಜಂಟಿ ಸಮೀಕ್ಷೆ ಆರಂಭಿಸಿದ್ದಾರೆ ಎಂದು ಸಚಿವರು ತಿಳಿಸಿದರು.

ಮೈಸೂರು ಮಿತ್ರ

ದ್ವಿಚಕ್ರ ವಾಹನಗಳ ಪಾರ್ಕಿಂಗ್ ಸ್ಥಳ ಬದಲಾವಣೆಗೆ ಮನವಿ



ತಾತ್ಕಾಲಿಕವಾಗಿ ದ್ವಿಚಕ್ರ ವಾಹನಗಳ ಪಾರ್ಕಿಂಗ್ ಸ್ಥಳ ಬದಲಿಸಿ ಎಂದು ಸ್ಥಳೀಯರು ಕೆ.ಆರ್ ಸಂಚಾರ ಠಾಣೆಗೆ ಮನವಿ ಸಲ್ಲಿಸಿದರು.

ಮೈಸೂರು,ಜು.22–ಬಸ್ ಹಾಗೂ ಕಾರಿನ ಓಡಾಟ ಹೆಚ್ಚಾಗಿರುವ ಕಾರಣ ತಾತ್ಕಾಲಿಕವಾಗಿ ದ್ವಿಚಕ್ರ ವಾಹನಗಳ ಪಾರ್ಕಿಂಗ್ ಸ್ಥಳ ಬದಲಿಸಿ ಎಂದು ಸ್ಥಳೀಯರು ಕೆ.ಆರ್. ಸಂಚಾರ ಠಾಣೆಗೆ ಮನವಿ ಸಲ್ಲಿಸಿದ್ದಾರೆ.

ಅಗ್ರಹಾರದಲ್ಲಿ ಯುಜಿಡಿ ಸಮಸ್ಯೆಯಿಂದ ಅಲ್ಲಿನ ರಸ್ತೆ ಬಂದ್ ಆಗಿರುವುದರಿಂದ ಪಾರ್ಕಿಂಗ್‌ನಲ್ಲಿ ದ್ವಿಚಕ್ರ ವಾಹನಗಳು ಎರಡು ಭಾಗದಲ್ಲಿ ನಿಲ್ಲುವುದರಿಂದ ಬಸ್ ಹಾಗೂ ಕಾರ್‌ಗಳ ಓಡಾಟಕ್ಕೆ ಕಿರಿಕಿರಿ ಎದುರಾಗಿದೆ.

ಅಗ್ರಹಾರದಲ್ಲಿನ ಯುಜಿಡಿ ಕಾಮಗಾರಿ ಮುಗಿದ ಮೇಲೆ ದ್ವಿಚಕ್ರ ವಾಹನಗಳ ಪಾರ್ಕಿಂಗ್ ಅವಕಾಶ ನೀಡಿ. ಅಲ್ಲಿಯವರೆಗೆ ತಾತ್ಕಾಲಿಕವಾಗಿ ಸ್ಥಳ ಬದಲಿಸಿ ನೋ ಪಾರ್ಕಿಂಗ್ ನಾಮಫಲಕ ಹಾಕಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಒತ್ತಾಯಿಸಿದ್ದಾರೆ.

ಪಾರ್ಕಿಂಗ್ ಸ್ಥಳದಲ್ಲಿ ಬೈಕ್, ಕಾರ್ ನಿಲ್ಲಿಸುತ್ತಾರೆ. ಇಲ್ಲಿ ನಿತ್ಯ ನೂರಾರು ಬೈಕ್‌ಗಳು ನಿಂತಿರುತ್ತವೆ. ಇಂಥ ವಾಹನಗಳ ಪಾರ್ಕಿಂಗ್‌ನಿಂದ ಅಪಘಾತಕ್ಕೆ ಕಾರಣವಾಗಬಹುದು. ಕೆ.ಆರ್. ಸಂಚಾರ ಠಾಣೆ ವ್ಯಾಪ್ತಿಗೆ ಬರುವುದರಿಂದ ಮುನ್ನೆಚ್ಚರಿಕೆ ಕೈಗೊಳ್ಳಬೇಕೆಂದು ಸುಣ್ಣದಕೇರಿಯ ನಿವಾಸಿಗಳು ಮನವಿ ಮಾಡಿದ್ದಾರೆ.

ದಿ ಹೆರಿಟೇಜ್ ಕ್ಲಬ್ ಪದಾಧಿಕಾರಿಗಳು



ಮೈಸೂರಿನ ವಿಜಯನಗರ 3ನೇ ಹಂತದಲ್ಲಿರುವ ದಿ ಹೆರಿಟೇಜ್ ಕ್ಲಬ್‌ನ 2025–28ರ ಅವಧಿಯ ಆಡಳಿತ ಮಂಡಳಿ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಡಾ.ಎಸ್.ಮರೀಗೌಡ, ಉಪಾಧ್ಯಕ್ಷರಾಗಿ ಕೆ.ಡಿ.ಕಾರ್ಯಪ್ಪ, ಕಾರ್ಯದರ್ಶಿಯಾಗಿ ಹೆಚ್.ಆರ್.ಮೂರ್ತಿ, ಜಂಟಿ ಕಾರ್ಯದರ್ಶಿಯಾಗಿ ಹೆಚ್.ಎನ್.ಸುರೇಶ್, ಖಜಾಂಚಿಯಾಗಿ ಎಸ್.ಎನ್.ನಾಗೇಶ್, ನಿರ್ವಹಣಾ ಸಮಿತಿ ಸದಸ್ಯರಾಗಿ ಎಸ್.ಜಯರಾಮೇಗೌಡ, ಕೆ.ರವಿ, ಕೆ.ಎನ್.ಸುರೇಶ್, ಹರೀಶ್ ಮತ್ತು ಮಹದೇವಪ್ರಸಾದ್.ಎನ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸರ್ಕಾರಿ ಆಶ್ರಯ ಶಾಲೆಗಳ ಸಿಬ್ಬಂದಿ ಕಾಯಂಗೆ ಆಗ್ರಹ

ಮೈಸೂರು, ಜು.22(ಎಂಕೆ)– ಮಹರ್ಷಿ ವಾಲ್ಮೀಕಿ ಮತ್ತು ಆದಿವಾಸಿ ಸರ್ಕಾರಿ ಆಶ್ರಯ ಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಬುಡಕಟ್ಟು ಸಮುದಾಯಗಳ ನೌಕರರ ಕಾಯಂಗೊಳಿಸಬೇಕು ಎಂದು ಕರ್ನಾಟಕ ಅರಣ್ಯ ಮೂಲ ಬುಡಕಟ್ಟು ಸಮುದಾಯಗಳ ಒಕ್ಕೂಟದಿಂದ ಆಗ್ರಹಿಸಲಾಯಿತು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಕಾರ್ಯದರ್ಶಿ ಶೈಲೇಂದ್ರ ಕುಮಾರ್, ಮಹರ್ಷಿ ವಾಲ್ಮೀಕಿ ಮತ್ತು ಆದಿವಾಸಿ ಸರ್ಕಾರಿ ಆಶ್ರಮ ಶಾಲೆಗಳಲ್ಲಿ ಸುಮಾರು 15–20 ವರ್ಷಗಳಿಂದ ನಿರಂತರವಾಗಿ ಪಿಯುಸಿ, ಡಿ–ಎಡ್, ಬಿಎ, ಬಿಇಡಿ ತರಬೇತಿ ಪಡೆದ ಜೇನು ಕುರುಬ, ಕೊರಗ, ಸೋಲಿಗ, ಯರವ, ಮಲೆಕುಡಿಯ, ಬೆಟ್ಟಕುರುಬ ಸಮುದಾಯದವರು ಕೇವಲ 1850 ರೂ. ಗೌರವಧನದಲ್ಲಿ ಮಕ್ಕಳ ಸೇವೆಗಾಗಿ ತಮ್ಮ ಬದುಕನ್ನು ಮುಡಿಪಾಗಿಟ್ಟು ಕರ್ತವ್ಯ ನಿರ್ವಹಿಸಿದ್ದು, ಇವರನ್ನು ಕಾಯಂಗೊಳಿಸಬೇಕು ಎಂದು ಆಗ್ರಹಿಸಿದರು.

ತೋಟಗಾರಿಕೆ ಇಲಾಖೆ, ಅರಣ್ಯ ಇಲಾಖೆ ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆಗಳಲ್ಲಿ ವಿಶೇಷ ಪ್ರಾತಿನಿಧ್ಯ ನೀಡಿ ಉದ್ಯೋಗ ನೀಡಲಾಗಿದೆ. ಇದೇ ಮಾದರಿಯಲ್ಲಿ ಬುಡಕಟ್ಟು ಸಮುದಾಯದ ಸಿಬ್ಬಂದಿಗಳ ಸೇವೆ ಮತ್ತು ವಿದ್ಯಾರ್ಹತೆ ಆಧಾರದ ಮೇಲೆ ಆದಿವಾಸಿ ಶಿಕ್ಷಕರನ್ನು ಕಾಯಂಗೊಳಿಸಿ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಮನವಿ ಮಾಡಿದರು. ಶಿಕ್ಷಕರಾದ ಪ್ರಮೀಳಾ, ಒಕ್ಕೂಟದ ಪ್ರತಿನಿಧಿ ಬಿ.ಸಿದ್ದರಾಜು, ದಾಸಪ್ಪ, ಜಯರಾಜ್, ಲೋಕೇಶ್ ಉಪಸ್ಥಿತರಿದ್ದರು.

ಮುಡಾ ಪ್ರಕರಣದಲ್ಲಿ 'ಸುಪ್ರೀಂ' ತೀರ್ಪು ಸಂವಿಧಾನದ ಆಶಯಕ್ಕೆ ಸಂದ ಜಯ

ವಕೀಲ ಪುಟ್ಟಸಿದ್ದೇಗೌಡ ಅಭಿಮತ

ಮೈಸೂರು,ಜು.22(ಎಂಕೆ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಲ್ಲಿ ಬದಲಿ ನಿವೇಶನ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿಗೆ ಜಾರಿ ನಿರ್ದೇಶನಾಲಯ ನೀಡಿದ್ದ ಸಮನ್ಸ್ ರದ್ದು ಮಾಡಿರುವ ಸುಪ್ರೀಂ ಕೋರ್ಟ್, ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಆಶಯವನ್ನು ಎತ್ತಿ ಹಿಡಿದಿದೆ ಎಂದು ವಕೀಲ ಪುಟ್ಟಸಿದ್ದೇಗೌಡ ಹೇಳಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿದ ಅವರು, ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗಳಾದ ಬಿ.ಆರ್.ಗವಾಯಿ ಮತ್ತು ಕೆ.ವಿ.ವಿನೋದ್ ಚಂದ್ರ ಅವರನ್ನೊಳಗೊಂಡ ಪೀಠವು ನಡೆಸಿದ ವಿಚಾರಣೆಯಲ್ಲಿ ಹೈಕೋರ್ಟ್ ಆದೇಶದ ವಿರುದ್ಧ ಜಾರಿ ನಿರ್ದೇಶನಾಲಯ ಸಲ್ಲಿಸಿದ್ದ ಮೇಲ್ಮನವಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದೆ. ಜೊತೆಗೆ ಸಂವಿಧಾನದಡಿಯಲ್ಲಿ ಕರ್ತವ್ಯ ನಿರ್ವಹಿಸುವ ಸ್ವತಂತ್ರ ತನಿಖಾ ಸಂಸ್ಥೆಗಳು ಸರ್ಕಾರದ ಕೈಗೊಂಬೆಯಾಗದಂತೆ ಎಚ್ಚರಿಕೆ ನೀಡಿದೆ. ದೇಶದಲ್ಲಿ ದ್ವೇಷ ರಾಜಕಾರಣ ನಿಲ್ಲಬೇಕು. ಸರ್ವಾಧಿಕಾರದ ಆಡಳಿತ ದೇಶದಲ್ಲಿ ಹೆಚ್ಚು ಕಾಲ ಉಳಿಯುವುದಿಲ್ಲ ಎನ್ನುವುದಕ್ಕೆ ಅನೇಕ ನಿದರ್ಶನಗಳಿವೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ವಕೀಲರಾದ ಎನ್.ಲೋಕೇಶ್, ಸೋಮರಾಜ್, ವಿಷ್ಣುವರ್ಧನ್ ಉಪಸ್ಥಿತರಿದ್ದರು.


ನಾಳೆಯಿಂದ ಸುತ್ತೂರು ಶ್ರೀಕ್ಷೇತ್ರದಲ್ಲಿ ಶ್ರಾವಣ ಮಾಸದ ಪೂಜಾನುಷ್ಠಾನ

ಮೈಸೂರು,ಜು.22–ಸುತ್ತೂರು ಶ್ರೀಕ್ಷೇತ್ರದಲ್ಲಿ ಜುಲೈ 24ರಿಂದ ಆಗಸ್ಟ್ 22 ರವರೆಗೆ ಶ್ರಾವಣಮಾಸದ ಪೂಜಾನುಷ್ಠಾನ ಮತ್ತು ಪ್ರವಚನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ ಶ್ರೀ ನಂಜುಂಡೇಶ್ವರ, ಶ್ರೀ ಸೋಮೇಶ್ವರ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ನಾರಾಯಣಸ್ವಾಮಿ ದೇವಸ್ಥಾನಗಳಲ್ಲಿ ಪ್ರತಿನಿತ್ಯವೂ ರುದ್ರಾಭಿಷೇಕ, ಸಹಸ್ರನಾಮಾವಳಿ, ಅಷ್ಟೋತ್ತರ ಮಹಾಮಂಗಳಾರತಿ ಇತ್ಯಾದಿ ವಿಶೇಷ ಪೂಜೆಗಳಿರುತ್ತವೆ. ಪ್ರತಿದಿನ ಸಂಜೆ 6.30ರಿಂದ 7.00ರವರೆಗೆ ಸಾಮೂಹಿಕ ಪ್ರಾರ್ಥನೆ, 7.00ರಿಂದ 8.00ರವರೆಗೆ ಲಕ್ಕಣ್ಣ ದಂಡೇಶ ವಿರಚಿತ ಶಿವತತ್ತ್ವ ಚಿಂತಾಮಣಿ ಕೃತಿಯ ಪ್ರವಚನ ನಡೆಯುತ್ತದೆ. ಪ್ರೊಹೆಚ್.ಬಿ.ದೇವಣ್ಣ ವ್ಯಾಖ್ಯಾನ ನೀಡಲಿದ್ದು, ಡಿ.ಎಂ.ಸಿದ್ದಲಿಂಗಸ್ವಾಮಿ ವಾಚಿಸಲಿದ್ದಾರೆ.

ಪ್ರವಚನ ಕಾರ್ಯಕ್ರಮದ ಉದ್ಘಾಟನೆಯು ಜು. 24ರ ಸಂಜೆ 6.30ಕ್ಕೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿ ದಿವ್ಯ ಸಾನ್ನಿಧ್ಯದಲ್ಲಿ ನೆರವೇರಲಿದೆ. ಟಿ.ನರಸೀಪುರ ತಾಲೂಕು, ಮುಡುಕುತೊರೆ ಶ್ರೀ ಕಲ್ಮಠದ ಶ್ರೀ ನಂದಿಕೇಶ್ವರ ಸ್ವಾಮಿಗಳ ಸಮ್ಮುಖದಲ್ಲಿ, ಮೈಸೂರು ಉಪವಿಭಾಗಾಧಿಕಾರಿ ಆಶಪ್ಪ ಉದ್ಘಾಟಿಸಲಿದ್ದು, ಮೈಸೂರಿನ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಬಿ.ರಂಗೇಗೌಡ ಅಧ್ಯಕ್ಷತೆ ವಹಿಸಲಿದ್ದಾರೆ.

ಜು.26, ಮೈಸೂರಲ್ಲಿ ಡಾ.ಕೆ.ಕೃಷ್ಣಮೂರ್ತಿ ಜನ್ಮಶತಾಬ್ಧಿ, ಸಂಸ್ಮರಣ ಗ್ರಂಥಗಳ ಬಿಡುಗಡೆ



ಡಾ.ಕೆ.ಕೃಷ್ಣಮೂರ್ತಿ


ಮೈಸೂರು, ಜು. 22– ಮೈಸೂರಿನ ಕೃಷ್ಣಮೂರ್ತಿ ಶತಮಾನೋತ್ಸವ ಸಮಿತಿ ವತಿಯಿಂದ ಬಲ್ಲಾಳ್ ವೃತ್ತದಲ್ಲಿರುವ ನಿತ್ಯೋತ್ಸವ ಕನ್ವೆನ್ಷನ್ ಹಾಲ್‌ನಲ್ಲಿ ಜು. 26ರಂದು ಬೆಳಗ್ಗೆ 10.30ಕ್ಕೆ ಡಾ.ಕೆ.ಕೃಷ್ಣಮೂರ್ತಿ ಜನ್ಮ ಶತಾಬ್ದಿ ಹಾಗೂ ಸಂಸ್ಮರಣ ಗ್ರಂಥಗಳಾದ ಕೃಷ್ಣಾ ಲೋಕ ಮತ್ತು ಕಾವ್ಯತತ್ತ್ವೋಲ್ಲೇಖ ಬಿಡುಗಡೆ ಸಮಾರಂಭ ಏರ್ಪಡಿಸಲಾಗಿದೆ.

ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕಾರ್ಯಕ್ರಮ ಉದ್ಘಾಟಿಸುವರು. ವಿದ್ವಾಂಸ ನಾಡೋಜ ಡಾ. ಟಿ.ವಿ.ವೆಂಕಟಾಚಲಶಾಸ್ತ್ರಿ ಅಧ್ಯಕ್ಷತೆ ವಹಿಸುವರು.

ನವದೆಹಲಿಯ ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾಲಯದ ಕುಲಪತಿ ಡಾ. ಶ್ರೀನಿವಾಸ ವರಖೇಡಿ ಗ್ರಂಥಗಳ ಲೋಕಾರ್ಪಣೆ ಮಾಡುವರು. ಸಂಸ್ಕೃತ ವಿದ್ವಾಂಸ ಡಾ.ಎಚ್.ವಿ.ನಾಗರಾಜ ರಾವ್, ಶತಾವಧಾನಿ ಡಾ.ಆರ್. ಗಣೇಶ್ ಗ್ರಂಥಗಳ ಕುರಿತು ಮಾತನಾಡುವರು. ಮುಖ್ಯ ಅತಿಥಿಗಳಾಗಿ ಹಿರಿಯ ಸಾಹಿತಿ ಡಾ. ಸಿ.ಪಿ. ಕೃಷ್ಣಕುಮಾರ್, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಕುಲಪತಿ ಡಾ. ಅಹಲ್ಯಾ ಶರ್ಮಾ, ಶಾಸಕರಾದ ಟಿ.ಎಸ್.ಶ್ರೀವತ್ಸ, ಡಾ.ಡಿ. ತಿಮ್ಮಯ್ಯ, ಸಮಿತಿ ಕಾರ್ಯಾಧ್ಯಕ್ಷ ಡಾ.ಮಲ್ಲೇಪುರಂ ಜಿ. ವೆಂಕಟೇಶ್, ಕಾರ್ಯದರ್ಶಿ ಡಾ.ಕೆ.ಲೀಲಾ ಪ್ರಕಾಶ್, ಕೇಶವಪ್ರಕಾಶ್ ಭಾಗವಹಿಸುವರು.

ನಿವೃತ್ತ ಡಿಜಿಪಿ ಡಾ.ಗುರುಪ್ರಸಾದ್‌ರ 'ಕೊಕೇನ್ ರಾಜ ರಹಸ್ಯ', 'ಕ್ರೈಂ ಡೈರಿ' ಪುಸ್ತಕ ಬಿಡುಗಡೆ

ಪೊಲೀಸರ ಕರ್ತವ್ಯ ಪಾರದರ್ಶಕವಾಗಿರಬೇಕು; ಸಲಹೆ



ನಿವೃತ್ತ ಪೊಲೀಸ್ ಮಹಾನಿರ್ದೇಶಕ ಡಾ.ಡಿ.ವಿ.ಗುರುಪ್ರಸಾದ್ ರಚಿತ 'ಕೊಕೇನ್ ರಾಜ ರಹಸ್ಯ', 'ಕ್ರೈಂ ಡೈರಿ'(4 ಭಾಗಗಳು) ಪುಸ್ತಕಗಳನ್ನು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಬಿಡುಗಡೆ ಮಾಡಿದರು. ಡಿಸಿಪಿ ಸುಂದರ್‌ರಾಜ್ ಉಪಸ್ಥಿತರಿದ್ದರು.

> "ಸಾರ್ವಜನಿಕರು ಪೊಲೀಸರ ಬಳಿ ತಮ್ಮ ಕಷ್ಟ ಹೇಳಿಕೊಳ್ಳಲು ಬರಬೇಕಾದರೆ, ಪೊಲೀಸರ ಕರ್ತವ್ಯ ಪಾರದರ್ಶಕವಾಗಿರಬೇಕು. ಹಾಗೆಯೇ ನಿಮ್ಮ ಮಕ್ಕಳು ಏನಾದರೂ ಫೇಲ್ ಆದರೆ, ಅವರನ್ನು ಬಯ್ಯಬೇಡಿ. ಬದಲಿಗೆ ಪ್ರೇರಣೆ ನೀಡುವ ಪುಸ್ತಕಗಳನ್ನು ಓದಲು ಕೊಡಿ.
> –ಡಾ.ಡಿ.ವಿ.ಗುರುಪ್ರಸಾದ್, ನಿವೃತ್ತ ಪೊಲೀಸ್ ಮಹಾನಿರ್ದೇಶಕ

ಮೈಸೂರು, ಜು.22(ಎಂಕೆ)– ನಿವೃತ್ತ ಪೊಲೀಸ್ ಮಹಾನಿರ್ದೇಶಕ ಡಾ.ಡಿ.ವಿ. ಗುರುಪ್ರಸಾದ್ ರಚಿತ 'ಕೊಕೇನ್ ರಾಜ ರಹಸ್ಯ', 'ಕ್ರೈಂ ಡೈರಿ'(4 ಭಾಗಗಳು) ಪುಸ್ತಕಗಳನ್ನು ಮಂಗಳವಾರ ಬಿಡುಗಡೆ ಮಾಡಲಾಯಿತು.

ನಗರ ಪೊಲೀಸ್ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಕೃತಿಗಳನ್ನು ಬಿಡುಗಡೆ ಮಾಡಿದರು. ಬಳಿಕ ಮಾತನಾಡಿದ ಅವರು, ನಾವು ಓದಿದ ವಿಚಾರವನ್ನೇ ಬರೆಯಲು ಸಾಕಷ್ಟು ಕಷ್ಟಪಡುತ್ತೇವೆ. ಆದರೆ, ಪೊಲೀಸ್ ವೃತ್ತಿಯ ಜೊತೆಗೆ ಹಿರಿಯರಾದ ಗುರುಪ್ರಸಾದ್ ಅವರು, ನೂರಕ್ಕೂ ಹೆಚ್ಚು ಪುಸ್ತಕ ಬರೆದಿರುವುದು ನಮ್ಮೆಲ್ಲರಿಗೂ ಮಾದರಿ ಎಂದರು.

ಸದಾ ಒತ್ತಡದಲ್ಲಿರುವ ಪೊಲೀಸರು, ಪುಸ್ತಕಗಳನ್ನು ಓದುವುದರಿಂದ ತಮ್ಮ ಮನಸ್ಸಿನ ಒತ್ತಡ ನಿವಾರಣೆ ಜೊತೆಗೆ ಕೆಲಸಕ್ಕೆ ಪ್ರೇರಣೆ ಪಡೆಯಲಿದ್ದಾರೆ. ಹಾಗೆಯೇ ನಮ್ಮ ಮಕ್ಕಳಿಗೆ ಓದಿನ ಅರಿವು ಮೂಡಿಸಬೇಕಾದರೆ, ಅವರಿಗೆ ದಿನಕ್ಕೆ ಒಂದು ಪದವನ್ನಾದರೂ ಕಲಿಸಬೇಕು. ನಾವು ಕೂಡ ಕಲಿಯಬೇಕು ಎಂದು ತಿಳಿಸಿದರು.

ನಿವೃತ್ತ ಮಹಾನಿರ್ದೇಶಕ ಡಾ.ಡಿ.ವಿ. ಗುರುಪ್ರಸಾದ್ ಮಾತನಾಡಿ, ಕಳೆದ 45 ವರ್ಷದಿಂದ ಬರೆಯುತ್ತಿದ್ದೇನೆ. ಒಂದೊಂದು ಪುಸ್ತಕದಲ್ಲಿಯೂ ನಿಜವಾಗಿ ನಡೆದಿರುವ ಅಪರಾಧ ಕೃತ್ಯಗಳ ಮಾಹಿತಿ ಇದೆ. ಮೈಸೂರಿನಲ್ಲಿ ನಡೆದಿರುವ ಪ್ರಕರಣಗಳ ಬಗ್ಗೆಯೂ ಬರೆದಿದ್ದು, ರಾಜ್ಯದ ಸುಮಾರು 250 ಪ್ರಕರಣಗಳ ಕುರಿತು ಬರೆದಿದ್ದೇನೆ. ಯಾವ ಕಾರಣಕ್ಕೆ ಅಪರಾಧ ಕೃತ್ಯಗಳು ನಡೆದವು, ನಂತರ ಪೊಲೀಸರ ಕಾರ್ಯಾಚರಣೆ ಸೇರಿದಂತೆ ಪ್ರಮುಖ ಅಂಶಗಳನ್ನು ಕಥೆಯ ರೂಪದಲ್ಲಿ ಓದುಗರಿಗೆ ನೀಡಿದ್ದೇನೆ ಎಂದರು.

10 ವರ್ಷ ವೀರಪ್ಪನ್ ಬಗ್ಗೆ ಸಂಶೋಧನೆ ಮಾಡಿದ್ದೇನೆ. ವೀರಪ್ಪನ್ ಮಾಡಿದ್ದು ಸುಮಾರು 125 ಕೊಲೆಗಳಾದರೆ, ಕೊಲಂಬಿಯಾ ದೇಶದ ಕುಖ್ಯಾತ ಕೊಲೆಗಾರ ಪಾಬ್ಲೋ ಎಸ್ಕೋಬಾರ್ ಸಾವಿರಾರು ಕೊಲೆಗಳನ್ನು ಮಾಡಿದ್ದಾನೆ. ಆತನ ಬಗ್ಗೆ 'ಕೊಕೇನ್ ರಾಜ ರಹಸ್ಯ' ಪುಸ್ತಕ ಬರೆದಿದ್ದೇನೆ. ಇಡೀ ಕೊಲಂಬಿಯಾ ದೇಶದ ಸಾಲವನ್ನೇ ತೀರಿಸುವಷ್ಟು ಹಣ, ಆಸ್ತಿ ಸಂಪಾದಿಸಿದ್ದ ಆತ ಬದುಕಿದ್ದು, ಕೇವಲ 44 ವರ್ಷ. ಅಪರಾಧ ಕೃತ್ಯಗಳಿಂದಾಗುವ ಪರಿಣಾಮವನ್ನು ತಿಳಿಸುವ ಮೂಲಕ ಜಾಗೃತಿ ಮೂಡಿಸುವ ಪ್ರಯತ್ನ ಮಾಡಿದ್ದೇನೆ. ಈ ಪುಸ್ತಕಗಳು ಪೊಲೀಸ್ ಅಧಿಕಾರಿಗಳಿಗೆ ಮಾತ್ರವಲ್ಲದೆ ಸಾರ್ವಜನಿಕರು ಓದಬೇಕಿದೆ ಎಂದು ಹೇಳಿದರು.

ಡಿಸಿಪಿಗಳಾದ ಬಿಂದುಮಣಿ, ಸುಂದರ್‌ರಾಜ್ ಉಪಸ್ಥಿತರಿದ್ದರು.

ರಾಜ್ಯ ಮಟ್ಟದ ಪತ್ರಿಕಾ ಛಾಯಾಗ್ರಾಹಕರಿಗೆ ಸುದ್ದಿ ಛಾಯಾಚಿತ್ರ ಸ್ಪರ್ಧೆ

ಮೈಸೂರು,ಜು.22–ಮೈಸೂರು ಫೋಟೋ ಜರ್ನಲಿಸ್ಟ್ ಅಸೋಸಿಯೇಷನ್ ವತಿಯಿಂದ ದಸರಾ ಮಹೋತ್ಸವ ಪ್ರಯುಕ್ತ ರಾಜ್ಯ ಮಟ್ಟದ ಪತ್ರಿಕಾ ಛಾಯಾಗ್ರಾಹಕರಿಗೆ ಸುದ್ದಿ ಛಾಯಾಚಿತ್ರ ಸ್ಪರ್ಧೆ ಆಯೋಜಿಸಲಾಗಿದೆ. ಸ್ಪರ್ಧೆಯಲ್ಲಿ ಕರ್ನಾಟಕದಾದ್ಯಂತ ರಾಜ್ಯ ಹಾಗೂ ಸ್ಥಳೀಯ ಮಟ್ಟದ ಪತ್ರಿಕಾ ಕಚೇರಿಯಲ್ಲಿ ಛಾಯಾಗ್ರಾಹಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರು ಹಾಗೂ ಪತ್ರಿಕೆಗಳ ಹವ್ಯಾಸಿ ಸುದ್ದಿ ಛಾಯಾಗ್ರಾಹಕರು ಭಾಗವಹಿಸಬಹುದು. ವಿಜೇತರಿಗೆ ಪ್ರಥಮ ಬಹುಮಾನ ರೂ. 25,000, ದ್ವಿತೀಯ ಬಹುಮಾನ ರೂ.15,000, ತೃತೀಯ ಬಹುಮಾನ ರೂ.10,000 ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಸುದ್ದಿ ಛಾಯಾಗ್ರಾಹಕ ದಿವಂಗತ ನೇತ್ರರಾಜು ಅವರ ಸ್ಮರಣಾರ್ಥ 15 ಸಾವಿರ ರೂ. ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಛಾಯಾಗ್ರಾಹಕರು ಕೆಲಸ ನಿರ್ವಹಿಸುವ ಪತ್ರಿಕೆಯ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಛಾಯಾಗ್ರಾಹಕರು ತಾವೇ ತೆಗೆದಿರುವ ಸುದ್ದಿ ಛಾಯಾಚಿತ್ರವಾಗಿರಬೇಕು. ಸ್ಪರ್ಧೆಗೆ ಭಾಗವಹಿಸುವ ಛಾಯಾಗ್ರಾಹಕರು ಕಡ್ಡಾಯವಾಗಿ 1.7.2023ರಿಂದ 30.6.2025 ರೊಳಗೆ ತೆಗೆದ ಛಾಯಾಚಿತ್ರವಾಗಿರಬೇಕು. ಛಾಯಾಚಿತ್ರ ಕಳುಹಿಸಲು ಆ. 10 ಕೊನೆ ದಿನಾಂಕ, ನಂತರ ಬಂದ ಛಾಯಾಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗೆ ನಂದನ್– 98868 62504, ಲಕ್ಷ್ಮೀನಾರಾಯಣ ಯಾದವ್–98453 37667, ಪ್ರಗತಿ ಗೋಪಾಲಕೃಷ್ಣ– 94480 44235, ಮಧುಸೂದನ್– 94485 69867 ಸಂಪರ್ಕಿಸಬಹುದು.


ಯದುವೀರ್ ಒಡೆಯರ್‌ರಿಂದ ತಿರುಪತಿ ದೇವಾಲಯದಲ್ಲಿ ವಿವಿಧ ಧಾರ್ಮಿಕ ಕಾರ್ಯ....



ನೆರೆ ರಾಜ್ಯ ಆಂಧ್ರಪ್ರದೇಶದ ಪ್ರಸಿದ್ಧ ಧಾರ್ಮಿಕ ಕೇಂದ್ರ ತಿರುಪತಿಯ ತಿರುಮಲ ಶ್ರೀ ವೆಂಕಟೇಶ್ವರ ಸ್ವಾಮಿಯವರ ಸನ್ನಿಧಾನದಲ್ಲಿ ಮೈಸೂರು–ಕೊಡಗು ಸಂಸದರೂ ಆದ ಮೈಸೂರು ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಅವರ ತಾಯಿ ಪ್ರಮೋದಾದೇವಿ ಒಡೆಯರ್ ಅವರು 300 ವರ್ಷಗಳಷ್ಟು ಪುರಾತನವಾಗಿರುವ ಸಾಂಪ್ರದಾಯಿಕ ಪಲ್ಲವೋತ್ಸವ ಸಮಾರಂಭದಲ್ಲಿ ಭಾಗವಹಿಸಿ, ಶಾಸ್ತ್ರೋಕ್ತವಾಗಿ ಸಕಲ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ, ನಾಡಿನ ಒಳಿತಿಗಾಗಿ ಪ್ರಾರ್ಥಿಸಿದರು. ತಿರುಪತಿಯ ಶ್ರೀದೇವಿ–ಭೂದೇವಿ ಹಾಗೂ ಶ್ರೀಮಲಯಪ್ಪ ಸ್ವಾಮಿ ದೇವರ ಉತ್ಸವ ಮೂರ್ತಿಗಳ ಮೆರವಣಿಗೆಯೊಂದಿಗೆ ವಿಶೇಷ ಮಂಗಳಾರತಿ ನೆರವೇರಿಸಲಾಯಿತು.

ಸುಪ್ರೀಂ ತೀರ್ಪು ಸತ್ಯದ ಕೈಗನ್ನಡಿ

ಮಾಜಿ ಶಾಸಕ ಎಂಕೆಎಸ್ ಬಣ್ಣನೆ



ಮೈಸೂರು, ಜು.22– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಈಗಿನ ಎಂಡಿಎ) ಸಂಬಂಧಿತ ಇಡಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ನೀಡಿದ ತೀರ್ಪು ಸತ್ಯದ ಕೈಗನ್ನಡಿಯಾಗಿದೆ ಎಂದು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಹೇಳಿದ್ದಾರೆ.

ಮುಡಾ ನಿವೇಶನ ಹಂಚಿಕೆ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬದವರನ್ನು ಅಪರಾಧಿ ಎಂಬಂತೆ ಬಿಂಬಿಸಿ, ಸಿದ್ದರಾಮಯ್ಯನವರ ಧರ್ಮಪತ್ನಿ ಹಾಗೂ ನಗರಾಭಿವೃದ್ಧಿ ಸಚಿವರಾದ ಭೈರತಿ ಸುರೇಶ್ ಅವರಿಗೆ ಇಡಿ ನೀಡಿದ್ದ ಸಮನ್ಸ್‌ಗೆ ಹೈಕೋರ್ಟ್ ತಡೆ ನೀಡಿದ್ದನ್ನು ಇಂದು ಸುಪ್ರೀಂಕೋರ್ಟ್ ಎತ್ತಿ ಹಿಡಿದಿದೆ. ಈ ಮೂಲಕ ಸತ್ಯಕ್ಕೆ ಜಯ ಸಿಕ್ಕೇ ಸಿಗುತ್ತದೆ ಎಂಬ ವಿಶ್ವಾಸವನ್ನು ಗಟ್ಟಿಗೊಳಿಸಿದೆ.

ಜನಪರ ಆಡಳಿತದ ಮೂಲಕ ದೇಶದ ಗಮನ ಸೆಳೆದಿರುವ ಮಾದರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರಾಜಕೀಯವಾಗಿ ಎದುರಿಸಲಾಗದೆ ಅವರ ಕುಟುಂಬವನ್ನು ಮುಡಾ ಹಗರಣಕ್ಕೆ ತಳುಕು ಹಾಕುವ ವಿಫಲ ಯತ್ನಕ್ಕೆ ಸುಪ್ರೀಂಕೋರ್ಟ್ ಸರಿಯಾಗಿ ಪಾಠ ಕಲಿಸಿದೆ. ರಾಜ್ಯದ ಹಿತಕ್ಕಾಗಿ ತಮ್ಮ ವೈಯಕ್ತಿಕ ಬದುಕನ್ನು ತ್ಯಾಗ ಮಾಡಿದ ಸಿದ್ದರಾಮಯ್ಯ ಅಂತಹವರಿಗೆ ಸುಪ್ರೀಂ ಕೋರ್ಟ್ ತೀರ್ಪು ನೈತಿಕ ಶಕ್ತಿ ತುಂಬಿದೆ. ಇಡೀ ಕರ್ನಾಟಕ ರಾಜ್ಯದ ಜನತೆ ಸುಪ್ರೀಂಕೋರ್ಟ್ ತೀರ್ಪನ್ನು ಸ್ವಾಗತಿಸಿದ್ದಾರೆ. ಈ ತೀರ್ಪು ನ್ಯಾಯಾಲಯಗಳ ಮೇಲಿನ ವಿಶ್ವಾಸ ಹೆಚ್ಚಿಸಿದೆ.

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಕುಟುಂಬದವರನ್ನು ಅಪರಾಧಿ ಎಂದು ಬಿಂಬಿಸಲು ಪ್ರಯತ್ನಿಸಿದ ಬಿಜೆಪಿಗರಿಗೆ ಈ ತೀರ್ಪು ಕಪಾಳಮೋಕ್ಷದಂತಿದೆ. ವ್ಯರ್ಥ ಪಾದಯಾತ್ರೆ ಮೂಲಕ ಕಾಲಹರಣ ಮಾಡಿ ಮುಖ್ಯಮಂತ್ರಿಗಳ ವಿರುದ್ಧ ತೇಜೋವಧೆ ಮಾಡಿದವರ ಬಾಯಿಗೆ ಬೀಗ ಹಾಕಿದಂತಿದೆ. ರಾಜ್ಯದ ಅಭಿವೃದ್ಧಿಯನ್ನು ಸಹಿಸದೆ ಅಪಪ್ರಚಾರದ ಪ್ರಯತ್ನಗಳಿಗೆ ಇಂದು ಪೂರ್ಣವಿರಾಮ ಬಿದ್ದಂತಾಗಿದೆ. ವಿರೋಧ ಪಕ್ಷಗಳು ಮುಂದಾದರು ರಾಜ್ಯದ ಜನತೆಯ ಕ್ಷಮೆ ಕೋರಿ, ರಾಜ್ಯದ ಅಭಿವೃದ್ಧಿಗೆ ಸರ್ಕಾರದೊಂದಿಗೆ ಸಹಕರಿಸುವಂತೆ ಎಂ.ಕೆ. ಸೋಮಶೇಖರ್ ಆಗ್ರಹಿಸಿದ್ದಾರೆ.

ಪಿಎಚ್.ಡಿ ಪದವಿ



ಮೈಸೂರು: ಲಕ್ಷ್ಮಿ ವಿಶ್ವನಾಥನ್ ಅವರು ಮೈಸೂರು ವಿಶ್ವವಿದ್ಯಾನಿಲಯದಿಂದ ನೃತ್ಯ ವಿಷಯದಲ್ಲಿ ಪಿಎಚ್.ಡಿ ಪದವಿ ಪಡೆದಿದ್ದಾರೆ. ತಮ್ಮ ಸಂಶೋಧನಾ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯದ ಫೈನ್ ಆರ್ಟ್ಸ್ ಕಾಲೇಜಿನ ನೃತ್ಯ ವಿಭಾಗದ ಪ್ರಾಧ್ಯಾಪಕ ಡಾ. ಕೆ.ಕುಮಾರ್ ಮಾರ್ಗದರ್ಶನದಲ್ಲಿ ಸಲ್ಲಿಸಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.07.2025 ಬುಧವಾರ, ಮಳೆ ನಕ್ಷತ್ರ: ಪುಷ್ಯ, 20.07.2025 ರಿಂದ 2.08.2025
ವಿಶ್ವವಸು ನಾಮ ಸಂವತ್ಸರ, ದಕ್ಷಿಣಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ,
ತಿಥಿ: ಚತುರ್ದಶಿ, ನಕ್ಷತ್ರ: ಆರ್ದ್ರಾ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಹೈಪೋಥೈರಾಯ್ಡಿಸಮ್ ಯೋಗ ಚಿಕಿತ್ಸಾ ಶಿಬಿರ, ವೆರಿಕೋಸ್ ವೇನ್ಸ್ ಮತ್ತು ಅಲ್ಸರ್‌ಗಳ ಬಗ್ಗೆ ಚಿಕಿತ್ಸಾ ಶಿಬಿರ, ಇಸುಬು ತಪಾಸಣಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ.


■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಕೀತಿಬಕುಷ್ಟ (ಸೋರಿಯಾಸಿಸ್) ಮಕ್ಕಳಲ್ಲಿ ಕಂಡುಬರುವ ನೆಗಡಿ, ಕೆಮ್ಮು, ಅಸ್ತಮಾ ಮತ್ತು ಅಲರ್ಜಿ ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10ರಿಂದ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಜೆಎಸ್‌ಎಸ್ ಮಹಿಳಾ ಕಾಲೇಜು:** ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ ಜಯಂತಿ, ವಚನ ಸಂಶೋಧನೆ ಮತ್ತು ಸಂರಕ್ಷಣಾ ದಿನಾಚರಣೆ, ಪ್ರಾಧ್ಯಾಪಕ ಪ್ರೊ ಮೈಸೂರು ಕೃಷ್ಣಮೂರ್ತಿ ಅವರಿಂದ ಡಾ. ಫ.ಗು. ಹಳಕಟ್ಟಿಯವರ ಬದುಕು, ಬರಹ ಕುರಿತು ಉಪನ್ಯಾಸ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್ ಉಪಾಧ್ಯಕ್ಷ ಎಂ.ಚಿನ್ನಸ್ವಾಮಿ, ಉಪಸ್ಥಿತರು: ಜೆಎಸ್‌ಎಸ್ ಮಹಿಳಾ ಕಾಲೇಜು ಪ್ರಿನ್ಸಿಪಾಲ್ ಡಾ.ರೇಚಣ್ಣ, ಸ್ಥಳ: ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಮಧ್ಯಾಹ್ನ 2.30ಕ್ಕೆ.

ಗುಂಡ್ಲುಪೇಟೆಯಲ್ಲಿಂದು

■ **ಸುತ್ತೂರು ಶ್ರೀ ಕ್ಷೇತ್ರ, ಜೆಎಸ್‌ಎಸ್ ಮಹಾವಿದ್ಯಾಪೀಠ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಸಂಗಮ ಪ್ರತಿಷ್ಠಾನ :** ಮದ್ಯವರ್ಜನ ಶಿಬಿರದ ಸಮಾರೋಪ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಶಾಸಕ ಗಣೇಶ್ ಪ್ರಸಾದ್, ಸಮಾರೋಪ ಭಾಷಣ : ಪರಂಪರೆ ಸಂಸ್ಥೆ ಮುಖ್ಯಸ್ಥ ಪಿ. ಕೃಷ್ಣಕುಮಾರ್, ಮುಖ್ಯ ಅತಿಥಿಗಳು : ಮಾಜಿ ಶಾಸಕ ಸಿ.ಎಸ್. ನಿರಂಜನಕುಮಾರ್, ಪುರಸಭೆ ಅಧ್ಯಕ್ಷ ಜಿ.ಎನ್. ಮಧುಸೂದನ್, ಹೆಚ್.ಎಸ್. ನಂಜಪ್ಪ, ಸ್ಥಳ: ಜೆಎಸ್‌ಎಸ್ ಅನುಭವ ಮಂಟಪ, ಗುಂಡ್ಲುಪೇಟೆ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಭಾವ ಸೇತು ಭಾಷೆ ಬದಲಾದರು ಭಾವ ಬದಲಾಗದಿರಲಿ ಬಾನುಲಿ ಸರಣಿ, ಪ್ರಸ್ತುತಿ–ಸಿ. ಎಸ್. ಪೂರ್ಣಿಮಾ, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಪಿ. ಸುರುಭಿ ಹಾಗೂ ಜಿ. ಪುಷ್ಪಲತಾ, ವ್ಯಾಖ್ಯಾನ–ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.05 ಸರ್ಕೋಮ– ಜಾಗೃತಿ ಕುರಿತ ಪ್ರಾಯೋಜಿತ ಕಾರ್ಯಕ್ರಮ, 9.10 ಇದು ನಭೋವಾಣಿ–ಭಾರತೀಯ ಪ್ರಸಾರ ದಿನದ ಸಂದರ್ಭದಲ್ಲಿ ವಿಶೇಷ ರೂಪಕ, ರಚನೆ–ಸಿರಿ ಮೈಸೂರು, ಪ್ರಸ್ತುತಿ–ಜಿ. ಶಾಂತಕುಮಾರ್, 9.40 ಚಿತ್ರಗೀತೆಗಳು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಅಲಿ ಅಹಮದ್ ಹುಸೇನ್–ಶಹನಾಯ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು–ಸಿ.ವಿಶ್ವನಾಥ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, 4.00 ಮಹಿಳಾರಂಗ–ಭೀಮನ ಅಮಾವಾಸ್ಯೆ ಹಾಗೂ ನಾಗರ ಪಂಚಮಿ ಕುರಿತು ಮೈಸೂರಿನ ರಾಮಕೃಷ್ಣನಗರದ ಸ್ವರ ರಾಗಲಯ ಭಜನಾ ಮಂಡಳಿ ಸದಸ್ಯರಿಂದ ಕಾರ್ಯಕ್ರಮ ವೈವಿಧ್ಯ, 4.30 ಹಿಂದಿ ಚಿತ್ರಗೀತೆಗಳು, 4.45 ಹಿಂದಿ ಪಾಠ, ಪ್ರಸ್ತುತಿ–ಶಾಂತಾ ಡಿ. ಕಿಣಿ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಹಲೋ ಕೃಷಿರಂಗ ಪ್ರಾಯೋಜಿತ ನೇರ ಫೋನ್–ಇನ್ ಕಾರ್ಯಕ್ರಮ, ಪ್ರಾಯೋಜಕರು–ಕೃಷಿ ಇಲಾಖೆ, ಕರ್ನಾಟಕ ಸರ್ಕಾರ, ವಿಷಯ–ಕೃಷಿಭಾಗ್ಯ ಯೋಜನೆ, ಭಾಗವಹಿಸುತ್ತಾರೆ–ಜಂಟಿ ಕೃಷಿ ನಿರ್ದೇಶಕರಾದ ಎ.ಎಸ್. ರೂಪಾ, ಬಾನುಲಿ ಬೇಸಾಯ, ದಣಿವರಿಯದ ಕೃಷಿಗೆ ನಮ್ಮ ಸಹಾಯ, ಪ್ರಸ್ತುತಿ–ಆರ್. ಲೋಕೇಶ್ವರಿ, 7.35 ಕನ್ನಡದಲ್ಲಿ ವಾರ್ತೆಗಳು, 7.45 ಕನ್ನಡ ಚಿತ್ರಗೀತೆಗಳು, 8.00 ಸಂಸತ್ ಸಮೀಕ್ಷಾ, 8.15 ವಿಶೇಷ ಕಾರ್ಯಕ್ರಮ ಸರಣಿ ಆಕಾಶವಾಣಿ 90–ನೆನಪುಗಳ ಹೊತ್ತು, ಪ್ರೊ ಎಂ.ವಿ. ಗೋಪಾಲಸ್ವಾಮಿ ಅವರ ನೆನಪುಗಳು– ಭಾರತಿ ಘನಶ್ಯಾಂ ಅವರೊಂದಿಗೆ ಸಂವಾದ. ಇವರೊಂದಿಗೆ ಭಾಗವಹಿಸುತ್ತಾರೆ– ಉಮೇಶ್ ಎಸ್.ಎಸ್., 9.30 ಕ್ರೀಡಾಲೋಕ, 10.00 ಸಂಸತ್‌ನ ಪ್ರಶ್ನೋತ್ತರ ಕಲಾಪಗಳ ಧ್ವನಿಮುದ್ರಣ

ಮೈಸೂರು ಮಿತ್ರ

ಉಪಜಾತಿ ಯಾವುದೇ ಇರಲಿ ವೀರಶೈವ ಲಿಂಗಾಯಿತರಲ್ಲಿ ಒಗ್ಗಟ್ಟಿರಲಿ

3 ದಶಕಗಳ ನಂತರ ನಡೆದ ವೀರಶೈವ ಶಿವಾಚಾರ್ಯರ ಶೃಂಗಸಭೆಯಲ್ಲಿ 12 ನಿರ್ಣಯಗಳು ಅಂಗೀಕಾರ



ರಂಭಾಪುರಿಶ್ರೀ

ಬೆಂಗಳೂರು, ಜು. 22– ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ವತಿಯಿಂದ ದಾವಣಗೆರೆಯ ರೇಣುಕಾ ಮಂದಿರದಲ್ಲಿ ಮೂರು ದಿನಗಳ ಕಾಲ ನಡೆದ ವೀರಶೈವ ಲಿಂಗಾಯತ ಶಿವಾಚಾರ್ಯರ ಶೃಂಗಸಭೆ ಅಂತ್ಯವಾಗಿದ್ದು, ಮೂರು ದಶಕದ ನಂತರ ನಡೆದ ಈ ಶೃಂಗ ಸಭೆಯ ಇಂದಿನ ಸಮಾರೋಪ ಸಮಾರಂಭದಲ್ಲಿ 12 ನಿರ್ಣಯಗಳನ್ನು ಅಂಗೀಕರಿಸಲಾಗಿದೆ.

ಈ ಪೈಕಿ ಪ್ರಮುಖವಾಗಿ ಜಾತಿಗಣತಿ ವೇಳೆ 'ವೀರಶೈವ ಲಿಂಗಾಯತ' ಎಂದು ಬರೆಸಬೇಕು. ಉಪಜಾತಿ ಯಾವುದೇ ಇದ್ದರೂ ವೀರಶೈವರಲ್ಲಿ ಒಗ್ಗಟ್ಟು ಇರಬೇಕು ಎಂದು ಕರೆ ನೀಡಲಾಗಿದೆ.

ಪ್ರಮುಖ ನಿರ್ಣಯಗಳು: ಜಾತಿಗಣತಿ ವೇಳೆ ವೀರಶೈವ ಲಿಂಗಾಯತ ಎಂದು ಬರೆಸಬೇಕು, ಉಪಜಾತಿ ಯಾವುದೇ ಇದ್ದರೂ ವೀರಶೈವರಲ್ಲಿ ಒಗ್ಗಟ್ಟು ಇರಬೇಕು. ಒಳ ಪಂಗಡಗಳನ್ನು ಕೇಂದ್ರ ಒಬಿಸಿ ಪಟ್ಟಿಗೆ ಸೇರ್ಪಡೆ ಮಾಡಬೇಕು, ಜಾತಿಗಣತಿ ವಿಚಾರವಾಗಿ ನಿಯೋಗದ ಮೂಲಕ ಪ್ರಧಾನಿ ಭೇಟಿಯಾಗಲು ನಿರ್ಧಾರ.

ಸಮ್ಮೇಳನದಲ್ಲಿ ರಂಭಾಪುರಿಶ್ರೀ ಮಾತನಾಡಿ, ಸಮಾಜಕ್ಕೆ ಒಳ್ಳೆಯದಾಗಲಿ ಎಂದು ವೀರಶೈವ ಧರ್ಮ ಸ್ಥಾಪನೆ ಆಗಿದೆ. ಆಧುನಿಕ ಕಾಲದಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ರಾಜಕೀಯ ಪ್ರವೇಶವಾಗಿದೆ. ರಾಜಕೀಯ ಕ್ಷೇತ್ರ ಕಲುಷಿತವಾಗಿದೆ, ಧಾರ್ಮಿಕ ಕ್ಷೇತ್ರವೂ ಹೊರತಾಗಿಲ್ಲ. ಸಂಸ್ಕಾರ, ಸಂಸ್ಕೃತಿ ಕೊಟ್ಟಿದ್ದು ವೀರಶೈವ ಧರ್ಮ. ವೀರಶೈವ ಸಮುದಾಯದಲ್ಲಿ ನೂರಾರು ಒಳಪಂಗಡಗಳಿವೆ. ಕೆಲ ಒಳ ಪಂಗಡಗಳಿಗೆ ಮಾತ್ರ ರಾಜಕೀಯದಲ್ಲಿ ಅವಕಾಶ ಸಿಕ್ಕಿವೆ. ಈಗ ಜಾತಿಗೊಂದು ಮಠಗಳಾಗಿವೆ. ಇಂತಹ ಪರಿಸ್ಥಿತಿಯಲ್ಲಿ ಪಂಚಪೀಠಗಳು ಧೃತಿಗೆಡಬೇಕಾಗಿಲ್ಲ.

ಸಮುದಾಯದ ಬಲವರ್ಧನೆ ಪಂಚಪೀಠಗಳಿಂದ ಮಾತ್ರ ಸಾಧ್ಯ. ವೀರಶೈವ ಲಿಂಗಾಯತ ಮಠಾಧೀಶರನ್ನು ಒಂದೇ ವೇದಿಕೆಗೆ ತರುವ ಸಂಕಲ್ಪ ಎಲ್ಲಾ ಪೀಠಾಚಾರ್ಯ ಹಾಗೂ ಶಿವಾಚಾರ್ಯ ಒಂದಾದರೆ ವೀರಶೈವ ಲಿಂಗಾಯತರನ್ನ ಒಂದು ಮಾಡುವುದು ಕಷ್ಟವಲ್ಲ. ವೀರಶೈವ, ಲಿಂಗಾಯತ ಬೇರೆ ಎಂದವರು ಚುನಾವಣೆಯಲ್ಲಿ ಸೋತರು. ಈಗ ಪಂಚಪೀಠಗಳು ಒಂದಾಗಿವೆ. ಇದು ಕ್ಷಣಿಕ ಖುಷಿ ಆಗಬಾರದು ಎಂದು ಹೇಳಿದರು.

ಎರಡು ದಿನಗಳ ಪೀಠಾಚಾರ್ಯ ಮತ್ತು ಶಿವಾಚಾರ್ಯ ಸಮ್ಮೇಳನಕ್ಕೆ ಪ್ರತಿಕ್ರಿಯೆ ಅದ್ಭುತ. ಸಮಾಜದವರು 16 ವರ್ಷಗಳಿಂದ ಪಂಚ ಪೀಠಗಳು ಒಂದಾಗಬೇಕೆಂದು ಕಾಯುತ್ತಿದ್ದರು. ಅದು ಸಾಕಾರವಾಗಿದೆ. ಎಲ್ಲ ಸಮುದಾಯದ ಜನಕ್ಕೆ ಆಧ್ಯಾತ್ಮಿಕ ಚಿಂತನೆ ನೀಡಿದಂತಾಗಿದೆ. ನಮ್ಮ ಕರೆಗೆ ಸ್ಪಂದಿಸಿ ಎಲ್ಲ ಪೀಠದವರು ಬಂದಿದ್ದಾರೆ. ವೀರಶೈವ ಲಿಂಗಾಯತ ದೊಡ್ಡ ಸಮಾಜ. ಸಮಾಜಕ್ಕೆ ಒಳ್ಳೆಯದಾಗಲಿ ಎಂದು ವೀರಶೈವ ಧರ್ಮ ಸ್ಥಾಪನೆ ಆಗಿದೆ.

ಸಮಾಜದ ಬಲವರ್ಧನೆ ಪಂಚಪೀಠಗಳಿಂದ ಮಾತ್ರ ಸಾಧ್ಯ. ಬೆಂಗಳೂರಿನಲ್ಲಿ ವೀರಶೈವ ಲಿಂಗಾಯತ ಮಠಾಧೀಶರುಗಳ ಒಂದೇ ವೇದಿಕೆ ತರುವ ಸಂಕಲ್ಪ ಇದೆ. ಎಲ್ಲ ಪೀಠಾಚಾರ್ಯ ಹಾಗೂ ಶಿವಾಚಾರ್ಯ ಒಂದಾದರೇ ಬರುವ ದಿನಗಳಲ್ಲಿ ವೀರಶೈವ ಲಿಂಗಾಯತರನ್ನು ಒಂದು ಮಾಡುವುದು ಕಷ್ಟವಲ್ಲ. 2016ರಲ್ಲಿ ರಂಭಾಪುರಿ ಪೀಠದಲ್ಲಿ ಗುರು ವಿರಕ್ತರು ಹಾಗೂ ಶರಣರನ್ನು ಒಂದು ಮಾಡಲಾಗಿತ್ತು. ವೀರಶೈವ ಮಹಾಸಭೆಗೂ ಮೊದಲೇ ಗುರು ವಿರಕ್ತರು ಒಂದು ಮಾಡುವ ಕೆಲಸ ರಂಭಾಪುರಿ ಪೀಠ ಮಾಡಿದೆ. ಈ ಹಿಂದೆ ಕೂಡಲ ಸಂಗಮದಲ್ಲಿ ನಡೆದ ಸಮಾರಂಭದಲ್ಲಿ ಕೆಲ ಅಡೆತಡೆಗಳು ನಡೆದವು. ಒಂದು ವರ್ಗದ ಜನ 12ನೇ ಶತಮಾನದ್ದು ಬಿಟ್ಟರೆ ಬೇರೆಯದನ್ನು ಅರಿಯುತ್ತಿಲ್ಲ. ಅವರ ಸಂಕುಚಿತ ಮನೋಭಾವ ಕಾರಣ ವೀರಶೈವನೇ ಬೇರೆ ಲಿಂಗಾಯತವೇ ಬೇರೆ ಎಂಬ ಸಂದೇಶ ಸಾರಿದರು ಎಂದು ತಿಳಿಸಿದರು.

ದೇವರಾಜ ಅರಸು ಕಾಲದಲ್ಲಿ ಹಾವನೂರ ವರದಿ ತಂದು ಮೀಸಲಾತಿ ಹೆಸರಿನಲ್ಲಿ ವೀರಶೈವ ಲಿಂಗಾಯತರನ್ನು ಒಡೆಯಲಾಯಿತು. ಅಲ್ಲಿಂದ ಛಿದ್ರ ಛಿದ್ರವಾಗಿ ಹೋಗಿತ್ತು. ಆದರೆ ಈಗ ಪಂಚಪೀಠಗಳು ಒಂದಾಗಿವೆ. ಇದು ಕ್ಷಣಿಕ ಖುಷಿ ಆಗಬಾರದು. ವಿರಕ್ತರಲ್ಲಿ ವೀರಶೈವ ಹಾಗೂ ಲಿಂಗಾಯತ ಒಂದು ಎಂಬ ಭಾವನೆ ಬಂದರೆ ಅವರ ಬಾಯಿಗೆ ಹಾಲು ತುಪ್ಪ ಹಾಕುತ್ತೇವೆ. ವಿರಕ್ತರ ಮಟ್ಟಕ್ಕೆ ನಾವು ಇಳಿಯಲು ಆಗಲ್ಲ. ಆದರೆ ಅವರನ್ನ ನಾವು ಒಡಲಿನಲ್ಲಿ ಇಟ್ಟುಕೊಳ್ಳುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ತ್ರಿವೇಣಿ ಸಂಗಮ ಉತ್ತರ ಭಾರತದಲ್ಲಿ ಆದ ಹಾಗೆ ದಾವಣಗೆರೆಯಲ್ಲಿ ಐದು ನದಿಗಳ ಸಂಗಮವಾಗಿದೆ. ಪೀಠಾಚಾರ್ಯ ಒಂದಾಗಲು ರಂಭಾಪುರಿ ಶ್ರೀ ಗಳು ಮಹತ್ವದ ಕಾರ್ಯವಾಗಿದೆ. ಮುಂದೆ ಗುರು ವಿರಕ್ತರು ಒಂದಾಗುವ ಕೆಲಸಕ್ಕೆ ರಂಭಾಪುರಿ ಶ್ರೀಗಳು ಮುಂದಾಗಿದ್ದಾರೆ. ಅದಕ್ಕೆ ನಮ್ಮ ಬೆಂಬಲವಿದೆ ಎಂದು ಕಾಶಿ ಶ್ರೀಗಳು ತಿಳಿಸಿದರು.

ಅಮೆರಿಕದಲ್ಲಿ ರಸ್ತೆ ಅಪಘಾತ: ಯಾದಗಿರಿಯ ತಬಲಾ ಕಲಾವಿದ ಸಾವು




ಕಲಬುರಗಿ: ಅಮೆರಿಕದ ಕ್ಯಾಲಿಫೋರ್ನಿಯಾದ ಮಿಡಲ್ ಟೌನ್ ಸಮೀಪದ ಹಾರ್ಬಿನ್ ಸ್ಪ್ರಿಂಗ್ಸ್ ರಸ್ತೆಯಲ್ಲಿ ಭಾನುವಾರ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಯಾದಗಿರಿ ಜಿಲ್ಲೆಯ ಕಕ್ಕೇರಾ ಪಟ್ಟಣದ ತಬಲಾ ಕಲಾವಿದ ಸಾಮ್ರಾಟ್ ಕಕ್ಕೇರಿ (45) ಸಾವನ್ನಪ್ಪಿದ್ದಾರೆ.

ಕಳೆದ 15 ವರ್ಷಗಳಿಂದ ಅಮೆರಿಕದಲ್ಲಿಯೇ ನೆಲೆಸಿರುವ ಸಾಮ್ರಾಟ್ ಅವರು ಕ್ಯಾಲಿಫೋರ್ನಿಯಾದಲ್ಲಿ ಆಯೋಜಿಸಿದ್ದ ಸಂಗೀತ ಕಾರ್ಯಕ್ರಮದಲ್ಲಿ ಭಾಗವಹಿಸಿ ಮನೆಗೆ ಮರಳುತ್ತಿದ್ದರು. ಅಮೆರಿಕದ ಸ್ಥಳೀಯ ಕಾಲಮಾನ ಭಾನುವಾರ ಸಂಜೆಯ ಹೊತ್ತಿಗೆ ಸಾಮ್ರಾಟ್ ಕಕ್ಕೇರಿ ಅವರಿದ್ದ ಕಾರು ಹಾಗೂ ಟ್ರಕ್ ಮಧ್ಯೆ ಡಿಕ್ಕಿ ಸಂಭವಿಸಿತು. ಇದರಿಂದಾಗಿ ಸಾಮ್ರಾಟ್ ಸ್ಥಳದಲ್ಲಿಯೇ ಸಾವಿಗೀಡಾಗಿದ್ದು, ಅವರೊಂದಿಗಿದ್ದ ಮತ್ತೊಬ್ಬರಿಗೆ ಗಾಯಗಳಾಗಿವೆ.



ಇನ್ನರ್‌ವೇರ್ ಉದ್ಯಮ ಸ್ಥಾಪನೆಗೆ ಮೂಲಸೌಕರ್ಯದೊಂದಿಗೆ ಭೂಮಿ

ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಭರವಸೆ



ಬೆಂಗಳೂರು, ಜು.22(ಕೆಎಂಶಿ)– ರಾಜ್ಯದ ಯಾವುದೇ ಭಾಗದಲ್ಲಿ ಇನ್ನರ್‌ವೇರ್ ಉದ್ಯಮ ಸ್ಥಾಪನೆಗೆ ಅಗತ್ಯ ಮೂಲಸೌಕರ್ಯದೊಂದಿಗೆ 15ರಿಂದ 20 ಎಕರೆ ಜಾಗ ಒದಗಿಸಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಭರವಸೆ ನೀಡಿದ್ದಾರೆ.

ಇನ್ನರ್ ಸ್ಟೋರಿ ಇನ್ನರ್‌ವೇರ್ ಟ್ರೇಡ್ ಶೋನ ಮೂರು ದಿನಗಳ 4ನೇ ಆವೃತ್ತಿ ಉದ್ಘಾಟಿಸಿ ಮಾತನಾಡಿದ ಅವರು, ಕರ್ನಾಟಕ ಇನ್ನರ್‌ವೇರ್ ಅಸೋಸಿಯೇಷನ್ (ಕೆಐಎ) ರಾಜ್ಯದ ಯಾವುದೇ ಪ್ರದೇಶದಲ್ಲಿ ಬಯಸಿದ ಕಡೆ ಭೂಮಿ ಒದಗಿಸಲಾಗುವುದು ಎಂದರು.

ಸಿದ್ಧ ಉಡುಪು (ಗಾರ್ಮೆಂಟ್ಸ್) ಉದ್ಯಮಕ್ಕೆ ಸರ್ಕಾರ ಅಗತ್ಯ ಸಹಾಯ ಮತ್ತು ಸಹಕಾರ ನೀಡುತ್ತಿದೆ. 3,500 ಕೋಟಿ ರೂ. ಸಬ್ಸಿಡಿ ನೀಡಿದೆ. ಸಿದ್ಧಉಡುಪು ಕ್ಷೇತ್ರದಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ದೇಶದ ಒಟ್ಟು ಉತ್ಪಾದನೆಯಲ್ಲಿ ರಾಜ್ಯದ ಕೊಡುಗೆ ಶೇಕಡ 20ರಷ್ಟಿದೆ. ಬಾಂಗ್ಲಾದೇಶದ ಪ್ರತಿಕೂಲ ಪರಿಸ್ಥಿತಿಯಿಂದಾಗಿ ಅಲ್ಲಿನ ಜವಳಿ ಉದ್ಯಮ ಕರ್ನಾಟಕ, ಮಹಾರಾಷ್ಟ್ರಕ್ಕೆ ಸ್ಥಳಾಂತರವಾಗುತ್ತಿದೆ. ಪರಿಸ್ಥಿತಿಯ ಲಾಭ ಪಡೆದು ಜವಳಿ ಉದ್ಯಮಿಗಳಿಗೆ ಅಗತ್ಯ ಸಹಕಾರ ನೀಡಲಿದೆ. ಜವಳಿ ಕ್ಷೇತ್ರ, ನೇಕಾರಿಕೆ ಅಭಿವೃದ್ಧಿ, ಬಂಡವಾಳ ಹೂಡಿಕೆ ಹಾಗೂ ಉದ್ಯೋಗ ಸೃಜನೆಗೆ ಉದ್ಯಮ ಸ್ನೇಹಿ ನೂತನ ಜವಳಿ ನೀತಿ 2025–30 ರೂಪಿಸುವ ಸಿದ್ಧತೆ ನಡೆದಿದೆ, ಸಮಿತಿಯಲ್ಲಿ ಕೆಐಎ ಪ್ರತಿನಿಧಿ ಒಬ್ಬರಿಗೆ ಅವಕಾಶ ಕಲ್ಪಿಸಲಾಗುವುದು ಎಂದರು.

ಕರ್ನಾಟಕ ಇನ್ನರ್‌ವೇರ್ ಅಸೋಸಿಯೇಷನ್‌ಗೆ ಬೆಂಗಳೂರಿನಲ್ಲಿ ಕಚೇರಿಗೆ ಸ್ಥಳಾವಕಾಶ ಕಲ್ಪಿಸಬೇಕು. ಜವಳಿ ನೀತಿಯಲ್ಲಿ ಸಂಘದ ಪ್ರತಿನಿಧಿ ಸೇರ್ಪಡೆ ಮಾಡಬೇಕು ಎಂಬುದಾಗಿ ಪದಾಧಿಕಾರಿಗಳು ಸಚಿವರಿಗೆ ಮನವಿ ಮಾಡಿದರು. ಮೂರು ದಿನಗಳ ಟ್ರೇಡ್ ಶೋನಲ್ಲಿ ಇನ್ನರ್‌ವೇರ್ ಉತ್ಪಾದಕರು, ಹೋಲ್‌ಸೇಲ್ ಮತ್ತು ರೀಟೇಲ್ ಮಾರಾಟಗಾರರು ಸೇರಿದಂತೆ ಎರಡು ಸಾವಿರ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ಕೆಐಎ ತಿಳಿಸಿದೆ.

ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ ವಿರುದ್ಧ ಸಂಸತ್‌ನಲ್ಲಿ ಕೋಲಾಹಲ

ಉಭಯ ಸದನ ಕಲಾಪಗಳು ಬುಧವಾರಕ್ಕೆ ಮುಂದೂಡಿಕೆ

ನವದೆಹಲಿ: ಬಿಹಾರ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಸೇರಿದಂತೆ ಹಲವಾರು ಪ್ರಮುಖ ವಿಷಯಗಳ ಕುರಿತು ಚರ್ಚೆಗೆ ಒತ್ತಾಯಿಸಿ ವಿರೋಧ ಪಕ್ಷದ ಸದಸ್ಯರು ತೀವ್ರ ಪ್ರತಿಭಟನೆ ನಡೆಸಿದ್ದು, ಹೀಗಾಗಿ ಸಂಸತ್ತಿನ ಉಭಯ ಸದನಗಳನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆಯ ಕುರಿತು ಚರ್ಚೆಗೆ ಒತ್ತಾಯಿಸಿ ವಿರೋಧ ಪಕ್ಷಗಳು ಪ್ರತಿಭಟನೆ ನಡೆಸಿದ ನಂತರ ಲೋಕಸಭೆಯನ್ನು ಮುಂದೂಡಲಾಯಿತು. ಒಂದು ಕಡೆ ವಿಪಕ್ಷಗಳು ಚರ್ಚೆಗೆ ಒತ್ತಾಯಿಸುತ್ತಿವೆ. ಮತ್ತೊಂದೆಡೆ ಸದನಕ್ಕೆ ಅಡ್ಡಿಪಡಿಸುವ ಮೂಲಕ 'ದ್ವಿಮುಖ ನೀತಿ' ಅನುಸರಿಸುತ್ತಿದೆ ಎಂದು ಸರ್ಕಾರ ಆರೋಪಿಸಿದೆ.

ಈ ವರ್ಷದ ಕೊನೆಯಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ ಮುನ್ನ ಬಿಹಾರದಲ್ಲಿ ಚುನಾವಣಾ ಆಯೋಗ ಆರಂಭಿಸಿರುವ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಹಿಂಪಡೆಯುವಂತೆ ಮತ್ತು ಚರ್ಚೆಯನ್ನು ಮುಂದೂಡುವಂತೆ ವಿಪಕ್ಷಗಳು ಒತ್ತಾಯಿಸಿದ್ದವು. ಹೀಗಾಗಿ ಸಂಸತ್ತಿನ ಮಳೆಗಾಲದ ಅಧಿವೇಶನದ ಎರಡನೇ ದಿನದಂದು ಎರಡು ಬಾರಿ ಸದನವನ್ನು ಮುಂದೂಡಲಾಗಿತ್ತು. ನಂತರ ಮಧ್ಯಾಹ್ನ 2 ಗಂಟೆಗೆ ಸದನ ಮತ್ತೆ ಸೇರಿದಾಗ ವಿರೋಧ ಪಕ್ಷದ ಸದಸ್ಯರು ಲೋಕಸಭೆಯ ಬಾವಿಗೆ ಇಳಿದು ಪ್ರತಿಭಟಿಸಿದರು. ಹೀಗಾಗಿ ಸದನವನ್ನು ನಾಳೆಗೆ ಮುಂದೂಡಲಾಯಿತು.

ಸದನದ ಬಾವಿಗಿಳಿದಿದ್ದ ವಿರೋಧ ಪಕ್ಷದ ಸಂಸದರನ್ನು ತಮ್ಮ ಸ್ಥಳಗಳಿಗೆ ಹೋಗಿ ಕುಳಿತುಕೊಳ್ಳುವಂತೆ ಸದನವನ್ನು ಸುಗಮವಾಗಿ ನಡೆಯಲು ಅನುವು ಮಾಡಿಕೊಡುವಂತೆ ಸಭಾಧ್ಯಕ್ಷ ದಿಲೀಪ್ ಸೈಕಿಯಾ ಅವರು, ಪದೇ ಪದೆ ವಿನಂತಿಸಿದರು. ಆದರೆ ವಿಪಕ್ಷಗಳು ಪ್ರತಿಭಟನೆಯನ್ನು ಮುಂದುವರೆಸಿದರು. ಈ ವೇಳೆ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಎದ್ದು ವಿರೋಧ ಪಕ್ಷದ ನಡವಳಿಕೆಯನ್ನು ಖಂಡಿಸಿದರು.

ನಿನ್ನೆ ನಡೆದ ವ್ಯವಹಾರ ಸಲಹಾ ಸಮಿತಿ ಸಭೆಯಲ್ಲಿ ಮೊದಲು ಆಪರೇಷನ್ ಸಿಂಧೂರ್ ಬಗ್ಗೆ ಚರ್ಚೆ ನಡೆಸಲಾಗುವುದು ಮತ್ತು ಅದಕ್ಕೆ ಸಮಯವನ್ನು ಸಹ ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು. ಚರ್ಚೆ ನಡೆಯುವ ನಿಯಮವನ್ನು ಮಾತ್ರ ನಿರ್ಧರಿಸಲಾಗುತ್ತದೆ. ಅವರು ಫಲಕಗಳನ್ನು ಹಿಡಿದುಕೊಂಡು ಇಲ್ಲಿಗೆ ಬಂದು ನಿಯಮಗಳನ್ನು ಉಲ್ಲಂಘಿಸುತ್ತಾರೆ, ಇದನ್ನು ನಾನು ಖಂಡಿಸುತ್ತೇನೆ" ಎಂದು ರಿಜಿಜು ಹೇಳಿದರು.

74 ಲಕ್ಷ ಮತದಾರರ ಹುಡುಕಿ ಕೊಡಿ!

ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ ಅಕ್ರಮ ವಲಸಿಗರಿಗೆ ಮತ್ತು ನಕಲಿ ಮತದಾರರ ಸೃಷ್ಟಿಸುತ್ತಿದ್ದ ರಾಜಕೀಯ ಪಕ್ಷಗಳ ನಕಲಿ ಆಟಕ್ಕೆ ಕೇಂದ್ರ ಚುನಾವಣಾ ಆಯೋಗ ಚೆಕ್ ಇಟ್ಟಿದ್ದು, ಮಿಸ್ ಆಗಿರುವ 74 ಲಕ್ಷ ಮತದಾರರ ಹುಡುಕಿ ಕೊಡಿ ಎಂದು ರಾಜಕೀಯ ಪಕ್ಷಗಳ ಕೇಳಿದೆ. ಬಿಹಾರದಲ್ಲಿ ಮತಪಟ್ಟಿ ಪರಿಷ್ಕರಣೆ ನಡೆಸುತ್ತಿರುವ ಚುನಾವಣಾ ಆಯೋಗ, ನಾಪತ್ತೆಯಾಗಿರುವ ಅಂದಾಜು 74 ಲಕ್ಷ ಮತದಾರರನ್ನು ಹುಡುಕಿಕೊಡಿ ಎಂದು ರಾಜಕೀಯ ಪಕ್ಷಗಳಲ್ಲಿ ಮನವಿ ಮಾಡಿದೆ. ರಾಜ್ಯದಲ್ಲಿ ಅಕ್ರಮ ವಲಸಿಗರು, ಸೂಕ್ತ ದಾಖಲೆ ಇಲ್ಲದವರ ಹೆಸರನ್ನು ಕೈಬಿಡುತ್ತಿರುವ ನಡುವೆಯೇ ಈ ಬೆಳವಣಿಗೆ ನಡೆದಿದೆ.



ನಕ್ಕರೆ ಅದೇ ಸ್ವರ್ಗ

ಗುಂಡ : ನನ್ನ ಮುಖದಲ್ಲಿ ಒಂದು ಪಿಂಪಲ್ ಇತ್ತು. ನಿನ್ನೆ ನಾನು ಅದನ್ನು ಕಿತ್ತಾಕಿಬಿಟ್ಟೆ ಆಮೇಲೆ ಏನಾಯ್ತು ಗೊತ್ತಾ?

ತಿಮ್ಮ : ಏನಾಯ್ತು?

ಗುಂಡ : ಇವತ್ತು ಅದು ತನ್ನ ಕುಟುಂಬನ ಕರ್ಕೊಂಡು ಜಗಳಕ್ಕೆ ಬಂದಿದೆ. ನೋಡು ನನ್ನ ಮುಖ ಫುಲ್ ಪಿಂಪಲ್ ಆಗಿವೆ.

ಮೈಸೂರು ಮಿತ್ರ

ಬುಧವಾರ, 23 ಜುಲೈ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಕೋಪ ಇದ್ದವನಿಗೆ ಬೇರೆ ಶತ್ರುವೇ ಬೇಡ. ಜ್ಞಾನವುಳ್ಳವನಿಗೆ ಬೇರೆ ಸಂಪತ್ತು ಬೇಡ. ಕರುಣೆ ಉಳ್ಳವನಿಗೆ ಮತ್ತಾವ ರಕ್ಷಣೆಯೂ ಬೇಡ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅಜ್ಜಿ ಇಲ್ಲದ ಮನೆ, ಮಜ್ಜಿಗೆ ಇಲ್ಲದ ಊಟ

ನಿಮ್ಮ ಪತ್ರಗಳು

ಅಭಿನಯ ಸರಸ್ವತಿ ಅಪ್ರತಿಮ ಕಲಾವಿದೆ ಸರೋಜಾದೇವಿ

ಮಾನ್ಯರೆ,



ಪಂಚಭಾಷಾ ತಾರೆಯಾಗಿ ಆರು ದಶಕಗಳ ಕಾಲ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ ಅಪ್ರತಿಮ ಕಲಾವಿದೆ ಅಭಿನಯ ಸರಸ್ವತಿ ಬಿ. ಸರೋಜಾದೇವಿ ಅವರು ವಿಧಿವಶರಾಗಿರುವುದು ಚಿತ್ರರಂಗಕ್ಕೆ ತುಂಬಲಾರದ ನಷ್ಟವಾಗಿದೆ. ಮಹಾಕವಿ ಕಾಳಿದಾಸ ಅವರು ನಟಿಸಿದ ಮೊದಲ ಚಿತ್ರವಾದರೆ ಪುನೀತ್ ರಾಜ್‌ಕುಮಾರ್ ಅಭಿನಯದ ನಟಸಾರ್ವಭೌಮ ಅವರು ನಟಿಸಿದ ಕೊನೆಯ ಚಿತ್ರವಾಗಿದೆ. ತಮ್ಮ ಸಿನಿ ಪಯಣದಲ್ಲಿ ಯಾವುದೇ ರೀತಿಯ ಕಳಂಕ ಬಾರದ ರೀತಿಯಲ್ಲಿ ಕಾರ್ಯ ನಿರ್ವಹಿಸಿದ ಈ ಮೇರುನಟಿಯನ್ನು ಕನ್ನಡಿಗರಾದ ನಾವೆಲ್ಲರೂ ಮೆಚ್ಚುವಂತದ್ದು. ಅವರ ಸಿನಿಮಾ ಪಯಣದಲ್ಲಿ ಅವರ ಅಭಿನಯಕ್ಕೆ ಹಲವಾರು ಗೌರವಗಳು ದೊರಕಿವೆ. ಅವುಗಳಲ್ಲಿ ಮುಖ್ಯವಾದವುಗಳು, 1965ರಲ್ಲಿ ಅಭಿನಯ ಸರಸ್ವತಿ, 1969 ರಲ್ಲಿ ಪದ್ಮಶ್ರೀ, 1992 ರಲ್ಲಿ ಪದ್ಮಭೂಷಣ, 1988 ರಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ಸರ್ಕಾರದಿಂದ ರಾಜ್‌ಕುಮಾರ್ ಜೀವಮಾನ ಪ್ರಶಸ್ತಿ ಹಾಗೂ ತಮಿಳುನಾಡು ಸರ್ಕಾರದಿಂದ ಕಲೈ ಮಾಮಣಿ ಜೀವಮಾನ ಸಾಧನೆ ಪ್ರಶಸ್ತಿಗೂ ಭಾಜನರಾಗಿರುವುದು ತುಂಬಾ ಶ್ಲಾಘನೀಯ. ಅವರ ಅಭಿನಯದ ಕಿತ್ತೂರು ರಾಣಿ ಚನ್ನಮ್ಮ ಸಿನಿಮಾದ ಅಭಿನಯವನ್ನು ಕನ್ನಡಿಗರಾದ ನಾವೆಲ್ಲರೂ ಎಂದೆಂದಿಗೂ ಮರೆಯಲು ಸಾಧ್ಯವೇ ಇಲ್ಲ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

ಧರ್ಮಸ್ಥಳದ ಪ್ರಕರಣಗಳಲ್ಲಿ ಸರ್ಕಾರದ ನಡೆ ಸ್ವಾಗತಾರ್ಹ

ಮಾನ್ಯರೆ,

ಧರ್ಮಸ್ಥಳ ಎಂದರೆ ಧರ್ಮವೂ ನೆಲೆಸಿರುವ ಸ್ಥಳ ಎಂಬುದು ಭಕ್ತರ ನಂಬಿಕೆ. ಶಿವನನ್ನು ಅತ್ಯಂತ ಧಾರ್ಮಿಕವಾಗಿ ಪೂಜಿಸುವ ಸ್ಥಳ ಇದಾಗಿದ್ದು, ತಮ್ಮ ಜೀವಿತಾವಧಿಯಲ್ಲಿ ಒಮ್ಮೆಯಾದರೂ ಧರ್ಮಸ್ಥಳದ ಮಂಜುನಾಥನನ್ನು ನೋಡುವ ಆಸೆ ಹಲವರಲ್ಲಿ ಇಂದಿಗೂ ಇದೆ. ಆದರೆ ಇದೀಗ ಈ ಸ್ಥಳದ ಸುತ್ತಮುತ್ತ ನಡೆದಿದೆ ಎನ್ನಲಾದ ಅತ್ಯಾಚಾರ ಮತ್ತು ಹತ್ಯೆ ಪ್ರಕರಣಗಳ ವಿಷಯದಲ್ಲಿ ಧರ್ಮಸ್ಥಳ ಮತ್ತಷ್ಟು ಸದ್ದು ಮಾಡುತ್ತಿರುವುದು ದುರ್ದೈವದ ಸಂಗತಿ.

ಧರ್ಮಸ್ಥಳದ ಪ್ರಕರಣಗಳಲ್ಲಿ ಸತ್ಯಾಸತ್ಯತೆಗಳು ಏನೇ ಇರಲಿ, ಯಾವುದೇ ವ್ಯಕ್ತಿ ಹಾಗೂ ಸ್ಥಳ ನಮ್ಮ ಸಂವಿಧಾನದ ಕಾನೂನಿನಿಂದ ಹೊರತಾಗಿರಲು ಸಾಧ್ಯವಿಲ್ಲ. ಕಾನೂನಿನಡಿಯಲ್ಲಿ ಎಲ್ಲರೂ ಎಲ್ಲವೂ ಸರಿಸಮಾನವಾದುದು. ಈ ಹಿನ್ನೆಲೆಯಲ್ಲಿ ತನಿಖೆಗೆ ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿರುವುದು ಸ್ವಾಗತಾರ್ಹ. ಈ ಘಟನೆಗಳಿಗೆ ಸಂಬಂಧಿಸಿದಂತೆ ಪ್ರಾಮಾಣಿಕವಾಗಿ ತನಿಖೆ ನಡೆಯಬೇಕೆಂಬುದು ಸಾರ್ವಜನಿಕರ ನಿರೀಕ್ಷೆ ಕೂಡ ಹೌದು. ಹಲವು ವರ್ಷಗಳ ಹಿಂದಿನ ಪ್ರಕರಣಗಳು ಇವಾಗಿರುವುದರಿಂದ ಎಸ್‌ಐಟಿಯು ಯಾವುದೇ ಹಸ್ತಕ್ಷೇಪಗಳಿಗೆ ಆಸ್ಪದ ನೀಡದೆ, ಪ್ರಭಾವಗಳಿಗೆ ಮಣಿಯದೆ ಸಂಘ–ಸಂಸ್ಥೆಗಳು ಹಾಗೂ ಸ್ಥಳೀಯ ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾಲ ವಿಳಂಬವಿಲ್ಲದೆ ನಿಷ್ಪಕ್ಷಪಾತವಾದ ತನಿಖೆ ನಡೆಸಿ ಸತ್ಯವನ್ನು ಆದಷ್ಟು ಬೇಗ ಪತ್ತೆ ಮಾಡಬೇಕಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ನಿವೃತ್ತ ನೌಕರರ ವೇತನ, ತುಟ್ಟಿಭತ್ಯೆ ಸ್ಪಷ್ಟೀಕರಣ ನೀಡಲಿ

ಮಾನ್ಯರೆ,

ಕೇಂದ್ರ ಸರ್ಕಾರದ ಹಣಕಾಸು ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರು 25.03.2025 ರಂದು ಲೋಕಸಭೆಯಲ್ಲಿ ಆರ್ಥಿಕ ಬಿಲ್ ಮಂಡಿಸಿದ್ದಾರೆ. ಅದರ ಪ್ರಕಾರ 8ನೇ ವೇತನ ಆಯೋಗದ ಶಿಫಾರಸ್ಸು ಜಾರಿ ಮಾಡಬೇಕಾದರೆ 1.4.2026 ಕ್ಕಿಂತ ಹಿಂದೆ ನಿವೃತ್ತಿಯಾದ ನೌಕರರಿಗೆ, ನಿವೃತ್ತಿ ವೇತನ ಹಾಗೂ ತುಟ್ಟಿಭತ್ಯೆಯನ್ನು ಪರಿಷ್ಕರಣೆ ಮಾಡಲು ಕಷ್ಟ ಸಾಧ್ಯ. ಹಾಗೂ ಮುಂದಿನ ತುಟ್ಟಿಭತ್ಯೆಯನ್ನು ಮಂಜೂರು ಮಾಡಲು ಸಾಧ್ಯವಾಗುವುದಿಲ್ಲ ಎಂದು ಹೇಳಿರುವುದಾಗಿಯೂ ಆದ್ದರಿಂದ ಎಲ್ಲಾ ನಿವೃತ್ತಿ ನೌಕರರು ತಮ್ಮ ತಮ್ಮ ಜಿಲ್ಲಾ ಸಂಘಕ್ಕೆ ಬಂದು ಅಲ್ಲಿ ಸಹಿ ಮಾಡಬೇಕು. ಆ ಮನವಿಯನ್ನು ಅಖಿಲ ಭಾರತ ನಿವೃತ್ತ ನೌಕರರ ಫೆಡರೇಷನ್ ಮೂಲಕ ಪ್ರಧಾನ ಮಂತ್ರಿಗಳಿಗೆ ಕಳುಹಿಸಲಾಗುವುದು. ಸಂಘಕ್ಕೆ ಶುಲ್ಕವಾಗಿ 200 ರೂ ಪಾವತಿ ಮಾಡಬೇಕು ಎಂಬ ಸಂದೇಶ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಇದರಿಂದ ನಿವೃತ್ತ ನೌಕರರು ಗಾಬರಿಗೊಂಡು ಈ ಸುದ್ದಿಯ ನೈಜತೆಯ ಬಗ್ಗೆ ವಿಚಾರ ಮಾಡುತ್ತಿದ್ದಾರೆ. ಆದ್ದರಿಂದ ಸರ್ಕಾರ ಅಥವಾ ಸಂಬಂಧಿಸಿದವರು ಇದರ ಸತ್ಯಾಸತ್ಯತೆಯ ಬಗ್ಗೆ ಸ್ಪಷ್ಟೀಕರಣ ನೀಡಬೇಕೆಂದು ನಿವೃತ್ತ ನೌಕರರ ಪರವಾಗಿ ಕೋರುತ್ತೇನೆ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಈ ರಸ್ತೆಗೆ ದುರಸ್ತಿ ಭಾಗ್ಯ ಯಾವಾಗ?

ಮಾನ್ಯರೆ,

ಇದು ಮೈಸೂರಿನ ದಟ್ಟಗಳ್ಳಿಯಿಂದ ಕೇರ್ಗಳ್ಳಿಗೆ ಹೋಗುವ ರಸ್ತೆಯ ದುಸ್ಥಿತಿ. ಈಗ ಮಳೆಗಾಲ, ಬರೀ ಗುಂಡಿಗಳೇ ತುಂಬಿದ್ದು, ನೀರು ನಿಂತು ರಸ್ತೆ ಯಾವುದು?



ಗುಂಡಿ ಯಾವುದು? ಎಂದು ತಿಳಿಯದಾಗಿದೆ. ಪಿಡಬ್ಲ್ಯೂಡಿಗೆ ಸೇರಿದ ಈ ರಸ್ತೆ ದುರಸ್ತಿಗೆ ವರ್ಕ್ ಆರ್ಡರ್ ಆಗಿ ವರ್ಷವೇ ಮುಗಿಯುತ್ತ ಬಂದಿದ್ದರೂ ಯಾರೂ ರಿಪೇರಿ ಮಾಡುತ್ತಿಲ್ಲ. ಕೇಳಿದರೆ ಗುತ್ತಿಗೆದಾರರು ಬ್ಯುಸಿ, ಬೇರೆ ಕಡೆ ಕೆಲಸ ಮಾಡ್ತಾ ಇದ್ದಾರೆ ಮುಗಿದ ಮೇಲೆ ನೋಡೋಣ ಎನ್ನುತ್ತಿದ್ದಾರೆ. ಹಾಗಾದರೆ ಈ ರಸ್ತೆಗೆ ಕಾಯಕಲ್ಪ ಯಾವಾಗ, ಈಗ ಜನರು ಬೀಳ್ತಾ ಇದ್ದಾರೆ, ಸತ್ತ ಮೇಲಾದರೂ ಆಗಬಹುದೇನೋ...!

– ರಾಜು, ಕೇರ್ಗಳ್ಳಿ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಆನಂದವರ್ಧನಾವತಾರ ಡಾ.ಕೆ.ಕೃಷ್ಣಮೂರ್ತಿ

ಡಾ.ಕೆ.ಕೃಷ್ಣಮೂರ್ತಿ ಜನ್ಮ ಶತಾಬ್ಧಿ ಸಮಾರಂಭವು 26.7.2025 ಶನಿವಾರ ಬೆಳಗ್ಗೆ 10 ಗಂಟೆಗೆ ಮೈಸೂರಿನ ನಿತ್ಯೋತ್ಸವ ಕನ್ವೆನ್ಷನ್ ಹಾಲ್‌ನಲ್ಲಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ, ಡಾ.ಟಿ.ವಿ.ವೆಂಕಟಾಚಲಶಾಸ್ತ್ರಿ ಅಧ್ಯಕ್ಷತೆಯಲ್ಲಿ ನಡೆಯಲಿರುವುದರಿಂದ ಈ ವಿಶೇಷ ಲೇಖನ.

ಕ್ರಿ.ಶ. ಒಂಬತ್ತನೆಯ ಶತಮಾನದ ಉತ್ತರಾರ್ಧ. ಮಹಾರಾಜ ಅವಂತಿ ವರ್ಮ ಕಾಶ್ಮೀರ ದೇಶವನ್ನು ಆಳುತ್ತಿದ್ದ ಕಾಲ. ಸಾಹಿತ್ಯ, ಸಂಸ್ಕೃತಿಗಳಿಗೆ ಕೇಂದ್ರವಾಗಿ ಕಾಶ್ಮೀರ ಮೆರೆಯುತ್ತಿದ್ದ ಸುಕಾಲ. ಕಾವ್ಯ ವಿಮರ್ಶೆಯು ಅಲಂಕಾರ, ಗುಣ, ರೀತಿಗಳ ಪ್ರಾಧಾನ್ಯವನ್ನು ಹೇಳುತ್ತಿದ್ದವರಿಂದ ತುಂಬಿದ್ದ ಕಾಲ. ಆಗ ಭಾರತೀಯ ಕಾವ್ಯ ಮೀಮಾಂಸೆಗೇ ಹೊಸ ತಿರುವನ್ನು ಕೊಟ್ಟ ಒಬ್ಬ ಸೀಮಾಪುರುಷನ ಉದಯವಾಯಿತು. ಅವನೇ ನೋಣನೆಂಬ ಮಹಾವಿದ್ವಾಂಸನ ಮಗ ಆನಂದವರ್ಧನ. ಅವನು ಕೇವಲ ಹೆಸರಿಗೆ ಆನಂದ ವರ್ಧನನಾಗಲಿಲ್ಲ, ಕಾವ್ಯ ರಸಿಕರೆಲ್ಲರ ಆನಂದವನ್ನು ಹೆಚ್ಚಿಸಿದ ನಿಜವಾದ ಆನಂದವರ್ಧನನಾದ.

ಧ್ವನಿನಾತಿಗಭೀರೇಣ ಕಾವ್ಯತತ್ತ್ವನಿವೇದಿನಾ।
ಆನಂದವರ್ಧನಃ ಕಸ್ಯ ನಾಸೀದಾನಂದವರ್ಧನಃ॥

ಗಂಭೀರ ಧ್ವನಿಯಿಂದ ಕಾವ್ಯತತ್ತ್ವದ ನಿರೂಪಣೆಯನ್ನು ಮಾಡುವ ಆನಂದವರ್ಧನನು ಯಾರ ಆನಂದವನ್ನು ವೃದ್ಧಿಸುವವನಾಗಲಿಲ್ಲ! ಎಂದು ಎಲ್ಲರೂ ಉದ್ಗಾರ ಮಾಡುವಂತಾಯಿತು. ಅವನು ಶುಷ್ಕ ವಿಮರ್ಶಕನಲ್ಲ. ಸ್ವಯಂ ಕವಿ. ದೇವೀಶತಕ, ವಿಷಮಬಾಣಲೀಲಾ ಮುಂತಾದ ಕಾವ್ಯಗಳನ್ನೂ ಬರೆದಿದ್ದನು. ಅವಂತಿ ವರ್ಮನ ಆಸ್ಥಾನದಲ್ಲಿ 'ಕವಿ' ಎಂದೇ ಅವನಿಗೆ ಮನ್ನಣೆ ದೊರಕಿತ್ತು.

ಮುಕ್ತಾಕಣಃ ಶಿವಸ್ವಾಮೀ ಕವಿರಾನಂದವರ್ಧನಃ।
ಪ್ರಥಾಂ ರತ್ನಾಕರಶ್ಚಾಗಾತ್ ಸಾಮ್ರಾಜ್ಯೇವಂತಿವರ್ಮಣಃ॥

ಮುಕ್ತಾಕಣ, ಶಿವಸ್ವಾಮಿ, ರತ್ನಾಕರ ಇತ್ಯಾದಿ ಮಹಾಕವಿಗಳ ಪಕ್ಕದಲ್ಲಿ ಕುಳಿತುಕೊಳ್ಳುವ ಸೌಭಾಗ್ಯ ಆನಂದವರ್ಧನನದಾಗಿತ್ತು ಎಂದು ಕಲ್ಹಣ ರಾಜತರಂಗಿಣಿಯಲ್ಲಿ ಹೇಳಿದ್ದಾನೆ. ಕಾವ್ಯದ ಆತ್ಮ ಧ್ವನಿ, ಅಲಂಕಾರವಲ್ಲ, ಗುಣವಲ್ಲ, ರೀತಿಯಲ್ಲ ಎಂದು ಧೈರ್ಯದಿಂದ ಸಾರಿದವನು ಆನಂದವರ್ಧನ. ವಾಚ್ಯಾರ್ಥ, ಲಕ್ಷ್ಯಾರ್ಥ, ತಾತ್ಪರ್ಯಾರ್ಥಗಳನ್ನು ಮೀರಿದ, ಸಹೃದಯರ ಆನಂದಕ್ಕೆ ಮುಖ್ಯ ಕಾರಣವಾದ, ಸುಂದರತಮವಾದ, ಸೂಚ್ಯವಾದ ಅರ್ಥವನ್ನು ವ್ಯಂಜಿಸುವ ಕಾವ್ಯವೇ ಧ್ವನಿ ಎಂದು ಜಗತ್ತಿಗೆ ತೋರಿಸಿದ ಮಹಾಮೇಧಾವಿ ಆನಂದ ವರ್ಧನ. ಅವನು ರಚಿಸಿದ ಗ್ರಂಥರತ್ನ–ಧ್ವನ್ಯಾಲೋಕ. ಅದು ಭಾರತ ದೇಶದ ಕಾವ್ಯ ವಿಮರ್ಶೆಯ ದಿಕ್ಕನ್ನೇ ಬದಲಿಸಿತು. ಅದನ್ನು ಒಪ್ಪದೆ ಕೆಲವು ಖಂಡಿಸಿದ್ದೂ ಉಂಟು. ಆದರೂ ನೂರಕ್ಕೆ ತೊಂಬತ್ತರಷ್ಟು ಜನ ಕಾವ್ಯ ಮೀಮಾಂಸಕರು ಆನಂದವರ್ಧನನನ್ನು ಅನುಸರಿಸಿ ಧ್ವನಿ ಪ್ರಾಧಾನ್ಯವಾದಿಗಳಾದರು. ಸಹೃದಯ ಚಕ್ರವರ್ತಿ ಎಂದು ಆನಂದ ವರ್ಧನ ನನ್ನು ಶ್ಲಾಘಿಸಿದವರೇ ಬಹುಮಂದಿ. ಅವನಿಗೆ ಧ್ವನಿಕಾರ ಎಂಬ ಅಭಿಧಾನವೇ ದೊರಕಿತು. ಅಲಂಕಾರ, ಗುಣ, ರೀತಿ ಇತ್ಯಾದಿಗಳೆಲ್ಲ ಧ್ವನಿಯ ಪರಿಕರಗಳು ಎಂದು ಸಿದ್ಧಾಂತವಾಯಿತು.

ಅನೇಕ ಶತಮಾನಗಳು ಉರುಳಿದುವು. ಆನಂದವರ್ಧನನ ಗ್ರಂಥದ, ಎಂದರೆ ಧ್ವನ್ಯಾಲೋಕದ ಪ್ರಾಮುಖ್ಯವನ್ನೂ ಮಹತ್ತ್ವವನ್ನೂ ಆಧುನಿಕ ಜಗತ್ತಿಗೆ ಸಾರಿ ಹೇಳುವ ಪಂಡಿತವರೇಣ್ಯನ ಜನನ ಇಪ್ಪತ್ತನೆಯ ಶತಮಾನದಲ್ಲಿ ಕರ್ನಾಟಕ ರಾಜ್ಯದಲ್ಲಿ ಜನಿಸಿದುದು ಕರುನಾಡಿನ ಭಾಗ್ಯ ವಿಶೇಷ. 1923ನೆಯ ಇಸವಿ ಜುಲೈ ಮೂವತ್ತರಂದು ಕೇರಳಾಪುರದಲ್ಲಿ ಹುಟ್ಟಿದ ಕೆ. ಕೃಷ್ಣಮೂರ್ತಿ ಮುಂದೆ ಕನ್ನಡ–ಸಂಸ್ಕೃತ–ಆಂಗ್ಲ ಭಾಷೆಗಳಲ್ಲಿ ಅಸದೃಶ, ಅಸಾಮಾನ್ಯ ವಿದ್ವತ್ತನ್ನು ಗಳಿಸಿ, ತಮ್ಮ ವಿಶೇಷಾಧ್ಯಯನಕ್ಕೆ ಧ್ವನ್ಯಾಲೋಕವನ್ನು ತೆಗೆದುಕೊಂಡು, ಅದರ ಗಹನ ತತ್ತ್ವಗಳನ್ನು ತಮ್ಮ ನಿಶಿತಮತಿಯಿಂದ ಅರಿತು ಇಂದಿನ ಜನರ ಭಾಷೆಯಲ್ಲಿ ವಿವರಿಸಿ 'ಇಪ್ಪತ್ತನೆಯ ಶತಮಾನದ ಆನಂದವರ್ಧನ' ಎಂಬ ಅಭಿಧಾನಕ್ಕೆ ಪಾತ್ರರಾಗುವರೆಂದು ಯಾರು ಕನಸು ಕಂಡಿದ್ದರು? ಪ್ರಾಯಶಃ ಸರಸ್ವತಿಯು ಆನಂದವರ್ಧನನ ಪ್ರಾರ್ಥನೆಗೆ ಓಗೊಟ್ಟು ಡಾ.ಕೃಷ್ಣಮೂರ್ತಿಗಳಿಗೆ ಪ್ರತಿಭಾಮೃತವನ್ನು ಬೊಗಸೆಗಳಿಂದ ತುಂಬಿ ತುಂಬಿ ಕೊಟ್ಟಿರಬೇಕು. ಇಲ್ಲದಿದ್ದರೆ ಧ್ವನ್ಯಾಲೋಕದ ಕನ್ನಡಾನುವಾದ, ಇಂಗ್ಲೀಷ್ ಅನುವಾದ, Dhvanyaloka and its critics ಎಂಬ ಗ್ರಂಥಗಳ ರಚನೆ ಹೇಗೆ ಸಾಧ್ಯವಾಗುತ್ತಿತ್ತು? ಕ್ರಿ.ಶ. ಹತ್ತನೆಯ ಮತ್ತು ಹನ್ನೊಂದನೆಯ ಶತಮಾನದಲ್ಲಿದ್ದ ಅಭಿನವಗುಪ್ತ ಪಾದಾಚಾರ್ಯರು ಧ್ವನ್ಯಾಲೋಕಕ್ಕೆ ಲೋಚನವೆಂಬ ವ್ಯಾಖ್ಯಾನವನ್ನು ಬರೆದ ಮೇಲೆ ಬೇರೆ ಯಾರೂ ಧ್ವನ್ಯಾಲೋಕಕ್ಕೆ ಡಾ. ಕೆ. ಕೃಷ್ಣಮೂರ್ತಿಗಳಷ್ಟು ಸೇವೆಯನ್ನು ಸಲ್ಲಿಸಿಲ್ಲ.



ಡಾ.ಕೆ. ಕೃಷ್ಣಮೂರ್ತಿ

ಡಾ. ಕೆ.ಕೃಷ್ಣಮೂರ್ತಿಗಳೇ ಸಂಸ್ಕೃತದ ಅಲಂಕಾರ ಪರಂಪರೆಯ ಅನೇಕ ಗ್ರಂಥಗಳನ್ನು ಕನ್ನಡಕ್ಕೆ ತಂದರು. ಭಾಮಹನ ಕಾವ್ಯಾಲಂಕಾರ, ದಂಡಿಯ ಕಾವ್ಯಾದರ್ಶ, ವಾಮನನ ಕಾವ್ಯಾಲಂಕಾರ ಸೂತ್ರವೃತ್ತಿ, ರಾಜಶೇಖರನ ಕಾವ್ಯಮೀಮಾಂಸೆ, ಮಮ್ಮಟನ ಕಾವ್ಯಪ್ರಕಾಶ, ಕ್ಷೇಮೇಂದ್ರನ ಔಚಿತ್ಯ ವಿಚಾರ ಚರ್ಚೆ, ಕವಿಕಂಠಾಭರಣ–ಹೀಗೆ ಪಟ್ಟಿ ಬೆಳೆಯುತ್ತಾ ಹೋಗುತ್ತದೆ. ಒಂದೊಂದು ಗ್ರಂಥಕ್ಕೂ ಅವರು ಬರೆದಿರುವ ಪೀಠಿಕೆ ಎಷ್ಟು ಮಾಹಿತಿಗಳನ್ನೂ ವಿಮರ್ಶೆಗಳನ್ನೂ ಒದಗಿಸುತ್ತದೆ. ಈ ಎಲ್ಲಾ ಗ್ರಂಥಗಳ ಪೀಠಿಕೆಗಳನ್ನು ಕ್ರಮವಾಗಿ ಜೋಡಿಸಿ ಒಟ್ಟಿಗೆ ಪ್ರಕಟಿಸಿದರೆ ಅದೇ ಅಲಂಕಾರ ಶಾಸ್ತ್ರದ ಇತಿಹಾಸವಾಗುತ್ತದೆ.

ಎಲ್ಲಕ್ಕೂ ಮಿಗಿಲಾಗಿ ಅವರು ಸಾರಸ್ವತ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಯಾವುದೆಂದರೆ ಕುಂತಕನ ವಕ್ರೋಕ್ತಿ ಜೀವಿತವನ್ನು ಸಮಗ್ರವಾಗಿ ಅನ್ವೇಷಣೆ ಮಾಡಿ ಆಂಗ್ಲಾನುವಾದದೊಡನೆ ಪ್ರಕಟಿಸಿದುದು. ಇದಕ್ಕಾಗಿ ಸಮಸ್ತ ವಿದ್ವಲ್ಲೋಕ ಡಾ. ಕೃಷ್ಣಮೂರ್ತಿಯವರಿಗೆ ಅಧಮರ್ಣ. ಈ ಕಾರ್ಯ ಅವರನ್ನು ಬಿಟ್ಟರೆ ಯಾರೂ ಮಾಡಲಾಗುತ್ತಿರಲಿಲ್ಲ.

ಹಳೆಗನ್ನಡದಲ್ಲೂ ಉನ್ನತ ದರ್ಜೆಯ ಪಾಂಡಿತ್ಯವನ್ನು ಗಳಿಸಿದ್ದ ಡಾ. ಕೆ. ಕೃಷ್ಣಮೂರ್ತಿಗಳು ಕವಿರಾಜಮಾರ್ಗ ಮುಂತಾದ ಗ್ರಂಥಗಳ ಸಂಪಾದನದಲ್ಲಿ ಅದ್ಭುತ ಸೂಕ್ಷ್ಮದರ್ಶಿತ್ವವನ್ನು ಮೆರೆಸಿದ್ದಾರೆ. ದಂಡಿಯ ಕಾವ್ಯಾದರ್ಶದಿಂದ ಕವಿರಾಜ ಮಾರ್ಗಕಾರನು ಎಷ್ಟು ಎರವಲು ಪಡೆದಿದ್ದಾನೆ, ಎಷ್ಟು ಅವನ ನೂತನ ಚಿಂತನೆಗಳು – ಎಂಬುದನ್ನರಿಯಲು ಈ ಗ್ರಂಥಕ್ಕೆ ಅವರು ಬರೆದ ಮುನ್ನುಡಿಯನ್ನು ಓದಬೇಕು.

ಡಾ. ಕೆ. ಕೃಷ್ಣಮೂರ್ತಿಗಳ ವಿಶೇಷವೇನೆಂದರೆ ಅವರಿಗೆ ಭಾರತೀಯ ಕಾವ್ಯ ಮೀಮಾಂಸಕರ ಚಿಂತನೆಗಳು ಎಷ್ಟು ಸುಪರಿಚಿತವೋ ಅಷ್ಟೇ ಚೆನ್ನಾಗಿ ಪಾಶ್ಚಾತ್ಯಪರಂಪರೆಯ ಸೌಂದರ್ಯಮೀಮಾಂಸಕರ ಚಿಂತನೆಗಳೂ ಗೊತ್ತು. ಎರಡು ಚಿಂತನ ಧಾರೆಗಳನ್ನೂ ತೌಲನಿಕವಾಗಿ ವಿಚಾರಿಸುವ ಶಕ್ತಿಯೂ ಅವರಿಗಿತ್ತು. ಇಂಗ್ಲೀಷಿನ Last Horizon ಎಂಬ ಕಾದಂಬರಿಯನ್ನು ಲುಪ್ತದಿಗಂತ ಎಂದು ಅವರು ಕನ್ನಡಕ್ಕೆ ಅನುವಾದಿಸಿದ್ದರು. ಕನ್ನಡದಲ್ಲೇ ಸ್ವತಂತ್ರವಾಗಿ ಕಾದಂಬರಿಯೊಂದನ್ನು ರಚಿಸಿದ್ದರು ಎಂದು ಕೇಳಿದ್ದೇವೆ.

ಪ್ರಾತಃಸ್ಮರಣೀಯ ಎ.ಆರ್. ಕೃಷ್ಣಶಾಸ್ತ್ರಿಗಳು ಬರೆದು ಪ್ರಕಟಿಸಿದ್ದ ಸಂಸ್ಕೃತ ನಾಟಕ ಎಂಬ ಗ್ರಂಥ ಸುಪ್ರಸಿದ್ಧ. ಅದರಂತೆ ಡಾ. ಕೃಷ್ಣಮೂರ್ತಿಗಳು ಸಂಸ್ಕೃತ ಕಾವ್ಯ ಎಂಬುದನ್ನು ರಚಿಸಿದ್ದಾರೆ. ರಾಮಾಯಣ–ಮಹಾಭಾರತಗಳಿಂದ ಆರಂಭಿಸಿ ಕಾಳಿದಾಸ, ಭಾರವಿ, ಮಾಘ, ಶ್ರೀ ಹರ್ಷ ಮುಂತಾದವರ ಮಹಾಕಾವ್ಯಗಳನ್ನೂ, ಬಾಣ–ಸುಬಂಧು–ದಂಡಿ ಮುಂತಾದವರ ಗದ್ಯ ಕಾವ್ಯಗಳನ್ನೂ, ತ್ರಿವಿಕ್ರಮ ಭಟ್ಟ, ಸೋಮದೇವ ಸೂರಿ ಮುಂತಾದವರ ಚಂಪೂಕಾವ್ಯಗಳನ್ನೂ ಅವರು ಪರಿಶೀಲಿಸಿ ಪರಿಚಯಿಸಿದ್ದಾರೆ. ಅವರ ಓದಿನ ವೈಶಾಲ್ಯ ಗಾಂಭೀರ್ಯಗಳು ಇಲ್ಲಿ ಗೋಚರವಾಗುತ್ತವೆ.

ಅನೇಕ ವಿದ್ವತ್ ಪತ್ರಿಕೆಗಳಲ್ಲಿ ಡಾ. ಕೆ ಕೃಷ್ಣಮೂರ್ತಿಗಳ ಸಂಶೋಧನಾ ಲೇಖನಗಳು ಪ್ರಕಟವಾಗಿವೆ. ಪ್ರತಿಯೊಂದು ಲೇಖನದಲ್ಲೂ ಹೊಸ ಹೊಸ ಹೊಳಹುಗಳು ಇದ್ದೇ ಇರುತ್ತವೆ. ಒಬ್ಬ ವ್ಯಕ್ತಿ ಇಷ್ಟೊಂದು ವಿಷಯಗಳನ್ನು ತಿಳಿದುಕೊಂಡಿರುವುದು ಹೇಗೆ ಸಾಧ್ಯ ಎಂಬ ಬೆರಗು ಓದುಗರಲ್ಲಿ ಮೂಡುತ್ತದೆ. ಇಂಗ್ಲೀಷ್ ಮಾತ್ರವಲ್ಲದೆ ಸಂಸ್ಕೃತದಲ್ಲಿ ಡಾ. ಕೆ. ಕೃಷ್ಣಮೂರ್ತಿಗಳು ರಚಿಸಿದ ಪುಸ್ತಕಗಳೂ, ಶ್ಲೋಕಗಳೂ ಉತ್ಕೃಷ್ಟವಾಗಿವೆ. ಇದು ಅಸಾಧಾರಣ ಪ್ರತಿಭೆಯಿದ್ದವರಿಗೆ ಮಾತ್ರ ಸಾಧ್ಯ. ಕನ್ನಡ ನಿಘಂಟುಗಳ ರಚನೆಯಲ್ಲೂ ಅವರು ವಹಿಸಿದ ಪಾತ್ರ ಅನನ್ಯವಾಗಿತ್ತು. ಇದಮಿತ್ಥಂ ಎಂದು ಅವರು ನಿರ್ಣಯವನ್ನು ಕೊಟ್ಟ ಮೇಲೆ ಬೇರೆಯವರು ಒಪ್ಪಿಕೊಳ್ಳಲೇಬೇಕಾಗಿತ್ತು. ಅಷ್ಟು ತಾರ್ಕಿಕವಾದ, ಶಾಸ್ತ್ರಬದ್ಧವಾದ ನಿಲುವು ಅವರದಾಗಿರುತ್ತಿತ್ತು.

ಇಂತಹ ಪಂಡಿತೋತ್ತಮರ ಶತಮಾನೋತ್ಸವದ ಸಂದರ್ಭದಲ್ಲಿ ಅವರ ಸುಪುತ್ರಿ ಡಾ. ಲೀಲಾಪ್ರಕಾಶ್ ಜನ್ಮ ಶತಾಬ್ಧಿ ಸಮಾರಂಭವನ್ನೇರ್ಪಡಿಸಿ **ಕೃಷ್ಣಾಲೋಕ** ಮತ್ತು **ಕಾವ್ಯತತ್ತ್ವೋಲ್ಲೇಖ** ಎಂಬ ಎರಡು ಗ್ರಂಥಗಳ ಬಿಡುಗಡೆಯನ್ನು ಮಾಡುತ್ತಿದ್ದಾರೆ. ಕೃಷ್ಣಾಲೋಕದಲ್ಲಿ ಡಾ. ಕೆ. ಕೃಷ್ಣಮೂರ್ತಿಗಳ ಅಭಿಮಾನಿಗಳ ಶ್ಲಾಘಾ ಲೇಖನಗಳೂ, ಕವಿತೆಗಳೂ, ಅನಂತರ ನಾಡಿನ ಪ್ರತಿಷ್ಠಿತ ವಿದ್ವಾಂಸರು ಬರೆದಿರುವ ಅಲಂಕಾರಶಾಸ್ತ್ರ ಸಂಬಂಧಿ ಲೇಖನಗಳೂ ಇವೆ. ಹಾಗಾಗಿ ಕೃಷ್ಣಾಲೋಕ ಒಂದು ಆಕರ ಗ್ರಂಥ. ಇದು ಎಲ್ಲ ಗ್ರಂಥಾಲಯಗಳಲ್ಲಿ ಸ್ಥಾನವನ್ನು ಪಡೆಯುವ ಅರ್ಹತೆಯನ್ನುಳ್ಳದ್ದು. ಕಾವ್ಯತತ್ತ್ವೋಲ್ಲೇಖದಲ್ಲಿ ಡಾ.ಕೆ.ಕೃಷ್ಣಮೂರ್ತಿಗಳು ವಿವಿಧ ವಿದ್ವತ್ ಪತ್ರಿಕೆಗಳಲ್ಲಿ ಹಿಂದೆ ಪ್ರಕಟಿಸಿದ್ದ ಲೇಖನಗಳ ಸಂಗ್ರಹವಿದೆ. ಇವುಗಳ ಓದು ಸಂಸ್ಕೃತ ವಿದ್ಯಾರ್ಥಿಗಳಿಗೂ ಸಂಶೋಧನೆಯನ್ನು ಮಾಡುವ ಲೇಖಕರಿಗೂ ಅತ್ಯಂತ ಆವಶ್ಯಕವೆಂದು ಬೇರೆ ಹೇಳಬೇಕಾಗಿಲ್ಲ. ಡಾ. ಲೀಲಾಪ್ರಕಾಶ್ ಅವರು ಈಗಾಗಲೇ ತಮ್ಮ ತಂದೆಯ ಎಲ್ಲ ಕೃತಿಗಳ ಮರು ಮುದ್ರಣವನ್ನು ಮಾಡಿಸಿ ಆಸಕ್ತರಿಗೆ ಲಭ್ಯವಾಗುವ ಹಾಗೆ ಮಾಡಿದ್ದಾರೆ.

ಡಾ. ಕೆ. ಕೃಷ್ಣಮೂರ್ತಿಗಳು ಇಹಲೋಕವನ್ನು ತ್ಯಜಿಸಿದ್ದು 1997 ಜುಲೈ 18 ರಂದು. ಅವರಿಗೆ ಸಮಾನರಾದ ಸಂಸ್ಕೃತ ಪ್ರಾಧ್ಯಾಪಕರನ್ನು ಕನ್ನಡ ನಾಡು ಕಂಡಿಲ್ಲ. ಸತತಾಭ್ಯಾಸ, ಸಹಜ ಪ್ರತಿಭೆ, ಸತತ ದುಡಿಮೆ– ಈ ಮೂರೂ ಮೇಳೈಸುವುದು ಲೋಕದಲ್ಲಿ ವಿರಳ. ಅಂತಹ ವಿದ್ವತ್ತಲ್ಲಜರನ್ನು ನೆನಪಿಗೆ ತಂದುಕೊಳ್ಳುವುದೂ ನನ್ನಂತಹ ಸಾಮಾನ್ಯರಿಗೆ ಸ್ಫೂರ್ತಿಯ ಸೆಲೆ.

ಕೃಷ್ಣಮೂರ್ತಿರ್ಬುಧೋ ಜೀಯಾದ್
ಲೋಕೇಷ್ವಾಚಂದ್ರತಾರಕಮ್ ।
ಯಸ್ಯ ಸ್ಮರಣಮಾತ್ರೇಣ ಜ್ಞಾನಜ್ಯೋತಿಃ ಪ್ರದೀಪ್ಯತೇ॥

ಬಿದಿರು ನಂಬಿದವರ ನೆಮ್ಮದಿ ಇಲ್ಲದ ಬಾಳು!

ಮೈಸೂರಲ್ಲಿ ಮಹತ್ವದ ವೃತ್ತಿಗೆ ನೆಲೆಯಿಲ್ಲ!!



ಮೈಸೂರಿನ ಸಯ್ಯಾಜಿರಾವ್ ರಸ್ತೆ ಬಳಿ ಬೀದಿ ಬದಿಯಲ್ಲೇ ಕಾಯಕ ನಿರತ ಬಿದಿರು ಕುಶಲಕರ್ಮಿಗಳು.

ಮೈಸೂರು, ಜು.22(ವಿವಿಹೆಚ್)– 'ಬಿದಿರು ನಾನಾರಿಗಲ್ಲದವಳು...' ಎಂದು ಹೇಳುತ್ತಲೇ ಸಂತ ಶಿಶುನಾಳ ಶರೀಫರು ಬಿದಿರಿನ ಮಹತ್ವ ಸಾರಿದ್ದಾರೆ. ಆದರೆ ಬಿದಿರು ನಂಬಿ ಬದುಕುತ್ತಿರುವ ಕರಕುಶಲಕರ್ಮಿಗಳಿಗೆ ಬೀದಿಬದಿಯೇ ಆಸರೆಯಾಗಿರುವುದು ವಿಷಾದನೀಯ.

ಮೈಸೂರಿನ ಸಯ್ಯಾಜಿರಾವ್ ರಸ್ತೆ, ಅಗ್ರಹಾರದ ನೂರೊಂದು ಗಣಪತಿ ದೇವಸ್ಥಾನದ ಬಳಿ ಕಾಣಸಿಗುವ ಬಿದಿರು ಕುಶಲಕರ್ಮಿಗಳ ಅವಸ್ಥೆ ಅಷ್ಟಿಷ್ಟಲ್ಲ. ಫುಟ್‌ಪಾತ್‌ನಲ್ಲಿ ಮರದ ಕೆಳಗೆ ಕುಳಿತು ಮಳೆ, ಗಾಳಿ, ಬಿಸಿಲು ಎಣಿಸದೆ ಬಿದಿರು ಸಾಮಗ್ರಿ ತಯಾರಿಸುವ ಕಾಯಕದಲ್ಲಿ ತಲ್ಲೀನರಾಗುವ ಅವರಿಗೆ ಸೂಕ್ತ ನೆಲೆ ಕಲ್ಪಿಸಬೇಕು ಎನ್ನುವುದು ಇವರ ಬವಣೆ ಅರಿತಿರುವ ಸಾರ್ವಜನಿಕರ ಆಶಯವಾಗಿದೆ.

ತಂತ್ರಜ್ಞಾನ ಬೆಳೆದರೂ, ಜನರ ಜೀವನಶೈಲಿ ಬದಲಾದರೂ ಸಂಪ್ರದಾಯ–ಆಚರಣೆಗಳು ಮುಂದುವರೆದುಕೊಂಡು ಬಂದಿರುವುದರಿಂದ ಕುಶಲಕರ್ಮಿಗಳು ಕುಲಕಸುಬು ಉಳಿಸಿಕೊಂಡು ಬಂದಿದ್ದಾರೆ. ಅಂತೆಯೇ ಮೇದರ ಸಮುದಾಯಕ್ಕೆ ಬಿದಿರು ಜೀವಾಳ. ಬಿದಿರಿನಿಂದ ಮೊರ, ಬುಟ್ಟಿ, ಕುಕ್ಕೆ, ತಟ್ಟೆ ಸೇರಿದಂತೆ ಈಗಿನ ಫ್ಯಾಷನ್ ಯುಗಕ್ಕೂ ಒಗ್ಗುವಂತಹ ವಿವಿಧ ಮಾದರಿಯ ಬಿದಿರಿನ ಉತ್ಪನ್ನಗಳನ್ನು ತಯಾರಿಸುತ್ತಿದ್ದಾರೆ. ಆದರೆ ಅವರು ನೆಮ್ಮದಿಯಿಂದ ಕೆಲಸ ಮಾಡಲು ಹಾಗೂ ವಸ್ತುಗಳನ್ನು ಮಾರಾಟ ಮಾಡಲು ಸೂಕ್ತ ನೆಲೆ ಇಲ್ಲ.

ತಮ್ಮ ಮನೆ ಆವರಣದಲ್ಲೋ ಅಥವಾ ಯಾವುದೋ ಮಳಿಗೆಯಲ್ಲೋ ಬಿದಿರಿನ ಸಾಮಗ್ರಿಗಳನ್ನು ವ್ಯಾಪಾರ ಮಾಡಲು ಸಾಧ್ಯವಿಲ್ಲ. ಜನ ಸಂಚಾರ ಹೆಚ್ಚಾಗಿರುವ ಸ್ಥಳದಲ್ಲಿ, ಅವರಿಗೆ ಕಾಣಿಸುವ ರೀತಿಯಲ್ಲೇ ವಸ್ತುಗಳ ಮಾರಾಟ ಮಾಡಬೇಕು. ಹಾಗಾಗಿ ಮೇದರ ಕುಶಲಕರ್ಮಿಗಳು ರಸ್ತೆ ಬದಿಯಲ್ಲೇ ಕುಳಿತು, ಬಿದಿರಿನಿಂದ ವಿವಿಧ ಉತ್ಪನ್ನಗಳ ಹೆಣೆಯುತ್ತಾರೆ. ಮಳೆ ಬಂದಾಗ ಕೂಡಲೇ ಉತ್ಪನ್ನಗಳನ್ನು ಪ್ಲಾಸ್ಟಿಕ್ ಕವರ್ ಅಥವಾ ಟಾರ್ಪಲ್‌ಗಳಿಂದ ಮುಚ್ಚಿ, ಮಳೆ ನಿಂತಾಗ ತೆಗೆಯುತ್ತಾರೆ. ಆಗಾಗ್ಗೆ ಮಳೆಯಾದಾಗ ಅವರ ಕಸರತ್ತು ಯಾರಿಗೂ ಬೇಡವೆನಿಸುತ್ತದೆ. ಆದರೆ ಅವರು ಕಿಂಚಿತ್ತೂ ಬೇಸರಿಸಿಕೊಳ್ಳದೆ ತಮ್ಮ ಕೆಲಸ ಮುಂದುವರೆಸುತ್ತಾರೆ.

> “ಸುಮಾರು 30 ವರ್ಷಗಳಿಂದ ಬಿದಿರು ಸಾಮಗ್ರಿ ಹೆಣೆಯುವ ಕಾಯಕ ಮಾಡಿಕೊಂಡು ಬಂದಿದ್ದೇವೆ. ನಮ್ಮ ಕುಟುಂಬ ಇದನ್ನೇ ನಂಬಿದೆ. ಆದರೆ ಮಳೆಗಾಲದಲ್ಲಿ ತುಂಬಾ ತೊಂದರೆಯಾಗುತ್ತಿದೆ. ಕಷ್ಟಪಟ್ಟು ತಯಾರಿಸಿದ ಸಾಮಗ್ರಿಗಳನ್ನು ರಕ್ಷಿಸಿಕೊಳ್ಳುವುದೇ ಕಷ್ಟ. ಮಳೆಯಲ್ಲಿ ತೋಯ್ದು ಹಾಳಾಗುವುದರಿಂದ ಶ್ರಮ, ಸಮಯದ ಜೊತೆಗೆ ಹಣವೂ ನಷ್ಟವಾಗುತ್ತದೆ. ವ್ಯಾಪಾರಕ್ಕೆ ನಮಗೆ ನೆಲೆ ಕಲ್ಪಿಸಿಕೊಟ್ಟರೆ ತುಂಬಾ ಅನುಕೂಲವಾಗುತ್ತದೆ.
> –ತಾಯಮ್ಮ

> “ಕಳೆದ ಆರು ವರ್ಷಗಳಿಂದ ಬುಟ್ಟಿ ಹೆಣೆಯುತ್ತಿದ್ದೇನೆ. ಇದಕ್ಕೂ ಮೊದಲು ಕರಕುಶಲ ಸಾಮಗ್ರಿಗಳ ಮಾರಾಟ ಮಾಡುತ್ತಿದ್ದೆ. ಪತಿ ತೀರಿಹೋದ ನಂತರ ಜೀವನಕ್ಕೆ ಬಿದಿರೇ ಆಧಾರವಾಗಿದೆ. ನಮ್ಮ ಕೆಲಸ ಮುಂದುವರೆಸಲು ಒಂದು ಮಳಿಗೆ ಬೇಕು. ನಮ್ಮ ಕಷ್ಟಗಳಿಗೆ ಸರ್ಕಾರ ಸ್ಪಂದಿಸಿ, ಇದೊಂದು ಅನುಕೂಲ ಮಾಡಿಕೊಡಬೇಕು. –ಮಂಗಳಮ್ಮ

> “ಮಳೆಗಾಲದಲ್ಲಿ ನಮ್ಮ ಗೋಳು ಕೇಳೋರಿಲ್ಲ. ನಮಗೆ ವ್ಯಾಪಾರ ಮಾಡಲು ಒಂದೊಳ್ಳೆ ಜಾಗದ ಅವಶ್ಯಕತೆಯಿದೆ. ಗ್ರಾಹಕರನ್ನು ಆಕರ್ಷಿಸಲು, ನಮ್ಮ ಕೆಲಸ ಮುಂದುವರೆಯಲು ಮಳಿಗೆಗಳನ್ನು ನಿರ್ಮಿಸಿ ಕೊಟ್ಟರೆ ತುಂಬಾ ಅನುಕೂಲವಾಗುತ್ತದೆ. –ಲಕ್ಷ್ಮೀ ಶಿವಕುಮಾರ್

ನಗರದ ವಾಲ್ಮೀಕಿ ರಸ್ತೆಯಲ್ಲಿ ಹೂಗುಚ್ಛ ಹಾಗೂ ಹೂವಿನ ಅಲಂಕಾರ ಮಾಡುವವರಿಗೆ ಇತ್ತೀಚೆಗೆ ಮಳಿಗೆ ಮಾದರಿಯ ನೆಲೆ ಕಲ್ಪಿಸಲಾಗಿದೆ. ಅದಕ್ಕೂ ಮುನ್ನ ಅವರೂ ಕೂಡ ಸೂಕ್ತ ವ್ಯವಸ್ಥೆ ಇಲ್ಲದೆ ರೋಸಿ ಹೋಗಿದ್ದರು. ನಗರದ ವಿವಿಧೆಡೆ ಬೀದಿಬದಿ ವ್ಯಾಪಾರಿಗಳಿಗೂ ಶೆಡ್ ಮಾದರಿ ವ್ಯವಸ್ಥೆ ಕಲ್ಪಿಸಲಾಗಿದೆ. ಹಾಗೆಯೇ ಬಿದಿರು ನೆಚ್ಚಿಕೊಂಡಿರುವ ಕುಶಲಕರ್ಮಿಗಳಿಗೂ ಸೂಕ್ತ ನೆಲೆ ಕಲ್ಪಿಸಿಕೊಡಬೇಕು ಎಂಬ ಬೇಡಿಕೆ ಇದೆ.

ಕರಕುಶಲತೆ ಉಳಿಯಲಿ: ಮನುಷ್ಯನ ಶ್ರಮ, ಚಿಂತನೆಯನ್ನೆಲ್ಲಾ ಯಂತ್ರೋಪಕರಣ ಹಾಗೂ ತಂತ್ರಜ್ಞಾನ ನುಂಗಿ ಹಾಕಿದೆ. ಇವುಗಳಿಲ್ಲದೆ ಜೀವನ ನಡೆಸುವುದೇ ಅಸಾಧ್ಯ ಎಂಬಂತಾಗಿದೆ. ಈ ಪರಿಸ್ಥಿತಿಯಲ್ಲಿ ಕರಕುಶಲತೆಯನ್ನು ಸಂರಕ್ಷಿಸಿಕೊಂಡು, ಮುಂದಿನ ತಲೆಮಾರಿಗೆ ಧಾರೆ ಎರೆಯುವುದು ಅತ್ಯವಶ್ಯವಾಗಿದೆ. ಸದ್ಯ ಕುಲಕಸುಬು ನಂಬಿ ಜೀವನ ನಡೆಸಲಾಗದೆ ಇದರಿಂದ ವಿಮುಖರಾಗಿದ್ದಾರೆ. ಬೆರಳೆಣಿಕೆಯಷ್ಟು ಜನ ಅದರಲ್ಲೂ ಹೆಚ್ಚಾಗಿ ಮಹಿಳೆಯರು ಬಿದಿರು ಹೆಣೆದು, ಬದುಕು ಬಂಡಿಗೆ ಹೆಗಲು ನೀಡಿದ್ದಾರೆ. ಒಟ್ಟಾರೆ ಅಳಿವಿನಂಚಿನಲ್ಲಿರುವ ಮೇದರ ಕುಲಕಸುಬು ಉಳಿಯಲು ಆಡಳಿತ ವ್ಯವಸ್ಥೆ ನೆರವಾಗಬೇಕಿದೆ.

ವಿಷಾಹಾರ ಸೇವನೆ ಶಂಕೆ; ಒಂದೇ ಕುಟುಂಬದ ಮೂವರು ಸಾವು

ಇಬ್ಬರು ಆಸ್ಪತ್ರೆಗೆ ದಾಖಲು

ರಾಯಚೂರು: ಜಿಲ್ಲೆಯಲ್ಲಿ ಒಂದೇ ಕುಟುಂಬದ ಮೂವರು ಸಾವಿಗೀಡಾಗಿದ್ದು, ಇನ್ನಿಬ್ಬರು ಚಿಕಿತ್ಸೆ ಪಡೆಯುತ್ತಿದ್ದಾರೆ. ವಿಷ ಸೇವಿಸಿ ಸಾವನ್ನಪ್ಪಿರಬಹುದು ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ.

ಮೃತರನ್ನು ರಮೇಶ್ (38) ಮತ್ತು ಅವರ ಪುತ್ರಿಯರಾದ ನಾಗಮ್ಮ (8) ಮತ್ತು ದೀಪಾ (6) ಎಂದು ಗುರುತಿಸಲಾಗಿದೆ. ರಮೇಶ್ ಅವರ ಪತ್ನಿ ಪದ್ಮಾ ಮತ್ತು ಇತರ ಇಬ್ಬರು ಮಕ್ಕಳನ್ನು ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆ (RIMS)ಗೆ ದಾಖಲಿಸಲಾಗಿದ್ದು, ಚೇತರಿಸಿಕೊಳ್ಳುತ್ತಿದ್ದಾರೆ. ಸಿರ್ವಾರ್ ತಾಲೂಕಿನ ಕೆ.ತಿಮ್ಮಾಪುರ ಗ್ರಾಮದಲ್ಲಿ ಸೋಮವಾರ ರಾತ್ರಿ ಈ ಘಟನೆ ಸಂಭವಿಸಿದೆ.

ಕುಟುಂಬ ಸದಸ್ಯರ ಪ್ರಕಾರ, ಆರು ಜನರು ಬದನೇಕಾಯಿ ಕರಿ, ರೊಟ್ಟಿ, ಅನ್ನ ಮತ್ತು ಸಾಂಬಾರ್ ಸೇವಿಸಿದ್ದರು. ಕರಿಯಲ್ಲಿ ಬಳಸಲಾದ ಬದನೆಕಾಯಿಯನ್ನು ಅವರ ಜಮೀನಿನಿಂದಲೇ ಕೊಯ್ಲು ಮಾಡಲಾಗಿತ್ತು.

ಮೂರು ದಿನಗಳ ಹಿಂದೆಯಷ್ಟೇ ಬೆಳೆಗೆ ಕೀಟನಾಶಕ ಸಿಂಪಡಿಸಲಾಗಿತ್ತು ಮತ್ತು ಇದು ವಿಷಪ್ರಾಶನಕ್ಕೆ ಕಾರಣವಾಗಿರಬಹುದು ಎಂದು ಸಂಬಂಧಿಕರು ಶಂಕಿಸಿದ್ದಾರೆ.

ಊಟವಾದ ಸ್ವಲ್ಪ ಸಮಯದ ನಂತರ, ಆರು ಜನರಿಗೂ ರೋಗದ ಲಕ್ಷಣಗಳು ಕಾಣಿಸಿಕೊಳ್ಳಲು ಪ್ರಾರಂಭಿಸಿದವು ಮತ್ತು ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು.

ವೈದ್ಯರ ಪ್ರಯತ್ನಗಳ ಹೊರತಾಗಿಯೂ, ಮೂವರನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಪೊಲೀಸರು ತನಿಖೆ ಪ್ರಾರಂಭಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಸ್ವಸ್ಥ ಸಮಾಜ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಿ: ಹಾಸನ ಡಿಸಿ



ಹಾಸನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯಲ್ಲಿ ಗೃಹ ಆರೋಗ್ಯ ಕಾರ್ಯಕ್ರಮವನ್ನು ಡಿಸಿ ಲತಾಕುಮಾರಿ ಉದ್ಘಾಟಿಸಿದರು.

ಹಾಸನ: ಪ್ರತಿಯೊಂದು ಕುಟುಂಬದ ಆರೋಗ್ಯವನ್ನು ಉತ್ತಮವಾಗಿ ಇಡುವ ಮೂಲಕ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಮುಂದಾಗುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯ ಬಿ.ಸಿ. ರಾಯ್ ಸಭಾಂಗಣದಲ್ಲಿ ಗೃಹ ಆರೋಗ್ಯ ಕಾರ್ಯಕ್ರಮ ಉದ್ಘಾಟಿಸಿ, ನಂತರ ಅವರು ಮಾತನಾಡಿದರು.

ನಿಸ್ವಾರ್ಥದಿಂದ ನಿರಂತರ ಮತ್ತು ಗುರುತರವಾಗಿ ಸೇವೆ ಮಾಡುತ್ತಿರುವುದಕ್ಕೆ ಅಭಿನಂದನೆಗಳು. ಇದೇ ರೀತಿ ಸಾರ್ವಜನಿಕರಿಗೆ ಸರ್ಕಾರದ ವಿವಿಧ ಯೋಜನೆಯಡಿ ಉಚಿತವಾಗಿ ಆರೋಗ್ಯ ಸೇವೆಗಳನ್ನು ಕಲ್ಪಿಸುವ ಮೂಲಕ ಸಮಾಜವನ್ನು ಆರೋಗ್ಯವಾಗಿ ಇರಿಸಲು ಬದ್ಧರಾಗಿ ಇರುವಂತೆ ತಿಳಿಸಿದರು.

ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯಕ್ಕೂ ಒತ್ತು ನೀಡಬೇಕು. ಈ ನಿಟ್ಟಿನಲ್ಲಿ ಜನರು ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆ ಹೆಚ್ಚಿನ ಅರಿವು ಮೂಡಿಸಬೇಕು. ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವಂತೆ ಜನರಿಗೆ ತಿಳಿವಳಿಕೆ ನೀಡಿ ಎಂದರು.

ಗೃಹ ಆರೋಗ್ಯ ಯೋಜನೆಯಡಿ ಮನೆ ಮನೆಗೆ ಭೇಟಿ ನೀಡಿ, ಪ್ರತಿ ಗ್ರಾಮೀಣ ಪ್ರದೇಶದಲ್ಲಿ 30 ವರ್ಷ ಮೇಲಿನವರು ಕಡ್ಡಾಯವಾಗಿ ಆರೋಗ್ಯ ತಪಾಸಣೆ ನಡೆಸಿ. ಈಗಾಗಲೇ ಗುರುತಿಸಿರುವ 14 ಅಸಾಂಕ್ರಾಮಿಕ ರೋಗಗಳನ್ನು ಪ್ರಾರಂಭಿಕ ಹಂತದಲ್ಲಿಯೇ ಪತ್ತೆ ಹಚ್ಚಿ ನಿರಂತರ ಚಿಕಿತ್ಸೆ ನೀಡುವ ಮೂಲಕ, ಮುಂದೆ ಉಂಟಾಗಬಹುದಾದ ಸಾವು ನೋವುಗಳ ಪ್ರಮಾಣ ತಡೆಯಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಗೃಹ ಆರೋಗ್ಯ ಕಾರ್ಯಕ್ರಮದಡಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಎಲ್ಲ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚೇತನ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ನಾಗಪ್ಪ, ವೈದ್ಯರು, ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ಸಕಲೇಶಪುರ: ಕಚೇರಿಯಲ್ಲಿ ಮಧ್ಯವರ್ತಿ ಜನ್ಮದಿನ ಎಆರ್‌ಟಿಒ ಸೇರಿ ಮೂವರ ಅಮಾನತು

ಸಕಲೇಶಪುರ: ಇಲ್ಲಿನ ಎಆರ್‌ಟಿಒ ಕಚೇರಿಯಲ್ಲಿ ಮಧ್ಯವರ್ತಿಯೊಬ್ಬರ ಜನ್ಮದಿನ ಆಚರಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ.

ಇಲ್ಲಿನ ಎಆರ್‌ಟಿಒ ಕಚೇರಿಯ ಮೋಟಾರು ವಾಹನ ನಿರೀಕ್ಷಕಿ ಎನ್.ಆರ್.ಆಶಾ, ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ ಎಸ್.ಎನ್.ಮಧುರಾ, ಕಚೇರಿ ಅಧೀಕ್ಷಕ ಎಂ.ಕೆ.ಗಿರೀಶ್ ಅವರನ್ನು ಅಮಾನತು ಮಾಡಿ, ಪ್ರಾದೇಶಿಕ ಸಾರಿಗೆ ಇಲಾಖೆ ಆಯುಕ್ತ ಯೋಗೀಶ್ ಆದೇಶ ಹೊರಡಿಸಿದ್ದಾರೆ.

ಜುಲೈ 11 ರಂದು ಇಲ್ಲಿನ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಮಧ್ಯವರ್ತಿ ಮೋಹನ್ ಎಂಬುವರ ಜನ್ಮದಿನ ಆಚರಿಸಲಾಗಿತ್ತು. ಈ ಬಗ್ಗೆ ಸಾರ್ವಜನಿಕ ವಲಯದಿಂದ ಆಕ್ರೋಶ ವ್ಯಕ್ತವಾಗಿತ್ತು. ಅಧಿಕಾರಿಗಳ ಅಮಾನತು ಮಾಡುವಂತೆ ಮಲೆನಾಡು ರಕ್ಷಣಾ ವೇದಿಕೆ ಸದಸ್ಯರು ಆಗ್ರಹಿಸಿದ್ದರು. ವರದಿಗಳನ್ನು ಪರಿಶೀಲಿಸಿದ ಸಾರಿಗೆ ಇಲಾಖೆ ಆಯುಕ್ತ ಯೋಗೀಶ್, ಈ ಪ್ರಕರಣದಲ್ಲಿ ಮೂವರು ತಪ್ಪಿತಸ್ಥರು ಎಂದು ಪರಿಗಣಿಸಿ, ಅಮಾನತುಗೊಳಿಸಿದ್ದಾರೆ.

ಓಲಾ, ಊಬರ್, ರ್‍ಯಾಪಿಡೋ ನಿಷೇಧಿಸಲು ಆಗ್ರಹಿಸಿ ಆಟೋ ಚಾಲಕರ ಪ್ರತಿಭಟನೆ



ಓಲಾ, ಊಬರ್, ರ್‍ಯಾಪಿಡೋ ನಿಷೇಧಿಸುವಂತೆ ಆಗ್ರಹಿಸಿ ಹಾಸನದಲ್ಲಿ ಆಟೋ ಚಾಲಕರು ಪ್ರತಿಭಟನೆ ನಡೆಸಿದರು.

ಹಾಸನ: ಓಲಾ, ಊಬರ್, ರ್‍ಯಾಪಿಡೋ ನಿಷೇಧಿಸಬೇಕು. ಸಾರಿಗೆ ಇಲಾಖೆಯಲ್ಲಿ ಆಟೋ ಚಾಲಕರಿಗೆ ಪ್ರತ್ಯೇಕ ಸೇವಾ ಕೇಂದ್ರ ಆರಂಭಿಸುವುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಭಾರತೀಯ ಮಜ್ದೂರ್ ಸಂಘ, ರಾಜ್ಯ ಆಟೋ ಚಾಲಕರ ಮಜ್ದೂರ್ ಸಂಘಗಳ ನೇತೃತ್ವದಲ್ಲಿ ನೂರಾರು ಆಟೋ ಚಾಲಕರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಸಂಘದ ಜಿಲ್ಲಾ ಘಟಕದ ಉಪಾಧ್ಯಕ್ಷ ಎಚ್.ಕೆ.ದಿಲೀಪ್‌ಕುಮಾರ್ ಮಾತನಾಡಿ, ಆಟೋ ಚಾಲಕರು ಅಸಂಘಟಿತ ಕಾರ್ಮಿಕ ವರ್ಗಕ್ಕೆ ಸೇರಿದ್ದು, ಯಾವುದೇ ಸವಲತ್ತು ಸಿಗದೆ ತೊಂದರೆ ಅನುಭವಿಸುವಂತಾಗಿದೆ. ಜೀವನೋಪಾಯಕ್ಕೆ ಆಟೋರಿಕ್ಷಾ ಚಾಲಕರಾಗಿ ಕೆಲಸ ಮಾಡುತ್ತಿದ್ದು, ಇತ್ತೀಚಿಗೆ ಅಪ್ಲಿಕೇಶನ್ ಮತ್ತು ಅಗ್ರಿಗೇಟರ್ ಹೆಸರಿನಲ್ಲಿ ನಮ್ಮನ್ನು ಹಾಗೂ ಸಾರ್ವಜನಿಕರನ್ನು ವಂಚಿಸುವ ಕೆಲಸ ನಡೆಯುತ್ತಿದೆ ಎಂದು ದೂರಿದರು.

ರಾಜ್ಯದಲ್ಲಿ ಓಲಾ, ಊಬರ್, ರ್‍ಯಾಪಿಡೋ ಸೇರಿದಂತೆ ಇತರೆ ಅಗ್ರಿಗೇಟರ್‌ಗಳನ್ನು ನಿಷೇಧಿಸಬೇಕು ಎಂಬ ಆದೇಶವಿದೆ. ಆದರೆ, ಕೆಲ ಆಟೋ ಚಾಲಕರಿಗೆ ಹಣದ ಆಸೆ ತೋರಿಸಿ ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಸಿ, ನಮ್ಮ ವಿರುದ್ಧವೇ ಕೆಲಸ ಮಾಡಲು ಪ್ರೇರೇಪಿಸುತ್ತಿದ್ದಾರೆ. ಇದರಿಂದ ಆಟೋ ಚಾಲಕರ ನಡುವೆ ವೈಮನಸ್ಸು ಉಂಟಾಗಿದ್ದು, ಮುಂದಿನ ದಿನಗಳಲ್ಲಿ ಅಹಿತಕರ ಘಟನೆ ನಡೆದರೆ ಆ ಕಂಪನಿಗಳೇ ನೇರ ಹೊಣೆ ಆಗಬೇಕಾಗುತ್ತದೆ. ಜಿಲ್ಲಾಡಳಿತ ಈ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಗೆ ಜಿಲ್ಲಾ ಕೇಂದ್ರ ಸೇರಿದಂತೆ ವಿವಿಧ ತಾಲೂಕುಗಳಿಂದ ಆಟೋ ಚಾಲಕರ ಹಾಗೂ ಮಾಲೀಕರ ಸಂಘದ ಸದಸ್ಯರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದು, ನಮ್ಮ ಬೇಡಿಕೆ ಈಡೇರದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸಂಘದ ಪದಾಧಿಕಾರಿಗಳಾದ ಚೇತನ್, ಬಾಲು, ಸುನಿಲ್, ಹರೀಶ್, ಪರಮೇಶ್, ಅಶೋಕ್, ಆನಂದ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಬಸವಣ್ಣನವರ ಪ್ರಿಯ ಶಿಷ್ಯ ಹಡಪದ ಅಪ್ಪಣ್ಣನವರ ಸ್ಮರಣೆ



ಮೈಸೂರಿನ ಕಲಾಮಂದಿರದ ಕಿರುರಂಗಮಂದಿರದಲ್ಲಿ ಮಂಗಳವಾರ ಶ್ರೀ ಹಡಪದ ಅಪ್ಪಣ್ಣ ಜಯಂತಿ ನಡೆಯಿತು.

ಮೈಸೂರು, ಜು.22(ಎಂಕೆ)– ಬಸವಣ್ಣನವರಿಗೆ ಅತ್ಯಂತ ಪ್ರಿಯರಾಗಿದ್ದ ಹಡಪದ ಅಪ್ಪಣ್ಣನವರು, ವಚನಗಳ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಮಹತ್ತರ ಕೊಡುಗೆ ನೀಡಿದ್ದಾರೆ ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಹೇಳಿದರು.

ಮೈಸೂರಿನ ಕಲಾಮಂದಿರದ ಕಿರುರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಹಡಪದ ಅಪ್ಪಣ್ಣ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಬಸವಣ್ಣನವರಿಗೆ ಬಲಗೈ ಬಂಟರಾಗಿದ್ದ ಹಡಪದ ಅಪ್ಪಣ್ಣನವರು, ಸಮಾಜದಲ್ಲಿ ಮೂಢನಂಬಿಕೆಗಳನ್ನು ಹೋಗಲಾಡಿಸಲು ಬಸವಣ್ಣನವರೊಂದಿಗೆ ಶ್ರಮಿಸಿದ್ದಾರೆ. ಅಪ್ಪಣ್ಣನವರ ಧರ್ಮಪತ್ನಿ ಲಿಂಗಮ್ಮನವರೂ ಮಹಾನ್ ವಚನಗಾರ್ತಿಯಾಗಿದ್ದು, 250ಕ್ಕೂ ಹೆಚ್ಚು ವಚನಗಳನ್ನು ಅಪ್ಪಣ್ಣ ಪ್ರಿಯ ಚನ್ನಬಸವಣ್ಣ ಎಂಬ ಅಂಕಿತನಾಮದಲ್ಲಿ ರಚಿಸಿದ್ದಾರೆ ಎಂದು ತಿಳಿಸಿದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ವಿದ್ಯೆ ಯಾರೊಬ್ಬರ ಸ್ವತ್ತಲ್ಲ ಎಂಬುದಕ್ಕೆ ಹಡಪದ ಅಪ್ಪಣ್ಣನವರೇ ಸಾಕ್ಷಿ. ಬಸವಣ್ಣನವರ ಬಾಲ್ಯದ ಗೆಳೆಯರಾಗಿದ್ದ ಅವರು, ಅವರ ಆಪ್ತ ಕಾರ್ಯದರ್ಶಿಯಾಗಿದ್ದರು. ಸಮಾಜದಲ್ಲಿನ ಅಸಮಾನತೆಗಳನ್ನು ಪ್ರಶ್ನಿಸಿ, ಸಾಮಾಜಿಕ ಸುಧಾರಣೆಗಾಗಿ ಶ್ರಮಿಸಿದರು. 12ನೇ ಶತಮಾನದ ವಚನ ಚಳವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಹಡಪದ ಅಪ್ಪಣ್ಣನವರು ಒಬ್ಬರಾಗಿದ್ದಾರೆ ಎಂದು ತಿಳಿಸಿದರು.

ಸಾಹಿತಿ ಕಿರಣ್ ಸಿಡ್ಲೇಹಳ್ಳಿ ಉಪನ್ಯಾಸ ನೀಡುತ್ತಾ, ಹಡಪದ ಸಮಾಜ ಆರ್ಥಿಕವಾಗಿ ಹಿಂದುಳಿದ ಕಾರಣ ಅವರಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿ ಶೈಕ್ಷಣಿಕ, ರಾಜಕೀಯ ಮತ್ತು ಆರ್ಥಿಕವಾಗಿ ಸದೃಢರಾಗುವಂತೆ ಮಾಡಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಆಗ್ರಹಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಕನ್ನಡ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಚಂದ್ರಶೇಖರ್ ಮತ್ತಿತರರು ಉಪಸ್ಥಿತರಿದ್ದರು.

ಡಾ. ಕೆ.ಬಿ. ಗಣಪತಿ ಅವರಿಗೆ ಶ್ರದ್ಧಾಂಜಲಿ...



ಮೈಸೂರಿನ ಶ್ರೀ ರಾಮಾನುಜ ಸಹಕಾರ ಸಂಘದ ಆವರಣದಲ್ಲಿ ನಡೆದ ಮಾಸಿಕ ಸಭೆಯಲ್ಲಿ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಶ್ರೀ ರಾಮಾನುಜ ಸಹಕಾರ ಸಂಘದ ಅಧ್ಯಕ್ಷ ಎಚ್.ಕೆ.ರಾಜಗೋಪಾಲನ್, ಉಪಾಧ್ಯಕ್ಷ ಎಚ್.ವಿ.ಎಲ್.ಎನ್ ಆಚಾರ್, ನಿರ್ದೇಶಕರಾದ ಪುಟ್ಟಸ್ವಾಮಿ, ಟಿ.ಎಸ್.ಅರುಣ್, ಚಕ್ರಪಾಣಿ, ಅನಂತ್ ಕೃಷ್ಣ, ಶಾಂತರಾಮ್, ಕೇಶವ, ಆಂಡಾಳ್, ಅನುರಾಧ, ಕಾರ್ಯದರ್ಶಿ ಲಕ್ಷ್ಮಿ, ಕೇಶವ್ ಇನ್ನಿತರರು ಉಪಸ್ಥಿತರಿದ್ದರು.

ಆರೋಗ್ಯ ಶಿಬಿರ, ಉದ್ಯೋಗ ಮೇಳ ಕುರಿತು ಪ್ರಚಾರ...



ಜುಲೈ 24ರಂದು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರ ಹುಟ್ಟುಹಬ್ಬದ ಅಂಗವಾಗಿ ಮೈಸೂರಿನ ಜೆ.ಕೆ.ಗ್ರೌಂಡ್‌ನಲ್ಲಿ ಏರ್ಪಡಿಸಿರುವ ಬೃಹತ್ ಆರೋಗ್ಯ ಶಿಬಿರ ಮತ್ತು ಉದ್ಯೋಗ ಮೇಳ ಕುರಿತು ಮನೆ ಮನೆಗೆ ತೆರಳಿ ಪ್ರಚಾರ ನಡೆಸಲಾಯಿತು. ಈ ವೇಳೆ ಮುಖಂಡರಾದ ಆರ್.ರವಿ ಡೆಲ್ಲಿ, ಲೋಕೇಶ್ ಮೂರ್ತಿ, ವಿನಯ್, ಮಂಜು, ವಿಜಿ, ಕರಿಯಪ್ಪ ಇನ್ನಿತರರಿದ್ದರು.

ಸಿಎಂ ಸಿದ್ದರಾಮಯ್ಯರ ಪತ್ನಿ ವಿಚಾರದಲ್ಲಿ ಸುಪ್ರೀಂ ತೀರ್ಪು ಬಿಜೆಪಿಗೆ ಕಪಾಳಮೋಕ್ಷ



ಬಿ.ಸುಬ್ರಹ್ಮಣ್ಯ

ಮೈಸೂರು, ಜು.22(ಎಂಕೆ)– ಮುಡಾ ನಿವೇಶನ ಹಂಚಿಕೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿಯವರ ವಿರುದ್ಧ ತನಿಖೆ ನಡೆಸಲು ಜಾರಿ ನಿರ್ದೇಶನಾಲಯ ಸಲ್ಲಿಸಿದ್ದ ಮೇಲ್ಮನವಿಯನ್ನು ಸುಪ್ರೀಂಕೋರ್ಟ್ ವಜಾ ಮಾಡಿರುವುದು ಬಿಜೆಪಿಗೆ ಕಪಾಳ ಮೋಕ್ಷ ಆದಂತಾಗಿದೆ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಕುಟುಕಿದ್ದಾರೆ.

ಮುಖ್ಯಮಂತ್ರಿಗಳ ಪತ್ನಿ ಯಾವುದೇ ರಾಜಕೀಯ ವೇದಿಕೆಯಲ್ಲಿ ಕಾಣಿಸಿಕೊಂಡವರಲ್ಲ. ಪ್ರಚಾರಕ್ಕೂ ಬಂದವರಲ್ಲ. ಆದಾಗ್ಯೂ ಕಾನೂನಿನ ಅನ್ವಯ ಪಡೆದಿದ್ದ 14 ಸೈಟುಗಳನ್ನು ಹಿಂದಿರುಗಿಸಿ ಘನತೆ ಮೆರೆದಿದ್ದರು. ಆದರೆ, ವಿಪಕ್ಷಗಳ ಕುತಂತ್ರ ಅವರನ್ನು ಜೈಲಿಗೆ ಕಳಿಸುವುದಾಗಿತ್ತು. ಜೊತೆಗೆ ಮುಖ್ಯಮಂತ್ರಿಗಳ ಹೆಸರಿಗೆ ಮಸಿ ಬಳಿಯುವ ಹುನ್ನಾರವೂ ನಡೆದಿತ್ತು. ಇದೀಗ ನ್ಯಾಯ ದೇವತೆಯೇ ಬಿಜೆಪಿಗೆ ತಪರಾಕಿ ಬಾರಿಸಿದೆ ಎಂದಿದ್ದಾರೆ.

ರಾಜಕೀಯವಾಗಿ ಸಿದ್ದರಾಮಯ್ಯ ಅವರನ್ನು ಎದುರಿಸಲಾಗದೇ ಇಡಿ ದುರ್ಬಳಕೆ ಮಾಡಿಕೊಂಡ ಬಿಜೆಪಿ, ಪಾರ್ವತಿ ಅವರ ವಿರುದ್ಧ ಸುಳ್ಳು ಪ್ರಕರಣವನ್ನು ಸೃಷ್ಟಿಸಿ, ಮಾನಸಿಕವಾಗಿಯೂ ಕಿರುಕುಳ ನೀಡಿತು. ಸುಪ್ರೀಂ ಆದೇಶದಿಂದ ವಿರೋಧಿಗಳಿಗೆ ಮುಖಭಂಗವಾಗಿದೆ. ಇನ್ನಾದರೂ ಬಿಜೆಪಿಯವರು ದ್ವೇಷ ರಾಜಕಾರಣ ಬಿಟ್ಟು, ಆಡಳಿತ ವಿಚಾರದಲ್ಲಿ ಚರ್ಚೆ ಮಾಡಲಿ. ಹಾಗೆಯೇ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ವಿರುದ್ಧವೂ ಹೂಡಲಾದ ಹಣ ವರ್ಗಾವಣೆ ಪ್ರಕರಣವನ್ನು ನ್ಯಾಯಾಲಯ ರದ್ದುಪಡಿಸಿರುವುದನ್ನು ಸ್ವಾಗತಿಸುತ್ತೇವೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರಲ್ಲಿ ಅಕ್ರಮವಾಗಿ ನೆಲೆಸಿದ್ದ 9 ವಿದೇಶಿಗರ ಬಂಧನ

ಬೆಂಗಳೂರು, ಜು.22– ಸಿಸಿಬಿ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ವೀಸಾ ಅವಧಿ ಮುಗಿದರೂ ಬೆಂಗಳೂರಿನಲ್ಲಿ ಅಕ್ರಮವಾಗಿ ವಾಸಿಸುತ್ತಿದ್ದ 9 ವಿದೇಶಿಯರನ್ನು ಬಂಧಿಸಿದ್ದಾರೆ.

ನೈಜೀರಿಯಾದ ನಾಲ್ವರು ಪ್ರಜೆಗಳು, ಘಾನಾದ ಇಬ್ಬರು, ಸುಡಾನ್ ದೇಶದ ಓರ್ವ ಪ್ರಜೆ ಸೇರಿದಂತೆ ಒಟ್ಟು ಒಂಬತ್ತು ವಿದೇಶಿಗರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಪಾಸ್‌ಪೋರ್ಟ್, ವೀಸಾ ಅವಧಿ ಮುಗಿದಿದ್ದರೂ ನಗರದಲ್ಲಿ ಅಕ್ರಮವಾಗಿ ವಾಸಗಿದ್ದರು. ಇನ್ನು ಬಂಧಿತರನ್ನು ಡಿಟೆನ್ಷನ್ ಸೆಂಟರ್‌ಗೆ ಕಳುಹಿಸಲಾಗಿದ್ದು, ಬಂಧಿತರನ್ನು ಅವರವರ ದೇಶಕ್ಕೆ ವಾಪಸ್ ಕಳಿಸುವ ಪ್ರಕ್ರಿಯೆ ನಡೆದಿದೆ.

ವಿದ್ಯಾಭ್ಯಾಸ ಹಾಗೂ ಇನ್ನಿತರ ಉದ್ದೇಶಕ್ಕಾಗಿ ಬೆಂಗಳೂರಿಗೆ ಬಂದು ವೀಸಾ ಅವಧಿ ಮುಗಿದರೂ ಇಲ್ಲೇ ನೆಲೆಸುತ್ತಿರುವ ವಿದೇಶಿಗರನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳುವುದು ನಗರ ಪೊಲೀಸರಿಗೆ ಸವಾಲಿನ ಕೆಲಸ. ಹೀಗಿದ್ದರೂ ಪೊಲೀಸರು ಆಗಾಗ ವಿದೇಶಿಗರ ಪತ್ತೆ ಕಾರ್ಯಾಚರಣೆ ನಡೆಸುತ್ತಲೇ ಇದ್ದಾರೆ.

ಇಂದು ಶುಂಠಿ ಕೃಷಿ ಬಗ್ಗೆ ರೈತರಿಗೆ ತರಬೇತಿ

ಮೈಸೂರು, ಜು. 22–ಮೈಸೂರಿನ ಇಲವಾಲ ಬಳಿಯ ಯಲಚಹಳ್ಳಿಯಲ್ಲಿರುವ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಜು.23ರಂದು ಬೆಳಗ್ಗೆ 10.30 ಗಂಟೆಗೆ ಶುಂಠಿ ಕೃಷಿಯಲ್ಲಿ ವೈಜ್ಞಾನಿಕ ಪದ್ಧತಿಗಳು ಕುರಿತಾದ ತರಬೇತಿ ಕಾರ್ಯಕ್ರಮವನ್ನು ರೈತರಿಗೆ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ನುರಿತ ವಿಜ್ಞಾನಿಗಳು ಹಾಗೂ ಅನುಭವಿ ಕೃಷಿಕರು, ಗುಣಮಟ್ಟದ ಉತ್ಪಾದನೆ, ಸಂಸ್ಕರಣೆ ಮತ್ತು ಮಾರಾಟದಲ್ಲಿ ಎದುರಿಸುವ ಹಲವಾರು ಸಮಸ್ಯೆ ಮತ್ತು ಅದರ ಪರಿಹಾರದ ಕುರಿತು ರೈತರಿಗೆ ಮಾಹಿತಿ ನೀಡಲಿದ್ದಾರೆ. ಮಾಹಿತಿಗಾಗಿ 8147959226, 9341997297 ಸಂಪರ್ಕಿಸಬಹುದು.

ದೇವನಹಳ್ಳಿ ಭೂಮಿ ಸ್ವಾಧೀನದಿಂದ ಕೈಬಿಟ್ಟ ಕ್ರೆಡಿಟ್‌ಗೆ ಪೈಪೋಟಿ; ರೈತ ಮುಖಂಡ ಕೃಷ್ಣೇಗೌಡ ಆಕ್ರೋಶ

ಮೈಸೂರು, ಜು.22(ಎಂಕೆ)– ದೇವನಹಳ್ಳಿ ರೈತರ ಸಾವಿರಾರು ಎಕರೆ ಭೂಮಿಯನ್ನ ಸರ್ಕಾರ ಭೂಸ್ವಾಧೀನದಿಂದ ಕೈಬಿಟ್ಟಿದೆ. ಇದಕ್ಕಾಗಿ ಸುಮಾರು 1192 ದಿನಗಳ ಕಾಲ ರೈತರು ಹೋರಾಟದಲ್ಲಿ ತೊಡಗಿದ್ದರು. ಆದರೆ ಕೆಲ ನಕಲಿ ರೈತರು ಇದರ ಕ್ರೆಡಿಟ್ ಪಡೆದುಕೊಳ್ಳುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ರೈತ ಬಣದ ರಾಜ್ಯಾಧ್ಯಕ್ಷ ಇಂಗಲಗುಪ್ಪೆ ಕೃಷ್ಣೇಗೌಡ ಆಕ್ರೋಶ ವ್ಯಕ್ತಪಡಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದೇವನಹಳ್ಳಿಗೆ ಹೋರಾಟಕ್ಕೆಂದು ವಲಸೆ ಹೋದ ಈ ಭಾಗದ ರೈತ ಹೋರಾಟಗಾರರು ಅಲ್ಲಿನ ರೈತರಿಂದಲೂ ಚಂದಾ ವಸೂಲಿ ಮಾಡಿದ್ದಾರೆಂಬ ಆರೋಪವಿದೆ. ಈಗ ಕೆಲ ನಕಲಿ ಹೋರಾಟಗಾರರು ಒಂದು ವೇಳೆ ಹೆಚ್ಚಿನ ಬೆಲೆ ನೀಡಿದರೆ ಅಲ್ಲಿನ ರೈತರು ಭೂಮಿ ನೀಡುತ್ತಾರೆ ಎಂಬ ಹೇಳಿಕೆ ನೀಡುತ್ತಿದ್ದಾರೆ. ಆದ್ದರಿಂದ ಸರ್ಕಾರ ನೇರವಾಗಿ ಆ ಭಾಗದ ರೈತರ ಜೊತೆಯೇ ವ್ಯವಹರಿಸಬೇಕೆಂದು ಕೃಷ್ಣೇಗೌಡ ಒತ್ತಾಯಿಸಿದರು. ರೈತ ಮುಖಂಡರಾದ ರವಿಕುಮಾರ್, ಪುಟ್ಟಸ್ವಾಮಿ ನಾಯಕ, ಲೋಕೇಶ್ ನಾಯಕ್, ಕೆಂಪರಾಜು, ಕಾಳಪ್ಪ ಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಸಾರಿಗೆ ನೌಕರರ 38 ತಿಂಗಳ ಹಿಂಬಾಕಿ ವೇತನಕ್ಕೆ ಆಗ್ರಹ

ಮೈಸೂರು, ಜು.22(ಎಸ್‌ಪಿಎನ್)– ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ (ಕೆಎಸ್‌ಆರ್‌ಟಿಸಿ) ನಾಲ್ಕು ನಿಗಮಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ 38 ತಿಂಗಳ ಹಿಂಬಾಕಿ ವೇತನ ನೀಡಬೇಕು ಎಂದು ಕೆಎಸ್‌ಆರ್‌ಟಿಸಿ ಕೇಂದ್ರ ಕನ್ನಡ ಕ್ರಿಯಾ ಸಮಿತಿ ಆಗ್ರಹಿಸಿದೆ.

ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಸಮಿತಿಯ ಅಧ್ಯಕ್ಷ ಮನು ಬಳಿಗಾರ್, ಸಾರಿಗೆ ನೌಕರರ ವೇತನ ಪರಿಷ್ಕರಣೆಯಾದ 2020ರ ಜನವರಿ 1ಕ್ಕೆ ಅನ್ವಯವಾಗುವಂತೆ 38 ತಿಂಗಳ ಬಾಕಿ ವೇತನ ಪಾವತಿಸಬೇಕು. 2024ರ ಜನವರಿ 1ರಿಂದ ಅನ್ವಯವಾಗುವಂತೆ ವೇತನ ಪರಿಷ್ಕರಿಸಿ ಜಾರಿಗೊಳಿಸಬೇಕು. ಜೀವನ ನಿರ್ವಹಣೆ ಕಷ್ಟವಾಗುತ್ತಿದೆ. ಆದ್ದರಿಂದ ಕೂಡಲೇ 38 ತಿಂಗಳ ಹಿಂಬಾಕಿ ನೀಡಬೇಕು ಎಂದು ಪ್ರಕಟಣೆ ತಿಳಿಸಿದ್ದಾರೆ.

ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಟಿ.ಎಸ್.ಶ್ರೀವತ್ಸ ಚಾಲನೆ...



ಕೆ.ಆರ್.ಕ್ಷೇತ್ರದ ವಾರ್ಡ್ ನಂ.51, 52, 55ರ ವ್ಯಾಪ್ತಿಯಲ್ಲಿ 110 ಲಕ್ಷ ರೂ.ಗಳ ಬಾಕ್ಸ್ ಡ್ರೈನ್, ರಸ್ತೆ ಡಾಂಬರೀಕರಣ ಮತ್ತು ರಾಜಕಾಲುವೆ ಕಾಮಗಾರಿಗೆ ಶಾಸಕ ಟಿ.ಎಸ್.ಶ್ರೀವತ್ಸ ಗುದ್ದಲಿ ಪೂಜೆ ನೆರವೇರಿಸಿದರು. ಈ ವೇಳೆ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಯು.ಜಿ.ಗೋಪಾಲ್‌ರಾಜೇ ಅರಸ್, ಜಯರಾಮ್, ಪ್ರಸನ್ನ, ಗೋಕುಲ್ ಗೋವರ್ಧನ್, ಕಿಶೋರ್, ಪಾಲಿಕೆ ಮಾಜಿ ಸದಸ್ಯರಾದ ಮಾ.ವಿ.ರಾಮ್‌ಪ್ರಸಾದ್, ಬಿ.ವಿ.ಮಂಜುನಾಥ್, ಪುರುಷೋತ್ತಮ್, ಶಿವಪ್ಪ, ನವೀನ್, ಹರೀಶ್, ಸಂದೀಪ್ ಕೃಷ್ಣ, ಚಾಂದಿನಿ, ವಿದ್ಯಾಅರಸ್, ಮಂಗಳ, ವಾರ್ಡ್ ಅಧ್ಯಕ್ಷ ಹೊಯ್ಸಳ, ಮಂಜು ಇನ್ನಿತರರು ಉಪಸ್ಥಿತರಿದ್ದರು.

ತೆಂಗು ಕಪ್ಪುತಲೆ ಹುಳು ಬಾಧೆಗೆ ವೈಜ್ಞಾನಿಕ ಸಮೀಕ್ಷೆ

42,000 ಹೆಕ್ಟೇರ್ ಹಾನಿ ಅಂದಾಜು, ಖಾಸಗಿ ಸಂಸ್ಥೆಗಳಿಂದ ಸಮೀಕ್ಷೆ, 25 ಲಕ್ಷ ಅನುದಾನ ನಿಗದಿ

- ರೈತರ ಸಂಕಷ್ಟಕ್ಕೆ ಸ್ಪಂದನೆ: ತೆಂಗು ಉಳಿಸಲು ಸರ್ಕಾರದಿಂದ ಹೊಸ ಹೆಜ್ಜೆ
- ರೈತರ ಸಮಸ್ಯೆ ಬಗ್ಗೆ ಸಿಎಂಗೆ ಪತ್ರ ಬರೆದಿದ್ದ ಶಾಸಕ ದಿನೇಶ್ ಗೂಳಿಗೌಡ
- ತಜ್ಞರ ವರದಿ ಪಡೆದು ಪ್ರಸ್ತಾವನೆ ಸಲ್ಲಿಸಲು ಸೂಚಿಸಿದ್ದ ಸಿಎಂ ಸಿದ್ದರಾಮಯ್ಯ


ಬೆಂಗಳೂರು,ಜು.22– ಕರ್ನಾಟಕದಲ್ಲಿ ತೆಂಗು ಬೆಳೆಗಾರರಿಗೆ ಕಾಡುತ್ತಿರುವ ಕಪ್ಪುತಲೆ ಹುಳುವಿನ ಬಾಧೆ ನಿಯಂತ್ರಣಕ್ಕಾಗಿ ತುರ್ತು ಕ್ರಮಗಳನ್ನು ಕೈಗೊಳ್ಳಲು ತೋಟಗಾರಿಕೆ ಇಲಾಖೆ ಸಜ್ಜಾಗಿದೆ.



ದಿನೇಶ್ ಗೂಳಿಗೌಡ

ಸುಮಾರು 42,000 ಹೆಕ್ಟೇರ್ ಪ್ರದೇಶದಲ್ಲಿ ಕಪ್ಪುತಲೆ ಹುಳುವಿನಿಂದ ಹಾನಿಯಾಗಿರುವುದಾಗಿ ಅಂದಾಜಿಸಲಾಗಿದ್ದು, ಈ ಸಮಸ್ಯೆ ಕುರಿತು ಖಾಸಗಿ ಸಂಸ್ಥೆಗಳಿಂದ ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿದೆ. ಇದಕ್ಕಾಗಿ 25 ಲಕ್ಷ ರೂ. ಅನುದಾನವನ್ನು ನಿಗದಿಪಡಿಸಲಾಗಿದೆ. ಜೊತೆಗೆ ಸಮೀಕ್ಷೆಗಾಗಿ ಪ್ರತ್ಯೇಕವಾಗಿ ಬೆಳೆ ಸಮೀಕ್ಷೆ ತಂತ್ರಾಂಶವನ್ನು (App) ಅಭಿವೃದ್ಧಿಪಡಿಸಲೂ ಮುಂದಾಗಿದೆ. ಸಮೀಕ್ಷಾ ವರದಿ ಬಳಿಕ ಸಸ್ಯ ಸಂರಕ್ಷಣಾ ಕ್ರಮಗಳ ಶಿಫಾರಸು ಸೇರಿದಂತೆ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವ ತೀರ್ಮಾನಕ್ಕೆ ತೋಟಗಾರಿಕೆ ಇಲಾಖೆ ಬಂದಿದೆ.

ತೆಂಗು ಬೆಳೆಗೆ ಕಾಡುತ್ತಿರುವ ಕಪ್ಪುತಲೆ ಹುಳುವಿನ ಬಾಧೆ ನಿಯಂತ್ರಣದ ಬಗ್ಗೆ ಶಾಸಕರಾದ ದಿನೇಶ್ ಗೂಳಿಗೌಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಸಮಸ್ಯೆ ಬಗ್ಗೆ ಗಮನ ಸೆಳೆದಿದ್ದರು. ಈ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು, ತಜ್ಞರ ವರದಿ ಪಡೆದು ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದ್ದರು. ಈ ಸಂಬಂಧ ಕ್ರಮ ಕೈಗೊಂಡಿರುವ ತೋಟಗಾರಿಕೆ ನಿರ್ದೇಶನಾಲಯವು ಸರ್ಕಾರದ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಗೆ ಪತ್ರದ ಮೂಲಕ ಮಾಹಿತಿ ನೀಡಿದೆ.



ತೋಟಗಾರಿಕೆ ನಿರ್ದೇಶನಾಲಯದ ಪತ್ರದಲ್ಲೇನಿದೆ?: ರಾಜ್ಯದಲ್ಲಿ ಒಟ್ಟು 27.41 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲಾಗುತ್ತಿದ್ದು, ವಾರ್ಷಿಕ 223.18 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆಯಾಗುತ್ತಿದೆ. ಇದರಲ್ಲಿ ತೋಟದ ಬೆಳೆಗಳು ಶೇ. 53.26 ರಷ್ಟು ವಿಸ್ತೀರ್ಣವನ್ನು ಹೊಂದಿವೆ. ತೆಂಗನ್ನು 7.04 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, 34.79 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆಯಾಗುತ್ತಿದೆ. ಮುಖ್ಯವಾಗಿ ತುಮಕೂರು, ಹಾಸನ, ಚಿಕ್ಕಮಗಳೂರು, ಚಿತ್ರದುರ್ಗ, ಮಂಡ್ಯ, ದಾವಣಗೆರೆ ಜಿಲ್ಲೆಗಳಲ್ಲಿ ತೆಂಗನ್ನು ಹೆಚ್ಚಾಗಿ ಬೆಳೆಯಲಾಗುತ್ತದೆ.

ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ಅಧಿಕ ಉಷ್ಣಾಂಶ ಇದ್ದುದರಿಂದ ತೆಂಗಿನಲ್ಲಿ ಕಪ್ಪುತಲೆ ಹುಳುವಿನ ಬಾಧೆ ಹೆಚ್ಚಾಗಿ ಕಂಡುಬಂದಿದ್ದು, ಸುಮಾರು 42,000 ಹೆಕ್ಟೇರ್ ಪ್ರದೇಶದಲ್ಲಿ ಈ ಬಾಧೆಯಿಂದ ಹಾನಿಯಾಗಿರುವುದಾಗಿ ಇಲಾಖೆ ಅಂದಾಜಿಸಿದೆ.

ಸಮೀಕ್ಷೆ ಮತ್ತು ಪರಿಹಾರ ಕ್ರಮಗಳು: 2025–26ನೇ ಸಾಲಿನ ಆಯವ್ಯಯದಲ್ಲಿ ತೆಂಗಿನ ಕಪ್ಪುತಲೆ ಹುಳು ಬಾಧೆಯ ಕುರಿತು ವೈಜ್ಞಾನಿಕ ಸಮೀಕ್ಷೆ ಕೈಗೊಂಡು ಅದರ ಆಧಾರದಲ್ಲಿ ಸಸ್ಯ ಸಂರಕ್ಷಣೆ ಕ್ರಮಗಳನ್ನು ಅನುಸರಿಸುವ ಬಗ್ಗೆ ಘೋಷಣೆಯಾಗಿದೆ. ಈ ಘೋಷಣೆಯನ್ನು ಅನುಷ್ಠಾನಗೊಳಿಸಲು, ಕಪ್ಪುತಲೆ ಹುಳು ಬಾಧಿತ ಜಿಲ್ಲೆಗಳಲ್ಲಿ ಖಾಸಗಿಯಾಗಿ ಬೆಳೆ ಸಮೀಕ್ಷೆ ಮಾದರಿಯಲ್ಲಿ ಸಮೀಕ್ಷೆ ಕೈಗೊಳ್ಳಲಾಗುವುದು. ಈ ಕಾರ್ಯಕ್ರಮಕ್ಕೆ ಇಲಾಖೆಯ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿಯಲ್ಲಿ 25 ಲಕ್ಷ ರೂ.ಗಳ ಅನುದಾನವನ್ನು ನಿಗದಿಪಡಿಸಲಾಗಿದೆ. ಸಮೀಕ್ಷೆಗಾಗಿ ಪ್ರತ್ಯೇಕವಾಗಿ ಬೆಳೆ ಸಮೀಕ್ಷೆ ತಂತ್ರಾಂಶವನ್ನು (Mobile App) ಅಭಿವೃದ್ಧಿಪಡಿಸಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಸಮೀಕ್ಷೆ ಪೂರ್ಣಗೊಂಡ ನಂತರ, ಇಲಾಖಾ ಅಧಿಕಾರಿಗಳು ವರದಿಯನ್ನು ಪರಿಶೀಲಿಸಿ, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಪಿಸಿರುವ ಜಿಲ್ಲಾ ಸಮಿತಿ ಸಭೆಯಲ್ಲಿ ಚರ್ಚಿಸಲಾಗುತ್ತದೆ. ಈ ಚರ್ಚೆಯ ನಂತರ, ಕಪ್ಪುತಲೆ ಹುಳುವಿನ ಬಾಧೆಯ ನಿಯಂತ್ರಣಕ್ಕಾಗಿ ಸಸ್ಯ ಸಂರಕ್ಷಣಾ ಕ್ರಮಗಳ ಕುರಿತ ಶಿಫಾರಸು ಸಹಿತ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತೋಟಗಾರಿಕೆ ಇಲಾಖೆ ತಿಳಿಸಿದೆ.

ಸಮಸ್ಯೆಗೆ ಶೀಘ್ರ ಪರಿಹಾರ ಸಿಗಲಿ

"ತೆಂಗಿಗೆ ಬಾಧಿಸಿರುವ ಕಪ್ಪುತಲೆ ಹುಳುವಿನ ಬಾಧೆಗೆ ತೋಟಗಾರಿಕೆ ಇಲಾಖೆ ಕೈಗೊಳ್ಳುತ್ತಿರುವ ಕ್ರಮ ಸ್ವಾಗತಾರ್ಹ. ಸಮೀಕ್ಷೆಯನ್ನು ತ್ವರಿತ ಗತಿಯಲ್ಲಿ ನಡೆಸಿ, ಏನೆಲ್ಲ ಕ್ರಮಗಳನ್ನು ತೆಗೆದುಕೊಳ್ಳಬಹುದು ಎಂಬ ಶಿಫಾರಸಿನೊಂದಿಗೆ ಶೀಘ್ರ ಸರ್ಕಾರಕ್ಕೆ ವರದಿ ಸಲ್ಲಿಕೆಯಾಗಿ ಪರಿಹಾರ ಸಿಗಲಿ.

–ದಿನೇಶ್ ಗೂಳಿಗೌಡ, ಎಂಎಲ್‌ಸಿ

ಸರ್ವೀಸ್ ರಸ್ತೆಗೆ ಮೂಲಸೌಕರ್ಯ ಒದಗಿಸುವಂತೆ ಪ್ರತಿಭಟನೆ



ಮೂಲಸೌಕರ್ಯ ಕಲ್ಪಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಮಂಡ್ಯ, ಜು.22– ತಾಲೂಕಿನ ತೂಬಿನಕೆರೆ ಗ್ರಾಮದ ಬಳಿ ಬೆಂಗಳೂರು– ಮೈಸೂರು ರಾಷ್ಟ್ರೀಯ ಹೆದ್ದಾರಿ ಸರ್ವೀಸ್ ರಸ್ತೆಗೆ ಮೂಲಸೌಕರ್ಯ ಕಲ್ಪಿಸುವಂತೆ ಒತ್ತಾಯಿಸಿ ವಿವಿಧ ಸಂಘಟನೆಗಳು ಹಾಗೂ ಸ್ಥಳೀಯ ಗ್ರಾಮಸ್ಥರು ಬೃಹತ್ ಪ್ರತಿಭಟನೆ ನಡೆಸಿದರು.

ತೂಬಿನಕೆರೆ–ಜಕ್ಕನಹಳ್ಳಿ ರಸ್ತೆ ಬಳಿ ಜಮಾಯಿಸಿದ ಕದಂಬ ಸೈನ್ಯ ಕನ್ನಡ ಸಂಘಟನೆ, ಭಾರತೀಯ ಕಿಸಾನ್ ಸಂಘ ಹಾಗೂ ಕದಸಂಸ ಸ್ವಾಭಿಮಾನ ಕೃಷ್ಣಪ್ಪ ಬಣ ಸೇರಿದಂತೆ ವಿವಿಧ ಸಂಘಟನೆಯ ಕಾರ್ಯಕರ್ತರು ಮೂಲಸೌಕರ್ಯ ಒದಗಿಸದ ರಸ್ತೆ ಅಭಿವೃದ್ಧಿ ಪ್ರಾಧಿಕಾರದ ವಿರುದ್ಧ ಘೋಷಣೆ ಕೂಗಿದರು.

ನಿತ್ಯ ಸಾವಿರಾರು ಭಾರಿ ವಾಹನಗಳು, ಲಘು ವಾಹನಗಳು, ದ್ವಿಚಕ್ರ ವಾಹನಗಳು ಈ ಸರ್ವೀಸ್ ರಸ್ತೆಯಲ್ಲಿ ಸಂಚರಿಸುತ್ತಿದ್ದು, ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿ ಅವೈಜ್ಞಾನಿಕ ಸರ್ವೀಸ್ ರಸ್ತೆಯಿಂದಾಗಿ ಈಗಾಗಲೇ ಸಣ್ಣಪುಟ್ಟ ಅಪಘಾತಗಳು ಸಂಭವಿಸುತ್ತಿವೆ. ಹೀಗಾಗಿ ಸರ್ವೀಸ್ ರಸ್ತೆಯಲ್ಲಿ ಪುಟ್‌ಪಾತ್, ಚರಂಡಿ, ಬಸ್ ನಿಲ್ದಾಣದ ವ್ಯವಸ್ಥೆ ಮಾಡಬೇಕು. ತಡೆಗೋಡೆಯನ್ನು ತಕ್ಷಣವೇ ಸರಿಪಡಿಸುವಂತೆ ಆಗ್ರಹಿಸಿದರು.

ಪ್ರತಿಭಟನಾ ಸ್ಥಳಕ್ಕಾಗಮಿಸಿದ್ದ ಪ್ರಾಧಿಕಾರದ ಅಧಿಕಾರಿಗಳಾದ ಅರುಣ್ ಹಾಗೂ ರಾಜೇಂದ್ರ ಅವರನ್ನು ಗ್ರಾಮಸ್ಥರು ತರಾಟೆಗೆ ತೆಗೆದುಕೊಂಡರು. ಗ್ರಾಮಸ್ಥರ ಪ್ರಶ್ನೆಗೆ ಅಧಿಕಾರಿಗಳು ತಬ್ಬಿಬ್ಬಾದರು. ಬಳಿಕ ಅಧಿಕಾರಿಗಳು 3 ತಿಂಗಳ ಕಾಲಾವಕಾಶ ಪಡೆದು ಸರಿಪಡಿಸುವ ಭರವಸೆ ನೀಡಿದರು. ಇದಕ್ಕೆ ಗ್ರಾಮಸ್ಥರು ಶೀಘ್ರದಲ್ಲೇ ಸರಿಪಡಿಸದಿದ್ದರೆ ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದ ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ 275 ರವರು ಅಪಾಯದಲ್ಲಿ ಇರುವ ಮನೆಗಳನ್ನು ತೆರವುಗೊಳಿಸಿ ರಸ್ತೆ ಅಗಲೀಕರಣ ಮಾಡಿ ನಿವಾಸಿಗಳಿಗೆ ಬದಲಿ ನಿವೇಶನ ನೀಡಿ ಹೆಚ್ಚಿನ ಪರಿಹಾರ ನೀಡಬೇಕು ಮತ್ತು ಪಾದಚಾರಿಗಳಿಗೆ ಅನುಕೂಲ ಮಾಡಿಕೊಡಬೇಕು. ರಸ್ತೆ 2 ಬದಿಯಲ್ಲಿ ಪ್ರಯಾಣಿಕರ ತಂಗುದಾಣ ನಿರ್ಮಾಣ ಮಾಡಬೇಕು. ಒಳಚರಂಡಿ ನಿರ್ಮಾಣ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕದಂಬ ಸೈನ್ಯ ರಾಜ್ಯ ಅಧ್ಯಕ್ಷ ಬೇಕರಿ ರಮೇಶ್, ಭಾರತೀಯ ಕಿಸಾನ್ ಸಂಘ ಪ್ರಾಂತ್ಯ ಅಧ್ಯಕ್ಷ ರಮೇಶ್ ರಾಜು, ಮುಖಂಡರಾದ ಬಿ.ಪಿ.ಅಪ್ಪಾಜಿ, ಮೋಹನ್, ಪ್ರಕಾಶ್, ರಾಮಲಿಂಗಯ್ಯ, ಅಚ್ಯುತ, ಜಯರಾಮ, ಸ್ವಾಮಿ, ಶ್ರೀಧರ್, ರಾಮಣ್ಣ, ಗ್ರಾಮಸ್ಥರಾದ ಸಿದ್ದಲಿಂಗು, ರೇವಣ್ಣ, ನಾಗಣ್ಣ, ಚನ್ನೇಗೌಡ ಕುಮಾರ್, ಜಯಮ್ಮ, ನಾಗೇಶ್ ಸೇರಿದಂತೆ ಅಕ್ಕಪಕ್ಕದ ಗ್ರಾಮಸ್ಥರು ಭಾಗವಹಿಸಿದ್ದರು.

ನಾಗಮಂಗಲದಲ್ಲಿ ಕೇಕ್ ತಿಂದು ಮಗು ಅಸ್ವಸ್ಥ

ಪುರಸಭಾಧಿಕಾರಿಗಳಿಂದ ಬೇಕರಿಗೆ ಬೀಗ

ನಾಗಮಂಗಲ, ಜು.22– ಪಟ್ಟಣದ ಕಾವೇರಿ ಬೇಕರಿಯ ಕೇಕ್ ತಿಂದು ಮಗು ಅಸ್ವಸ್ಥಗೊಂಡಿದ್ದು, ಮಗುವಿನ ಪೋಷಕರು ಆಕ್ರೋಶಗೊಂಡು ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಪಟ್ಟಣದ ಪುರಸಭಾ ಅಧಿಕಾರಿಗಳು ಬೇಕರಿಗೆ ಬೀಗ ಜಡಿದಿದ್ದಾರೆ.

ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿಯ ಕಾವೇರಿ ಬೇಕರಿಯಲ್ಲಿ ಬಡಗೂಡಮ್ಮ ದೇವಸ್ಥಾನ ಹಿಂಭಾಗ ವಾಸವಿರುವ ಆನಂದ್ ಎಂಬುವವರು ಚಾಕೊಲೇಟ್ ಕೇಕ್ ತೆಗೆದುಕೊಂಡು ಹೋಗಿದ್ದರು. ಕೇಕ್ ತಿಂದ ಮಗು ಕೆಲವೇ ಕ್ಷಣಗಳಲ್ಲಿ ಅಸ್ವಸ್ಥಗೊಂಡಿದ್ದು, ತಕ್ಷಣ ಆಸ್ಪತ್ರೆಗೆ ದಾಖಲಿಸಿದ್ದಾರೆ. ಕೇಕ್ ಸೇವನೆಯಿಂದ ವ್ಯತ್ಯಾಸವಾಗಿದೆ ಎಂಬುದು ವೈದ್ಯರ ಪರೀಕ್ಷೆಯ ನಂತರ ಪಾಲಕರಿಗೆ ಗೊತ್ತಾಗಿದ್ದು, ಮಗುವಿಗೆ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯದ ಖಾಸಗಿ ನರ್ಸಿಂಗ್ ಹೋಂಗೆ ದಾಖಲಿಸಲಾಗಿದೆ.

ಬೇಕರಿಯಲ್ಲಿ ಕಲಬೆರಕೆ ತಿನಿಸು ನೀಡಿದ ಬಗ್ಗೆ ಮಗುವಿನ ತಂದೆ ಆನಂದ್ ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್ ಅವರಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಅವರ ನಿರ್ದೇಶನದ ಮೇರೆಗೆ ಹಿರಿಯ ಆರೋಗ್ಯ ನಿರೀಕ್ಷಕರಾದ ವೆಂಕಟೇಶ್, ಮಹೇಶ್, ನಿಂಗೇಗೌಡ ಬೇಕರಿ ಪರಿಶೀಲನೆ ಮಾಡಿದರು.

ಈ ಸಂದರ್ಭ ಸಿಹಿ ತಿನಿಸುಗಳನ್ನು ತಯಾರಿ ಮಾಡುವ ಪದಾರ್ಥಗಳು ಅವಧಿ ಮೀರಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಕೂಡಲೇ 2 ಬೇಕರಿಯ ಮಾಲೀಕರಾದ ರವಿ ಅವರಿಗೆ ನೋಟಿಸ್ ನೀಡಿ ಬೇಕರಿಯನ್ನು ಬಂದ್ ಮಾಡಿಸಲಾಗಿದೆ. ನಂತರ ಆರೋಗ್ಯ ಸುರಕ್ಷತೆ ಅಧಿಕಾರಿ ಬಸವರಾಜು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.


ಪುರಸಭಾಧಿಕಾರಿಗಳು ಬೇಕರಿ ಬಂದ್ ಮಾಡಿರುವುದು.

ಕಾವೇರಿ ಬೇಕರಿಯಲ್ಲಿ ಕೆಲವು ನ್ಯೂನತೆಗಳು ಕಂಡುಬಂದಿದ್ದು, ಜು.8ರಂದು ನೋಟಿಸ್ ನೀಡಿ ಇಲ್ಲಿಯ ತಿನಿಸುಗಳಾದ ಕೇಕ್, ಬ್ರೆಡ್ ಸ್ಯಾಂಪಲ್‌ಗಳನ್ನು ಲ್ಯಾಬ್‌ಗೆ ಕಳುಹಿಸಲಾಗಿದೆ. ಜೊತೆಗೆ ಇಲ್ಲಿ ಅಶುಚಿತ್ವ ಸಹ ತಾಂಡವವಾಡುತ್ತಿದ್ದು, ಬೇಕರಿ ಮಾಲೀಕರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವ ಭರವಸೆಯನ್ನು ಅಧಿಕಾರಿಗಳು ನೀಡಿದ್ದಾರೆ.

ಆಹಾರ ಇಲಾಖೆ ಗೋದಾಮಿನಲ್ಲಿ 47 ಕ್ವಿಂಟಾಲ್ ಅಕ್ಕಿ ಕಳ್ಳತನ

ಮದ್ದೂರು, ಜು.22– ಪಟ್ಟಣದ ಮದ್ದೂರು –ಮಳವಳ್ಳಿ ರಸ್ತೆಯಲ್ಲಿರುವ ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮದ ಗೋದಾಮಿನಲ್ಲಿ 47 ಕ್ವಿಂಟಾಲ್(95 ಮೂಟೆ) ಅಕ್ಕಿಯನ್ನು ಕಿಡಿಗೇಡಿಗಳು ಕದ್ದು ಪರಾರಿಯಾಗಿದ್ದಾರೆ.

ಸೋಮವಾರ ತಡರಾತ್ರಿ ಗೋದಾಮಿನ ಬೀಗ ಮುರಿದು ಒಳನುಗ್ಗಿರುವ ಕಳ್ಳರು 1 ಲಕ್ಷ ರೂ. ಮೌಲ್ಯದ ಅಕ್ಕಿ ಮೂಟೆಗಳನ್ನು ಕಳವು ಮಾಡಿದ್ದಾರೆ. ಅಕ್ಕಿ ಮೂಟೆಗಳನ್ನು ನ್ಯಾಯಬೆಲೆ ಅಂಗಡಿ, ಹಾಸ್ಟೆಲ್‌ಗಳು ಹಾಗೂ ಸರ್ಕಾರಿ ಶಾಲೆ ಮಧ್ಯಾಹ್ನದ ಬಿಸಿಯೂಟಕ್ಕೆ ಸರಬರಾಜು ಮಾಡಲು ಇಡಲಾಗಿತ್ತು ಎನ್ನಲಾಗಿದೆ.

ಮಧ್ಯರಾತ್ರಿ 2 ಗಂಟೆ ಸುಮಾರಿಗೆ ಮಿನಿ ಲಾರಿಯೊಂದಿಗೆ ಆಗಮಿಸಿದ ಕಳ್ಳರು ಗೋದಾಮಿನ ಬೀಗ ಮುರಿದು ಒಳ ಪ್ರವೇಶಿಸಿ ಅಕ್ಕಿ ಕದ್ದುಕೊಂಡು ಹೋಗಿದ್ದಾರೆ. ಕಳ್ಳತನ ಮಾಡಿರುವ ದೃಶ್ಯಗಳು ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಗೋದಾಮಿನಲ್ಲಿ ಅಕ್ಕಿ ಕಳ್ಳತನವಾಗಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದ್ದು, ಸತ್ಯಾಂಶ ಪೊಲೀಸ್ ತನಿಖೆಯಿಂದ ತಿಳಿಯಬೇಕಾಗಿದೆ.

ಘಟನಾ ಸ್ಥಳಕ್ಕೆ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಮಳವಳ್ಳಿ ಡಿವೈಎಸ್ಪಿ ಕೃಷ್ಣಪ್ಪ, ಆಹಾರ ನಾಗರಿಕ ಜಂಟಿ ನಿರ್ದೇಶಕ ಕೃಷ್ಣ ಕುಮಾರ್, ವೃತ್ತ ನಿರೀಕ್ಷಕ ಶಿವಕುಮಾರ್ ಪರಿಶೀಲಿಸಿದ್ದಾರೆ. ಗೋದಾಮು ವ್ಯವಸ್ಥಾಪಕ ನಟರಾಜು ನೀಡಿದ ದೂರಿನ ಮೇರೆಗೆ ಮದ್ದೂರು ಠಾಣೆ ಪೊಲೀಸರು ಪ್ರಕರಣ ದಾಖಲಿಸಿ ಕೊಂಡಿದ್ದಾರೆ.

ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನ

ಮಂಡ್ಯ, ಜು.22– ಪ.ಪಂಗಡದ ಕಾನೂನು ಪದವಿ ಅರ್ಹ ಅಭ್ಯರ್ಥಿಗಳು ವೃತ್ತಿ ತರಬೇತಿ ಅವಧಿಯಲ್ಲಿ ಶಿಷ್ಯವೇತನಕ್ಕೆ ತಾಂತ್ರಿಕ ದೋಷದಿಂದ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಇರುವ ಹಿನ್ನಲೆಯಲ್ಲಿ ಅರ್ಹ ಕಾನೂನು ಪದವೀಧರರಿಗೆ ಮಾಸಿಕ ಶಿಷ್ಯ ವೇತನಕ್ಕೆ ಅರ್ಜಿ ಸಲ್ಲಿಸಲು ವರ್ಷದ ಎಲ್ಲಾ ದಿನಗಳು (365 ದಿನಗಳು) ಅವಕಾಶ ಕಲ್ಪಿಸಲಾಗಿರುತ್ತದೆ.

ಅರ್ಜಿಯನ್ನು https://twd.karnataka.gov.in/twincentive/LAW/LAWHome.aspx ವೆಬ್‌ಸೈಟ್ ಮೂಲಕ ವರ್ಷದ ಎಲ್ಲಾ ದಿನಗಳು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಹಾಗೂ ತಾಲೂಕುಗಳ ಸಹಾಯಕ ನಿರ್ದೇಶಕರ ಕಚೇರಿಯನ್ನು ಹಾಗೂ ದೂ: 08232–220772 ಅನ್ನು ಸಂಪರ್ಕಿಸಬಹುದಾಗಿದೆ.

ಜೈನಹಳ್ಳಿಯಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ

ಕೆ.ಆರ್.ಪೇಟೆ, ಜು.22– ನಾಡಪ್ರಭು ಕೆಂಪೇಗೌಡರ ದೂರದೃಷ್ಟಿಯ ಫಲವಾಗಿ ಇಂದು ಬೆಂಗಳೂರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಗಳಿಸಿದೆ ಎಂದು ರಾಜ್ಯ ಆರ್‌ಟಿಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ತಿಳಿಸಿದರು.

ತಾಲೂಕಿನ ಜೈನಹಳ್ಳಿಯಲ್ಲಿ ನಾಡಪ್ರಭು ಕೆಂಪೇಗೌಡರ ಗೆಳೆಯರ ಬಳಗದಿಂದ ಆಯೋಜಿಸಿದ್ದ ಶ್ರೀಕೆಂಪೇಗೌಡರ 516ನೇ ಜಯಂತ್ಯುವದ ಅಧ್ಯಕ್ಷತೆ ವಹಿಸಿ, ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ನಗರ ವ್ಯವಸ್ಥೆ ಬಗ್ಗೆ ಸಂಪೂರ್ಣ ಜ್ಞಾನ ಹೊಂದಿದ್ದ ಕೆಂಪೇಗೌಡರು ವಿಜಯ ನಗರದ ಸಾಮಂತ ಅರಸರಾಗಿದ್ದರು. ಹಾಗಾಗಿ ಕೃಷಿಕರು, ಕುಶಲಕರ್ಮಿಗಳು, ವ್ಯಾಪಾರಸ್ಥರು, ಜನಸಾಮಾನ್ಯರ ಅಗತ್ಯಗಳನ್ನು ಅರಿತು ಎಲ್ಲರಿಗೂ ವಿಶೇಷವಾದ ಪ್ರಾತಿನಿಧ್ಯ ನೀಡಿದರು. ಇಂದಿಗೂ ಬೆಂಗಳೂರಿನಲ್ಲಿ 64 ವಿವಿಧ ಕುಶಲಕರ್ಮಿಗಳ ಹೆಸರಿನ ಪ್ರದೇಶಗಳಿವೆ. ಕೃಷಿ ಹಾಗೂ ಕುಡಿಯುವ ನೀರಿಗೆ ಮಾದರಿಯಾದ ಜಲ ವ್ಯವಸ್ಥೆ ರೂಪಿಸಲಾಗಿತ್ತು. ನಗರದಲ್ಲೇ 1500 ಕೆರೆಕಟ್ಟೆಗಳನ್ನು ನಿರ್ಮಿಸಿದ ಕೆಂಪೇಗೌಡರ ಜಯಂತೋತ್ಸವ ಆಚರಿಸುತ್ತಿರುವುದು ಶ್ಲಾಘನೀಯ. ಜೈನಹಳ್ಳಿ ಗ್ರಾಮದ ಯುವಕರ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಟಿಎಪಿಸಿಎಂಎಸ್ ಮಾಜಿ ನಿರ್ದೇಶಕ ಹೆಚ್.ಟಿ.ಲೋಕೇಶ್, ಜೈನಹಳ್ಳಿ ಪಿಎಸಿಎಸ್ ನಿರ್ದೇಶಕ ಧರಣಿ, ಗ್ರಾಪಂ ಉಪಾಧ್ಯಕ್ಷ ಸುಂದ್ರೇಶ್, ಸದಸ್ಯರಾದ ನಾಗಮ್ಮ ಜಲೇಂದ್ರ, ತಾರಾ ಮುಕುಂದ, ಮುಖಂಡರಾದ ನಂಜುಂಡಶೆಟ್ಟಿ, ನರಸೇಗೌಡ, ನೀಲಕಂಠ ಶಾಸ್ತ್ರಿ, ರಾಮಕೃಷ್ಣೇ ಗೌಡ, ನಿವೃತ್ತ ಶಿಕ್ಷಕ ಚಂದ್ರೇಗೌಡ, ರಾಮೇಗೌಡ, ಗೌಡಪ್ಪ, ಸಂಘದ ಅಧ್ಯಕ್ಷ ಚಂದೇಗೌಡ, ಉಪಾಧ್ಯಕ್ಷ ವೆಂಕಟೇಶ್, ಕಾರ್ಯದರ್ಶಿ ಕಿರಣ್, ಸಹಕಾರ್ಯದರ್ಶಿ ಪ್ರತಾಪ್, ಖಜಾಂಚಿ ಶಿವೇಗೌಡ ಜೆ.ಎಂ.ಸುನೀಲ್, ತುಳಸಿ ರಾಮೇಗೌಡ, ಅಶೋಕ್, ಮಂಜು ನಾಥ್ ಜಿ.ಜೆ, ನಿಂಗರಾಜೇಗೌಡ, ಯುವ ಮುಖಂಡ ಸಂತೋಷ್ ಸೇರಿದಂತೆ ಹಲವರಿದ್ದರು.


ಶ್ರೀಕೆಂಪೇಗೌಡರ ಜಯಂತ್ಯುತ್ಸವವನ್ನು ಗಣ್ಯರು ಉದ್ಘಾಟಿಸಿದರು.

ವಿದ್ಯಾರ್ಥಿ ನಿಲಯಕ್ಕೆ ಅರ್ಜಿ ಆಹ್ವಾನ

ಮಂಡ್ಯ, ಜು.22– ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ 2025–26ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ / ಪ.ವರ್ಗದ ಸಾಮಾನ್ಯ ಪದವಿ ಕೋರ್ಸ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು https://shp.karnataka.gov.in/bcwd ವೆಬ್‌ಸೈಟ್‌ನಲ್ಲಿ ಆ.14ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಮಾಹಿತಿಗೆ ಮೊ: 8050770004, 8050770005 ಸಂಪರ್ಕಿಸಬಹುದಾಗಿದೆ.

ನಾಳೆ ಗೌಡಗೆರೆ ಚಾಮುಂಡೇಶ್ವರಿ ರಥೋತ್ಸವ



ಮದ್ದೂರು, ಜು.22– ಭೀಮನ ಅಮಾವಾಸ್ಯೆ ಪ್ರಯುಕ್ತ ಜು.24ರಂದು ತಾಲೂಕಿನ ಗಡಿ ಭಾಗದಲ್ಲಿರುವ ಪಂಚಲೋಹದ ಅತಿ ಎತ್ತರದ ಶ್ರೀ ಚಾಮುಂಡೇಶ್ವರಿ ವಿಗ್ರಹವಿರುವ ಬಿ.ಗೌಡಗೆರೆಯ ಶ್ರೀ ಚಾಮುಂಡೇಶ್ವರಿ ಬಸವಪ್ಪನ ಶ್ರೀಕ್ಷೇತ್ರದಲ್ಲಿ ರಥೋತ್ಸವ ನಡೆಯಲಿದೆ ಎಂದು ಕ್ಷೇತ್ರದ ಧರ್ಮದರ್ಶಿ ಮಲ್ಲೇಶ್ ಗುರೂಜಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭೀಮನ ಅಮಾವಾಸ್ಯೆಯಂದು ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆಯಿದ್ದು, ದೇವರ ದರ್ಶನಕ್ಕೆ ಯಾವುದೇ ತೊಂದರೆಯಾಗದಂತೆ ಎಲ್ಲಾ ರೀತಿಯ ಸಿದ್ಧತೆ ಕೈಗೊಳ್ಳಲಾಗಿದೆ. ಅಂದು ಅಮ್ಮನವರಿಗೆ ರುದ್ರಾಭಿಷೇಕ, ಶ್ರೀಚಕ್ರಕ್ಕೆ ಪಂಚಾಮೃತ ಅಭಿಷೇಕ ನಡೆಯಲಿದೆ. ಮುಂಜಾನೆ 4.28ಕ್ಕೆ ಅಮ್ಮನಿಗೆ ಮೊದಲ ಮಂಗಳಾರತಿ ಮತ್ತು ತೀರ್ಥ ಪ್ರಸಾದ ವಿನಿಯೋಗವಿರುತ್ತದೆ. ಬೆಳಗ್ಗೆ 7.28ಕ್ಕೆ ಎರಡನೇ ಮಂಗಳಾರತಿ, ಮಧ್ಯಾಹ್ನ 12.28 ಗಂಟೆಗೆ ಮೂರನೇ ಮಹಾಮಂಗಳಾರತಿ ನಡೆಸಲಾಗುವುದು. ಇದರೊಂದಿಗೆ ನೂರೆಂಟು ಹಾಲರವಿ ಸೇವೆ ನಡೆಯಲಿದೆ. ಮಧ್ಯಾಹ್ನ 12.28ಕ್ಕೆ ರಥೋತ್ಸವಕ್ಕೆ ಚಾಲನೆ ನೀಡಲಾಗುವುದು ಎಂದರು.

ಗರ್ಭಗುಡಿಯಲ್ಲಿರುವ ಅಮ್ಮನವರ ಮೂಲ ವಿಗ್ರಹವನ್ನು ರಥೋತ್ಸವದಲ್ಲಿ ಮೆರವಣಿಗೆ ಮಾಡಲಾಗುವುದು. ಗುರುವಾರ ಮಧ್ಯರಾತ್ರಿ 2 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಅಮ್ಮನವರ ಮೂಲ ಮೂರ್ತಿಗೆ ಅಭಿಷೇಕ ಮಾಡಲು ಭಕ್ತರಿಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ಅಂದು ದೇವಾಲಯಕ್ಕೆ ಜನಪ್ರತಿನಿಧಿಗಳು, ಗಣ್ಯರು, ಅತಿಥಿಗಳು, ಚಿತ್ರನಟರು ಸೇರಿದಂತೆ ವಿವಿಧ ಕ್ಷೇತ್ರದ ಗಣ್ಯರು ಆಗಮಿಸಲಿದ್ದಾರೆ. ವಾಹನ ಪಾರ್ಕಿಂಗ್, ಕುಡಿಯುವ ನೀರು, ಶೌಚಗೃಹ ಸೇರಿ ದಂತೆ ಯಾವುದೇ ಸಮಸ್ಯೆಯಾಗದಂತೆ ವ್ಯವಸ್ಥೆ ಮಾಡಲಾಗಿದೆ. ಪೊಲೀಸ್ ಇಲಾಖೆಯಿಂದ ಭದ್ರತಾ ವ್ಯವಸ್ಥೆ ಮಾಡಲಾಗಿದೆ ಎಂದರು.

ಅನ್ನದಾಸೋಹಕ್ಕೆ ಭಕ್ತರು ಅಕ್ಕಿ, ತರಕಾರಿ, ಬೆಲ್ಲ ಸೇರಿದಂತೆ ಇನ್ನಿತರ ವಸ್ತುಗಳನ್ನು ನೀಡಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವುದರಿಂದ ಅನ್ನಪ್ರಸಾದ ನೀಡಲು 10 ಕಡೆ ಕೌಂಟರ್‌ಗಳನ್ನು ಮಾಡಲಾಗಿದೆ. ಭಕ್ತರು ಸರತಿ ಸಾಲಿನಲ್ಲಿ ನಿಂತುಕೊಳ್ಳಲು ನೆರಳಿನ ವ್ಯವಸ್ಥೆ, ಅಂಗವಿಕಲರು, ಗರ್ಭಿಣಿಯರು, ವಯೋವೃದ್ಧರಿಗೆ ವಿಶೇಷ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದರು.

ಒಂದನೇ ಪುಟದಿಂದ

ಅರಣ್ಯಗಳಲ್ಲಿ ಸಾಕು ಪ್ರಾಣಿ ಪ್ರವೇಶ ನಿಷಿದ್ಧ

ಮೇಕೆ, ಕುರಿ, ದನಕರುಗಳನ್ನು ಮೇಯಿಸುವುದನ್ನು ನಿಷೇಧಿಸಬೇಕು ಎಂದು ವನ್ಯಜೀವಿ ಪ್ರೇಮಿಗಳು, ಪರಿಸರವಾದಿಗಳು ಅಭಿಪ್ರಾಯಪಟ್ಟಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಪರಿಶೀಲಿಸಿ ಕಾನೂನು ರೀತಿಯ ಕ್ರಮ ವಹಿಸಲು ಸೂಚಿಸಿದ್ದಾರೆ.

ಕಾಡಿನಲ್ಲಿರುವ ವನ್ಯಜೀವಿಗಳು, ಮೇಯಲು ಹೋದ ದನ–ಕರುಗಳನ್ನು ಕೊಂದಾಗ, ಆಕ್ರೋಶಗೊಂಡು ಕೆಲವರು ಮೃತ ಜಾನುವಾರುಗಳಿಗೆ ವಿಷಹಾಕುವ ಕಾರಣ ವನ್ಯಜೀವಿಗಳು ಸಾವಿಗೀಡಾಗುತ್ತಿವೆ. ಇದಕ್ಕೆ ಇತ್ತೀಚೆಗೆ ಹೂಗ್ಯಂ ವಲಯದಲ್ಲಿ ಒಂದು ತಾಯಿ ಹುಲಿ ಮತ್ತು ನಾಲ್ಕು ಮರಿ ಹುಲಿಗಳು ಸಾವಿಗೀಡಾಗಿರುವುದೇ ಸಾಕ್ಷಿಯಾಗಿದೆ ಎಂದು ಪರಿಸರ ಪ್ರೇಮಿಗಳು ಅಭಿಪ್ರಾಯಪಟ್ಟಿರುತ್ತಾರೆ ಎಂದು ಟಿಪ್ಪಣಿಯಲ್ಲಿ ಉಲ್ಲೇಖಿಸಿದ್ದಾರೆ.

ಮಿಗಿಲಾಗಿ ಮದ್ರಾಸ್ ಹೈಕೋರ್ಟ್ ತಮಿಳುನಾಡಿನ ಅರಣ್ಯದೊಳಗೆ ಸಾಕು ಪ್ರಾಣಿಗಳನ್ನು ಮೇಯಿಸುವುದರ ವಿರುದ್ಧ ನೀಡಿದ ತೀರ್ಪಿನ ಬಳಿಕ, ನೆರೆಯ ರಾಜ್ಯದಿಂದಲೂ ನಮ್ಮ ರಾಜ್ಯಕ್ಕೆ ದನಕರುಗಳನ್ನು ತಂದು ಕಾಡಿನಲ್ಲಿ ಮೇಯಿಸಲಾಗುತ್ತಿದೆ. ಹೀಗಾಗಿ ಕರ್ನಾಟಕ ರಾಜ್ಯದ ಅರಣ್ಯಗಳ ಸಂರಕ್ಷಣೆ ಮತ್ತು ಸಂವರ್ಧನೆಯ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲ ಅರಣ್ಯ ಪ್ರದೇಶದೊಳಗೆ ಸಾಕು ಪ್ರಾಣಿಗಳನ್ನು ಮೇಯಲು ಬಿಡುವುದನ್ನು ನಿರ್ಬಂಧಿಸಲು ಮತ್ತು ನಿಷೇಧಿಸಲು ನಿಯಮಾನುಸಾರ ಕ್ರಮವಹಿಸಲು ಸೂಚಿಸಿದ್ದಾರೆ.

ಅರ್ಜಿ ವಿಚಾರಣೆ ನಾಳೆಗೆ ಮುಂದೂಡಿಕೆ

ಕೋರ್ಟ್ ಸೂಚನೆ ನೀಡಿದೆ. ಕಳೆದ ಗುರುವಾರ ಪ್ರಕರಣದ ವಿಚಾರಣೆ ನಡೆಸಿದ್ದ ಸುಪ್ರೀಂ ಕೋರ್ಟ್, ನಟ ದರ್ಶನ್ ಮತ್ತು ಇತರೆ ಆರೋಪಿಗಳಿಗೆ ಜಾಮೀನು ಮಂಜೂರು ಮಾಡಿರುವ ಹೈಕೋರ್ಟ್ ತೀರ್ಪಿನ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿತ್ತು. ಜಾಮೀನು ಆದೇಶ ಪ್ರಶ್ನಿಸಿ ಬೆಂಗಳೂರು ನಗರ ಪೊಲೀಸರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ್ದ ಪೀಠವು, ಹೈಕೋರ್ಟ್ ತನ್ನ ವಿವೇಚನೆ ಚಲಾಯಿಸಿದ ರೀತಿ ತನಗೆ ಮನದಟ್ಟಾಗಿಲ್ಲ ಎಂದು ಹೇಳಿ ವಿಚಾರಣೆಯನ್ನು ಜು.22ಕ್ಕೆ ಮುಂದೂಡಿತ್ತು. ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಎಲ್ಲಾ 17 ಆರೋಪಿಗಳಿಗೆ ಜಾಮೀನು ಸಿಕ್ಕಿದೆ. ಈ ಪೈಕಿ ಎ1 ಪವಿತ್ರಾ ಗೌಡ, ಎ2 ದರ್ಶನ್ ಸೇರಿ 7 ಆರೋಪಿಗಳ ಜಾಮೀನು ರದ್ದು ಮಾಡುವಂತೆ ಸರ್ಕಾರ ಕೋರಿದೆ.

1314 ವರ್ತಕರಿಗೆ ನೋಟಿಸ್

ನೋಂದಣಿ ಮಾಡದಿದ್ದಲ್ಲಿ ಸುಮೊಟೊ (ಸ್ವಯಂಪ್ರೇರಿತ) ವಿಧಾನದಲ್ಲಿ ನಾವೇ ತೆರಿಗೆ ಅರ್ಹರೆಂದು ಪರಿಗಣಿಸಿ, ಈ ಸಂಬಂಧ ನೋಟಿಸ್ ಮೂಲಕ ಮಾಹಿತಿ ನೀಡಲಾಗಿರುತ್ತದೆ. ನಂತರ 15 ದಿನಗಳ ಬಳಿಕ ತೆರಿಗೆ, ಬಡ್ಡಿ, ದಂಡದ ವಿವರ ಒಳಗೊಂಡಂತೆ ನೋಟಿಸ್ ರವಾನಿಸಲಾಗುತ್ತದೆ ಎಂದು ವಿವರಿಸಿದರು.

ಇಂಟಿಮೇಷನ್ ತಲುಪಿದ ನಂತರ ವರ್ತಕರು ನಮ್ಮ ಇಲಾಖೆ ಸಂಪರ್ಕಿಸಬೇಕು. ಈಗಾಗಲೇ ಹಲವರು ಇಲಾಖೆಯನ್ನು ಸಂಪರ್ಕಿಸಿದ್ದಾರೆ. ಅವರು ತಾವು ಹಣ್ಣು ತರಕಾರಿ (ತೆರಿಗೆ ವಿನಾಯಿತಿ ಉತ್ಪನ್ನಗಳು) ವ್ಯಾಪಾರಿಗಳು ಎಂದು ಹೇಳಿಕೊಂಡಾಗ, ಸ್ಥಳಕ್ಕೆ ಭೇಟಿ ಪರಿ ಶೀಲಿಸಿ, ಅವರು ಹೇಳಿದ್ದು ನಿಜವಾಗಿದ್ದಲ್ಲಿ ಅಂತಹ ಪ್ರಕರಣಗಳನ್ನು ಕೈಬಿಡುತ್ತಿದ್ದೇವೆ. ಹಾಲು, ಹಣ್ಣು ತರಕಾರಿ, ಮಾಂಸ, ಚಿಕನ್ ಸೇರಿದಂತೆ ಹಲವು ಉತ್ಪನ್ನಗಳು ತೆರಿಗೆ ವ್ಯಾಪ್ತಿಗೆ ಬರುವುದಿಲ್ಲ. ಹಾಗಾಗಿ ಈ ಉತ್ಪನ್ನಗಳನ್ನು ಮಾರಾಟ ಮಾಡುವ ವರ್ತಕರು ತೆರಿಗೆ ಪಾವತಿಸಬೇಕೆಂಬ ಆತಂಕಕ್ಕೆ ಒಳಗಾಗುವುದು ಅನಗತ್ಯ ಎಂದು ಹೇಳಿದರು.

ಹಾಲಿಗೆ ತೆರಿಗೆ ಇಲ್ಲವಾದರೂ ಅದರ ಉತ್ಪನ್ನಗಳಿಗೆ ತೆರಿಗೆ ಅನ್ವಯಿಸುತ್ತದೆ. ಅಂದರೆ ಪೇಡ ಮೊದಲಾದ ಸಿಹಿ ತಿಂಡಿಗಳು ತೆರಿಗೆ ವ್ಯಾಪ್ತಿಗೆ ಬರಲಿವೆ. ಉದಾಹರಣೆಗೆ ನಂದಿನಿ ಬೂತ್‌ವೊಂದರಲ್ಲಿ ವರ್ಷದಲ್ಲಿ 40 ಲಕ್ಷ ವಹಿವಾಟು ನಡೆದಿದ್ದರೆ, ಈ ಪೈಕಿ 20 ಲಕ್ಷದ ವಹಿವಾಟು ಹಾಲು ಮತ್ತು ಮೊಸರಿಗೆ ಸಂಬಂಧಿಸಿ, ಉಳಿದ 20 ಲಕ್ಷ ರೂ. ವಹಿವಾಟು ತೆರಿಗೆ ವ್ಯಾಪ್ತಿ ಉತ್ಪನ್ನಗಳಾಗಿದ್ದರೆ ಈ ಸಂಬಂಧ ಮಾತ್ರ ತೆರಿಗೆ ಅನ್ವಯವಾಗುತ್ತದೆ ಎಂದು ತಿಳಿಸಿದರು.

ತೆರಿಗೆಯಿಂದ ವಿನಾಯಿತಿ ಹೊಂದಿದ ಹಾಗೂ ತೆರಿಗೆಗೆ ಒಳಪಡುವ ಸರಕುಗಳು ಎರಡೂ ಮಳಿಗೆಯಲ್ಲಿದ್ದೂ 40 ಲಕ್ಷ ವಾರ್ಷಿಕ ವಹಿವಾಟು ದಾಟಿದ್ದರೆ, ಅಂತಹ ವರ್ತಕರು ನೋಂದಣಿ ಮಾಡಿಕೊಳ್ಳಬೇಕಾಗುತ್ತದೆ. ತೆರಿಗೆ ವಿನಾಯಿತಿ ಉತ್ಪನ್ನ ಹೊಂದಿರುವ ಬಗ್ಗೆ ಮಾಹಿತಿ ನೀಡಿದರೆ ಅವುಗಳಿಗೆ ತೆರಿಗೆ ವಿಧಿಸುವ ಪ್ರಮೇಯ ಬರುವುದೇ ಇಲ್ಲ. ಆದ್ದರಿಂದ ವರ್ತಕರು ವಿನಾಕಾರಣ ಭಯಪಡುವ ಅಗತ್ಯವಿಲ್ಲ ಎಂದರು.

ಉದಾಹರಣೆಗೆ ಹೇಳುವುದಾದರೆ, ಬಿಸ್ಕೇಟ್ ಪ್ಯಾಕ್ ಮೇಲೆ 'ಎಲ್ಲಾ ತೆರಿಗೆ ಒಳಗೊಂಡು' ಎಂದು ಉಲ್ಲೇಖಿಸಿರುವುದನ್ನು ಕಾಣಬಹುದು. ಇಂತಹ ಉತ್ಪನ್ನಗಳಿಗೆ ಗ್ರಾಹಕರಿಂದ ವರ್ತಕರು ತೆರಿಗೆ ಸಂಗ್ರಹ ಮಾಡಿರುತ್ತಾರೆ. ಹಾಗಾಗಿ ಅವರು ಜಿಎಸ್‌ಟಿ ನೋಂದಣಿ ಮಾಡಿಕೊಳ್ಳುವ ಮೂಲಕ ತೆರಿಗೆ ಪಾವತಿಸುವ ವ್ಯವಸ್ಥೆ ಮಾಡಲಾಗಿದೆ. 2017ರಲ್ಲಿ ಜಿಎಸ್‌ಟಿ ಜಾರಿಯಾದರೂ ವರ್ತಕರು ಹೊಸ ಪದ್ಧತಿಗೆ ಹೊಂದುಕೊಳ್ಳಲು ಕಾಲಾವಕಾಶ ನೀಡಲಾಗಿತ್ತು. ಆದ್ದರಿಂದ ವರ್ಷದ ಮಟ್ಟಿಗೆ ವರ್ತಕರು ಸ್ವತಃ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಯುಪಿಐ ವ್ಯವಸ್ಥೆಯು ಕೋವಿಡ್ ಬಳಿಕ ಹೆಚ್ಚು ಬಳಕೆಗೆ ಬಂದಿತು. ಅಂದಿನಿಂದ ಜನತೆ ಇದನ್ನೇ ಹೆಚ್ಚು ಬಳಕೆ ಮಾಡುತ್ತಿದ್ದಾರೆ ಎಂದು ಹೇಳಿದರು.

ಎಸ್‌ಐಟಿಯಿಂದ ಇಂದಿನಿಂದ ತನಿಖೆ

ಇನ್ಸ್‌ಪೆಕ್ಟರ್ ಜೊತೆ ಪ್ರಕರಣದ ಮಾಹಿತಿ ಪಡೆಯಲಿದ್ದಾರೆ. ಬಳಿಕ ಅಧಿಕೃತವಾಗಿ ನಾಳೆ ಪ್ರಕರಣ ಎಸ್‌ಐಟಿಗೆ ಹಸ್ತಾಂತರ ವಾಗಲಿದೆ.

ಧರ್ಮಸ್ಥಳದ ಎಸ್‌ಐಟಿ ತನಿಖೆ ಹೇಗಿರಲಿದೆ: ಮೊದಲು ಎಫ್‌ಐಆರ್ ಮತ್ತು 164 ಅಡಿ ಹೇಳಿಕೆ ಪ್ರತಿ ಅತ್ಯಗತ್ಯ. ಬಳಿಕ ಜಡ್ಜ್ ಮುಂದೆ ಕೊಟ್ಟ ಹೇಳಿಕೆ ಮಾಹಿತಿ ಪಡೆಯಲಿದೆ ಎಸ್‌ಐಟಿ. ನಂತ್ರ ಹೇಳಿಕೆ ನೀಡಿದ ವ್ಯಕ್ತಿಯನ್ನು ವಿಚಾರಣೆಗೆ ಒಳಪಡಿಸಲಿದ್ದಾರೆ. ಸದ್ಯ ಸಿಕ್ಕಿರೋ ಅಸ್ಥಿಪಂಜರದ ಡಿಎನ್‌ಎ ಮ್ಯಾಚಿಂಗ್ ಪ್ರಕ್ರಿಯೆ ನಡೆಯಲಿದೆ. ಇದಾದಮೇಲೆ ಬಾಕಿ ಉಳಿದಿರೋ ಅಸ್ಥಿಪಂಜರ ಹುಡುಕಾಟಕ್ಕೆ ಎಸ್‌ಐಟಿ ಮುಂದಾಗಲಿದೆ. ತನಿಖೆ ಬಳಿಕ ಕೋರ್ಟ್‌ಗೆ ದೋಷಾರೋಪ ಪಟ್ಟಿ ಸಲ್ಲಿಕೆ ಮಾಡಲಿದೆ.

ದೂರುದಾರನ ಹೇಳಿಕೆಯಲ್ಲೇನಿದೆ: 1995ರಿಂದ 2014ರವರೆಗೆ ಧರ್ಮಸ್ಥಳದ ನೌಕರನಾಗಿದ್ದೆ. ನಾನು ಹಲವು ಶವಗಳನ್ನು ವಿಲೇವಾರಿ ಮಾಡಿದ್ದೇನೆ. ಹೂತಿಟ್ಟ ಶವಗಳಲ್ಲಿ ಮಹಿಳೆಯರದ್ದೇ ಹೆಚ್ಚು. ಇವೆಲ್ಲ ಅನಾಥ ಶವಗಳು ಅಂತ ನಾನು ಭಾವಿಸಿದ್ದೆ. ಆನಂತರ ನನಗೆ ಅನುಮಾನ ಬರಲು ಶುರುವಾಯ್ತು. ಕೆಲ ಮಹಿಳೆಯರ ಶವಗಳು ನಗ್ನ ಸ್ಥಿತಿಯಲ್ಲಿದ್ದವು. ಲೈಂಗಿಕ ಆಕ್ರಮಣ, ಹಿಂಸೆಯ ಕುರುಹುಗಳಿದ್ದವು.

ನಾನು ಪೊಲೀಸರಿಗೆ ಹೇಳಲು ಮುಂದಾದಾಗ ನನ್ನ ಮೇಲೆ ಹಲ್ಲೆ ಮಾಡಿದರು. ಶವ ಹೂತಿಟ್ಟ ವಿಚಾರ ಬಯಲು ಮಾಡದಂತೆ ಬೆದರಿಸಿದರು. ನಿನ್ನನ್ನೂ ಹೂತು ಹಾಕುತ್ತೇನೆ ಅಂತ ಬೆದರಿಕೆ ಹಾಕಿದರು. ನಾನು ಜೀವ ಭಯದಿಂದ 11 ವರ್ಷಗಳ ಹಿಂದೆ ಧರ್ಮಸ್ಥಳ ತೊರೆದೆ. ಈಗ ನನಗೆ ಪಾಪಪ್ರಜ್ಞೆ ಕಾಡುತ್ತಿದೆ. ಕೊಲೆಪಾತಕರು, ಅತ್ಯಾಚಾರಿಗಳು ಯಾರೆಂದು ಗೊತ್ತಾಗಬೇಕು. ಹೂತು ಹಾಕಿರುವ ಸ್ಥಳವನ್ನು ತೋರಿಸಲು ನಾನು ಸಿದ್ಧ. ಸಮಗ್ರ ತನಿಖೆ ನಡೆಸಿ ತಪ್ಪಿತ ಸ್ಥರಿಗೆ ಶಿಕ್ಷೆ ಕೊಡಿ ಎಂದು ದೂರುದಾರ ಒತ್ತಾಯಿಸಿದ್ದಾರೆ.

ಜಿಎಸ್‌ಟಿ ನೋಂದಣಿ ಅಗತ್ಯವಿಲ್ಲ

ಮೈಸೂರು ವಿಭಾಗದ ನಾಲ್ಕು ಜಿಲ್ಲೆಗಳಲ್ಲಿರುವ 1,314 ಪ್ರಕರಣಗಳ ಪೈಕಿ ಬೇಕರಿ ಕಾಂಡಿಮೆಂಟ್ಸ್, ಹೋಟೆಲ್, ಕ್ಯಾಂಟಿನ್, ಪಾನ್ ಶಾಪ್, ಪ್ರಾವಿಜನ್ ಸ್ಟೋರ್, ಮಿಲ್ಕ್ ಬೂತ್, ಮಾಂಸ ಮಳಿಗೆ, ಪೆಟ್ರೋಲ್ ಬಂಕ್, ಬಾರ್ ಅಂಡ್ ರೆಸ್ಟೋರೆಂಟ್, ಆಸ್ಪತ್ರೆಗಳು, ಆಟೋಮೊಬೈಲ್ ಮಳಿಗೆ, ಎಲೆಕ್ಟ್ರಿಕಲ್ ಮತ್ತು ಹಾರ್ಡ್‌ವೇರ್, ಜುವಲರಿ, ರಿಪೇರ್ ಅಂಡ್ ಸರ್ವೀಸ್ ಸೆಂಟರ್‌ಗಳು, ವೈನ್ಸ್ ಸ್ಟೋರ್‌ಗಳಿಗೆ ಇಂಟಿಮೇಷನ್ ಕಳುಹಿಸಲಾಗಿದೆ. ಈ ಪೈಕಿ ತೆರಿಗೆ ವ್ಯಾಪ್ತಿಗೆ ಬಾರದ ಉತ್ಪನ್ನಗಳ ಬಗ್ಗೆ ವರ್ತಕರು ಮಾಹಿತಿ ನೀಡಿ ಈ ಸಂಬಂಧ ತೆರಿಗೆ ವಿನಾಯಿತಿ ಪಡೆಯಬಹುದು ಎಂದರು.

ವರ್ತಕರ ಪಟ್ಟಿ ಸಂಗ್ರಹದ ವೇಳೆ ಅವರ ಮಾರಾಟದ ಉತ್ಪನ್ನದ ಮಾಹಿತಿ ನಮಗೆ ಲಭ್ಯವಾಗಿಲ್ಲ. ತೆರಿಗೆ ವ್ಯಾಪ್ತಿಗೆ ಬಾರದ ಉತ್ಪನ್ನಗಳ ಮಾರಾಟಗಾರರು ದಾಖಲೆ ಒದಗಿಸಿ ತೆರಿಗೆಯಿಂದ ಹೊರಗೆ ಉಳಿಯಲು ಅವಕಾಶವಿದೆ ಎಂದು ಹೇಳಿದರು.

ವಹಿವಾಟು ಉದ್ದೇಶದಿಂದ ಯಾವ ಆಕೌಂಟ್ ನಂಬರ್ ಹೊಂದಿದ್ದಾರೋ ಆ ಸಂಬಂಧ ಬ್ಯಾಂಕ್‌ಗಳಲ್ಲಿ ಕೋಡ್‌ಗಳು ಇರಲಿದ್ದು, ಆ ಮೂಲದಿಂದ ನಾವು ಮಾಹಿತಿ ಸಂಗ್ರಹಿಸಬಹುದು. ಈ ವಿಧಾನದಲ್ಲಿ ವಹಿವಾಟು ಪ್ರಮಾಣ ಕಂಡುಹಿಡಿದು ತೆರಿಗೆ ವ್ಯಾಪ್ತಿಗೆ ಒಳಪಡಿಸಲಾಗುತ್ತದೆ. ಹಾಗಾಗಿ ತೆರಿಗೆಯಿಂದ ತಪ್ಪಿಸಿಕೊಳ್ಳಬಹುದು ಎಂದು ಆನ್‌ಲೈನ್ ಪೇಮೆಂಟ್ ನಿಲ್ಲಿಸುವುದು ಸರಿಯಲ್ಲ. ಆನ್‌ಲೈನ್ ಪೇಮೆಂಟ್ ಸ್ಥಗಿತಗೊಳಿಸಿದರೆ, ತೆರಿಗೆಯಿಂದ ಮುಕ್ತರಾಗಲು ಸಾಧ್ಯವಿಲ್ಲ ಎಂದರು. ಈ ರೀತಿ ಮಾಡುವುದರಿಂದ ವರ್ತಕರು ಸ್ವತಃ ತಾವೇ ವ್ಯಾಪಾರದಲ್ಲಿ ಇಳಿಮುಖ ಕಾಣಬೇಕಾಗುತ್ತದೆ. ಏಕೆಂದರೆ ಜನರು ಆನ್‌ಲೈನ್ ಪೇಮೆಂಟ್‌ಗೆ ಹೊಂದಿಕೊಂಡಿದ್ದಾರೆ. ಜೊತೆಗೆ ಇದರಿಂದ ಚಿಲ್ಲರೆ ಸಮಸ್ಯೆಯೂ ಉದ್ಭವಿಸುವುದಿಲ್ಲ ಎಂದು ವಿವರಿಸಿದರು.

ಮಾದಿಗರ ಸಂಘಟನೆಗಳ ನಿರ್ಧಾರ

ನಂತರ ನ್ಯಾಯಮೂರ್ತಿ ನಾಗಮೋಹನ್‌ದಾಸ್ ಆಯೋಗ ರಚಿಸಿ 40 ದಿನಗಳ ಗಡುವು ನೀಡಲಾಗಿತ್ತು. ಅವರಿಗೆ ಸ್ಪಷ್ಟತೆ ಇಲ್ಲ. ಆರೇಳು ತಿಂಗಳು ಕಳೆದರೂ ಒಳ ಮೀಸಲಾತಿ ಜಾರಿ ಆಗುತ್ತಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡವಳಿಕೆ ಹಾಗೂ ಆಡಳಿತದ ಬಗ್ಗೆ ಸಂಶಯವಿದೆ. ಯಾವಾಗಲೂ ಹಿಂದುಳಿದ ವರ್ಗದ ನಾಯಕ, ಹಿಂದುಳಿದ ವರ್ಗದ ರಕ್ಷಕ ಎನ್ನುತ್ತಾರೆ. ಮುಖ್ಯಮಂತ್ರಿಗಳನ್ನು ನಂಬಿದ್ದೆವು. ಕಾಂತರಾಜ್ ವರದಿ ಜಾರಿ ಮಾಡದೆ ಕಾಂಗ್ರೆಸ್ ಹೈಕಮಾಂಡ್ ಸೂಚನೆಗೆ ತಲೆ ತಗ್ಗಿಸಿದರು. ಹಿಂದುಳಿದ ವರ್ಗಕ್ಕೆ ನ್ಯಾಯ ಕೊಡಲು ಆಗಿಲ್ಲ ಎಂದರು. ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಮಾತನಾಡಿ, ರಾಜ್ಯ ಸರ್ಕಾರ ಅಸಹಕಾರ ಚಳವಳಿಗೆ ಅವಕಾಶ ಮಾಡಿಕೊಡದೆ ಆಗಸ್ಟ್ 16ರೊಳಗೆ ಒಳ ಮೀಸಲಾತಿ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ನಾಯಕರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ರಾಷ್ಟ್ರೀಯ ನಾಯಕ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನುಡಿದಂತೆ ನಡೆದಿದ್ದೇವೆ. ದಲಿತರಿಗೆ ಮೋಸ ಮಾಡಿಲ್ಲ ಎನ್ನುತ್ತಾರೆ. 2023ರ ಕರ್ನಾಟಕ ವಿಧಾನಸಭಾ ಚುನಾವಣೆ ವೇಳೆ ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದರು. ಮೊದಲನೇ ಸಂಪುಟ ಸಭೆಯಲ್ಲಿ ಒಪ್ಪಿಗೆ ಕೊಟ್ಟು ಜಾರಿ ಮಾಡುವುದಾಗಿ ತಿಳಿಸಿದ್ದರು. ಕುಂಟುನೆಪ ಹೇಳಿ ನ್ಯಾಯಮೂರ್ತಿ ನಾಗಮೋಹನದಾಸ್ ಸಮಿತಿ ರಚಿಸಿದರು. 40 ದಿನಗಳಲ್ಲಿ ವರದಿ ತರಿಸುವುದಾಗಿ ಹೇಳಿ, 6 ತಿಂಗಳಾಗಿವೆ. ಇದು ಸರ್ಕಾರ ಮಾಡುತ್ತಿರುವ ದ್ರೋಹ, ಮೋಸ ಎಂದರು.

ಮೈಸೂರಲ್ಲೂ ಕಂಡುಬಂದ ಯುಪಿಐ ಪಾವತಿ ಹೊರತಾದ ನಗದು ವ್ಯಾಪಾರ



ಜಿಎಸ್‌ಟಿ ಭೀತಿಯಿಂದ ಯುಪಿಐ ಪಾವತಿ ವಿಧಾನ ಕೈಬಿಟ್ಟ ದೇವರಾಜ ಮಾರುಕಟ್ಟೆ ಬಳಿಯ ಹಣ್ಣಿನ ವ್ಯಾಪಾರಿ. ಮತ್ತೊಂದು ಚಿತ್ರದಲ್ಲಿ ಹಣ್ಣಿನ ವ್ಯಾಪಾರಿಯೊಬ್ಬರು ಯುಪಿಐ ಪಾವತಿ ವಿಧಾನ ಮುಂದುವರೆಸಿರುವುದನ್ನು ಕಾಣಬಹುದು.


ಮೈಸೂರು,ಜು.22(ಪಿಎಂ)– ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ ತೆರಿಗೆ) ಭೀತಿಯಿಂದ ನಗದು ವ್ಯವಹಾರ ಮಾತ್ರ ಮಾಡಲು ಹಲವು ಸಣ್ಣ ವ್ಯಾಪಾರಿಗಳು ಮುಂದಾಗಿರುವುದು ಮೈಸೂರು ನಗರದಲ್ಲೂ ಕಂಡು ಬಂದಿದೆ. ಆದರೆ ಬಹುತೇಕರು ಯುಪಿಐ (ಆನ್‌ಲೈನ್ ಪೇಮೆಂಟ್) ಪಾವತಿ ವಿಧಾನ ಬಳಕೆ ಮುಂದುವರೆಸಿದ್ದಾರೆ.

ಜಿಎಸ್‌ಟಿ ತೆರಿಗೆ ವ್ಯಾಪ್ತಿಗೆ ಬಾರದ ಹಣ್ಣುಗಳ ವ್ಯಾಪಾರಿಗಳು ಯುಪಿಐ ಪಾವತಿಯ ಕ್ಯೂಆರ್ ಕೋಡ್ ಕೈಬಿಟ್ಟಿರುವುದು ಮೈಸೂರಿನ ದೇವರಾಜ ಮಾರುಕಟ್ಟೆಯಲ್ಲಿ ಕಂಡು ಬಂದಿತು. ಮಾರುಕಟ್ಟೆ ಬಳಿಯ ಹಣ್ಣಿನ ವ್ಯಾಪಾರಿ ಗೌರಮ್ಮ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ತೆರಿಗೆ ಕಟ್ಟಬೇಕಾಗುತ್ತದೆ ಎಂದು ಟಿವಿಯಲ್ಲಿ ಸುದ್ದಿ ಬಂದಿತ್ತು. ಹಾಗಾಗಿ ನಾನು ಹಾಗೂ ಇಲ್ಲಿ ವ್ಯಾಪಾರ ಮಾಡುವ ನನ್ನ ಸ್ನೇಹಿತರು ಸೇರಿದಂತೆ ಮೂವರು ಯುಪಿಐ ಪಾವತಿ ಕೈಬಿಟ್ಟಿದ್ದೇವೆ. ನಗದು ಮಾತ್ರ ಪಡೆದು ವ್ಯಾಪಾರ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಮತ್ತೊಬ್ಬ ಹಣ್ಣು ವ್ಯಾಪಾರಿ ಪ್ರಕಾಶ್ ಮಾತನಾಡಿ, ತೆರಿಗೆ ಬಗ್ಗೆ ನಾವು ಇಲ್ಲಿ ಸಾಕಷ್ಟು ಮಂದಿ ತಲೆಕೆಡಿಸಿಕೊಂಡಿಲ್ಲ. ಪ್ರಸ್ತುತದಲ್ಲಿ ಯುಪಿಐ ಪಾವತಿ ಅಗತ್ಯವಾಗಿದೆ. ಇದರಿಂದ ಚಿಲ್ಲರೆ ಸಮಸ್ಯೆ ಇರುವುದಿಲ್ಲ. ಸಾಲ ಸೌಲಭ್ಯಕ್ಕೂ ಯುಪಿಐನ ವಹಿವಾಟು ಪರಿಗಣಿಸಲಾಗುತ್ತದೆ. ಹಾಗಾಗಿ ನಾವು ಆನ್‌ಲೈನ್ ವಿಧಾನ ಮುಂದುವರೆಸಿದ್ದೇವೆ ಎಂದು ತಿಳಿಸಿದರು.

ನಗದು ವ್ಯವಹಾರಕ್ಕೂ ಜಿಎಸ್‌ಟಿ: ಸರಕು ಮತ್ತು ಸೇವಾ ತೆರಿಗೆ ಕಾಯ್ದೆ 2017ರ ಪ್ರಕರಣ 22ರ ಅನ್ವಯ ಸರಕು ಪೂರೈಕೆದಾರರ ಸಮಗ್ರ ವಹಿವಾಟು ಒಂದು ಹಣಕಾಸು ವರ್ಷದಲ್ಲಿ ನಗದು ರೂಪದಲ್ಲಾಗಲೀ, ಯುಪಿಐ, ಪಿಓಎಸ್ ಮೆಷಿನ್, ಬ್ಯಾಂಕ್ ಖಾತೆ ಹಾಗೂ ಇತರೆ ಯಾವುದೇ ವಿಧಾನಗಳಿಂದ 40 ಲಕ್ಷ ರೂ. ಮೀರಿದರೆ ಹಾಗೂ ಅದೇ ರೀತಿಯಲ್ಲಿ ಸೇವೆಗಳ ಪೂರೈಕೆದಾರರ ಸಮಗ್ರ ವಹಿವಾಟು 20 ಲಕ್ಷ ರೂ. ಮೀರಿದರೆ ಅಂತಹ ವರ್ತಕರು ಜಿಎಸ್‌ಟಿ ನೋಂದಣಿ ಪಡೆಯುವುದು ಕಡ್ಡಾಯ ಎಂದು ಇಲಾಖೆ ಪ್ರಕಟಣೆ ಹೊರಡಿಸಿದೆ.

ಹುಟ್ಟುಹಬ್ಬದ ಶುಭಾಶಯ....


ಮಂಗಳವಾರ ಹುಟ್ಟುಹಬ್ಬ ಆಚರಿಸಿಕೊಂಡ ಮೈಸೂರು ದೇವರಾಜ ಮಾರ್ಕೆಟ್ ಅಧ್ಯಕ್ಷರೂ ಹಾಗೂ ಮೈಸೂರು ನಗರ ಕಾಂಗ್ರೆಸ್ ಮುಖಂಡರಾದ ಕೆ. ದಿನೇಶ್ ಅವರನ್ನು ಉಮೇಶ್, ಶೇಖರ್, ಸಾಗರ್, ಗಣೇಶ್ ಇನ್ನಿತರರು ಅಭಿನಂದಿಸಿ, ಶುಭಾಶಯ ಕೋರಿದರು.

ಕಾಂಗ್ರೆಸ್ ಪಕ್ಷಕ್ಕೆ ಆಘಾತ: 199 ಕೋಟಿ ತೆರಿಗೆ ವಿನಾಯಿತಿಗೆ ಕೋರಿದ್ದ ಮನವಿ ತಿರಸ್ಕಾರ

ನವದೆಹಲಿ, ಜು.22– ಬೃಹತ್ ಮೊತ್ತದ ದೇಣಿಗೆಗಳ ಮೇಲಿನ ಆದಾಯ ತೆರಿಗೆ ವಿನಾಯಿತಿ ಕೋರಿದ್ದ ಕಾಂಗ್ರೆಸ್ ಮನವಿಯನ್ನು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ ತಿರಸ್ಕರಿಸಿದೆ.

ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ 199 ಕೋಟಿ ಮೌಲ್ಯದ ದೇಣಿಗೆಗಳ ಮೇಲಿನ ಆದಾಯ ತೆರಿಗೆ ವಿನಾಯಿತಿ ನೀಡಲು ನಿರಾಕರಿಸಿದೆ. 2017–18ನೇ ಸಾಲಿನ ತೆರಿಗೆಗೆ ವಿನಾಯಿತಿ ನೀಡಬೇಕೆಂದು ಕಾಂಗ್ರೆಸ್ ಮನವಿ ಸಲ್ಲಿಸಿತ್ತು.

2018–19 ರಿಂದ ಬಾಕಿ ಇರುವ ಪಕ್ಷದ ನಿಧಿಯಲ್ಲಿ 199 ಕೋಟಿ ರೂ.ಗಳವರೆಗಿನ ಆದಾಯ ತೆರಿಗೆ ಬೇಡಿಕೆಗೆ ಕಾಂಗ್ರೆಸ್ ಯಾವುದೇ ಪರಿಹಾರವನ್ನು ಪಡೆಯುವುದಿಲ್ಲ. ಐಟಿ ರಿಟರ್ನ್ಸ್‌ಗಳನ್ನು ತಡವಾಗಿ ಸಲ್ಲಿಸುವುದು ಮತ್ತು ನಗದು ದೇಣಿಗೆ ಮಿತಿಗಳನ್ನು ಉಲ್ಲಂಘಿಸಿದ್ದಕ್ಕಾಗಿ ವಿನಾಯಿತಿಗಾಗಿ ಪಕ್ಷದ ಹಕ್ಕನ್ನು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ ಅಥವಾ ಐಟಿಎಟಿ ವಜಾಗೊಳಿಸಿದೆ. 02.02.2019 ರಂದು ಸಲ್ಲಿಸಲಾದ ಮೌಲ್ಯಮಾಪಕರ ರಿಟರ್ನ್ ಅನ್ನು ಆಕ್ಷೇಪಾರ್ಹ ವಿನಾಯಿತಿಗೆ ಅರ್ಹಗೊಳಿಸಲು 'ಗಡುವು' ದಿನಾಂಕದೊಳಗೆ ಇಲ್ಲ ಎಂದು ಐಟಿಎಟಿ ಹೇಳಿದೆ.

ಶ್ರಾವಣ ಮಾಸದ ಶುಭ ವೇಳೆ; ಜು.26ರಂದು ಅನ್ನಸಂತರ್ಪಣೆ

ಮೈಸೂರು, ಜು.22(ಎಂಕೆ)– ಮಂಡ್ಯ ಜಿಲ್ಲೆಯ ಮೈಸೂರು ನಿವಾಸಿಗಳು, ಪುಣ್ಯ ಕೋಟಿ ಸೇವಾ ಟ್ರಸ್ಟ್ ಸಹಯೋಗದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಜು.26 ರಂದು ಅನ್ನಸಂತರ್ಪಣೆ ಏರ್ಪಡಿಸಲಾಗಿದ್ದು, ಮುದ್ದೆ, ಅವರೇಕಾಳು ಕೂಟ್, ಪಾಯಸ ಮತ್ತು ಅನ್ನ–ಸಾಂಬಾರ್ ಇರಲಿದೆ ಎಂದು ಟ್ರಸ್ಟ್ ಅಧ್ಯಕ್ಷ ಹನುಮಂತೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 12.30ಕ್ಕೆ ವಿಜಯನಗರದ ಶ್ರೀ ಯೋಗಾ ನರಸಿಂಹಸ್ವಾಮಿ ದೇವಸ್ಥಾನದ ಬಳಿ ಅನ್ನ ಸಂತರ್ಪಣೆ ನಡೆಯಲಿದೆ ಎಂದರು.

ಮದುವೆ ಸೇರಿದಂತೆ ಇನ್ನಿತರ ಸಮಾರಂಭಗಳಲ್ಲಿ ತಯಾರಿಸಿದ ಖಾದ್ಯಗಳನ್ನು ವ್ಯರ್ಥ ಮಾಡಲಾಗುತ್ತಿದೆ. ಹಲವು ವರ್ಷಗಳಿಂದ ಆಹಾರ ವ್ಯರ್ಥ ಮಾಡದಂತೆ ಜಾಗೃತಿ ಮೂಡಿಸುತ್ತಿದ್ದೇವೆ. ಅದರ ಭಾಗವಾಗಿಯೇ ಅನೇಕ ವರ್ಷಗಳಿಂದ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ರೂಪಿಸಲಾಗಿದೆ ಎಂದು ಮಾಹಿತಿ ನೀಡಿದರು. ಪಾಂಡವಪುರ ತಾಲೂಕಿನ ಎಂ.ಪುಟ್ಟಸ್ವಾಮಿ, ಕೆ.ಆರ್.ಪೇಟೆಯ ರಾಮಚಂದ್ರು, ಮಳವಳ್ಳಿಯ ಮಂಚೇಗೌಡ ಉಪಸ್ಥಿತರಿದ್ದರು.

ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಅವರಿಗೆ ಹುಟ್ಟುಹಬ್ಬದ ಶುಭಾಶಯ...



ಶ್ರೀ ಉರಿಲಿಂಗಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಅವರನ್ನು ಅಭಿನಂದಿಸಿ, ಹುಟ್ಟುಹಬ್ಬದ ಶುಭಾಶಯ ಕೋರಲಾಯಿತು. ಈ ವೇಳೆ ಕರ್ನಾಟಕ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್, ಉಪಾಧ್ಯಕ್ಷರು, ವಕೀಲರಾದ ಪುಟ್ಟರಸ, ರಾಜ್ಯ ನಾಯಕರ ಸಂಘದ ಅಧ್ಯಕ್ಷ ದ್ಯಾವಪ್ಪನಾಯಕ, ಜಿಲ್ಲಾ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ಅಧ್ಯಕ್ಷ ಮಹದೇವ್, ಜಿಲ್ಲಾ ಮಡಿವಾಳ ಸಮಾಜದ ಅಧ್ಯಕ್ಷ ಸತ್ಯನಾರಾಯಣ ಮತ್ತಿತರರು ಉಪಸ್ಥಿತರಿದ್ದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹುಟ್ಟುಹಬ್ಬದ ಹಿನ್ನೆಲೆ

ಲೈಂಗಿಕ ಲಿಂಗತ್ವ ಅಲ್ಪಸಂಖ್ಯಾತರಿಗೆ ಇನ್ಶೂರೆನ್ಸ್ ಬಾಂಡ್ ವಿತರಣೆ



ಮೈಸೂರು ನಗರ–ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಲೈಂಗಿಕ ಲಿಂಗತ್ವ ಅಲ್ಪಸಂಖ್ಯಾತರಿಗೆ ಇನ್ಶೂರೆನ್ಸ್ ಬಾಂಡ್ ವಿತರಿಸಲಾಯಿತು.

ಮೈಸೂರು, ಜು.22(ಎಂಕೆ)– ಮೈಸೂರು ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹುಟ್ಟುಹಬ್ಬದ ಅಂಗವಾಗಿ 50 ಮಂದಿ ಲೈಂಗಿಕ ಲಿಂಗತ್ವ ಅಲ್ಪಸಂಖ್ಯಾತರಿಗೆ ಇನ್ಶೂರೆನ್ಸ್ ಬಾಂಡ್ ವಿತರಣೆ ಮಾಡಲಾಯಿತು.

ನಗರದ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿದ ಬಳಿಕ ಲೈಂಗಿಕ ಲಿಂಗತ್ವ ಅಲ್ಪಸಂಖ್ಯಾತರ ಹೋರಾಟಗಾರರೂ ಆದ ಕೆಪಿಸಿಸಿ ಉಪಾಧ್ಯಕ್ಷರಾದ ಡಾ.ಅಕ್ಕಯ್ಯ ಪದ್ಮಶಾಲಿ, ಹೆಲ್ತ್ ಇನ್ಶೂರೆನ್ಸ್ ಬಾಂಡ್ ವಿತರಣೆ ಮಾಡಿದರು. ಬಳಿಕ ಮಾತನಾಡಿದ ಅವರು, 1970ರಲ್ಲಿ ಮುಂಬೈನಲ್ಲಿ ನಮ್ಮ ಸಮುದಾಯ(ಲಿಂಗತ್ವ ಅಲ್ಪಸಂಖ್ಯಾತರು) ಹೆಚ್ಚು ವಾಸಿಸುತ್ತಿದ್ದು, ಇಂದಿರಾ ಗಾಂಧಿಯವರನ್ನು ಭೇಟಿಯಾಗಿ ಕೆಲ ಸೌಲಭ್ಯಗಳನ್ನು ಕೋರಿದಾಗ ದೇಶಾದ್ಯಂತ ರೈಲು ಪ್ರಯಾಣ ಉಚಿತ ಎಂದು ಘೋಷಿಸಿದ್ದರು. ಇಂದು ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳನ್ನೂ ನಮ್ಮ ಸಮುದಾಯಕ್ಕೆ ವಿಸ್ತರಿಸಿ ಸಹಕರಿಸಿದೆ. ಅದೇ ರೀತಿ ಮೈಸೂರಿನಲ್ಲಿ ಹೆಲ್ತ್ ಇನ್ಶೂರೆನ್ಸ್ ನೀಡುವ ಮೂಲಕ ಹೊಸ ಭರವಸೆಗೆ ಕಾರಣರಾಗಿದ್ದಾರೆ ಎಂದು ಸ್ಮರಿಸಿದರು.

ಬೇಡವಾದ ಮಕ್ಕಳನ್ನು ಕಾಂಗ್ರೆಸ್ ಸ್ವೀಕರಿಸಿದೆ: ನಾವು ನಮ್ಮ ಅಪ್ಪ–ಅಮ್ಮನಿಗೆ, ಅಕ್ಕ–ಪಕ್ಕದವರಿಗೆ, ಶಿಕ್ಷಣ ವ್ಯವಸ್ಥೆಗೆ, ಸಮಾಜಕ್ಕೆ, ವೈದ್ಯಕೀಯ ಕ್ಷೇತ್ರಕ್ಕೆ, ಸಂಸ್ಕೃತಿಗೆ ಬೇಡವಾದ ಮಕ್ಕಳು. ಲೋಕಕ್ಕೆ, ಪ್ರಕೃತಿಗೆ ಸವಾಲಾಗಿರುವ ನಮ್ಮನ್ನು ಎಲ್ಲಾ ಕಡೆ ಬೇಡ ಎನ್ನುವಾಗ ಕಾಂಗ್ರೆಸ್ ನೀವು ಬೇಕು ಎಂದು ನಮಗೆ ಅವಕಾಶಗಳನ್ನು ನೀಡುತ್ತಿದೆ.

ಪುಣ್ಯದ ಕೆಲಸ: ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್ ಮಾತನಾಡಿ, ಲೈಂಗಿಕ ಲಿಂಗತ್ವ ಅಲ್ಪಸಂಖ್ಯಾತರಿಗೆ ಇನ್ಶೂರೆನ್ಸ್ ಬಾಂಡ್ ವಿತರಣೆ ಮಾಡುತ್ತಿರುವುದು ಕರ್ನಾಟಕ ರಾಜಕೀಯ ಇತಿಹಾಸದಲ್ಲಿಯೇ ಅವಿಸ್ಮರಣೀಯ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರ ಹುಟ್ಟುಹಬ್ಬದ ಅಂಗವಾಗಿ ಕೇಕ್ ಕಟ್ ಮಾಡಿ ನಾವು ಸಂಭ್ರಮಿಸುತ್ತಿಲ್ಲ. ಬದಲಿಗೆ ಪುಣ್ಯದ ಕೆಲಸವನ್ನು ಮಾಡುತ್ತಿದ್ದೇವೆ ಎಂದು ಮೆಚ್ಚುಗೆ ಮಾತುಗಳನ್ನಾಡಿದರು.

ಮೈಸೂರು ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯಿಂದ ಇನ್ಶೂರೆನ್ಸ್ ಮಾಡಿಸಿದ್ದು, ಮೊದಲ ಕಂತಿನ ಹಣವನ್ನು ಕಟ್ಟಿದ್ದು, ಮುಂದಿನ ಕಂತುಗಳನ್ನು ಕಟ್ಟಿಕೊಂಡು ಹೋಗಬೇಕು. ಅಪಘಾತಗಳು ಸಂಭವಿಸಿದಾಗ 1 ಲಕ್ಷ ರೂ.ಹಣವನ್ನು ಇನ್ಶೂರೆನ್ಸ್ ಕಂಪನಿ ಪರಿಹಾರವಾಗಿ ನೀಡಲಿದೆ. ಇದು ಕಾಂಗ್ರೆಸ್‌ನ ಮಾನವೀಯತೆಯ ದೊಡ್ಡ ಕೆಲಸವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಮೈಸೂರು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ರವಿ ಮಾವಿನಹಳ್ಳಿ, ನಗರ ಪ್ರಚಾರ ಸಮಿತಿ ಅಧ್ಯಕ್ಷ ರಘುರಾಜೇ ಅರಸ್, ಡಿಸಿಸಿ ಲೈಂಗಿಕ ಲಿಂಗತ್ವ ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷರಾದ ಪ್ರಣತಿ ಪ್ರಕಾಶ್, ಪದಾಧಿಕಾರಿಗಳಾದ ಈಶ್ವರ್ ಚಕ್ಕಡಿ, ಶಿವಪ್ರಸಾದ್, ನಾಗೇಶ್, ಮಾದೇವ್, ಪ್ರವೀಣ್, ಗಿರೀಶ್ ಇದ್ದರು.

ರಾಜಕೀಯ ಪ್ರಾತಿನಿಧ್ಯತೆಗೆ ಆಗ್ರಹ...

“ಲಿಂಗತ್ವದ ಪರಿಮಿತಿ ದಾಟಿದರೆ, ನಮ್ಮದು ಬಹುದೊಡ್ಡ ವೈವಿಧ್ಯತೆ ಸಮುದಾಯ. ಇಡೀ ದೇಶದಲ್ಲಿಯೇ ಶೇ.10ರಷ್ಟು ಲೈಂಗಿಕ ಅಲ್ಪಸಂಖ್ಯಾತರಿದ್ದು, ಅಂದರೆ ದೇಶದ 140 ಕೋಟಿ ಜನಸಂಖ್ಯೆಯಲ್ಲಿ 14 ಕೋಟಿ ನಾವಿದ್ದೇವೆ. ಸಂವಿಧಾನಾತ್ಮಕವಾಗಿ ಲೈಂಗಿಕ ಅಲ್ಪಸಂಖ್ಯಾತರಿಗೆ ಕಾಂಗ್ರೆಸ್ ಪಕ್ಷದ ಕಡೆಯಿಂದಲೇ ರಾಜಕೀಯ ಪ್ರಾತಿನಿಧ್ಯತೆ ಸಿಗಬೇಕು. ಶಾಸನ ಸಭೆಗಳಲ್ಲಿ ಶೇ.1ರಷ್ಟು ಆದ್ಯತೆ ನೀಡಬೇಕು. **–ಡಾ.ಅಕ್ಕಯ್ಯ ಪದ್ಮಶಾಲಿ, ಕೆಪಿಸಿಸಿ ಉಪಾಧ್ಯಕ್ಷರು.**

ಗಬ್ಬರ್‌ಸಿಂಗ್ ಅಬ್ಬರಿಸುವಂತೆ ಕೇಂದ್ರ ಸರ್ಕಾರ ವರ್ತಕರಿಗೆ ಜಿಎಸ್‌ಟಿ ವಿಧಿಸಿದೆ

ಕಾಂಗ್ರೆಸ್ ಪ್ರತಿಭಟನೆ ವೇಳೆ ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಟೀಕೆ



ಮುಡಾ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ತೀರ್ಪು ಸ್ವಾಗತಿಸಿದ ಕಾಂಗ್ರೆಸ್ ಕಾರ್ಯಕರ್ತರು ಮೈಸೂರಿನ ಲೋಕಾಯುಕ್ತ ಕಚೇರಿ ಮುಂದೆ ಸಿಹಿ ಹಂಚಿ ಸಂಭ್ರಮಿಸಿದರು.

ಮೈಸೂರು, ಜು.22(ಬಿಎಲ್‌ಯು)– ಶೋಲೆ ಸಿನಿಮಾದ ಗಬ್ಬರ್‌ಸಿಂಗ್ ಅಬ್ಬರಿಸುವಂತೆ ಕೇಂದ್ರ ಸರ್ಕಾರ ವರ್ತಕರ ಮೇಲೆ ದುಬಾರಿ ಜಿಎಸ್‌ಟಿ ವಿಧಿಸಿದೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಟೀಕಿಸಿದ್ದಾರೆ.

ಸಣ್ಣ–ಪುಟ್ಟ ವರ್ತಕರ ಜಿಎಸ್‌ಟಿ ವಿಧಿಸಿರುವ ಕೇಂದ್ರ ಸರ್ಕಾರದ ವಿರುದ್ಧ ಮೈಸೂರಿನ ವಾಣಿಜ್ಯ ತೆರಿಗೆ ಇಲಾಖೆ ಕಚೇರಿ ಮುಂದೆ ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಜಿಎಸ್‌ಟಿ ಸೆಕ್ಷನ್ 22 ಪ್ರಕಾರ ಜಿಎಸ್‌ಟಿ ಕೌನ್ಸಿಲ್ ಕೇಂದ್ರ ಸರ್ಕಾರದ ಅಧೀನದಲ್ಲಿದೆ. ಯಾವುದೇ ರೀತಿಯ ಹೊಸ ತೆರಿಗೆ ವಿಧಿಸುವ, ವಿನಾಯಿತಿ ನೀಡುವ ಅಧಿಕಾರ ಜಿಎಸ್‌ಟಿ ಕೌನ್ಸಿಲ್‌ಗೆ ಇದೆ. ಇದರಿಂದ ರಾಜ್ಯದ ವರ್ತಕರಿಗೆ ಜಿಎಸ್‌ಟಿ ತೆರಿಗೆ ವಿಧಿಸಿರುವುದರಲ್ಲಿ ರಾಜ್ಯ ಸರ್ಕಾರದ ಪಾತ್ರವಿಲ್ಲ ಎಂದು ಲಕ್ಷ್ಮಣ್ ಸ್ಪಷ್ಟಪಡಿಸಿದರು.

ಹೋಟೆಲ್‌ನಲ್ಲಿ ಒಂದು ಇಡ್ಲಿ ತಿಂದರೆ ಆರು ವಿವಿಧ ರೀತಿಯ ತೆರಿಗೆಯನ್ನು ಗ್ರಾಹಕ ತೆರಬೇಕಾಗಿದೆ. ಒಂದು ವಸ್ತು ಗ್ರಾಹಕನ ಕೈಗೆ ಸೇರುವ ವೇಳೆಗೆ ಆರು ವಿವಿಧ ರೀತಿಯ ತೆರಿಗೆಯ ಹೊರೆಯನ್ನು ಗ್ರಾಹಕ ಹೊರಬೇಕಾಗಿದೆ. ಈ ಮೂಲಕ ಕೇಂದ್ರ ಸರ್ಕಾರ ತೆರಿಗೆ ಮೂಲಕ ಜನರ ರಕ್ತ ಹೀರುತ್ತಿದೆ ಎಂದು ದೂರಿದರು.

ಕೇಂದ್ರ ಸರ್ಕಾರ ಜನವಿರೋಧಿ ಇಂತಹ ಹಲವು ಕ್ರಮ ಕೈಗೊಂಡಿದ್ದರೂ ರಾಜ್ಯ ಸರ್ಕಾರದತ್ತ ಬೊಟ್ಟು ಮಾಡಿ ತೋರಿಸುತ್ತದೆ. ಜಿಎಸ್‌ಟಿ ಸಿದ್ದರಾಮಯ್ಯನವರ ಟ್ಯಾಕ್ಸ್ ಎಂದು ಗೂಬೆ ಕೂರಿಸುತ್ತಿದ್ದಾರೆ. ಈ ಮೂಲಕ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿರುವ ಜಿಎಸ್‌ಟಿ ಜಂಟಿ ಆಯುಕ್ತೆ ಮೀರಾ ಪಂಡಿತ್ ಅವರು ಜಿಎಸ್‌ಟಿ ತೆರಿಗೆ ಕುರಿತಂತೆ ರಾಜ್ಯದ ಜನರಿಗಿರುವ ಸಂಶಯಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸ್ಪಷ್ಟನೆ ನೀಡಬೇಕೆಂದು ಆಗ್ರಹಿಸಿದರು. ಪ್ರತಿಭಟನೆ ವೇಳೆ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ವಿಜಯಕುಮಾರ್, ಪಕ್ಷದ ಸೋಷಿಯಲ್ ಮೀಡಿಯಾ ಘಟಕದ ಅಧ್ಯಕ್ಷ ಹೇಮಂತ್‌ಕುಮಾರ್, ಮಾಧ್ಯಮ ವಕ್ತಾರ ಮಹೇಶ್ ಹಲವರು ಹಾಜರಿದ್ದರು.

ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ವೇದನೆ ಹೇಳತೀರದು....

ಮುಡಾ ಪ್ರಕರಣದಲ್ಲಿ ಬಿಜೆಪಿ ಮತ್ತು ಜೆಡಿಎಸ್ ನಾಯಕರ ಷಡ್ಯಂತ್ರದಿಂದ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರು ಮಾನಸಿಕ ವೇದನೆ ಅನುಭವಿಸಿದರು ಎಂದು ಲಕ್ಷ್ಮಣ್ ತೀವ್ರ ವಿಷಾದ ವ್ಯಕ್ತಪಡಿಸಿದರು.

ಈ ಪ್ರಕರಣದಲ್ಲಿ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರಿಗೆ ನೀಡಿದ ಸಮನ್ಸ್ ರದ್ದುಪಡಿಸಿದ ಸುಪ್ರೀಂಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ನಗರದ ದಿವಾನ್ಸ್ ರಸ್ತೆಯ ಲೋಕಾಯುಕ್ತರ ಕಚೇರಿ ಮುಂದೆ ಕಾಂಗ್ರೆಸ್ ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಿಸುತ್ತಿದ್ದ ವೇಳೆ ಅವರು ಪ್ರತಿಕ್ರಿಯೆ ನೀಡಿದರು.

ಕಳೆದ ಒಂದು ವರ್ಷದಿಂದ ಸಿದ್ದರಾಮಯ್ಯರ ಕುಟುಂಬವನ್ನು ಟಾರ್ಗೆಟ್ ಮಾಡಿ, ಆಧಾರರಹಿತ ಆರೋಪ ಮಾಡಿದ್ದರು. ಈ ಮೂಲಕ ಸ್ವಚ್ಛ ರಾಜಕಾರಣಿ ಸಿದ್ದರಾಮಯ್ಯ ಅವರ ಮುಖಕ್ಕೆ ಮಸಿ ಬಳಿಯುವ ಪ್ರಯತ್ನವನ್ನೂ ಮಾಡಿದ್ದರು.

ಹಣ ಕೊಟ್ಟು, ಒಬ್ಬ ಸೈಡ್ ಆ್ಯಕ್ಟರ್ ಮುಂದಿಟ್ಟುಕೊಂಡು ನ್ಯಾಯಾಲಯದಲ್ಲಿ ದಾವೆ ಹೂಡಿಸಿದ್ದರು. ಆದರೆ ಈ ಷಡ್ಯಂತ್ರದಲ್ಲಿ ವಿರೋಧ ಪಕ್ಷಗಳು ಯಶಸ್ವಿಯಾಗಲಿಲ್ಲ. ಸಿದ್ದರಾಮಯ್ಯ ಅವರ ಕುಟುಂಬ ಯಾವುದೇ ರೀತಿಯ ಕಾನೂನು ವಿರೋಧಿ ಕೃತ್ಯ ಎಸಗಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಇದರಿಂದ ಸಿದ್ದರಾಮಯ್ಯ ಅವರೇ ಹೇಳಿದಂತೆ 'ಸತ್ಯಮೇವ ಜಯತೆ' ಎಂದರು. ಇಡಿಯನ್ನು ಸ್ವಾರ್ಥಕ್ಕಾಗಿ ಬಳಸಿಕೊಂಡ ಕೇಂದ್ರ ಸರ್ಕಾರಕ್ಕೆ ಸುಪ್ರೀಂಕೋರ್ಟ್ ತಪರಾಕಿ ಹಾಕಿದೆ. ಇನ್ನಾದರೂ ಕೇಂದ್ರ ಸರ್ಕಾರ ಸ್ವಾಯತ್ತ ಸಂಸ್ಥೆಗಳನ್ನು ಸ್ವಾರ್ಥಕ್ಕೆ ಬಳಸಿಕೊಳ್ಳುವುದನ್ನು ನಿಲ್ಲಿಸಲಿ ಎಂದು ಲಕ್ಷ್ಮಣ್ ಸಲಹೆ ನೀಡಿದರು.

ಜು.27ರಂದು ವೈದ್ಯಕೀಯ ಆರೋಗ್ಯ ಉಚಿತ ತಪಾಸಣಾ ಶಿಬಿರ

ಮೈಸೂರು, ಜು.22– ಮೈಸೂರಿನ ಅಮರ್‌ದೀಪ್ ಗ್ಯಾಸ್ ಸರ್ವಿಸ್ ಮತ್ತು ಪಟೇಲ್ಸ್ ಮಾರ್ಟ್ ವತಿಯಿಂದ ಜು.27 ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 1.30ಗಂಟೆವರೆಗೆ ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿರುವ ಮಹಾಕಾಳಿ ಕಾಂಪ್ಲೆಕ್ಸ್‌ನಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಉಚಿತ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ನೇತ್ರ ತಪಾಸಣೆ, ದಂತ ತಪಾಸಣೆ, ಶುಗರ್, ರಕ್ತದೊತ್ತಡ, ಮೂಳೆ ಸಾಂದ್ರತೆ, ನರರೋಗ ತಪಾಸಣೆ ಮತ್ತು ಹೆಚ್‌ಬಿ ಪರೀಕ್ಷೆ ಸೇರಿದಂತೆ ಇನ್ನಿತರ ಪರೀಕ್ಷೆಗಳನ್ನು ಉಚಿತವಾಗಿ ಮಾಡಿ, ಎಲ್ಲರಿಗೂ ಔಷಧಿಗಳನ್ನು ವಿತರಿಸಲಾಗುವುದು ಎಂದು ಅಮರ್‌ದೀಪ್ ಗ್ಯಾಸ್ ಸರ್ವಿಸ್ ಮತ್ತು ಪಟೇಲ್ ಮಾರ್ಟ್ ಮುಖ್ಯಸ್ಥ ಮಹುಲ್ ಜೆ.ಪಟೇಲ್ ತಿಳಿಸಿದ್ದಾರೆ. ವಿವರಗಳಿಗಾಗಿ ಮೊ.9886436005(ನಿರ್ಮಲ್.ಜೆ.ಶಾ), 7204444566 (ಅಮರ್‌ದೀಪ್ ಗ್ಯಾಸ್) ಮೂಲಕ ಸಂಪರ್ಕ ಪಡೆಯಲು ಕೋರಲಾಗಿದೆ.

ನಾಳೆ ಯೋಗನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಭೀಮನ ಅಮಾವಾಸ್ಯೆ ವಿಶೇಷ ಪೂಜೆ

ಮೈಸೂರು, ಜು.22– ಮೈಸೂರಿನ ವಿಜಯನಗರದಲ್ಲಿರುವ ಶ್ರೀ ಯೋಗ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಜು.24ರಂದು ಬೆಳಗ್ಗೆಯಿಂದ ಭೀಮನ ಅಮಾವಾಸ್ಯೆ ವಿಶೇಷ ಪೂಜೆ ಏರ್ಪಡಿಸಲಾಗಿದೆ ಎಂದು ದೇವಸ್ಥಾನದ ಪ್ರಕಟಣೆ ತಿಳಿಸಿದೆ. ಅಂದು ಸಂಜೆ 7ಗಂಟೆಗೆ ಅಭಿಷೇಕ ನಡೆಯಲಿದೆ ರಾತ್ರಿ 8ಗಂಟೆಗೆ ಪ್ರಸಾದ ವಿನಿಯೋಗವಿರಲಿದೆ. ಈ ಬಗ್ಗೆ ಮಾಹಿತಿಗಾಗಿ ದೇವಸ್ಥಾನದ ಆಡಳಿತಾಧಿಕಾರಿ ಎನ್.ಶ್ರೀನಿವಾಸನ್ ಅವರನ್ನು ಮೊ.9900400000 ಮೂಲಕ ಸಂಪರ್ಕಿಸಲು ಕೋರಲಾಗಿದೆ.

ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು: ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಜು.24 ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಕಬಡ್ಡಿ ಪಂದ್ಯಾವಳಿಯಲ್ಲಿ ಮಂಡ್ಯದ ಮಾರೆಹಳ್ಳಿ ತಂಡಕ್ಕೆ ಪ್ರಥಮ ಬಹುಮಾನ



ಕಬಡ್ಡಿ ಪಂದ್ಯಾವಳಿಯಲ್ಲಿ ವಿಜೇತ ತಂಡಕ್ಕೆ ಬಹುಮಾನ ವಿತರಣೆ ಮಾಡಲಾಯಿತು.

ಮೈಸೂರು, ಜು.22(ಎಂಕೆ)– ಮೈಸೂರಿನ ಹೆಬ್ಬಾಳ್ ಸೂರ್ಯಬೇಕರಿ ಸರ್ಕಲ್ ಸಮೀಪದ ಕಾಳಿಕಾಂಬ ದೇವಸ್ಥಾನದ ಆವರಣದಲ್ಲಿ ಶ್ರೀ ಚಾಮುಂಡೇಶ್ವರಿ ಹಬ್ಬದ ಪ್ರಯುಕ್ತ ಶ್ರೀ ಚಾಮುಂಡೇಶ್ವರಿ ಯುವಕರ ಬಳಗದ ವತಿಯಿಂದ ಆಯೋಜಿಸಿದ್ದ ಮೈಸೂರು ಮತ್ತು ಮಂಡ್ಯ ವಿಭಾಗದ ಮಟ್ಟದ ಕಬಡ್ಡಿ ಪಂದ್ಯಾವಳಿಯಲ್ಲಿ ಮಂಡ್ಯದ ಮಾರೆಹಳ್ಳಿ ತಂಡ ಪ್ರಥಮ ಸ್ಥಾನ ಬಹುಮಾನ ಗೆದ್ದರೆ, ಮೈಸೂರಿನ ಸಿದ್ದಲಿಂಗಪುರ ತಂಡ ದ್ವಿತೀಯ ಸ್ಥಾನ ಪಡೆದುಕೊಂಡಿತು.

ಕಬಡ್ಡಿ ಪಂದ್ಯಾವಳಿಯನ್ನು ಶಾಸಕ ಜಿ.ಡಿ.ಹರೀಶ್‌ಗೌಡ ಉದ್ಘಾಟಿಸಿದರೆ, ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಕಬಡ್ಡಿ ಪಟುಗಳನ್ನು ಅಭಿನಂದಿಸಿ, ಪ್ರೋತ್ಸಾಹಿಸಿದರು. ನಟ ವಿನೋದ್ ಪ್ರಭಾಕರ್ ವಿಶೇಷ ಅತಿಥಿಯಾಗಿ ಭಾಗವಹಿಸಿದ್ದರು. ಫೈನಲ್ ಹಣಾಹಣಿಯಲ್ಲಿ ವಿಜೇತರಾದ ತಂಡಕ್ಕೆ ಬಿಜೆಪಿ ಮುಖಂಡ ಎಂ.ಜೆ.ಕಿರಣ್‌ಗೌಡ, ಬಸವಮಾರ್ಗ ಫೌಂಡೇಶನ್‌ನ ಬಸವರಾಜು ಆಕರ್ಷಕ ಟ್ರೋಫಿ ಹಾಗೂ ನಗದು ಬಹುಮಾನ ವಿತರಿಸಿದರು. ನಗರಪಾಲಿಕೆ ಮಾಜಿ ಸದಸ್ಯ ಕೆ.ವಿ.ಶ್ರೀಧರ್, ಮುಖಂಡರಾದ ಮದನ್ ಮಹದೇಶ್, ಕೇಬಲ್ ಮಹೇಶ್, ಮಧು, ರಘು, ವಿಜಯ್ ಕುಮಾರ್, ಸುರೇಶ್ ದೇವೇಂದ್ರ, ವಿನಯ್‌ಕುಮಾರ್, ಮದನ್, ಗಿರೀಶ್, ರವಿ, ರಾಮಚಂದ್ರ ಮತ್ತಿತರರಿದ್ದರು.

ಕೈಗಾರಿಕಾ ಟೌನ್‌ಶಿಪ್‌ಗೆ ಕೃಷಿ ಭೂಮಿ ಸ್ವಾಧೀನಕ್ಕೆ ವಿರೋಧ

ಮೈಸೂರಿನ ಕೆಐಎಡಿಬಿ ಕಚೇರಿ ಮುಂದೆ ರೈತರ ಪ್ರತಿಭಟನೆ



ಮೈಸೂರಿನ ಕೆಆರ್‌ಎಸ್ ರಸ್ತೆಯ ಕೆಐಎಡಿಬಿ ಕಚೇರಿ ಮುಂದೆ ರೈತರು ಮಂಗಳವಾರ ಪ್ರತಿಭಟನೆ ನಡೆಸಿದರು.

ಮೈಸೂರು, ಜು.22(ಬಿಎಲ್‌ಯು)– ಕೈಗಾರಿಕಾ ಟೌನ್‌ಶಿಪ್ ನಿರ್ಮಾಣಕ್ಕೆ ಕೃಷಿ ಭೂಮಿ ಹಾಗೂ ಸರ್ಕಾರದ ಗೋಮಾಳ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲು ಮುಂದಾಗಿರುವ ರಾಜ್ಯ ಸರ್ಕಾರದ ನಿರ್ಧಾರ ಖಂಡಿಸಿ, ರೈತರು ಮಂಗಳವಾರ ಮೈಸೂರಿನ ಕೆಆರ್‌ಎಸ್ ರಸ್ತೆಯ ಕೆಐಎಡಿಬಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ರೈತ ಮುಖಂಡರಾದ ನಂಜುಂಡೇಗೌಡ ಹಾಗೂ ಪುಟ್ಟಮಾಧು ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಶ್ರೀರಂಗಪಟ್ಟಣ ತಾಲೂಕಿನ ಬೀಚನಕುಪ್ಪೆ ಬಳಿ ಕೈಗಾರಿಕಾ ಟೌನ್‌ಶಿಪ್ ನಿರ್ಮಾಣ ಮಾಡಲು 48 ಎಕರೆ ಕೃಷಿ ಭೂಮಿ ಹಾಗೂ ಸುಮಾರು 70 ಎಕರೆ ಸರ್ಕಾರಿ ಜಮೀನನ್ನು ಕೆಐಎಡಿಬಿ ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಆರಂಭಿಸಿದೆ ಎಂದು ಪ್ರತಿಭಟನಾಕಾರರು ದೂರಿದರು.

ನಾವು ಕೃಷಿಯನ್ನೆ ಮೂಲ ವೃತ್ತಿ ಮಾಡಿಕೊಂಡು ಜೀವನ ಸಾಗಿಸುತ್ತಿದ್ದೇವೆ. ಕೃಷಿ ಇಲ್ಲದಿದ್ದರೆ ನಾವು ಬೀದಿಗೆ ಬರುತ್ತೇವೆ. ನಮ್ಮ ಕಷ್ಟದ ಪರಿಸ್ಥಿತಿ ಹೀಗಿರುವಾಗ ಸರ್ಕಾರ ಟೌನ್‌ಶಿಪ್ ಮಾಡಲು ಕೃಷಿ ಹಾಗೂ ಸರ್ಕಾರಿ ಭೂಮಿ ಸ್ವಾಧೀನ ಮಾಡಿಕೊಳ್ಳಲು ಮುಂದಾಗಿದೆ.

ಸಾರ್ವಜನಿಕ ಉದ್ದೇಶವಾಗಿದ್ದರೆ ಭೂಮಿ ನೀಡಬಹುದಿತ್ತು. ಆದರೆ ಇಲ್ಲಿ ಬಂಡವಾಳಶಾಹಿಗಳು ತಾವು ಪ್ರಾಬಲ್ಯ ಮೆರೆಯಲು ಕೃಷಿ ಭೂಮಿ ಮೇಲೆ ಕಣ್ಣಿಟ್ಟಿದ್ದು, ಸರ್ಕಾರ ಇದಕ್ಕೆ ಬೇಕಾದ ಭೂಮಿ ಹಾಗೂ ಸವಲತ್ತು ನೀಡಲು ತುದಿಗಾಲಲ್ಲಿ ನಿಂತಿದೆ ಎಂದು ದೂರಿದರು.

ಸರ್ಕಾರ ಕೂಡಲೇ ಭೂಸ್ವಾಧೀನ ಪ್ರಕ್ರಿಯೆ ಕೈಬಿಡಬೇಕು. ಇಲ್ಲದಿದ್ದರೆ ಮತ್ತೆ ಜುಲೈ 24 ಮತ್ತು 25ರಂದು ಕೆಐಎಡಿಬಿ ಕಚೇರಿ ಮುಂದೆ ಹೋರಾಟ ರೂಪಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕೆಐಎಡಿಬಿ ವಿಶೇಷ ಭೂ ಸ್ವಾಧೀನಾಧಿಕಾರಿ ವೆಂಕಟರಾಜು ಅವರು ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿದರು. ಭೂಮಿ ಕೊಡಲು ಕೆಲವು ರೈತರು ಒಪ್ಪಿದ್ದಾರೆ. ಮತ್ತೆ ಕೆಲವರು ವಿರೋಧ ಮಾಡುತ್ತಿದ್ದಾರೆ. ಈ ವಿಚಾರವನ್ನು ಸರ್ಕಾರದ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು.

ದೇಶ - ವಿದೇಶ


ಮರಣದಂಡನೆ ರದ್ದಾಗಿದೆ; ನಿಮಿಷ ಪ್ರಿಯಾ ಬಿಡುಗಡೆಯಾಗಲಿದ್ದಾರೆ



ಸನಾ: ಭಾರತ ಮತ್ತು ಯೆಮೆನ್‌ನ ಅಧಿಕಾರಿಗಳ ಹಗಲಿರುಳು ಪರಿಶ್ರಮದ ಫಲವಾಗಿ ಕೇರಳದ ಶುಶ್ರೂಷಕಿ ನಿಮಿಷಾ ಪ್ರಿಯಾ ಅವರಿಗೆ ವಿಧಿಸಿದ್ದ ಮರಣದಂಡನೆ ಶಿಕ್ಷೆಯನ್ನು ಯೆಮೆನ್ ಸರ್ಕಾರ ರದ್ದುಗೊಳಿಸಿದೆ ಎಂದು ಗ್ಲೋಬಲ್ ಪೀಸ್ ಇನ್‌ಷಿಯೇಟಿವ್ ಸಂಸ್ಥಾಪಕ ಮತ್ತು ಧಾರ್ಮಿಕ ಗುರು ಡಾ.ಕೆ.ಎ.ಪೌಲ್ ಹೇಳಿದ್ದಾರೆ.

ಈ ಕುರಿತು ವಿಡಿಯೊ ಸಂದೇಶ ಬಿಡುಗಡೆ ಮಾಡಿರುವ ಅವರು, ಯೆಮೆನ್ ನಾಯಕರ ಪರಿಣಾಮಕಾರಿ ಮತ್ತು ಪ್ರಾರ್ಥನಾ ಪೂರ್ವಕ ಪ್ರಯತ್ನದಿಂದಾಗಿ ಇದು ಸಾಧ್ಯವಾಗಿದೆ. ನಿಮಿಷ ಅವರ ಪ್ರಾಣ ಉಳಿಸಲು ಕಳೆದ 10 ದಿನಗಳಲ್ಲಿ ನಾಯಕರು ಪಟ್ಟ ಶ್ರಮ ಅಷ್ಟಿಷ್ಟಲ್ಲ. ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡ ಎಲ್ಲಾ ನಾಯಕರಿಗೂ ಧನ್ಯವಾದಗಳು. ಇದರಲ್ಲಿ ಭಾರತದ ಪ್ರಯತ್ನವೂ ಸಾಕಷ್ಟಿದೆ. ನಿಮಿಷ ಅವರನ್ನು ಕಾನೂನುಬದ್ಧ, ಸುರಕ್ಷಿತವಾಗಿ ಕರೆದೊಯ್ಯಬಹುದು ಎಂದಿದ್ದಾರೆ. ಸನಾ ಜೈಲಿನಲ್ಲಿರುವ ನಿಮಿಷ ಅವರನ್ನು ಒಮಾನ್, ಜೆಡ್ಡಾ, ಈಜಿಪ್ಟ್, ಇರಾನ್ ಅಥವಾ ಟರ್ಕಿಗೆ ಕರೆದೊಯ್ಯಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಿರುವ ಭಾರತಕ್ಕೆ ಸಹಕಾರ ನೀಡಲಾಗುವುದು ಎಂದು ಡಾ.ಪೌಲ್ ತಿಳಿಸಿದ್ದಾರೆ.

ಕುಟುಂಬದ 8 ಸದಸ್ಯರನ್ನು ಕೊಲ್ಲಲು ಗೋಧಿಹಿಟ್ಟಿಗೆ ವಿಷ ಬೆರೆಸಿದ್ದ ಮಹಿಳೆ



ಕೌಶಾಂಬಿ: ಮಹಿಳೆಯೊಬ್ಬಳು ತನ್ನ ಕುಟುಂಬದ 8 ಸದಸ್ಯರನ್ನು ಕೊಲ್ಲಲು ತಂದೆ ಜತೆಗೆ ಸೇರಿ ಗೋಧಿ ಹಿಟ್ಟಿನಲ್ಲಿ ವಿಷ (ಸಲ್ಫೋಸ್) ಬೆರೆಸಿದ್ದ ಘಟನೆ ಉತ್ತರಪ್ರದೇಶದ ಕೌಶಾಂಬಿಯಲ್ಲಿ ನಡೆದಿದೆ. ಈ ಸಂಚು ಸಕಾಲದಲ್ಲಿ ಬಯಲಾಗಿದ್ದು, ಎಲ್ಲರ ಜೀವ ಉಳಿದಿವೆ. ಮಹಿಳೆ ಮತ್ತೆ ಆಕೆಯ ತಂದೆಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬ್ರಿಜೇಶ್‌ಕುಮಾರ್ ಅವರ ಪತ್ನಿ ಮಾಲತಿದೇವಿ ನಿರಂತರ ನಡೆಯುತ್ತಿದ್ದ ಕೌಟುಂಬಿಕ ಕಲಹದಿಂದಾಗಿ ತನ್ನ ತಂದೆ ಜತೆ ಸೇರಿ ಯೋಜನೆ ರೂಪಿಸಿದ್ದಳು. ಕುಟುಂಬದಲ್ಲಿ ನಡೆಯುತ್ತಿದ್ದ ಜಗಳದಿಂದ ಅಸಮಾಧಾನಗೊಂಡು ಇಡೀ ಕುಟುಂಬವನ್ನೇ ನಿರ್ಮೂಲನೆ ಮಾಡಲು ಮುಂದಾಗಿದ್ದಳು. ಕುಟುಂಬದ ಮಂಜುದೇವಿ ಆಹಾರ ಸಿದ್ಧಪಡಿಸಲು ಹೋದಾಗ ಗೋಧಿಹಿಟ್ಟಿನಿಂದ ಕೆಟ್ಟ ವಾಸನೆ ಬರುತ್ತಿರುವುದನ್ನು ಗಮನಿಸಿದಾಗ ಮಾಲತಿಯ ಉದ್ದೇಶ ಏನಿರಬಹುದು ಎಂಬುದು ತಿಳಿಯಿತು. ಕೂಡಲೇ ಕುಟುಂಬದ ಎಲ್ಲಾ ಸದಸ್ಯರಿಗೂ ಮಾಹಿತಿ ನೀಡಲಾಗಿತ್ತು. ವಿಚಾರಣೆ ಸಮಯದಲ್ಲಿ ಆಕೆ ಸಲ್ಫೋಸ್ ಮಿಶ್ರಣ ಮಾಡಿರುವುದು ನಾನೇ ಎಂದು ಒಪ್ಪಿಕೊಂಡಿದ್ದಾಳೆ.

ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಆಗಮಿಸಿ ತನಿಖೆ ಆರಂಭಿಸಿದರು. ಮಾಲತಿ ದೇವಿ ಮತ್ತು ಆಕೆಯ ತಂದೆಯನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ.


ಬಾಂಗ್ಲಾ ವಿಮಾನ ದುರಂತ: 25 ಮಕ್ಕಳು ಸೇರಿ 27 ಮಂದಿ ಸಾವು




ಢಾಕಾ: ವಾಯುಪಡೆ ವಿಮಾನ ದುರಂತದಲ್ಲಿ ಸಾವಿನ ಸಂಖ್ಯೆ 27ಕ್ಕೆ ಏರಿಕೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸುಮಾರು 170 ಮಂದಿ ಗಾಯಗೊಂಡಿದ್ದು, ಹಲವರ ಸ್ಥಿತಿ ಗಂಭೀರವಾಗಿದೆ. ಮೃತರಾದ 27 ಜನರಲ್ಲಿ 25 ಮಕ್ಕಳಿದ್ದಾರೆ. ಪೈಲಟ್ ಲೆಫ್ಟಿನೆಂಟ್ ಮೊಹಮ್ಮದ್ ಟೋಕಿರ್ ಇಸ್ಲಾಂ ಮೃತರಲ್ಲಿ ಒಬ್ಬರು. ವಿಮಾನ ದುರಂತದಲ್ಲಿ ಮೃತಪಟ್ಟವರಿಗೆ ಗೌರವಾರ್ಥವಾಗಿ ಇಂದು ದೇಶದಾದ್ಯಂತ ಶೋಕಾಚರಣೆ ಘೋಷಿಸಲಾಗಿದೆ. ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಸ್ವಾಯತ್ತ ಸಂಸ್ಥೆಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ರಾಷ್ಟ್ರಧ್ವಜವನ್ನು ಅರ್ಧಕ್ಕೆ ಹಾರಿಸಲಾಗುವುದು ಎಂದು ಅಧಿಕಾರಿಗಳು ಹೇಳಿದ್ದಾರೆ.

ಸೋಮವಾರ ಮಧ್ಯಾಹ್ನ 1:06ಕ್ಕೆ ಟೇಕ್‌ಆಫ್ ಆದ ಎಫ್7 ಬಿಜಿಐ ತರಬೇತಿ ವಿಮಾನವು, ಢಾಕಾ ಸಮೀಪದ ಉತ್ತರಾಪ್ರದೇಶದಲ್ಲಿನ ಮೈಲ್‌ಸ್ಟೋನ್ ಶಾಲೆ ಮತ್ತು ಕಾಲೇಜು ಆವರಣದಲ್ಲಿನ ಎರಡು ಮಹಡಿಯ ಕಟ್ಟಡಕ್ಕೆ ಅಪ್ಪಳಿಸಿ ಭಾರಿ ಶಬ್ದದೊಂದಿಗೆ ಬೆಂಕಿ ಮತ್ತು ಹೊಗೆ ಕಾಣಿಸಿಕೊಂಡಿತು. ತಕ್ಷಣವೇ ಪೊಲೀಸರು, ಅಗ್ನಿಶಾಮಕ ದಳದವರು ರಕ್ಷಣಾ ಕಾರ್ಯದಲ್ಲಿ ತೊಡಗಿದ್ದರು.

ದೃಶ್ಯಂ ಶೈಲಿಯಲ್ಲಿ ಪತಿ ಕೊಂದು ಮನೆಯೊಳಗೆ ಹೂತು ಹಾಕಿದ ಪತ್ನಿ!





ಮುಂಬೈ: ಮಹಿಳೆಯೊಬ್ಬಳು ಪ್ರಿಯಕರನ ಸಹಾಯದಿಂದ ಗಂಡನನ್ನು ಕೊಂದು ಮನೆಯೊಳಗೆ ಗುಂಡಿ ತೋಡಿ ಹೂತು ಹಾಕಿರುವ ಘಟನೆ ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯ ನಲಸೋಪರದಲ್ಲಿ ನಡೆದಿದೆ.

ವಿಜಯ್ ಚವಾಣ್(40) ಕೊಲೆಯಾದ ವ್ಯಕ್ತಿ. ಆತನ ಪತ್ನಿ ಚಮನ್ ಚವಾಣ್ ಮತ್ತು ಪ್ರಿಯಕರ ಮೋನು ನಾಪತ್ತೆಯಾಗಿದ್ದಾರೆ. ಕಳೆದ 15 ದಿನಗಳಿಂದ ವಿಜಯ್ ಅವರನ್ನು ಸಂಪರ್ಕಿಸಲು ಪ್ರಯತ್ನಿಸುತ್ತಿದ್ದ ಅವರ ಸಹೋದರ, ಸೋಮವಾರ ನೇರವಾಗಿ ಮನೆಗೆ ಭೇಟಿ ನೀಡಿದ್ದಾನೆ. ಈ ವೇಳೆ ಅಣ್ಣ ಮನೆಯಲ್ಲಿ ಇರದದ್ದನ್ನು ಕಂಡು ಅತ್ತಿಗೆ ಚಮನ್ ಬಳಿ ವಿಚಾರಿಸಿದ್ದಾರೆ. ದೂರದ ಊರಿಗೆ ಕೆಲಸಕ್ಕೆ ಹೋಗಿದ್ದಾರೆ ಎಂದು ಆಕೆ ಹೇಳಿದ್ದಾಳೆ. ಅತ್ತಿಗೆ ಉತ್ತರದಿಂದ ಅನುಮಾನಗೊಂಡ ಸಹೋದರ, ಮನೆಯಲ್ಲಿ ಒಂದು ಮೂಲೆಯಲ್ಲಿ ಹೊಸದಾಗಿ ಟೈಲ್ಸ್ ಹಾಕಿರುವುದು ಆತನಿಗೆ ಅನುಮಾನ ಮೂಡಿಸಿದೆ. ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ ಸಹೋದರ, ಪೊಲೀಸರೊಂದಿಗೆ ಮನೆಗೆ ಬಂದಿದ್ದಾನೆ. ಈ ವೇಳೆಗಾಗಲೇ ಆರೋಪಿ ಚಮನ್ ತನ್ನ ಏಳು ವರ್ಷದ ಮಗನನ್ನು ಕರೆದುಕೊಂಡು ಮನೆ ತೊರೆದಿದ್ದಳು. ಆಕೆ ಮನೆ ಬಿಟ್ಟು ಪರಾರಿಯಾಗುತ್ತಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಯುನೆಸ್ಕೊದಿಂದ ಮತ್ತೆ ಹೊರಬರಲಿರುವ ಅಮೆರಿಕ



ಪ್ಯಾರಿಸ್: ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆಯಾದ ಯುನೆಸ್ಕೊ ಇಸ್ರೇಲಿ ವಿರೋಧಿ ನೀತಿಯನ್ನು ಅನುಸರಿಸುತ್ತಿದೆ ಎಂದು ಆರೋಪಿಸಿ, ಅದರಿಂದ ಮತ್ತೆ ಹೊರಬರುವುದಾಗಿ ಅಮೆರಿಕ ಮಂಗಳವಾರ ಹೇಳಿದೆ. ಈ ಹಿಂದೆ ಕೂಡಾ ಅದರಿಂದ ಹೊರಬಂದಿದ್ದ ಅಮೆರಿಕ, ಎರಡು ವರ್ಷಗಳ ಹಿಂದೆಯಷ್ಟೆ ಮತ್ತೆ ಸೇರಿಕೊಂಡಿತ್ತು. ಅಮೆರಿಕ ಅಧ್ಯಕ್ಷ ಟ್ರಂಪ್ ಅವರು ಯುನೆಸ್ಕೊದಿಂದ ಹೊರಬರಲು ನಿರ್ಧರಿಸಿದ್ದಾರೆ ಎಂದು ಶ್ವೇತಭವನದ ಉಪ ವಕ್ತಾರೆ ಅನ್ನಾ ಕೆಲ್ಲಿ ನ್ಯೂಯಾರ್ಕ್ ಪೋಸ್ಟ್‌ಗೆ ತಿಳಿಸಿದ್ದಾರೆ. ಯುನೆಸ್ಕೊವನ್ನು ಅಮೆರಿಕ ತೊರೆಯುತ್ತಿರುವುದು ಇದು ಮೂರನೇ ಬಾರಿಯಾಗಿದ್ದು, ಟ್ರಂಪ್ ಆಡಳಿತದಲ್ಲಿ ಎರಡನೇ ಬಾರಿಯಾಗಿದೆ. ಟ್ರಂಪ್ ಮೊದಲನೇ ಅಧಿಕಾರಾವಧಿಯಲ್ಲಿ ಅದರಿಂದ ಅಮೆರಿಕ ಹೊರಬಂದಿತ್ತು. ಐದು ವರ್ಷಗಳ ನಂತರ, ಆಗ ಅಮೆರಿಕ ಅಧ್ಯಕ್ಷರಾಗಿದ್ದ ಜೋ ಬೈಡನ್ ಮತ್ತೆ ಸಂಸ್ಥೆಗೆ ಸೇರಿಕೊಳ್ಳಲು ಅರ್ಜಿ ಸಲ್ಲಿಸಿದ್ದರು. ಪ್ರಸ್ತುತ ನಿರ್ಧಾರವು 2026ರ ಡಿಸೆಂಬರ್ ಕೊನೆಯ ವೇಳೆ ಜಾರಿಗೆ ಬರಲಿದೆ.

ರಾಷ್ಟ್ರೀಯ ಸ್ವಯಂ ಸೇವಕ ಸಂಘದಿಂದ ಗುರು ಪೂರ್ಣಿಮೆ ಉತ್ಸವ



ರಾಷ್ಟ್ರೀಯ ಸ್ವಯಂ ಸೇವಕ ಸಂಘದಿಂದ ಪಟ್ಟಣದ ಮಹಿಳಾ ಸಮಾಜದ ಸಭಾಂಗಣದಲ್ಲಿ ಗುರು ಪೂರ್ಣಿಮ ಉತ್ಸವ ನಡೆಯಿತು.


ವಿರಾಜಪೇಟೆ, ಜು.22– ಕತ್ತಲಿನಿಂದ ಬೆಳಕಿಗೆ ಎಂಬುದರ ಅರ್ಥ ಕಲ್ಪಿಸುವ ಶಕ್ತಿ ಗುರುವಿಗೆ ಮಾತ್ರ ಎಂದು ದಕ್ಷಿಣಾ ಪ್ರಾಂತ ಸಂಘ ಪ್ರಚಾರಕ್ ಪ್ರವೀಣ್ ಸರಳಾಯ ತಿಳಿಸಿದ್ದಾರೆ

ರಾಷ್ಟ್ರೀಯ ಸ್ವಯಂ ಸೇವಕ ಸಂಘ ನಗರದ ಮಹಿಳಾ ಸಮಾಜದ ಸಭಾಂಗಣದಲ್ಲಿ ನಡೆದ ಗುರು ಪೂರ್ಣಿಮೆ ಉತ್ಸವದಲ್ಲಿ ಮಾತನಾಡಿದ ಅವರು, ಗುರುಕುಲ ಶಿಕ್ಷಣವನ್ನು ಬ್ರಿಟೀಷರ ಆಡಳಿತ ಅಧಿಕಾರಿಗಳು ತಮ್ಮ ಗ್ರಂಥದಲ್ಲಿ ಉಲ್ಲೇಖಿಸಿದ್ದಾರೆ. ಕತ್ತಲು ಎಂದರೆ ಅಜ್ಞಾನ ಬೆಳಕು ಎಂದರೆ ಜ್ಞಾನ ಎಂಬಂತೆ ಗುರುವನ್ನು ಜ್ಞಾನದ ಸಂಕೇತವಾಗಿ ಪರಿಗಣಿಸಲಾಗುತ್ತದೆ. ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಭಗವತ್ ಧ್ವಜವನ್ನು ಗುರು ಎಂದು ಪರಿಗಣಿಸಿದೆ. ಪ್ರಸ್ತುತ ಸಮಾಜದಲ್ಲಿ ಸಂಬಂಧಗಳಿಗೆ ಮೌಲ್ಯಗಳಿಗೆ ಅರ್ಥವಿಲ್ಲದಂತಾಗಿದೆ. ಸಂಬಂಧಗಳು ಮುರಿಯದಂತೆ ಕಾಪಾಡುವ ಮನಸ್ಸು ನಮ್ಮದಾಗಬೇಕು. ಸಂಘದ ಶತಮಾನೋತ್ಸವದ ಸಂದರ್ಭದಲ್ಲಿ ಪಂಚ ಪರಿವರ್ತನೆಗೆ ಮುಂದಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಡಾ. ಮಾತಂಡ ಅಯ್ಯಪ್ಪ ರಾಜ್ಯದಲ್ಲಿ ಸಂಘ ಕಾರ್ಯ ಚಟುವಟಿಕೆಗಳ ಬಗ್ಗೆ ಟೀಕೆಗಳನ್ನು ಮಾಡುತ್ತಿರುವ ಬುದ್ದಿಜೀವಿಗಳು ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ನಿಷೇಧ ಮಾಡುತ್ತೇವೆ ಎಂದು ಹೇಳುತ್ತಾ ಕಾಲಾಹರಣ ಮಾಡುತ್ತಿದ್ದಾರೆ. ಇದು ಅವರಿಂದ ಸಾಧ್ಯವಿಲ್ಲ ಸಂಘ ಸೇವೆ ಮತ್ತು ತ್ಯಾಗದ ಸಂಕೇತವಾಗಿದೆ. ವಿಶಾಲವಾದ ಆಲದ ಮರದಂತೆ ಸಂಘದ ಕಾರ್ಯಗಳು ನಡೆಯುತ್ತಿದೆ. ಧರ್ಮ ಹೋರಾಟದೊಂದಿಗೆ ಸಂಘಟಿತರಾಗಿ ಭವ್ಯ ಭಾರತ ನಿರ್ಮಾಣಕ್ಕೆ ಮುಂದಾಗುವಂತೆ ಕರೆ ನೀಡಿದರು. ರಾಷ್ಟ್ರೀಯ ಸ್ವಯಂ ಸೇವಕ ಸಂಘ ತಾಲೂಕು ಸಂಘ ಚಾಲಕ್ ಅಶ್ವಿನ್ ಮೇದಪ್ಪ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ನರಿಯಂದಡ ಗ್ರಾಪಂ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿ: ಆತಂಕ

ಮಡಿಕೇರಿ, ಜು.22–ನರಿಯಂದಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚೆಯ್ಯಂಡಾಣೆ, ಕರಡ, ನರಿಯಂ ದಡ, ಕೋಕೇರಿ, ಚೇಲಾವರ ಗ್ರಾಮದಲ್ಲಿ ಕೆಲ ತಿಂಗಳುಗಳಿಂದ ಕಾಡಾನೆಗಳ ಹಿಂಡು ಗ್ರಾಮದ ತೋಟಗಳಿಗೆ ಲಗ್ಗೆ ಇಟ್ಟು ದಾಂಧಲೆ ನಡೆಸಿ ಕೃಷಿ ಗಿಡಗಳನ್ನು ನಾಶಪಡಿಸಿದೆ. ರಾಜ್ಯ ಹೆದ್ದಾರಿಯಲ್ಲೇ ಸಂಚರಿಸುವ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಗ್ರಾಮಸ್ಥರಲ್ಲಿ ಆತಂಕವಾಗಿದೆ ಸೃಷ್ಟಿಯಾಗಿದೆ.



ಕರಡ ಗ್ರಾಮದ ಬೆಳೆಗಾರರಾದ ಐತಿಚಂಡ ರೋಹಿತ್, ಮಧು, ಚೋಟು, ಭೀಮಯ್ಯ, ನಾಚಪ್ಪ, ಪ್ರಕಾಶ್, ಪಟ್ರಪಂಡ ಜಗದೀಶ್ ಹಾಗೂ ನರಿಯಂದಡ ಗ್ರಾಮದ ಬೊವ್ವೇರಿಯಂಡ ಲವ ಕುಮಾರ್, ಚೇಲಾವರ ಗ್ರಾಮದ ಜೈನೀರ ತನು, ಬಾಚಮ್ಮಂಡ ಲೋಕೇಶ್, ರಾಮಕೃಷ್ಣ, ಪವನ್ ಎಂಬವರಿಗೆ ಸೇರಿದ ತೋಟಗಳಿಗೆ ಲಗ್ಗೆ ಇಟ್ಟ ಕಾಡಾನೆಗಳು ದಾಂಧಲೆ ನಡೆಸಿ, ಬಾಳೆ, ಅಡಿಕೆ, ತೆಂಗು, ಕಾಫಿ, ಕಾಳು ಮೆಣಸು ಮತ್ತಿತರ ಕೃಷಿ ಗಿಡಗಳನ್ನು ತುಳಿದು ನಾಶಪಡಿಸಿ ನಷ್ಟ ಉಂಟು ಮಾಡಿವೆ.

ವಿರಾಜಪೇಟೆ ನಾಪೋಕ್ಲು ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿಯ ಚೆಯ್ಯಂಡಾಣೆಯ ಮುಖ್ಯ ರಸ್ತೆಯಲ್ಲಿ 4 ಕಾಡಾನೆಗಳು ಒಂದು ಮರಿಯಾನೆ ಸಹಿತ ರಸ್ತೆ ಮಧ್ಯದಲ್ಲೇ ಸಂಚರಿಸುತ್ತಿರುವ ವಿಡಿಯೋವನ್ನು ವಾಹನ ಚಾಲಕರು ಸೆರೆ ಹಿಡಿದಿದ್ದು, ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಗ್ರಾಮದಲ್ಲಿ ನಿರಂತರ ಕಾಡಾನೆಗಳ ಹಾವಳಿಯಿಂದ ಗ್ರಾಮಸ್ಥರು ನಡೆದಾಡಲು ಭಯಪಡುವ ಪರಿಸ್ಥಿತಿ ಉದ್ಭವವಾಗಿದೆ.20ಕ್ಕೂ ಅಧಿಕ ಕಾಡಾನೆಗಳು ತೋಟದಲ್ಲೇ ಬೀಡುಬಿಟ್ಟಿವೆ.

ಬೆಳಗ್ಗೆ ಕಾಡಾನೆಗಳು ಕಂಡು ಬರುತ್ತಿದ್ದು, ಶಾಲಾ, ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಸಂಚರಿಸುವ ಮುಖ್ಯ ರಸ್ತೆಯಲ್ಲೇ ಕಾಡಾನೆ ಸಂಚರಿಸುತ್ತಿದೆ. ಚೆಯ್ಯಂಡಾಣೆಯ ಬೆಳೆಗಾರ ಸುಮಂತ್ ಅವರ ತೋಟಗಳಿಗೆ ಲಗ್ಗೆ ಇಟ್ಟ ಕಾಡಾನೆ ಅಪಾರ ಪ್ರಮಾಣದಲ್ಲಿ ಕೃಷಿ ಗಿಡಗಳನ್ನು ತುಳಿದು ನಾಶಪಡಿಸಿದೆ. ಚೆಯ್ಯಂಡಾಣೆಯ ಬಳಿ ಇರುವ ಸುಮಂತ್ ಅವರ ತೋಟಕ್ಕೆ ಮಧ್ಯರಾತ್ರಿ ಕಾಡಾನೆಗಳ ಹಿಂಡು ಲಗ್ಗೆ ಇಡುವ ದೃಶ್ಯ ಚೆಯ್ಯಂಡಾಣೆಯ ಕರ್ನಾಟಕ ಬ್ಯಾಂಕ್ ಸಮೀಪವಿರುವ ವೆಸ್ಟರ್ನ್ ಕಾಫಿ ಲಿಂಕ್ಸ್ ಮಳಿಗೆಯ ಸಿ.ಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಬಳಿಕ ಕಾಡಾನೆಗಳು ಚೆಯ್ಯಂಡಾಣೆಯ ಮುಖ್ಯ ರಸ್ತೆಯಲ್ಲಿ ಸಂಚರಿಸಿ ಬೊವ್ವೇರಿಯಂಡ ಲವ ಕುಮಾರ್‌ರ ಗೇಟ್‌ನಲ್ಲಿ ತೆರಳುವ ವಿಡಿಯೋ ಸಾಮಾಜಿಕ ಜಾಲ ತಾಣದಲ್ಲಿ ವೈರಲ್ ಆಗಿ ಜನರಲ್ಲಿ ಆತಂಕವಾಗಿದೆ

ಕೂಡಲೇ ಅರಣ್ಯ ಇಲಾಖೆ ಸೂಕ್ತ ಕ್ರಮ ಕೈಗೊಂಡು ಕಾಡಾನೆ ಗ್ರಾಮಕ್ಕೆ ನುಸುಳದ ರೀತಿಯಲ್ಲಿ ಶಾಶ್ವತ ಪರಿಹಾರ ಒದಗಿಸಬೇಕು. ಕಾಡಾನೆ ದಾಳಿಯಿಂದ ನಷ್ಟಕ್ಕೊಳಗಾದ ಬೆಳೆಗಾರರಿಗೆ ಸೂಕ್ತ ಪರಿಹಾರ ಒದಗಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಕಾಡಾನೆ ದಾಳಿ ನಡೆಸಿದ ಸ್ಥಳಕ್ಕೆ ವಿರಾಜಪೇಟೆ ವಲಯ ಆರ್‌ಎಫ್‌ಓ ನೇತೃತ್ವದಲ್ಲಿ ವಿರಾಜಪೇಟೆ ವಲಯ ಅರಣ್ಯ ಸಂರಕ್ಷಣಾಧಿಕಾರಿ ಶ್ರೀನಿವಾಸ್ ಹಾಗೂ ಕ್ಯಾಂಪ್ ಸಿಬ್ಬಂದಿ ಪರಿಶೀಲಿಸಿದ್ದಾರೆ.

ಬೆಟ್ಟಗೇರಿಯಲ್ಲಿ ಮನೆ ಮನೆ ಜ್ವರ ಸಮೀಕ್ಷೆ: ಪರಿಸರ ಸ್ವಚ್ಛತೆಗೆ ಸಲಹೆ



ಬೆಟ್ಟಗೇರಿ ಗ್ರಾಮದಲ್ಲಿ ಅಧಿಕಾರಿಗಳು, ಆಶಾ ಕಾರ್ಯಕರ್ತರು ಮನೆ ಮನೆ ಜ್ವರ ಸಮೀಕ್ಷೆ ನಡೆಸಿ ಜನರಿಗೆ ತಿಳುವಳಿಕೆ ನೀಡಿದರು.

ನಾಪೋಕ್ಲು, ಜು.22– ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಗಳ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿ ಇಟ್ಟುಕೊಂಡರೆ ಡೆಂಗ್ಯೂ ಸೇರಿದಂತೆ ಯಾವುದೇ ಸಾಂಕ್ರಾಮಿಕ ರೋಗಗಳು ಬರುವುದಿಲ್ಲ ಎಂದು ಜಿಲ್ಲಾ ಎಂಟಮಾಲಜಿಸ್ಟ್ ಮಂಜುನಾಥ್ ತಿಳಿಸಿದರು

ಸಮೀಪದ ಬೆಟ್ಟಗೇರಿ ಗ್ರಾಮದಲ್ಲಿ ಆಶಾ ಕಾರ್ಯಕರ್ತರು ಮನೆ ಮನೆ ಜ್ವರ ಸಮೀಕ್ಷೆ ನಡೆಸಿ ಜನರಿಗೆ ತಿಳುವಳಿಕೆ ನೀಡಿ ಯಾವುದೇ ಜ್ವರವಿರಲಿ ಹತ್ತಿರದ ಆಸ್ಪತ್ರೆ ವೈದ್ಯರಿಗೆ ತೋರಿಸಿ ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಿದರು.

ಮಡಿಕೇರಿ ತಾಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ವಿ.ಶ್ರೀನಾಥ್ ಮಾತನಾಡಿ, ಡೆಂಗ್ಯೂ ವಿರೋಧಿ ಮಾಸಾಚರಣೆ ಕುರಿತು ಮಾಹಿತಿ ನೀಡಿ, ಮನೆಯ ಸುತ್ತಮುತ್ತ ಸ್ವಚ್ಛ ಪರಿಸರ, ಶುದ್ಧ ನೀರು ಇರುವಂತೆ ನೋಡಿಕೊಳ್ಳಬೇಕು ಹಾಗೂ ಚರಂಡಿಗಳಲ್ಲಿ ನೀರು ನಿಲ್ಲದಂತೆ ಮತ್ತು ಲಾರ್ವಾ ಉತ್ಪತ್ತಿ ಆಗದಂತೆ ಎಚ್ಚರ ವಹಿಸಬೇಕು ಎಂದು ಹೇಳಿದರು.

ಡೆಂಗ್ಯೂ, ಇಲಿ ಜ್ವರ ಸೇರಿದಂತೆ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಆರೋಗ್ಯ ಇಲಾಖೆಯಿಂದ ಎಲ್ಲೆಡೆ ಮನೆ ಮನೆ ಭೇಟಿ ಮಾಡಿ ಲಾರ್ವಾ ನಿರ್ಮೂಲನೆ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಿದ್ದು, ಎಲ್ಲರೂ ಸಹಕರಿಸಿದರೆ ಇಂತಹ ಪ್ರಕರಣಗಳನ್ನು ತಡೆಗಟ್ಟಲು ಸಾಧ್ಯ ಎಂದರು.

ಜಿಲ್ಲಾ ಎಪಿಡಮಾಲಿಜಿಸ್ಟ್ ಕಿಶೋರ್ ಹಾಗೂ ಆಶಾ ಕಾರ್ಯಕರ್ತರು, ಶಾಲಾ ಶಿಕ್ಷಕರು ಹಾಜರಿದ್ದರು.

ಅನುಮತಿ ಪಡೆಯದೆ ಏಡಿ ಮಾರುತ್ತಿದ್ದವರಿಗೆ 500 ರೂ. ದಂಡ



ಮಡಿಕೇರಿ, ಜು.22– ಪಟ್ಟಣ ಪಂಚಾಯಿತಿಯಿಂದ ಯಾವುದೇ ಅನುಮತಿ ಪಡೆಯದೆ ಮತ್ತು ಸುಂಕ ಪಾವತಿಸದೆ ಪೊನ್ನಂಪೇಟೆ ತಾಲೂಕು ಕಚೇರಿ ಮುಂಭಾಗದ ರಸ್ತೆ ಬದಿಯಲ್ಲಿ ಏಡಿಗಳನ್ನು ಮಾರಾಟ ಮಾಡುತ್ತಿದ್ದವರಿಗೆ ಪಟ್ಟಣ ಪಂಚಾಯಿತಿ ವತಿಯಿಂದ ದಂಡ ವಿಧಿಸಿ, ಎಚ್ಚರಿಕೆ ನೀಡಿದ ಘಟನೆ ನಡೆದಿದೆ.

ಪಟ್ಟಣದ ತಾಲೂಕು ಕಚೇರಿ ಎದುರು ರಸ್ತೆ ಬದಿಯಲ್ಲಿ ಏಡಿಗಳನ್ನು ಮಾರಾಟ ಮಾಡುತ್ತಿದ್ದುದ್ದನ್ನು ಗಮನಿಸಿದ ಸಾರ್ವಜನಿಕರು ಪಟ್ಟಣ ಪಂಚಾಯತಿ ಅಧ್ಯಕ್ಷ ಅಣ್ಣೀರ ಹರೀಶ್ ಗಮನಕ್ಕೆ ತಂದಿದ್ದಾರೆ. ಪಂಚಾಯತಿ ಸಿಬ್ಬಂದಿ ಯೋಗೇಶ್ ಕುಮಾರ್, ಪೌರ ಕಾರ್ಮಿಕರಾದ ರವಿ, ಮಾದೇವ ಹಾಗೂ ಶಂಕರ್ ಅವರನ್ನು ವ್ಯಾಪಾರ ಮಾಡುತ್ತಿದ್ದ ಸ್ಥಳಕ್ಕೆ ಕಳುಹಿಸಿದ ಪಂಚಾಯಿತಿ ಮುಖ್ಯಾಧಿಕಾರಿ ಎಸ್. ಗೋಪಿ ಅವರು ಏಡಿಗಳ ಸಹಿತ, ಮಾರಾಟ ಮಾಡುತ್ತಿದ್ದವರನ್ನು ಕಚೇರಿಗೆ ಕರೆಸಿ ಅನುಮತಿ ಪಡೆಯದೆ ಹಾಗೂ ಯಾವುದೇ ಸುಂಕ ಪಾವತಿಸದೆ ವ್ಯಾಪಾರ ಮಾಡುತ್ತಿದ್ದ ಹಿನ್ನೆಲೆಯಲ್ಲಿ 500 ರೂ.ಗಳ ದಂಡ ವಿಧಿಸಿ, ಎಚ್ಚರಿಕೆ ನೀಡಿ ಕಳುಹಿಸಲಾಯಿತು.

ಪತ್ರಕರ್ತರ ಸಂಘದಲ್ಲಿ ದತ್ತಿನಿಧಿ ಸ್ಥಾಪನೆ



ಮಡಿಕೇರಿ, ಜು.22– ಪತ್ರಕರ್ತರ ಸಂಘ(ರಿ)ದಲ್ಲಿ ಸುಂಟಿಕೊಪ್ಪದ ಯುವ ಕಾಫಿ ಉದ್ಯಮಿ ಜಿ. ಮುಕುಲ್ ಮಹೀಂದ್ರ ತಮ್ಮ ತಂದೆ ಜಿ.ಎಂ. ಮಹೀಂದ್ರ ಅವರ ಹೆಸರಿನಲ್ಲಿ 25 ಸಾವಿರ ರೂ.ಗಳ ದತ್ತಿನಿಧಿ ಸ್ಥಾಪಿಸಿದ್ದಾರೆ. ಕುಶಾಲನಗರ ತಾಲೂಕು ಸಂಘದ ಅಧ್ಯಕ್ಷ ವಿಘ್ನೇಶ್ ಭೂತನಕಾಡು ಅವರಿಗೆ ದತ್ತಿನಿಧಿ ಮೊತ್ತದ ಚೆಕ್ ಅನ್ನು ಹಸ್ತಾಂತರಿಸಿದರು. ಈ ಸಂದರ್ಭ ಉಪಾಧ್ಯಕ್ಷ ಬಿ.ಸಿ. ದಿನೇಶ್, ಪ್ರಧಾನ ಕಾರ್ಯದರ್ಶಿ ವಿನ್ಸೆಂಟ್, ನಿರ್ದೇಶಕರಾದ ಆಲ್ಫ್ರೆಡ್ ಇದ್ದರು.

ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆ



ಜಿಲ್ಲಾಧಿಕಾರಿ ವೆಂಕಟ್‌ರಾಜಾ ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆ ನಡೆಸಿದರು.

ಮಡಿಕೇರಿ ಜು.22– ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮ ಮತ್ತು ಸಡಗರ ದೊಂದಿಗೆ ಆಚರಿಸಲು ಜಿಲ್ಲಾಧಿಕಾರಿ ವೆಂಕಟ್ ರಾಜಾ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು. ಪ್ರತಿ ವರ್ಷವೂ ಆಚರಿಸುವಂತೆ ನಗರದ ಕೋಟೆ ಆವರಣದಲ್ಲಿ ಈ ಬಾರಿಯೂ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲು ನಿರ್ಧರಿಸಲಾಯಿತು.

ಕಳೆದ ಬಾರಿಯಂತೆ ಸ್ವಾಗತ, ಧ್ವಜಾರೋಹಣ, ವೇದಿಕೆ, ಕವಾಯತು ಉಪಹಾರ, ಭಾಷಣ, ಬಹುಮಾನ ಹೀಗೆ ವಿವಿಧ ಉಪ ಸಮಿತಿಗಳು ತಮ್ಮ ಕೆಲಸಗಳನ್ನು ಚಾಚು ತಪ್ಪದೆ ನಿರ್ವಹಿಸುವಂತೆ ತಿಳಿಸಿದರು. ಧ್ವಜಾರೋಹಣ ಸಂಬಂಧ ಅಗತ್ಯ ತಯಾರಿ ಮಾಡಿಕೊಳ್ಳುವುದು. ಹಾಗೆಯೇ ವೇದಿಕೆ ಸಮಿತಿಯವರು ವಾಟರ್ ಪ್ರೂಫ್ ಶಾಮಿಯಾನ ನಿರ್ಮಾಣ ಮಾಡುವಂತೆ ಮತ್ತು ಉಪಾಹಾರ ಸಮಿತಿಯವರು ವಿದ್ಯಾರ್ಥಿಗಳಿಗೆ ಬೆಳಗಿನ ಉಪಾಹಾರ ವ್ಯವಸ್ಥೆ ಮಾಡುವಂತೆ ಸೂಚಿಸಿದರು. ಹಾಗೆಯೇ ನೀಟ್, ಐಎಟಿ, ಸಿಇಟಿ, ಕ್ರೀಡೆ, ಕೃಷಿ ಮತ್ತಿತರ ಕ್ಷೇತ್ರದಲ್ಲಿ ಜಿಲ್ಲೆಯಲ್ಲಿ ಸಾಧನೆ ಮಾಡಿದವರಿನ್ನು ಗೌರವಿಸುವುದಾಗಿ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಸ್ವಾತಂತ್ರ್ಯ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಎಲ್ಲಾ ಹಂತದ ಅಧಿಕಾರಿಗಳು ಕೈಜೋಡಿಸಬೇಕು. ಗಣ್ಯರನ್ನು ಆಹ್ವಾನಿಸುವುದು ಸೇರಿದಂತೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುವಂತೆ ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಮಾತನಾಡಿ ಪ್ರಶಸ್ತಿ ಹಾಗೂ ಯಾವ ಯಾವ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾರೆ ಎಂಬ ವಿಷಯವನ್ನು ಆ.5 ರೊಳಗಾಗಿ ಸಲ್ಲಿಸಬೇಕೆಂದರು

ಲಾರಿ– ಬೈಕ್ ಅಪಘಾತ: ಬೈಕ್ ಸವಾರ ಸಾವು

ಯಳಂದೂರು, ಜು.22 (ವಿ. ನಾಗರಾಜು)– ತಾಲೂಕಿನ ಮದ್ದೂರು ಗ್ರಾಮದ ಎಲೆಪಿಳ್ಳಾರಿ ದೇವಸ್ಥಾನದ



ತಿರುವಿನಲ್ಲಿ ಬೈಕ್ ಸವಾರ ಲಾರಿಯ ಹಿಂಬದಿ ಚಕ್ರಕ್ಕೆ ಸಿಲುಕಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಜರುಗಿದೆ

ತಾಲೂಕಿನ ಕರುಣ ಟ್ರಸ್ಟ್‌ನಲ್ಲಿ ನರ್ಸಿಂಗ್‌ನ ಉದ್ಯೋಗಿ ರಾಜೇಶ್ವರಿ ಎಂಬುವರ ಪುತ್ರ ಧನುಷ್ (25) ಎಂಬಾತನೇ ಸಾವನ್ನಪ್ಪಿರುವ ಯುವಕ. ರಾಷ್ಟ್ರೀಯ ಹೆದ್ದಾರಿಯ 948ರಲ್ಲಿ ಸೋಮವಾರ ರಾತ್ರಿ ಧನುಷ್ ಬೈಕ್‌ನಲ್ಲಿ ಸಾಗುತ್ತಿರುವಾಗ ಸರಕು ತುಂಬಿದ ಲಾರಿ ಡಿಕ್ಕಿ ಹೊಡೆದು ಹಿಂಬದಿ ಚಕ್ರಕ್ಕೆ ಸಿಲುಕಿ ಸ್ಥಳದಲ್ಲೇ ಸಾವನಪ್ಪಿದ್ದಾನೆ.

ಅಗರ–ಮಾಂಬಳ್ಳಿ ಪೊಲೀಸರು ಪ್ರಕರಣವನ್ನು ದಾಖಲಿಸಿಕೊಂಡಿದ್ದಾರೆ. ಮರಣೋತ್ತರ ಪರೀಕ್ಷೆಗೆ ಶವವನ್ನು ಜಿಲ್ಲಾ ಆಸ್ಪತ್ರೆಗೆ ರವಾನಿಸಿದ್ದಾರೆ.

ಮನೆ ಮನೆಗೆ ಪೊಲೀಸ್ ವ್ಯವಸ್ಥೆಗೆ ಎಸ್‌ಪಿ ಚಾಲನೆ



ಮನೆ ಮನೆಗೆ ಪೊಲೀಸ್ ಕಾರ್ಯಕ್ರಮಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಬ್ರೋಚರ್ ಬಿಡುಗಡೆ ಮಾಡಿದರು.

ಚಾಮರಾಜನಗರ, ಜು. 22 – ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆಗಳಿಗೆ ಮನೆ ಬಾಗಿಲಿನಲ್ಲಿಯೇ ಪರಿಹರಿಸುವ ಉದ್ದೇಶದಿಂದ ಪೊಲೀಸ್ ಇಲಾಖೆ ವತಿಯಿಂದ ಜಾರಿಗೆ ತಂದಿರುವ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಚಾಲನೆ ನೀಡಿದರು.

ನಗರದಲ್ಲಿರುವ ಸಿದ್ಧಾರ್ಥ ನಗರದಲ್ಲಿನ ಸಾಯಿಬಾಬಾ ದೇವಸ್ಥಾನದ ಮುಂಭಾಗದಲ್ಲಿಂದು ನಡೆದ ಸಮಾರಂಭದಲ್ಲಿ ಯೋಜನೆಯನ್ನು ಉದ್ಘಾಟಿಸಿದ ಅವರು ಮೊದಲು ಪೊಲೀಸ್ ಠಾಣೆಗೆ ದೂರು ಬಂದ ನಂತರ ಕ್ರಮಜರುಗಿಸಲಾಗುತ್ತಿತ್ತು. ಇದೀಗ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದಡಿ ಪೊಲೀಸ್ ಅಧಿಕಾರಿ ಸಿಬ್ಬಂದಿ ಮನೆ ಮನೆಗೂ ಭೇಟಿ ನೀಡಿ ಸಾರ್ವಜನಿಕರ ದೂರುಗಳನ್ನು ಆಲಿಸಲಿದ್ದಾರೆ. ಕಾನೂನು ಚೌಕಟ್ಟಿನಲ್ಲಿ ಪರಿಹಾರ ಕಲ್ಪಿಸಲಿದ್ದಾರೆ. ಇದರಿಂದ ಅತೀ ಶೀಘ್ರದಲ್ಲಿ ಸಮಸ್ಯೆಗಳನ್ನು ಬಗೆಹರಿಸಲು ಅನುಕೂಲಕರವಾಗಿದೆ ಎಂದರು. ಸಾರ್ವಜನಿಕರು ತಮ್ಮ ಮನೆ ಹಾಗೂ ಸುತ್ತಮುತ್ತ ನಡೆಯುವ ದುಷ್ಕೃತ್ಯ ಹಾಗೂ ಸಮಸ್ಯೆಗಳ ಬಗ್ಗೆ ದೂರು, ಮಾಹಿತಿ ನೀಡಬೇಕು. ಇಲಾಖೆಯು ಮಾಹಿತಿದಾರರ ಮಾಹಿತಿಗಳ ಬಗ್ಗೆ ಗೌಪ್ಯತೆ ಕಾಪಾಡಲಿದೆ. ಕಾನೂನು ಸುವ್ಯವಸ್ಥೆ ಉತ್ತಮವಾಗಿರಲು ಸಾರ್ವಜನಿಕರ ಸಹಕಾರ ಅತ್ಯಂತ ಅಗತ್ಯವಾಗಿದೆ. ಸಾರ್ವಜನಿಕರ ರಕ್ಷಣೆ ಪೊಲೀಸ್ ಇಲಾಖೆಯ ಮುಖ್ಯ ಕರ್ತವ್ಯವಾಗಿದೆ ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್ ಶಶಿಧರ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಅಪರಾಧ ಕೃತ್ಯಗಳು ಹೆಚ್ಚಾಗುತ್ತಿದ್ದು ಸಾರ್ವಜನಿಕರ ಸಹಕಾರ ಇಲ್ಲದೆ ಪೊಲೀಸ್ ಇಲಾಖೆಗೆ ಅಪರಾಧಿಗಳನ್ನು ಪತ್ತೆ ಹಚ್ಚಲು ಕಷ್ಟಕರವಾಗಿದೆ. ಸಾರ್ವಜನಿಕರಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳುವುದು ಪೊಲೀಸ್ ಇಲಾಖೆಯ ಜವಾಬ್ದಾರಿಯಾಗಿದೆ ಸಾರ್ವಜನಿಕರು ಇಲಾಖೆಗೆ ಸಹಕರಿಸಬೇಕು ಎಂದರು.

ನಗರಸಭಾ ಸದಸ್ಯೆ ಕುಮುದಾ ಕೇಶವಮೂರ್ತಿ ಮಾತನಾಡಿ ನಗರಕ್ಕೆ ಉದ್ಯೋಗಗಳನ್ನು ಅರಸಿ ನೆರೆಹೊರೆ ಜಿಲ್ಲೆ, ರಾಜ್ಯಗಳಿಂದ ವಲಸೆ ಬರುತ್ತಿದ್ದು ಇವರ ಬಗ್ಗೆ ಸ್ಥಳೀಯರಿಗೆ ಮಾಹಿತಿ ಇರಬೇಕು. ಮನೆಗಳಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು ಹೆಚ್ಚಿನ ಬೀಟ್‌ಗಳನ್ನು ನಡೆಸಬೇಕು ಎಂದರು. ಡಿವೈಎಸ್‌ಪಿ ಲಕ್ಷ್ಮಯ್ಯ, ಧರ್ಮೇಂದ್ರ, ಕ್ಲಸ್ಟರ್ ಬೀಟ್‌ನ ಗುರುಸ್ವಾಮಿ, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಬಿಳಿಗಿರಿರಂಗನಬೆಟ್ಟ ಹುಂಡಿಯಲ್ಲಿ 15.89 ಲಕ್ಷ ಸಂಗ್ರಹ

ಯಳಂದೂರು, ಜು.22 (ವಿ.ನಾಗರಾಜು)– ಶ್ರೀ ಬಿಳಿಗಿರಿರಂಗನಾಥಸ್ವಾಮಿ ದೇಗುಲದಲ್ಲಿ ಹುಂಡಿ ಹಣ ಎಣಿಕೆಯಾಗಿದ್ದು, ಈ ಬಾರಿ 15,89,508 ಲಕ್ಷ ರೂ. ಸಂಗ್ರಹವಾಗಿದೆ. 50 ದಿನಗಳಲ್ಲಿ ಈ ಹಣ ದೇಗುಲದ ಹುಂಡಿಗಳಲ್ಲಿ ಸಂಗ್ರಹವಾಗಿದೆ. ಇದರಲ್ಲಿ ನೋಟುಗಳ ರೂಪದಲ್ಲಿ 15,04,598 ರೂ. ನಾಣ್ಯಗಳ ರೂಪದಲ್ಲಿ 84,910 ರೂ. ಹಣವೂ ಸೇರಿದೆ. ಎಂದು ದೇಗುಲದ ಕಾರ್ಯನಿರ್ವಾಹಕ ಅಧಿಕಾರಿ ಮೋಹನ್‌ಕುಮಾರ್ ಮಾಹಿತಿ ನೀಡಿದರು.



ದೇಗುಲದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಜೆ. ಶ್ರೀನಿವಾಸ್, ಸದಸ್ಯರಾದ ಗುಂಬಳ್ಳಿ ರಾಜಣ್ಣ, ವೆಂಕಟರಾಮು, ನಾರಾಯಣಸ್ವಾಮಿ, ಸೂರ್ತಿ, ಸಿದ್ದರಾಜು, ಕೇತಮ್ಮ, ಸುರೇಶ್ ತಹಸೀಲ್ದಾರ್ ಎಸ್.ಎಲ್. ನಯನ, ಅರ್ಚಕ ರವಿಕುಮಾರ್, ಶ್ರೀನಿವಾಸ, ನಾಗೇಂದ್ರಭಟ್ ಕಾವೇರಿ ಕಲ್ಪತರು ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕ ವೀರಭದ್ರಸ್ವಾಮಿ, ಪಾರುಪತ್ತೇದಾರ ರಾಜು, ಶೇಷಾದ್ರಿ ಗ್ರಾಮಸಹಾಯಕ ಚಂಗಚಹಳ್ಳಿ ಮಹದೇವಸ್ವಾಮಿ ಸೇರಿದಂತೆ ದೇಗುಲದ ಸಿಬ್ಬಂದಿ ಹಾಜರಿದ್ದರು.

ಆಲೂರು ಗ್ರಾಮದಲ್ಲಿ ಚಿರತೆ ದಾಳಿಗೆ ಕರು ಬಲಿ

ಚಾಮರಾಜನಗರ, ಜು.22–ತಾಲೂಕಿನ ಆಲೂರು ಗ್ರಾಮದಲ್ಲಿ ಚಿರತೆ ದಾಳಿಗೆ ಕರು ಮೃತಪಟ್ಟ ಘಟನೆ ಸಂಜೆ ನಡೆದಿದೆ. ನಾಗನಾಯಕ ಎಂಬುವರ ಕರುವನ್ನು ಜಮೀನಿನಲ್ಲಿ ಮೇಯಲು ಬಿಟ್ಟಿದ್ದಾಗ ದಾಳಿ ನಡೆಸಿದ ಚಿರತೆ ಕರುವನ್ನು ಕೊಂದುಹಾಕಿದೆ.

ಹೊಮ್ಮ ಗ್ರಾಮದ ಸುತ್ತಮುತ್ತ ಚಿರತೆ ಉಪಟಳ ಹೆಚ್ಚಾಗಿದ್ದು ಗ್ರಾಮಸ್ಥರಲ್ಲಿ ಭಯ ವಾತಾವರಣ ಉಂಟು ಮಾಡಿದೆ. ಅರಣ್ಯ ಇಲಾಖೆಯಿಂದ ಚಿರತೆ ಸೆರೆಗೆ ಬೋನ್ ಇರಿಸಬೇಕು, ಕರು ಕಳೆದುಕೊಂಡ ನಾಗನಾಯಕರಿಗೆ ಸೂಕ್ತ ಪರಿಹಾರ ಕೊಡಿಸಬೇಕು ಎಂದು ಗ್ರಾಮದ ಮುಖಂಡ ಚಾಮುಂಡನಾಯಕ ಒತ್ತಾಯಿಸಿದ್ದಾರೆ..

ಆಲೂರಿನಲ್ಲಿ ಶೆಡ್ ತೆರವುಗೊಳಿಸಲು ಪಿಡಿಓ ಕಿರುಕುಳ: ಆರೋಪ

ಚಾಮರಾಜನಗರ, ಜು.22–ದೇವಾಲಯಕ್ಕೆ ಸೇರಿದ ಜಾಗದಲ್ಲಿ ಅಕ್ರಮವಾಗಿ ಶೆಡ್ ನಿರ್ಮಿಸಿಕೊಂಡಿದ್ದೀರಿ ಎಂದು ಆರೋಪಿಸಿ ತಾಲೂಕಿನ ಆಲೂರು ಗ್ರಾಮ ಪಂಚಾಯಿತಿ ಪಿಡಿಓ ಸೋಮಶೇಖರ ಶೆಡನ್ನು ತೆರವುಗೊಳಿಸಲು ಕಿರುಕುಳ ನೀಡಿದ್ದಾರೆಂದು ಎ.ಎಂ.ಮಲ್ಲು ದೂರಿದ್ದಾರೆ.



ಆಲೂರು ಗ್ರಾಮದ ಮಲ್ಲು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ನಾವು ಶೆಡ್ ನಿರ್ಮಿಸಿದ್ದ ಜಾಗ ಗ್ರಾಮದ ಬಸವೇಶ್ವರ ದೇವಾಲಯಕ್ಕೆ ಸೇರಿದ್ದು ಎಂಬುದಕ್ಕೆ ಯಾವುದೇ ದಾಖಲೆಗಳಿಲ್ಲ; ಶೆಡ್ ತೆರವುಗೊಳಿಸುವ ಸಂಬಂಧ ಪಿಡಿಓ ಮುನ್ನೆಚ್ಚರಿಕೆಯಾಗಿ ಯಾವುದೇ ನೋಟಿಸ್ ನೀಡಿಲ್ಲ. ಹೀಗಿದ್ದೂ ಗ್ರಾಮದ ರೈತ ಮುಖಂಡರೊಬ್ಬರ ಒತ್ತಾಯಕ್ಕೆ ಮಣಿದು ನಮ್ಮನ್ನು ಬೀದಿಪಾಲು ಮಾಡಿದ್ದಾರೆ. ಎಂದು ಅವರು ಸುದ್ದಿಗೋಷ್ಠಿಯಲ್ಲಿ ಆರೋಪಿಸಿದ್ದಾರೆ. 50 ವರ್ಷಗಳಿಂದ ಶೆಡ್ ಕಟ್ಟಿಕೊಂಡಿದ್ದೇವೆ. ಇತ್ತೀಚೆಗೆ ಪಿಡಿಓ ಅವರು ಪೊಲೀಸ್ ಬಂದೋಬಸ್ತ್‌ನಲ್ಲಿ ಶೆಡ್ ಕಿತ್ತುಹಾಕಿಸಿ ರಸ್ತೆ ಮಾಡಿಸಲು ಮುಂದಾಗಿದ್ದಾರೆ. ಇದಕ್ಕೆ ನಾವು ಅವಕಾಶ ನೀಡುವುದಿಲ್ಲ. ಶೆಡ್ ಇದ್ದ ಜಾಗ ನಮ್ಮದೆಂದು ಹೈಕೋರ್ಟ್ ತೀರ್ಪು ನೀಡಿದೆ. ಆದರೆ, ಪಿಡಿಓ ಅದನ್ನು ಉಲ್ಲಂಘಿಸಿ ನ್ಯಾಯಾಂಗ ನಿಂದನೆ ಮಾಡಿದ್ದಾರೆ ಎಂದು ದೂರಿದರು.

ನಾವು ಶೆಡ್ ನಿರ್ಮಿಸಿದ್ದ ಜಾಗ ಬಸವೇಶ್ವರ ದೇವಾಲಯಕ್ಕೆ ಸೇರಿದೆ ಎಂಬುದನ್ನು ಖಚಿತಪಡಿಸಬೇಕು. ಅದಕ್ಕಾಗಿ ಗ್ರಾಮದ ನಕ್ಷೆ ನೀಡುವಂತೆ ಮನವಿ ಸಲ್ಲಿಸಿದ್ದರೂ ನಕ್ಷೆಯನ್ನು ನೀಡುತ್ತಿಲ್ಲ ಅದು ಲಭ್ಯವಿಲ್ಲ ಎಂದು ಉತ್ತರಿಸಿದ್ದಾರೆ ತಂದೆಯವರ ಕಾಲದಿಂದಲೂ ಶೆಡ್ ನಿರ್ಮಿಸಿದ್ದ ಜಾಗದಲ್ಲಿ ನಾವು ಅನುಭೋಗದಲ್ಲಿದ್ದೇವೆ. ಈಗ ಪಿಡಿಓ ಅವರು ರೈತ ಮುಖಂಡರ ಮಾತು ಕೇಳಿಕೊಂಡು ನಮಗೆ ತೊಂದರೆ ನೀಡುತ್ತಿದ್ದಾರೆ. ಈ ಬಗ್ಗೆ ಜಿಪಂ ಸಿಇಓ ಮತ್ತು ಜಿಲ್ಲಾಧಿಕಾರಿಗೆ ದೂರು ನೀಡುವುದಾಗಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಲ್ಲು ಅವರ ಸಹೋದರಿಯರಾದ ಮಂಗಳಮ್ಮ, ಭ್ರಮರಾಂಬ, ಜಗದಾಂಬ, ಮುಖಂಡರಾದ ಬಸವರಾಜು, ಜಿ.ಎಂ.ಶಂಕರ್, ಲಿಂಗರಾಜು ಇದ್ದರು.

ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಿ: ಗಣೇಶ್‌ಪ್ರಸಾದ್

ಗುಂಡ್ಲುಪೇಟೆ, ಜು.22(ಸೋಮ್.ಜಿ)– ಮಹಿಳೆಯರ ಶ್ರೇಯೋಭಿವೃದ್ಧಿಗಾಗಿ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗುವಂತೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಕಿವಿಮಾತು ಹೇಳಿದ್ದಾರೆ



ತಾಲೂಕಿನ ತೆರಕಣಾಂಬಿ ಗ್ರಾಮಪಂಚಾಯಿತಿ ಆವರಣದಲ್ಲಿ ಆಯೋಜಿಸಿದ್ದ ಪಂಚ ಗ್ಯಾರಂಟಿಗಳ ಪರಿಶೀಲನೆ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್ ಮಾತನಾಡಿದರು.

ತಾಲೂಕಿನ ತೆರಕಣಾಂಬಿ ಗ್ರಾಮ ಪಂಚಾಯಿತಿ ಕಚೇರಿ ಆವರಣದಲ್ಲಿಂದು ಜಿಲ್ಲಾ ಹಾಗೂ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಆಯೋಜಿಸಿದ್ದ ಹೋಬಳಿಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಫಲಾನುಭವಿಗಳೊಂದಿಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಗೃಹ ಜ್ಯೋತಿ, ಅನ್ನಭಾಗ್ಯ, ಶಕ್ತಿ ಹಾಗೂ ಯುವನಿಧಿ ಯೋಜನೆಗಳು ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಗೊಂಡಿವೆ. ಗ್ಯಾರಂಟಿ ಯೋಜನೆಗಳು ಅನುಷ್ಠಾನದಲ್ಲಿ ಶೇ. 99ರಷ್ಟು ಪ್ರಗತಿ ಸಾಧಿಸಿವೆ. ಗೃಹಲಕ್ಷ್ಮಿ ಯೋಜನೆಯಿಂದ ಮಹಿಳೆಯರು ಆರ್ಥಿಕವಾಗಿ ಅಭಿವೃದ್ಧಿ ಹೊಂದುತ್ತಿದ್ದಾರೆ. ಶಕ್ತಿ ಯೋಜನೆಯಡಿ ಮಹಿಳೆಯರಿಗೆ ರಾಜ್ಯದ ಬಸ್‌ಗಳಲ್ಲಿ ಉಚಿತ ಪ್ರಯಾಣದ ಅವಕಾಶ ಕಲ್ಪಿಸಲಾಗಿದೆ. ಗುಂಡ್ಲುಪೇಟೆ ತಾಲೂಕಿನಲ್ಲಿ 61210 ಮಹಿಳೆಯರು ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಾಗಿದ್ದಾರೆ ಎಂದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎಚ್.ವಿ. ಚಂದ್ರು ಮಾತನಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿ ಚುನಾವಣಾ ಪೂರ್ವದಲ್ಲಿ ಜನರಿಗೆ ಕೊಟ್ಟ ಮಾತನ್ನು ಉಳಿಸಿಕೊಂಡಿದೆ. ಗೃಹಲಕ್ಷ್ಮೀ ಯೋಜನೆ ಅನುಷ್ಠಾನದಲ್ಲಿ ಜಿಲ್ಲೆ ಇಡೀ ರಾಜ್ಯದಲ್ಲಿಯೇ ಮುಂಚೂಣಿಯಲ್ಲಿದೆ. ಮಹಿಳೆಯರು ಸಮಾಜದಲ್ಲಿ ಸ್ವಾವಲಂಬಿ ಬದುಕು ಕಟ್ಟಿಕೊಂಡಿದ್ದಾರೆ. ಸರ್ಕಾರ ಜನಪರವಾಗಿ ಕೆಲಸ ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಬಳಿಕ ಯೋಜನೆಗಳ ಫಲಾನುಭವಿಗಳೊಂದಿಗೆ ನಡೆದ ಸಂವಾದದಲ್ಲಿ ಮಂಜುಳ ಹಾಗೂ ದೇವಮ್ಮ ಸೇರಿದಂತೆ ಇತರೆ ಮಹಿಳೆಯರು ಗೃಹಲಕ್ಷ್ಮೀ ಹಾಗೂ ಶಕ್ತಿ ಯೋಜನೆಗಳಿಂದ ಆಗಿರುವ ಅನುಕೂಲಗಳ ಬಗ್ಗೆ ತಿಳಿಸಿದರು.

ಇದೇ ವೇಳೆ ಯುವನಿಧಿ ಪೋಸ್ಟರ್ ಅನ್ನು ಗಣ್ಯರು ಬಿಡುಗಡೆಗೊಳಿಸಿದರು. ಬಳಿಕ ತೆರಕಣಾಂಬಿ ಗ್ರಾಮದಲ್ಲಿ ಅಂಗನವಾಡಿ ಕಟ್ಟಡಕ್ಕೆ ನಿವೇಶನ ದಾನ ಮಾಡಿದ ಗುರುಸ್ವಾಮಿ ಅವರನ್ನು ಸನ್ಮಾನಿಸಲಾಯಿತು.

ಗ್ರಾಮ ಪಂಚಾಯಿತಿ ಸದಸ್ಯರಾದ ರಾಜಮ್ಮ, ಮಹದೇವಮ್ಮ, ಶಿವನಾಗಮ್ಮ, ಮಹದೇವು, ಜಿಪಂ ಸಿಇಓ ಮೋನಾ ರೋತ್, ಮುಖ್ಯ ಲೆಕ್ಕಾಧಿಕಾರಿ ಬಸವರಾಜು, ಮುಖ್ಯ ಯೋಜನಾಧಿಕಾರಿ ದೀಪಾ, ತಾಪಂ ಇಓ ಷಣ್ಮುಗಂ, ಚಾಮುಲ್ ನಿರ್ದೇಶಕ ನಂಜುಂಡ ಪ್ರಸಾದ್, ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಉಪಾಧ್ಯಕ್ಷ ರಾಜಶೇಖರ್, ಪ್ರದೀಪ್ ಕುಮಾರ್, ರವಿ, ಸಿದ್ದರಾಜು, ತಾಲೂಕು ಸಮಿತಿ ಅಧ್ಯಕ್ಷ ಉಮಾಪತಿ, ಸೋಮೇಶ್ವರ್, ರಾಜೇಂದ್ರ, ಸದಸ್ಯರಾದ ಜಯಕುಮಾರ್, ಚಿನ್ನಸ್ವಾಮಿ, ಭಾಗ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಬಿ. ಮಂಜುಳಾ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹೇಮಾವತಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಇದ್ದರು.

ಚುಡಾ ನಿವೇಶನ ಹಂಚಿಕೆಗೆ ತಜ್ಞರಿಂದ ಮಣ್ಣು ಪರಿಶೀಲನೆ

ಚಾಮರಾಜನಗರ, ಜು.22– ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ಹಂಚಿಕೆ ಸಂಬಂಧ ಚುಡಾ ನಿವೇಶನದಲ್ಲಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣ ಮಾಡಲು ಬೆಂಗಳೂರಿ ನಿಂದ ಬಂದಿದ್ದ ಮಣ್ಣು ಪರೀಕ್ಷೆ ತಜ್ಞರು ಸಂತೇಮರಹಳ್ಳಿ ರಸ್ತೆಯಲ್ಲಿ ಮಣ್ಣಿನ ಗುಣಮಟ್ಟ ಪರಿಶೀಲಿಸಿದರು. ಚುಡಾ ಅಧ್ಯಕ್ಷ ಮಹಮದ್ ಅಸ್ಗರ್ (ಮುನ್ನ) ಮಾತ ನಾಡಿ, ನಿವೇಶನ ಹಂಚಿಕೆಗೆ ಸರ್ಕಾರಕ್ಕೆ ಕಳಿಸಿದ್ದ ಪ್ರಸ್ತಾವನೆಗೆ ಅನುಮೋದನೆ ನೀಡಿದೆ, ಓವರ್



ಹೆಡ್ ಟ್ಯಾಂಕ್ ನಿರ್ಮಾಣ ಮಾಡಲು ಇಂದು ತಜ್ಞರ ತಂಡ ಪರಿಶೀಲಿಸಿರುವ ಮಣ್ಣಿನ ಮಾದರಿಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು, ಅನುಮೋದನೆ ದೊರೆತ ಕೂಡಲೇ ನಿವೇಶನಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಟೆಂಡರ್ ಕರೆಯಲಾಗುವುದು ಎಂದರು. ಈ ಸಂದರ್ಭದಲ್ಲಿ ಚುಡಾ ಆಯುಕ್ತೆ ಸೀಮಾ, ಸಹಾಯಕ ರಿತೀಶ್, ನಗರಸಭೆ ಎಇಇ ಪ್ರಕಾಶ್ ಯೋಜನಾ ನಿರ್ದೇಶಕರಾದ ಶ್ರೀನಿವಾಸ್, ವೆಂಕಟೇಶ್, ಹಾಜರಿದ್ದರು.

ಮೈಸೂರು ಮಿತ್ರ ಬುಧವಾರ 23 ಜುಲೈ 2025

ಸೋಮೇಶ್ವರಪುರ ಸರ್ಕಾರಿ ಶಾಲೆಯಲ್ಲಿ ಗುರುವಂದನಾ, ಸ್ನೇಹ ಮಿಲನ ಕಾರ್ಯಕ್ರಮ



ಮೈಸೂರು: ತಾಲೂಕಿನ ಸೋಮೇಶ್ವರಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಂದನಾ ಮತ್ತು ಸ್ನೇಹ ಮಿಲನ ಕಾರ್ಯಕ್ರಮ ನಡೆಯಿತು.

2009ರಲ್ಲಿ ಪಾಠ ಪ್ರವಚನ ಮಾಡಿದ್ದ ಶಿಕ್ಷಕರಾದ ಶಿವಕುಮಾರ್ ಎಸ್, ದೇವರಾಜು, ಎಂ.ಎನ್.ಕೃಷ್ಣಮೂರ್ತಿ, ಮೆಹಬೂಬ್ ಭಾಷ, ಸ್ಟೀವನ್, ಚಂದ್ರಶೇಖರ ಮೂರ್ತಿ, ನಂಜಯ್ಯ ಮತ್ತು ಶಿಕ್ಷಕಿಯರಾದ ಭಾರತಿ, ಪ್ರತಿಮ, ಮಧುರ, ನಾಗಲಾಂಬಿಕೆ ಮುಂತಾದವರು ಭಾಗವಹಿಸಿದ್ದರು.

ಗುರುವಂದನಾ ಕಾರ್ಯಕ್ರಮದಲ್ಲಿ ಹಿರಿಯ ವಿದ್ಯಾರ್ಥಿಗಳ ಗುಂಪಿನ ನಾಯಕರಾದ ಲೋಕೇಶ ಎಂ., ಮಹೇಶ, ಪ್ರಭಾಕರ, ಬಾಲು, ಮಹದೇವ ಪ್ರಸಾದ್, ಯೋಗೇಶ್ ಹಾಗೂ ನೂರಾರು ಹಳೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಅಂದು ಬೆಳೆದು ಬಂದ ಹಾದಿ ಮತ್ತು ಕಲಿಕೆ ವೇಳೆ ನಡೆದ ಘಟನೆಗಳ ಮೆಲುಕು ಹಾಕಿದ ವಿದ್ಯಾರ್ಥಿಗಳು ಗುರುಗಳಿಗೆ ವಂದಿಸಿ ಸನ್ಮಾನಗಳ ಮೂಲಕ ಸಾರ್ಥಕ ಕ್ಷಣಗಳಿಗೆ ಸಾಕ್ಷಿಯಾದರು.

ಸಿಎಂ ಪತ್ನಿ ವಿರುದ್ಧದ ಸಮನ್ಸ್ ರದ್ದು

ಸಾಲುಂಡಿ ಗ್ರಾಮಸ್ಥರ ಸಂಭ್ರಮ



ಮೈಸೂರು, ಜು.22(ಎಂಕೆ)– ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಪತ್ನಿ ಪಾರ್ವತಿ ಅವರಿಗೆ ಜಾರಿ ನಿರ್ದೇಶನಾಲಯ ನೀಡಿದ್ದ ಸಮನ್ಸ್ ರದ್ದುಪಡಿಸಿದ್ದ ಹೈಕೋರ್ಟ್ ಆದೇಶವನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿದಿರುವ ಹಿನ್ನಲೆಯಲ್ಲಿ ಮೈಸೂರು ತಾಲೂಕಿನ ಸಾಲುಂಡಿ ಗ್ರಾಮಸ್ಥರು ಸಂಭ್ರಮಿಸಿ, ಮಲೆ ಮಹದೇಶ್ವರ ದೇವಸ್ಥಾನಕ್ಕೆ ಕಾಲ್ನಡಿಗೆಯಲ್ಲಿ ತೆರಳುವುದಾಗಿ ಹರಕೆ ಕಟ್ಟಿಕೊಂಡಿದ್ದಾರೆ.

ತಾಪಂ ಮಾಜಿ ಅಧ್ಯಕ್ಷ ಸಿ.ಎಂ. ಸಿದ್ದರಾಮೇಗೌಡ ನೇತೃತ್ವದಲ್ಲಿ ಸಾಲುಂಡಿ ಗ್ರಾಮಸ್ಥರು ಗ್ರಾಮದಲ್ಲಿ ಒಟ್ಟುಗೂಡಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬಸ್ಥರ ಹೆಸರಿನಲ್ಲಿ ಗ್ರಾಮದ ದೇವಾಲಯದಲ್ಲಿ ಪೂಜೆ ಸಲ್ಲಿಸಿದ್ದಾರೆ. ಬಳಿಕ 200ಕ್ಕೂ ಅಧಿಕ ಮಂದಿ ಜು.24 ರಂದು ಕಾಲ್ನಡಿಗೆಯಲ್ಲಿ ಶ್ರೀ ಮಲೆ ಮಹದೇಶ್ವರ ದೇವಸ್ಥಾನಕ್ಕೆ ತೆರಳಿ ಮಹದೇಶ್ವರನ ದರ್ಶನ ಪಡೆಯುವ ಹರಕೆ ಕಟ್ಟಿಕೊಂಡಿದ್ದಾರೆ.

ಮುಡಾ ವಿಚಾರದಲ್ಲಿ ಸುಪ್ರೀಂಕೋರ್ಟ್ ತೀರ್ಪು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ನಮ್ಮ ಜನಪ್ರಿಯ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬ ಸದಸ್ಯರ ಮೇಲೆ ಯಾವುದೇ ಅನಗತ್ಯ ಸುಳ್ಳು ಅಪವಾದಗಳು ಬರದಿರಲಿ ಎಂದು ಆಶಿಸಿದರು. ಶ್ರೀ ಬಸವೇಶ್ವರ ದೇವಾಲಯದ ಅರ್ಚಕ ರವಿಶಾಸ್ತ್ರೀ, ಗ್ರಾಪಂ ಸದಸ್ಯರಾದ ಬಿ.ಬಸವರಾಜು, ಎಂ.ಚಂದ್ರ, ಮುಖಂಡರಾದ ಸಿದ್ದರಾಮೇಗೌಡ, ಮಾದಪ್ಪ, ಚಿಕ್ಕಬಸವಯ್ಯ ಮತ್ತಿತರರಿದ್ದರು.

ಜನಗಣತಿ 2027ಕ್ಕೆ ಡಿಜಿಟಲ್ ದತ್ತಾಂಶ ಸಂಗ್ರಹ; ಜಾತಿ ಗಣತಿಗೂ ಸಿದ್ಧತೆ

ಕೇಂದ್ರ ಗೃಹ ಸಚಿವಾಲಯ ಮಾಹಿತಿ

ನವದೆಹಲಿ: 2027ರ ಜನಗಣತಿಗೆ ಸಿದ್ಧತೆ ಆರಂಭಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ಮಂಗಳವಾರ ಹೇಳಿದೆ.

ಜಾತಿ ಗಣತಿ ಕಾರ್ಯತಂತ್ರ ಕುರಿತು ಚರ್ಚಿಸಲು ಇದೇ ತಿಂಗಳ ಆರಂಭದಲ್ಲಿ ಜನಗಣತಿ ಕಾರ್ಯಾಚರಣೆಗಳ ನಿರ್ದೇಶಕರ ಎರಡು ದಿನಗಳ ಸಮ್ಮೇಳನ ನಡೆಸಲಾಗಿದ್ದು, ಎರಡು ಹಂತಗಳಲ್ಲಿ ಜಾತಿಗಣತಿ ನಡೆಸಲಾಗುವುದು. ಇದರಲ್ಲಿ ಡಿಜಿಟಲ್ ಡೇಟಾ ಸಂಗ್ರಹಣೆ ಮತ್ತು ಜಾತಿ ಗಣತಿ ಒಳಗೊಂಡಿರುತ್ತದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

ಈ ಸಂಬಂಧ ಲೋಕಸಭೆಗೆ ಲಿಖಿತ ರೂಪದಲ್ಲಿ ಉತ್ತರಿಸಿರುವ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಜುಲೈ 3 ಮತ್ತು 4 ರಂದು ರಾಷ್ಟ್ರ ರಾಜಧಾನಿಯಲ್ಲಿ ಎರಡು ದಿನಗಳ ಸಮ್ಮೇಳನವನ್ನು ಆಯೋಜಿಸಲಾಗಿತ್ತು. ಇದರಲ್ಲಿ ಜನಗಣತಿ ಕಾರ್ಯಾಚರಣೆಗಳ ನಿರ್ದೇಶಕರು, ಜನಗಣತಿ ಕಾರ್ಯಾಚರಣೆಗಳ ನಿರ್ದೇಶನಾಲಯಗಳ ಹಿರಿಯ ಅಧಿಕಾರಿಗಳು ಮತ್ತು ರಿಜಿಸ್ಟ್ರಾರ್ ಜನರಲ್ ಮತ್ತು ಸೆನ್ಸಸ್ ಕಮಿಷನರ್ ಕಚೇರಿಯ ಅಧಿಕಾರಿಗಳು ಭಾಗವಹಿಸಿದ್ದರು ಎಂದು ತಿಳಿಸಿದ್ದಾರೆ.

ಸಮ್ಮೇಳನದಲ್ಲಿ ಮುಂಬರುವ ಜನಗಣತಿ ಮತ್ತು ಸಂಬಂಧಿತ ಚಟುವಟಿಕೆಗಳ ಕುರಿತು ಕೈಗೊಳ್ಳಬೇಕಾದ ಕಾರ್ಯತಂತ್ರ ಕುರಿತು ಚರ್ಚಿಸಲಾಗಿದೆ. ಮೊಬೈಲ್ ಆ್ಯಪ್ ಮೂಲಕ ಡೇಟಾ ಸಂಗ್ರಹಣೆ, ಜನಗಣತಿ ನಿರ್ವಹಣೆ ಮತ್ತು ಮಾನಿಟರಿಂಗ್ ಸಿಸ್ಟಮ್ ಪೋರ್ಟಲ್ ಮೂಲಕ ನಿರ್ವಹಣೆ ಮತ್ತು ಮೇಲ್ವಿಚಾರಣೆ, ಸ್ವಯಂ–ಎಣಿಕೆ, ಜನಗಣತಿ ಸಿಬ್ಬಂದಿಯ ತರಬೇತಿ ಮತ್ತಿತರ ಪ್ರಮುಖ ವಿಷಯಗಳ ಕುರಿತು ಚರ್ಚಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಹವಾಮಾನ ಮತ್ತು ಕಾರ್ಯತಂತ್ರದ ಕಾರಣದಿಂದ ಎರಡು ಹಂತಗಳಲ್ಲಿ ಗಣತಿ ನಡೆಯಲಿವೆ. 2027ರ ಮಾರ್ಚ್ 1 ರಿಂದ ದೇಶದ ಬಹುತೇಕ ಭಾಗಗಳಲ್ಲಿ, 2026ರ ಅಕ್ಟೋಬರ್ 1ರಿಂದ ಕೇಂದ್ರಾಡಳಿತ ಪ್ರದೇಶಗಳಾದ ಲಡಾಖ್, ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡ ರಾಜ್ಯಗಳಲ್ಲಿ ಗಣತಿಗಳು ಆರಂಭವಾಗಲಿವೆ ಎಂದು ಗೃಹ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

2011ರಲ್ಲಿ ಕೊನೆಯ ಬಾರಿಗೆ ಗಣತಿಯನ್ನು ನಡೆಸಲಾಗಿತ್ತು. ಕೋವಿಡ್ ಕಾರಣ ನೀಡಿ 2021ರಲ್ಲಿ ನಡೆಯಬೇಕಿದ್ದ ಗಣತಿಯನ್ನು ಕೇಂದ್ರ ಸರ್ಕಾರ ಮುಂದೂಡಿತ್ತು. ಜನಗಣತಿ ಕಾಯ್ದೆ 1948 ಮತ್ತು ಜನಗಣತಿ ನಿಯಮಗಳು 1990 ರ ನಿಬಂಧನೆಗಳ ಅಡಿಯಲ್ಲಿ ಭಾರತದಲ್ಲಿ ಜನಗಣತಿಯನ್ನು ನಡೆಸಲಾಗುತ್ತದೆ.

ಸಾಮೂಹಿಕ ಋಗ್‌ಉಪಾಕರ್ಮ

ಮೈಸೂರು, ಜು. 22– ಮೈಸೂರಿನ ಬಡಗನಾಡು ಬಳಗದ ವತಿಯಿಂದ ಆ. 9 ರಂದು ಬೆಳಗ್ಗೆ 10 ಗಂಟೆಗೆ ರಾಮಕೃಷ್ಣನಗರದಲ್ಲಿರುವ ಬಡಗನಾಡು ಬಳಗದಲ್ಲಿ ಸಾಮೂಹಿಕ ಋಗ್‌ಉಪಾಕರ್ಮ ಹಮ್ಮಿಕೊಳ್ಳಲಾಗಿದೆ. ಭಾಗವಹಿಸಲು ಆಸಕ್ತಿಯುಳ್ಳವರು ಆ. 1 ರೊಳಗೆ ನೋಂದಣಿ ಮಾಡಿಸಿಕೊಳ್ಳಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9449854277, 9845595505 ಸಂಪರ್ಕಿಸಬಹುದು.

ಮನೆಮನೆ ವಚನ ಕಲಿಕೆ



ಮನೆಮನೆ ವಚನ ಕಲಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಮೈಸೂರು, ಜು.22(ಎಸ್‌ಪಿಎನ್)– ಶಾಶ್ವತಿ ವೀರಶೈವ ಮಹಿಳಾ ಬಳಗದ ವತಿಯಿಂದ ಏರ್ಪಡಿಸಿದ್ದ ಮನೆ ಮನೆ ವಚನ ಕಲಿಕೆ ಕಾರ್ಯಕ್ರಮವನ್ನು ಹಿರಿಯ ಸಾಹಿತಿ ಎಸ್.ಪಿ.ಉಮಾದೇವಿ ಉದ್ಘಾಟಿಸಿದರು.

ಮೈಸೂರು ವಿಜಯನಗರ 3ನೇ ಹಂತದ ನಿವಾಸಿ, ನಿವೃತ್ತ ಪ್ರಾಧ್ಯಾಪಕ ಡಾ.ಕೆ.ಸಿ.ಬಸವರಾಜು ಅವರ ನಿವಾಸದಲ್ಲಿ ಏರ್ಪಡಿಸಿದ್ದ ವಚನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಪ್ರಸ್ತುತ ದಿನಗಳಲ್ಲಿ ಸತ್ಸಂಗ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು. ಇದರಿಂದ ನಮ್ಮ ಮಕ್ಕಳಲ್ಲಿ ವಚನಗಳ ಕುರಿತು ಕಲಿಕೆ ಒತ್ತು ನೀಡಿದರೆ, ವೈಜ್ಞಾನಿಕ ಚಿಂತನೆಗೆ ಅವಕಾಶ ಮಾಡಿಕೊಟ್ಟಂತೆ. ವಚನಗಳನ್ನು ಸಣ್ಣ ವಯಸ್ಸಿನಲ್ಲೇ ಕಲಿಯುವುದರಿಂದ ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆಗಳು ಮೂಡುತ್ತವೆ ಎಂದರು. ಈ ವೇಳೆ ಬಳಗದ ಅಧ್ಯಕ್ಷೆ ಡಾ.ಶೈಲಾ ನಾಗರಾಜ್ ಹಾಗೂ ಇತರರಿದ್ದರು.

ಪ್ರೇಕ್ಷಕರನ್ನು ರಂಜಿಸಿದ ಶಿವರಾಜ್‌ಕುಮಾರ್ ಹಿಟ್ಸ್ ಸಂಗೀತ ಕಾರ್ಯಕ್ರಮ



ಡಾ.ಶಿವರಾಜ್‌ಕುಮಾರ್ ಹಿಟ್ಸ್ ಸಂಗೀತ ಕಾರ್ಯಕ್ರಮದಲ್ಲಿ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಅವರನ್ನು ಸನ್ಮಾನಿಸಲಾಯಿತು

ಮೈಸೂರು, ಜು.22(ಎಸ್‌ಪಿಎನ್)– ಮೈಸೂರು ಜೆಎಲ್‌ಬಿ ರಸ್ತೆಯ ನಾದಬ್ರಹ್ಮ ಸಭಾಂಗಣದಲ್ಲಿ ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ ಡಾ.ಶಿವರಾಜ್‌ಕುಮಾರ್ ಅವರ 63ನೇ ಹುಟ್ಟುಹಬ್ಬ ಹಾಗೂ ಅವರು ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿ 40 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ 'ಡಾ.ಶಿವರಾಜ್‌ಕುಮಾರ್ ಹಿಟ್ಸ್ ಸಂಗೀತ ಕಾರ್ಯಕ್ರಮವನ್ನು ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಕನ್ನಡ ಚಿತ್ರೋದ್ಯಮದ ಬೆಳವಣಿಗೆಯಲ್ಲಿ ಡಾ.ರಾಜ್ ಕುಟುಂಬದ ಕೊಡುಗೆ ಅಪಾರ. ಕನ್ನಡ ಚಿತ್ರರಂಗದ ಆರಂಭದ ದಿನಗಳಲ್ಲಿ ಸಿನಿಮಾರಂಗ ಚಟುವಟಿಕೆಗಳು ತಮಿಳುನಾಡಿನ ಚೆನ್ನೈನಲ್ಲಿ ನಡೆಯುತ್ತಿದ್ದವು. ಇದರಿಂದ ಕನ್ನಡ ಉದ್ಯಮಕ್ಕೆ ಆಗುತ್ತಿದ್ದ ನಷ್ಟವನ್ನು ಅರಿತ ಡಾ.ರಾಜ್ ಕುಟುಂಬ, ಬೆಂಗಳೂರಿನಲ್ಲಿಯೇ ಕನ್ನಡ ಸಿನಿಮಾ ಉದ್ಯಮ ನೆಲೆಕಂಡುಕೊಳ್ಳಲು ಅವರ ಕೊಡುಗೆ ಇದೆ ಎಂದರು.

ಇತ್ತೀಚೆಗೆ ನಿಧನರಾದ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ದಿನಪತ್ರಿಕೆಯ ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ, ಹಿರಿಯ ಸಿನಿಮಾ ನಟಿ ಡಾ.ಬಿ.ಸರೋಜಾ ದೇವಿ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಮೈಸೂರಿನಲ್ಲಿ ಕಲೆ, ಸಂಸ್ಕೃತಿ, ಕಲಾವಿದರು ಬೆಳಕಿಗೆ ಬರಲು ಡಾ.ಕೆ.ಬಿ.ಗಣಪತಿ ಅವರ ಸಾರಥ್ಯದಲ್ಲಿ ಮೂಡಿಬರುತ್ತಿದ್ದ ಈ ಎರಡು ಪತ್ರಿಕೆಗಳು ಕಾರಣ. ಇವೆರಡು ದಿನಪತ್ರಿಕೆಗಳು ಮೈಸೂರಿನಲ್ಲಿ ಕಲೆ, ಸಾಹಿತ್ಯ, ನಾಟಕ ಕ್ಷೇತ್ರದ ಬೆಳವಣಿಗೆಗೆ ಇವು ಕಾರಣವಾಗಿವೆ ಎಂದು ನುಡಿನಮನ ಸಲ್ಲಿಸಿದರು.

ಡಾ.ರಾಜ್‌ಕುಮಾರ್ ಕುಟುಂಬದ ಯಾವುದೇ ಕಾರ್ಯಕ್ರಮವನ್ನು ಮೈಸೂರಿನಲ್ಲಿ ಅಚ್ಚುಕಟ್ಟಾಗಿ ಜರುಗಲು ಮೈಸೂರು ಜಯರಾಂ ಅವರ ಶ್ರಮ ಇರುತ್ತದೆ. ಈಗಲೂ ಅವರ ಸಾರಥ್ಯದಲ್ಲೇ ಡಾ.ಶಿವರಾಜ್‌ಕುಮಾರ್ ಹಿಟ್ಸ್ ಕಾರ್ಯಕ್ರಮ ಆಯೋಜನೆಗೊಂಡಿರುವುದು ಸಂತೋಷದ ಸಂಗತಿ. ಡಾ.ರಾಜ್ ಕುಟುಂಬದ ಮೇಲೆ ಮೈಸೂರು ಜಯರಾಂ ಅವರಿಗಿರುವ ಪ್ರೀತಿಯೇ ಇಷ್ಟೆಲ್ಲಾ ಕಾರ್ಯಕ್ರಮ ಆಯೋಜನೆಗೆ ಕಾರಣವಾಗಿದೆ ಎಂದರು.

ಇದಕ್ಕೂ ಮೊದಲು ಚಾಮುಂಡೇಶ್ವರಿ ದೇವಿ ಕುರಿತ ಭಕ್ತಿಗೀತೆಯಿಂದ ಆರಂಭವಾಗಿ ಶ್ರೀಕಾಲ, ಜೋಗಿ, ಆನಂದ್, ನಮ್ಮೂರ ಮಂದಾರ ಹೂವೆ ಚಿತ್ರದ ಹೇಳೆ ಕೋಗಿಲೆ ಇಂಪಾಗಲಿ, ರಥಸಪ್ತಮಿ, ಚಿಗುರಿದ ಕನಸು, ಮಾದೇಶ, ಬೆಳ್ಳಿ, ಸಂಯುಕ್ತ ಚಿತ್ರದ ಪ್ರೀತಿಯೋ, ಪ್ರೇಮವೋ, ಮಿಡಿದ ಶೃತಿ, ನನ್ನ ನಿನ್ನ ಆಸೆ, ಮನ ಮೆಚ್ಚಿದ ಹುಡುಗಿದ ಚಿತ್ರದ ಬೆಂಕಿಯಲಿ ತಂಪು ಕಂಡೆನು, ಆಸೆಗೊಬ್ಬ ಮೀಸೆಗೊಬ್ಬ, ಮೋಡದ ಮರೆಯಲಿ ಚಿತ್ರಗಳ ಹಾಡನ್ನು ಹಾಡಿದರು.


ಜನುಮನದ ಜೋಡಿ, ದೊರೆ, ನಿನ್ನೆ ಪ್ರೀತಿಸುವೆ, ಜೋಡಿ, ಅಂಡಮಾನ್, ಬಾವಭಾಮೈದ, ಮೋಡದ ಮರೆಯಲಿ, ಗಲಾಟೆ ಅಳಿಯಂದ್ರು, ಮದುವೆ ಆಗೋಣ ಬಾ, ಹಗಲು ವೇಷ, ಸಂತ, ಇಂದ್ರಧನುಷ್, ಆರ್ಯನ್, ಓಂ, ವಿಶ್ವ, ಕುರುಬನ ರಾಣಿ, ಅರಳಿದ ಹೂವುಗಳು, ಮೃತ್ಯುಂಜಯ, ಗಂಡುಗಲಿ, ಜೋಡಿ ಹಕ್ಕಿ, ಶ್ಲೋಕ ಚಿತ್ರದ ಹಾಡುಗಳನ್ನು ಹಾಡಿ ಪ್ರೇಕ್ಷಕರ ಮನಗೆದ್ದರು.

ಗಾಯಕರಾದ ಮೈಸೂರು ಜಯರಾಂ, ರಾಮಚಂದ್ರು, ತೇಜಸ್ವಿನಿ, ಚಂದ್ರಶೇಖರ್, ಶ್ರೀನಿವಾಸ್, ಅಶ್ವಿನಿ, ವಿಶ್ವನಾಥ್, ಅನಿತಾ, ತೇಜಸ್ವಿನಿ ಅವರು ಸುಮಧುರ ಗೀತೆಗಳನ್ನು ಹಾಡಿ, ಕಾರ್ಯಕ್ರಮಕ್ಕೆ ಮೆರಗು ತಂದರು. ಕಾರ್ಯಕ್ರಮದಲ್ಲಿ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಅವರನ್ನು ಸನ್ಮಾನಿಸಲಾಯಿತು.

ಡಾ.ಕೆಬಿಜಿ, ಬಿ.ಸರೋಜಾ ದೇವಿ ಅವರಿಗೆ ಶ್ರದ್ಧಾಂಜಲಿ

ಕಾರ್ಯಕ್ರಮ ಉದ್ಘಾಟನೆಗೂ ಮುನ್ನ ಇತ್ತೀಚೆಗೆ ನಿಧನರಾದ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ ಮತ್ತು ಹಿರಿಯ ಸಿನಿಮಾ ನಟಿ ಬಿ.ಸರೋಜಾ ದೇವಿ ಅವರಿಗೆ ಎರಡು ನಿಮಿಷ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಉಪ ರಾಷ್ಟ್ರಪತಿ ಜಗದೀಪ್ ಧನಕರ್ ರಾಜೀನಾಮೆ ತಕ್ಷಣ ಅಂಗೀಕಾರ



ನವದೆಹಲಿ: ಉಪ ರಾಷ್ಟ್ರಪತಿ ಜಗದೀಪ್ ಧನಕರ್ ಅವರು ತಮ್ಮ ಹುದ್ದೆಗೆ ನೀಡಿದ ರಾಜೀನಾಮೆಯು ತಕ್ಷಣವೇ ಅಂಗೀಕಾರವಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಶೂನ್ಯ ವೇಳೆ ಬಳಿಕ ಮಧ್ಯಾಹ್ನ 12 ಗಂಟೆಗೆ ರಾಜ್ಯಸಭಾ ಕಲಾಪ ಮತ್ತೆ ಆರಂಭವಾದಾಗ ಅಧ್ಯಕ್ಷೀಯ ಪೀಠದಲ್ಲಿದ್ದ ಘನಶ್ಯಾಮ ತಿವಾರಿಯವರು ಗೃಹ ಸಚಿವಾಲಯದ ಅಧಿಸೂಚನೆ ಬಗ್ಗೆ ಸಭೆಗೆ ತಿಳಿಸಿದರು.

'2025 ಜುಲೈ 22ರ ಅಧಿಸೂಚನೆಯಲ್ಲಿ ಗೃಹ ಸಚಿವಾಲಯವು, ಸಂವಿಧಾನದ 67 (ಎ) ವಿಧಿಯ ಅಡಿಯಲ್ಲಿ ಭಾರತದ ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ನೀಡಿದ ರಾಜೀನಾಮೆಯನ್ನು ಕೂಡಲೇ ಅಂಗೀಕರಿಸಲಾಗಿದೆ ಎಂದು ತಿಳಿಸಿದೆ' ಎಂದು ತಿವಾರಿ ಘೋಷಿಸಿದರು.

ಜಗದೀಪ್ ಧನ್‌ಕರ್ ಅವರ ರಾಜೀನಾಮೆಯ ನಂತರ ಮಂಗಳವಾರದ ಕಲಾಪಗಳನ್ನು ಉಪ ಸಭಾಪತಿ ಹರಿವಂಶ್ ನಾರಾಯಣ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

ಜಗದೀಪ್ ಧನಕರ್ ಅವರು ಸೋಮವಾರ ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ತಮ್ಮ ರಾಜೀನಾಮೆಯನ್ನು ಕಳುಹಿಸಿದ್ದರು.

ಆರೋಗ್ಯ ರಕ್ಷಣೆಗೆ ಆದ್ಯತೆ ನೀಡಲು ಮತ್ತು ವೈದ್ಯಕೀಯ ಸಲಹೆಯನ್ನು ಪಾಲಿಸಲು, ಸಂವಿಧಾನದ 67(ಎ) ವಿಧಿಗೆ ಅನುಗುಣವಾಗಿ ತಕ್ಷಣವೇ ಜಾರಿಗೆ ಬರುವಂತೆ ಭಾರತದ ಉಪರಾಷ್ಟ್ರಪತಿ ಸ್ಥಾನಕ್ಕೆ ನಾನು ರಾಜೀನಾಮೆ ನೀಡುತ್ತಿದ್ದೇನೆಂದು ಎಂದು ಪತ್ರದಲ್ಲಿ ತಿಳಿಸಿದ್ದರು.

ನಾನು ನನ್ನ ಆರೋಗ್ಯ ರಕ್ಷಣೆಯತ್ತ ಗಮನ ಹರಿಸಲು ಬಯಸುತ್ತೇನೆ. ಈ ನಿಟ್ಟಿನಲ್ಲಿ, ವೈದ್ಯರ ಸಲಹೆಯ ಮೇರೆಗೆ ನಾನು ಉಪರಾಷ್ಟ್ರಪತಿ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ. ಸಂವಿಧಾನದ 67(ಎ) ವಿಧಿಯ ಪ್ರಕಾರ ನನ್ನ ಸ್ಥಾನಕ್ಕೆ ರಾಜೀನಾಮೆ ನೀಡುವ ನನ್ನ ನಿರ್ಧಾರ ತಕ್ಷಣವೇ ಜಾರಿಗೆ ಬರಲಿದೆ. ಉಪರಾಷ್ಟ್ರಪತಿ ಹುದ್ದೆಯ ಜವಾಬ್ದಾರಿಗಳನ್ನು ಪೂರೈಸುವ ಅವಧಿಯಲ್ಲಿ ಸಂಪೂರ್ಣ ಬೆಂಬಲ ನೀಡಿದ್ದಕ್ಕಾಗಿ ಅಧ್ಯಕ್ಷ ಮುರ್ಮು, ಪ್ರಧಾನಿ ಮೋದಿ, ಕೇಂದ್ರ ಸಚಿವರು ಮತ್ತು ಎಲ್ಲಾ ಸಂಸತ್ ಸದಸ್ಯರಿಗೆ ನಾನು ಕೃತಜ್ಞನಾಗಿದ್ದೇನೆ ಎಂದರು.

ಮೈಸೂರು ದಸರಾ ವಸ್ತುಪ್ರದರ್ಶನದಲ್ಲಿ ಯೂನಿಟಿ ಮಾಲ್ ನಿರ್ಮಾಣಕ್ಕೆ ಗೋಪಾಲಕರ ತೀವ್ರ ವಿರೋಧ

ಮೈಸೂರು, ಜು.22(ಬಿಎಲ್‌ಯು)– ಮೈಸೂರಿನ ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಯೂನಿಟಿ ಮಾಲ್ ನಿರ್ಮಾಣಕ್ಕೆ ನಗರದ ಇಟ್ಟಿಗೆಗೂಡಿನ ಗೋಪಾಲಕರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಈ ಕಾರ್ಯವನ್ನು ಕೂಡಲೇ ಸ್ಥಗಿತ ಮಾಡಬೇಕೆಂದು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಪತ್ರ ಬರೆದಿದ್ದಾರೆ.

ಎಂ.ಜಿ.ರಸ್ತೆಗೆ ಹೊಂದಿಕೊಂಡಿರುವ ದಸರಾ ವಸ್ತುಪ್ರದರ್ಶನದ ಆವರಣ ಗರಿಕೆ ಮಾಳವಾಗಿದೆ. ಮಹಾರಾಜರ ಕಾಲದಿಂದಲೂ ಅಲ್ಲಿ ಹಸುಗಳು ಮೇಯಲು ಮೀಸಲಿಡಲಾಗಿದೆ. ಮೈಸೂರು ಮಹಾರಾಜರು ಈ ಜಾಗವನ್ನು ಗರಿಕೆ ಮಾಳವೆಂದು ದಾಖಲೆಗಳಲ್ಲಿ ಉಲ್ಲೇಖಿಸಿದ್ದಾರೆ ಎಂದು ತಿಳಿಸಿದ್ದಾರೆ.

ಈಗ ಗರಿಕೆ ಮಾಳದಲ್ಲಿ ಕಾನೂನು ಬಾಹಿರವಾಗಿ ಯೂನಿಟಿ ಮಾಲ್ ನಿರ್ಮಾಣ ಮಾಡಲಾಗುತ್ತಿದೆ. ಇದರಿಂದ ಇಡೀ ದಸರಾ ವಸ್ತುಪ್ರದರ್ಶನದಲ್ಲಿ ಹಸಿರು ಮಾಯವಾಗಿ ಕಾಂಕ್ರಿಟ್ ಕಾಡು ನಿರ್ಮಾಣ ಮಾಡಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಜಾಗದಲ್ಲಿ ವಾಣಿಜ್ಯ ಕಟ್ಟಡ ನಿರ್ಮಾಣ ಆಗದಂತೆ ನ್ಯಾಯಾಲಯದ ತೀರ್ಪು ಇದೆ. ಆದ್ದರಿಂದ ಗರಿಕೆ ಮಾಳದ ಮೂಲ ಉದ್ದೇಶಕ್ಕೆ ಧಕ್ಕೆ ತಂದು, ಯೂನಿಟಿ ಮಾಲ್ ಕಟ್ಟಡ ನಿರ್ಮಾಣ ಕಾರ್ಯ ಕೈಗೊಳ್ಳಬಾರದೆಂದು ಆಗ್ರಹಿಸಿದ್ದಾರೆ.

ಈ ಸಂಬಂಧ ಇಟ್ಟಿಗೆಗೂಡಿನ ಗೋಪಾಲಕರ ಪರವಾಗಿ ವಿ.ಸುಂದರ್ ಮೂರ್ತಿ, ನಾಗರಾಜ್, ರಕ್ಷಿತ್, ರಾಘವೇಂದ್ರ, ಮಹದೇವ, ಪ್ರತೀಪ್, ವಿನೋದ್ ಕುಮಾರ್, ಸುರೇಶ್ ಸೇರಿದಂತೆ ಹಲವರು ಸಹಿ ಮಾಡಿ ಮನವಿ ಪತ್ರ ಸಲ್ಲಿಸಿದ್ದಾರೆ.

ಬಿಎಂಶ್ರೀ ನಗರ ನಿವಾಸಿಗಳಿಗೆ 'ಮ್ಯಾನ್‌ಹೋಲ್' ಕಂಟಕ!



ಆರನೇ ಕ್ರಾಸ್‌ನಲ್ಲಿ ದುರಸ್ತಿ ಮಾಡಿದ ಮ್ಯಾನ್‌ಹೋಲ್ ದುಸ್ಥಿತಿ.



ಮೈಸೂರಿನ ಬಿಎಂಶ್ರೀ ನಗರ 2ನೇ ಮುಖ್ಯರಸ್ತೆಯ ಅಪಾಯಕಾರಿ ಮ್ಯಾನ್‌ಹೋಲ್

ಮೈಸೂರು, ಜು.22– ಮೈಸೂರಿನ ಬಿ.ಎಂ.ಶ್ರೀನಗರ ನಿವಾಸಿಗಳಿಗೆ 'ಮ್ಯಾನ್‌ಹೋಲ್ ಕಂಟಕ' ಎದುರಾಗಿದೆ.

ನಿತ್ಯ ಒಂದಿಲ್ಲೊಂದು ಕಡೆ ಮ್ಯಾನ್‌ಹೋಲ್ ದುರಸ್ತಿ ನಡೆಯುತ್ತಲೇ ಇರುತ್ತದೆ. ಅದರಲ್ಲೂ ಎರಡನೇ ಮುಖ್ಯ ರಸ್ತೆ ದುಸ್ಥಿತಿ ಹೇಳತೀರದ್ದಾಗಿದೆ. ಆರನೇ ಕ್ರಾಸ್ ಸಂದಿಸುವ ಸ್ಥಳದಲ್ಲಿ ಮ್ಯಾನ್‌ಹೋಲ್ ದುರಸ್ತಿ ಮಾಡಿ, ಮುರಿದಿರುವ ಮುಚ್ಚಳವನ್ನೇ ಮುಚ್ಚಿ ಅದರ ಮೇಲೆ ರಿಂಗ್ ಇಟ್ಟು ಕೈ ತೊಳೆದುಕೊಂಡಿದ್ದಾರೆ. ಇದರಿಂದ ವಾಹನ ಸವಾರರು, ಶಾಲಾ–ಮಕ್ಕಳಿಗೆ ಕಂಟಕ ಎದುರಾಗಿದೆ. ರಾತ್ರಿ ವೇಳೆ ಅಪಘಾತ ಸಂಭವಿಸುವ ಭೀತಿ ಸೃಷ್ಟಿಯಾಗಿದೆ. ಸಾರಿಗೆ ಬಸ್ ಸಂಚಾರಕ್ಕೂ ಅಡ್ಡಿಯಾಗಿದೆ.

ಈ ಎರಡನೇ ಮುಖ್ಯರಸ್ತೆಯುದ್ದಕ್ಕೂ ಇರುವ ಮ್ಯಾನ್‌ಹೋಲ್‌ಗಳು ಕುಸಿದಂತೆ ಕಾಣಿಸುತ್ತವೆ. 13ನೇ ಕ್ರಾಸ್ ಬಳಿ ದೊಡ್ಡ ಹೊಂಡವೇ ನಿರ್ಮಾಣವಾಗಿದೆ. ಇನ್ನು 6ನೇ ಕ್ರಾಸ್‌ನಲ್ಲೂ ಒಂದು ಮ್ಯಾನ್‌ಹೋಲ್ ದುರಸ್ತಿ ಮಾಡಲಾಗಿದ್ದರೂ ಇಲ್ಲಿನ ನಿವಾಸಿಗಳ ಸಂಕಷ್ಟ ಪರಿಹಾರವಾಗಿಲ್ಲ ಸೂಕ್ತ ರೀತಿಯಲ್ಲಿ ಮ್ಯಾನ್‌ಹೋಲ್ ವ್ಯವಸ್ಥೆ ಮಾಡದ ಕಾರಣ ಈ ರಸ್ತೆಯಲ್ಲಿರುವ ಹಲವು ಮನೆಗಳಿಗೆ ಒಳಚರಂಡಿ ನೀರು ಹಿಮ್ಮುಖವಾಗುತ್ತಿರುವುದರಿಂದ ಸಮಸ್ಯೆ ಉಂಟಾಗಿದೆ ಇದನ್ನು ಪರಿಹರಿಸುವ ನಿಟ್ಟಿನಲ್ಲಿ ನಗರಪಾಲಿಕೆಯವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. 200 ಮೀಟರ್‌ಗೂ ಹೆಚ್ಚು ಉದ್ದವಿರುವ ಈ ಕ್ರಾಸ್‌ನಲ್ಲಿ ಕೇವಲ ಎರಡು ಮ್ಯಾನ್‌ಹೋಲ್ ಅಳವಡಿಸಿರುವುದರಿಂದ ಇಷ್ಟೆಲ್ಲಾ ಫಜೀತಿ ಆಗುತ್ತಿದೆ. ಕೂಡಲೇ ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಬಸ್ ಹತ್ತುವಾಗ ಬ್ಯಾಗ್‌ನಲ್ಲಿದ್ದ ಚಿನ್ನದ ಸರ ಎಗರಿಸಿದ ಖದೀಮರು

ಮೈಸೂರು ಬಸ್ ನಿಲ್ದಾಣದಲ್ಲಿ ಕಳ್ಳರ ಹಾವಳಿ

ಮೈಸೂರು, ಜು.22– ಬಸ್‌ಗೆ ಹತ್ತುವಾಗ ವ್ಯಾನಿಟಿ ಬ್ಯಾಗ್‌ನಲ್ಲಿದ್ದ ಚಿನ್ನದ ಸರ ಕಳವು ಮಾಡಿರುವ ಘಟನೆ ಮೈಸೂರಿನ ಸಬರ್ಬನ್ ಬಸ್ ನಿಲ್ದಾಣದಲ್ಲಿ ನಡೆದಿದೆ.

ಬೆಂಗಳೂರು ನಿವಾಸಿ ವಿದ್ಯಾರತ್ನ(48) ಅವರ ಸುಮಾರು 3 ಲಕ್ಷ ಮೌಲ್ಯದ 32 ಗ್ರಾಂ ಚಿನ್ನದ ಸರವನ್ನು ಖದೀಮರು ಎಗರಿಸಿದ್ದಾರೆ. ಜು.10ರಂದು ಮೈಸೂರಿನಲ್ಲಿರುವ ಅಣ್ಣನ ಮನೆಗೆ ಬಂದು, ಮರುದಿನ ಹಾಸನಕ್ಕೆ ಹೋಗಲು ಬಸ್ ಹತ್ತುವಾಗ ಈ ಘಟನೆ ನಡೆದಿದ್ದು, ತಡವಾಗಿ ದೂರು ನೀಡಿದ್ದಾರೆ.

ಬಸ್ ಹತ್ತುವಾಗ ತುಂಬಾ ರಶ್ ಇತ್ತು. ಹತ್ತಿದ ನಂತರ ಮೊಬೈಲ್ ತೆಗೆದುಕೊಳ್ಳಲೆಂದು ವ್ಯಾನಿಟಿ ಬ್ಯಾಗ್ ನೋಡಿದಾಗ ಅದರ ಜಿಪ್ ತೆರೆದಿತ್ತು. ಗಾಬರಿಯಿಂದ ಬ್ಯಾಗ್ ಪರಿಶೀಲಿಸಿದಾಗ ಅದರಲ್ಲಿ ಚಿಕ್ಕ ಬಾಕ್ಸ್‌ನಲ್ಲಿಟ್ಟಿದ್ದ ಚಿನ್ನದ ಸರ ಇರಲಿಲ್ಲ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ರಾಷ್ಟ್ರೀಯ ಕ್ರೀಡಾ ಮಸೂದೆ ವ್ಯಾಪ್ತಿಗೆ ಬಿಸಿಸಿಐ

ನವದೆಹಲಿ: ಲೋಕಸಭೆಯಲ್ಲಿ ಬುಧವಾರ ಮಂಡಿಸಲು ಸಿದ್ಧವಾಗಿರುವ ರಾಷ್ಟ್ರೀಯ ಕ್ರೀಡಾ ಮಸೂದೆಯ ವ್ಯಾಪ್ತಿಗೆ ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿಯೂ ಬರಲಿದೆ.

ಬಿಸಿಸಿಐ ಕೇಂದ್ರ ಕ್ರೀಡಾ ಸಚಿವಾಲಯದಿಂದ ಯಾವುದೇ ಅನುದಾನವನ್ನು ತೆಗೆದುಕೊಳ್ಳುವುದಿಲ್ಲ. ಆದರೂ ಕ್ರೀಡಾ ಮಸೂದೆಯ ವ್ಯಾಪ್ತಿಗೆ ಸೇರಿಕೊಳ್ಳಲಿದೆ. ಉದ್ದೇಶಿತ ರಾಷ್ಟ್ರೀಯ ಕ್ರೀಡಾ ಮಂಡಳಿ (ಎನ್‌ಎಸ್‌ಬಿ)ಯ ಮಾನ್ಯತೆ ಪಡೆಯುವುದು ಕೂಡ ಬಿಸಿಸಿಐಗೆ ಅಗತ್ಯವಾಗಲಿದೆ ಉಳಿದೆಲ್ಲ ರಾಷ್ಟ್ರೀಯ ಕ್ರೀಡಾ ಫೆಡರೇಷನ್ (ಎನ್‌ಎಸ್‌ಎಫ್)ಗಳ ಮಾದರಿಯಲ್ಲಿಯೇ ನೆಲದ ಕಾನೂನು ಪಾಲನೆ ಮಾಡುವುದು ಬಿಸಿಸಿಐ ಕರ್ತವ್ಯ ಒಂದೊಮ್ಮೆ ಮಸೂದೆಯು ಕಾಯಿದೆಯಾಗಿ ಜಾರಿಯಾದರೆ ಬಿಸಿಸಿಐ ಕೂಡ ಎನ್‌ಎಸ್‌ಜಿ ವ್ಯಾಪ್ತಿಗೊಳಪಡಲಿದೆ. ಮಂಡಳಿಯು ಸರ್ಕಾರಿ ಅನುಧನ ಪಡೆಯದಿದ್ದರೂ ಲೋಕಸಭೆಯ ಕಾನೂನು ಅನ್ವಯವಾಗಲಿದೆ ಎಂದು ಸಚಿವಾಲಯದ ಉನ್ನತ ಮೂಲಗಳು ತಿಳಿಸಿವೆ. ಎಲ್ಲ ಎನ್‌ಎಸ್‌ಎಫ್‌ಗಳಂತೆ ಬಿಸಿಸಿಐ ಕೂಡ ಸ್ವಾಯತ್ತವಾಗಿ ಉಳಿಯಲಿದೆ. ಆದರೆ ಯಾವುದೇ ತಕರಾರುಗಳು ತಲೆ ದೋರಿದಾಗ ಮುಂಬರುವ ದಿನಗಳಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ರಾಷ್ಟ್ರೀಯ ಕ್ರೀಡಾ ನ್ಯಾಯಮಂಡಳಿಯು (ಎನ್‌ಎಸ್‌ಟಿ) ವ್ಯಾಜ್ಯ ಪರಿಹಾರ ವೇದಿಕೆಯಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಈ ಮಸೂದೆಯು ಫೆಡರೇಷನ್‌ಗಳ ಮೇಲೆ ನಿಯಂತ್ರಣ ಸಾಧಿಸುವ ಉದ್ದೇಶ ಹೊಂದಿಲ್ಲ. ಆದರೆ ಫೆಡರೇಷನ್‌ಗಳು ಸುಸೂತ್ರವಾಗಿ ಕಾರ್ಯನಿರ್ವಹಣೆ ಮತ್ತು ಪಾರದರ್ಶಕ ಆಡಳಿತ ನಡೆಸುವಂತೆ ನೋಡಿಕೊಳ್ಳುವ ಸಾಧನವಾಗಿದೆ ಎಂದೂ ಮೂಲಗಳು ತಿಳಿಸಿವೆ.

ಡಿ.ಜೆ.ಶ್ರುತಿಗೆ ಪಿಹೆಚ್.ಡಿ



ಮೈಸೂರು, ಜು.22– ಡಾ.ಎಂ.ಪ್ರತಿಭಾ ಅವರ ಮಾರ್ಗದರ್ಶನದಲ್ಲಿ ಡಿ.ಜೆ.ಶ್ರುತಿ ಪ್ರಾಣಿಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ, ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ ಎಂದು ವಿವಿಯ ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ನಾಗರಾಜ ತಿಳಿಸಿದ್ದಾರೆ.

ಬಿ.ಎಸ್.ತೀರ್ಥಾವತಿಗೆ ಪಿಹೆಚ್.ಡಿ



ಮೈಸೂರು, ಜು.22– ನಗರದ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ರಸಾಯನಶಾಸ್ತ್ರ ವಿಭಾಗದ ಅಧ್ಯಾಪಕಿ ಬಿ.ಎಸ್. ತೀರ್ಥಾವತಿ, ಯುವರಾಜ ಕಾಲೇಜಿನ ಡಾ.ಶೌಕತ್ ಅರಾಖಾನಮ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿ, ಸಾದರಪಡಿಸಿದ ಮಹಾಪ್ರಬಂಧವನ್ನು ತಮಿಳುನಾಡು ಕೊಯಮತ್ತೂರಿನಲ್ಲಿರುವ ಭಾರತಿಯಾರ್ ವಿಶ್ವವಿದ್ಯಾಲಯವು ಪಿಹೆಚ್.ಡಿ. ಪದವಿಗೆ ಅಂಗೀಕರಿಸಿದೆ.

ಕುಕ್ಕರಹಳ್ಳಿ ಕೆರೆ ವಾಕಿಂಗ್ ಪಾತ್ ದುರಸ್ಥಿಗೆ ವಿವಿ ಕುಲಪತಿಗಳಿಗೆ ಮೈಗ್ರಾಪ ಮನವಿ



ಕುಕ್ಕರಹಳ್ಳಿ ಕೆರೆ ಪ್ರವೇಶದ್ವಾರ



ದೋಣಿ ನಿಲುಗಡೆ ಸ್ಥಳದ ಛಾವಣಿ ದುಸ್ಥಿತಿ

ಮೈಸೂರು, ಜು.22– ನಗರದ ಕುಕ್ಕರಹಳ್ಳಿ ಕೆರೆ ಆವರಣದ ವಾಯು ವಿಹಾರ ಪಥವನ್ನು ದುರಸ್ತಿಪಡಿಸಲು ಕ್ರಮ ಕೈಗೊಳ್ಳುವಂತೆ ಮೈಸೂರು ಗ್ರಾಹಕರ ಪರಿಷತ್(ಮೈಗ್ರಾಪ) ಸಂಚಾಲಕ ಡಿ.ವಿ.ವಿಜಯಾನಂದ ಸಾಗರ್, ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಅವರಲ್ಲಿ ಮನವಿ ಮಾಡಿದ್ದಾರೆ.


ಮೈಸೂರಿನ ನೈಸರ್ಗಿಕ ಸಂಪತ್ತಾಗಿರುವ ಕುಕ್ಕರಹಳ್ಳಿ ಕೆರೆ ಸಂರಕ್ಷಣೆ ಬಗ್ಗೆ ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅವರು ಅತೀವ ಕಾಳಜಿ ಹೊಂದಿದ್ದಾರೆ. ಮೈಸೂರು ಗ್ರಾಹಕರ ಪರಿಷತ್ ಹಾಗೂ ಪರಿಸರ ಪ್ರೇಮಿಗಳ ಒತ್ತಾಯದಂತೆ ಈಗಾಗಲೇ ಕೊಳಚೆ ನೀರು ಕೆರೆಯ ಒಡಲು ಸೇರದಂತೆ ಒಂದು ಹಂತದ ಕ್ರಮವಾಗಿದೆ. ಕೆರೆಯ ಒಟ್ಟು ಪ್ರದೇಶವನ್ನು ಉತ್ತಮ ರೀತಿಯಲ್ಲಿ ಸಂರಕ್ಷಿಸುವ ನಿಟ್ಟಿನಲ್ಲಿ ಎಲ್ಲಾ ಪ್ರಯತ್ನಗಳಿಗೂ ವಿವಿ ಸಹಕಾರ ನೀಡುವ ವಿಶ್ವಾಸವಿದೆ. ಹಾಗೆಯೇ ವಾಯು ವಿಹಾರಕ್ಕೆ ಬರುವ ನಾಗರಿಕರಿಗೂ ಒಂದಷ್ಟು ಅನುಕೂಲಗಳನ್ನು ಮಾಡಿಕೊಡಬೇಕು ಎಂದು ಕೋರಿದ್ದಾರೆ.

ಕುಕ್ಕರಹಳ್ಳಿ ಕೆರೆ ಮುಖ್ಯದ್ವಾರದಿಂದ ಸುಮಾರು ನಾಲ್ಕೂವರೆ ಕಿ.ಮೀ. ಇರುವ ಕಾಲ್ನಡಿಗೆ ಪಥ(ವಾಕಿಂಗ್ ಪಾತ್)ದಲ್ಲಿ ಹಲವೆಡೆ ಕಲ್ಲುಗಳು ಕಿತ್ತುಬಂದಿವೆ. ಕೆಲವು ಸ್ಥಳದಲ್ಲಿ ದುರ್ಗಮ ಹಾದಿಯಂತೆ ಕಂಡು ಬರುತ್ತದೆ. ಇದರಿಂದ ಹಿರಿಯ ನಾಗರಿಕರ ವಾಯುವಿಹಾರಕ್ಕೆ ತೊಂದರೆಯಾಗುತ್ತಿದೆ. ಕೆಲವರು ಕಲ್ಲು ಹಾದಿಯಲ್ಲಿ ಎಡವಿ ಹಾಗೂ ಆಯತಪ್ಪಿ ಬಿದ್ದು ಗಾಯಗೊಂಡಿದ್ದಾರೆ. ಇಳಿವಯಸ್ಸಿನಲ್ಲಿ ಬಿದ್ದು ಮೂಳೆಗಳಿಗೆ ಘಾಸಿಯಾದರೆ ಮತ್ತೆ ಸಹಜವಾಗಿ ಓಡಾಡಲು ಕಷ್ಟವಾಗುತ್ತದೆ. ಈ ಸಮಸ್ಯೆಯನ್ನು ಶೀಘ್ರ ಪರಿಹರಿಸುವ ಮೂಲಕ ಹಿರಿಯರಿಗೆ ನೆರವಾಗಬೇಕು ಎಂದು ಮನವಿ ಮಾಡಿದ್ದಾರೆ.

ಕುಕ್ಕರಹಳ್ಳಿ ಕೆರೆಗೆ ನಿತ್ಯ ವಾಯುವಿಹಾರಕ್ಕಾಗಿ ಹಾಗೂ ಇಲ್ಲಿನ ಪ್ರಕೃತಿ ಸೌಂದರ್ಯವನ್ನು ಕಣ್ತುಂಬಿಕೊಳ್ಳಲು ಆಗಾಗ್ಗೆ ಬರುವ ಮೈಸೂರಿಗರು ಮಾತ್ರವಲ್ಲದೆ ಪ್ರವಾಸಿಗರೂ ಇಲ್ಲಿಗೆ ಭೇಟಿ ನೀಡುತ್ತಾರೆ ಆದ್ದರಿಂದ ಕಾಲ್ನಡಿಗೆ ಪಥ ದುರಸ್ತಿ ಜೊತೆಗೆ ಇಲ್ಲಿನ ಒಂದಷ್ಟು ಅವಸ್ಥೆಗಳನ್ನು ಸರಿಪಡಿಸಬೇಕಿದೆ. ದೋಣಿಗಳ ನಿಲುಗಡೆ ಸ್ಥಳದಲ್ಲಿರುವ ರೂಫಿಂಗ್ ಶೀಟ್‌ಗಳ ದುರಸ್ತಿ ಮತ್ತು ಇಲ್ಲಿನ ಕಬ್ಬಿಣದ ಪೈಪುಗಳಿಗೆ ಬಣ್ಣ ಬಳಿಸಿದರೆ ಸುಂದರವಾಗಿ ಕಾಣುತ್ತದೆ ಎಂದು ದಯಾನಂದ ಸಾಗರ್ ತಿಳಿಸಿದ್ದಾರೆ.

ಪೋಷಕರು ಮಕ್ಕಳನ್ನು ಸುಸಂಸ್ಕೃತರನ್ನಾಗಿ ಮಾಡಲು ಶ್ರಮಿಸಿ

ವೀರಶೈವ ಲಿಂಗಾಯತ ಮಠಾಧಿಪತಿಗಳ ಸಭೆಯಲ್ಲಿ ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕರೆ



ವೀರಶೈವ ಲಿಂಗಾಯತ ಮಠಾಧಿಪತಿಗಳ ಗೋಷ್ಠಿಯಲ್ಲಿ ಭಾಗವಹಿಸಿದ್ದ ಹರ ಗುರು ಚರಮೂರ್ತಿಗಳು.

ತಿ.ನರಸೀಪುರ, ಜು.22– ಪೋಷಕರು ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿ ಬೆಳೆಸುವ ಜೊತೆಗೆ ಸುಸಂಸ್ಕೃತರನ್ನಾಗಿ ಮಾಡಲು ಶ್ರಮಿಸಬೇಕು ಎಂದು ಸುತ್ತೂರು ವೀರಸಿಂಹಾಸನ ಮಠದ ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕರೆ ನೀಡಿದ್ದಾರೆ.

ತಾಲೂಕಿನ ಮದ್ದಾರಲಿಂಗಯ್ಯನ ಹುಂಡಿ ವಿರಕ್ತ ಮಠದಲ್ಲಿ ನಡೆದ ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಯ ವೀರಶೈವ ಲಿಂಗಾಯತ ಮಠಾಧಿಪತಿಗಳ ಸಭೆಯ ಸಾನಿಧ್ಯ ವಹಿಸಿ ಭಕ್ತರಿಗೆ ಆಶೀರ್ವಚನ ನೀಡಿ ಮಾತನಾಡಿದ ಅವರು, ಪೋಷಕರು ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿ ಬೆಳೆಸುವುದು ಮುಖ್ಯವಲ್ಲ. ಅವರನ್ನು ಸುಸಂಸ್ಕೃತರಾಗಿ ಬೆಳೆಸುವ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು. ಹಾಗಾದಾಗ ಮಾತ್ರ ಅವರಿಗೆ ತಂದೆ ತಾಯಿ, ಮಠ, ಮಠಾಧೀಶರು ಹಾಗೂ ಮಠದ ಬಗ್ಗೆ, ಪಾಲಿಸಬೇಕಾದ ಧರ್ಮಾಚರಣೆಗಳ ಬಗ್ಗೆ ನಂಬಿಕೆ, ವಿಶ್ವಾಸ ಹುಟ್ಟಲು ಸಾಧ್ಯವಾಗುತ್ತದೆ ಎಂದರು.

ಏನೇ ಹೇಳಿದರೂ ಮಕ್ಕಳು ನಮ್ಮ ಬಗ್ಗೆ ತಪ್ಪಾಗಿ ತಿಳಿದುಕೊಳ್ಳುತ್ತಾರೆ ಎಂಬ ಭಾವನೆ ಪೋಷಕರಲ್ಲಿದೆ. ಅದನ್ನು ಪೋಷಕರು ತಮ್ಮ ಮನಸ್ಸಿನಿಂದ ತೆಗೆದು ಹಾಕಿ ಮಕ್ಕಳು ಸನ್ಮಾರ್ಗದಲ್ಲಿ ನಡೆಯಲು ತಿಳುವಳಿಕೆ ನೀಡಬೇಕು. ಅಮೆರಿಕಾದಲ್ಲಿ ಮಕ್ಕಳಿಗೆ ಬೈದು, ಹೊಡೆದರೆ ಅಲ್ಲಿ ಪೋಷಕರನ್ನು ಜೈಲಿಗೆ ಹಾಕುವ ಪದ್ಧತಿ ಇದೆ. ಇಲ್ಲಿ ಹೀಗೆ ಮಾಡಬೇಕೆಂಬ ಸ್ವಾತಂತ್ರ್ಯವನ್ನು ಪೋಷಕರಿಗೆ ಕೊಟ್ಟಿರುವುದು ನಮ್ಮ ದೇಶದಲ್ಲಿ ಮಾತ್ರ. ಹಾಗಾಗಿ ನಾವು ಅದನ್ನು ಎಲ್ಲಿ ತನಕ ಉಳಿಸಿಕೊಳ್ಳುತ್ತೇವೋ ಅಲ್ಲಿವರೆಗೆ ಮಕ್ಕಳನ್ನು ಸುಸಂಸ್ಕೃತರನ್ನಾಗಿ ಬೆಳೆಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸ್ವಾಮೀಜಿಗಳು ಮಕ್ಕಳಿಗೆ ಹೇಳಬಹುದು, ಮನೆಗೆ ಬರಬಹುದು, ಭಾಷಣ ಮಾಡುಹುದು, ತಿಳುವಳಿಕೆ ಕೊಡಬಹುದು. ಆದರೆ ಅಂತಿಮವಾಗಿ ಬದಲಾಗಬೇಕಿರುವುದು ಮನೆಯಲ್ಲಿಯೇ ಎಂದ ಶ್ರೀಗಳು ಎಲ್ಲರೂ ಬದಲಾಗಬೇಕೆಂಬುದನ್ನು ಬಿಟ್ಟು ಒಬ್ಬೊಬ್ಬರೇ ಬದಲಾಗಿ ಒಂದೊಂದು ಮನೆ ಸುಧಾರಿಸುವ ಪ್ರಯತ್ನ ಮಾಡಿದರೆ ಅದೇ ನಮ್ಮ ಸಮಾಜಕ್ಕೆ ಕೊಡುವ ದೊಡ್ಡ ಕೊಡುಗೆ ಎಂದರು.

ಎಲ್ಲಾ ಸ್ವಾಮೀಜಿಗಳು ಸಾಮರಸ್ಯದಿಂದ ಇರಬೇಕೆಂಬುದು ಇಂದಿನ ವಿಚಾರಗೋಷ್ಠಿಯ ಮುಖ್ಯ ಉದ್ದೇಶವಾಗಿದೆ. ಮಠಾಧಿಪತಿಗಳಿಂದ ಆಗಬಹುದಾದ ಕೆಲಸ ಮಾಡುವುದು ದೀಕ್ಷಾ ಸಂಸ್ಕಾರ ಕೊಡುವುದು. ಸಾಮೂಹಿಕವಾಗಿ ಪರಸ್ಪರ ವೀರಶೈವ ಲಿಂಗಾಯತರಲ್ಲೇ ವಿವಾಹವಾಗಲು ಅವಕಾಶ ಕಲ್ಪಿಸುವುದು. ಪ್ರತಿಭಾವಂತ ಮಕ್ಕಳನ್ನು ಪುರಸ್ಕರಿಸುವುದು ಗೋಷ್ಠಿಯಲ್ಲಿ ಚರ್ಚಿತ ವಿಷಯಗಳಾಗಿದ್ದು, ಮಠದ ವತಿಯಿಂದ ರಾಜೇಂದ್ರಶ್ರೀಗಳ ಸುವರ್ಣ ಮಹೋತ್ಸವ ಸಂದರ್ಭದ ದತ್ತಿ ಪ್ರಾರಂಭಿಸಲಾಗಿದೆ. ದತ್ತಿ ವತಿಯಿಂದಲೇ ವರ್ಷದ 365 ದಿನಗಳೂ ಒಂದಲ್ಲ ಒಂದು ಊರಲ್ಲಿ ಧಾರ್ಮಿಕ ಪ್ರಚಾರ ನಡೆಸಲಾಗುವುದು. ಪ್ರಚಾರದ ನಂತರದ ತಿಂಗಳಲ್ಲಿ ಸುತ್ತಮುತ್ತಲ ಗ್ರಾಮದ ಮಕ್ಕಳನ್ನು ಕೇಂದ್ರವಾಗಿಟ್ಟುಕೊಂಡು ಎಲ್ಲರಿಗೂ ದೀಕ್ಷಾ ಸಂಸ್ಕಾರ ಕೊಡುವ ಕಾಯಕ ನಿರಂತರವಾಗಿ ನಡೆಯುತ್ತದೆ. ಜೊತೆಗೆ ಮದ್ಯ ವ್ಯಸನಿಗಳಿಗೆ ಮದ್ಯ ಬಿಡಿಸುವ ಶಿಬಿರ ಸಹ ಹಮ್ಮಿಕೊಳ್ಳಲಾಗುತ್ತದೆ ಎಂದರು.

ಪಾಂಡುಮಟ್ಟಿ ಶ್ರೀಗಳಾದ ಗುರುಬಸವ ಸ್ವಾಮೀಜಿ ಮಾತನಾಡಿ, ಸಮಾಜದ ಅಂಕುಡೊಂಕು, ಆಚಾರ ವಿಚಾರ, ಅಂಧ ಶ್ರದ್ಧೆ, ಮೌಢ್ಯತೆ, ಮೂಢ ನಂಬಿಕೆ, ಅಜ್ಞಾನಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮಠದಲ್ಲಿ ಗೋಷ್ಠಿ ನಡೆಸುತ್ತಿರುವುದು ಸಂತಸ ತಂದಿದೆ. ಸಮಾಜದ ಪರಿವರ್ತನೆಯಲ್ಲಿ ಮಠಗಳ ಪಾತ್ರ ಪ್ರಮುಖವಾಗಿದೆ ಎಂದರು.

ಈ ವೇಳೆ ವಾಟಾಳು ಮಠದ ಡಾ.ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ, ಮಲ್ಲನಮೂಲೆ ಮಠದ ಚೆನ್ನಬಸವ ಸ್ವಾಮೀಜಿ, ಮುಡುಕನಪುರ ಹಾವನೂರು ಮಠದ ಷಡಕ್ಷರ ದೇಶಿಕೇಂದ್ರ ಸ್ವಾಮೀಜಿ, ಚಾಮರಾಜನಗರದ ಚನ್ನಬಸವ ಸ್ವಾಮೀಜಿ, ಮರಿಯಾಲ ಮಠದ ಇಮ್ಮಡಿ ಮುರುಘರಾಜೇಂದ್ರ ಸ್ವಾಮೀಜಿ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಮಠಾಧೀಶರು, ಮೈಮುಲ್ ಮಾಜಿ ಅಧ್ಯಕ್ಷ ಓಂಪ್ರಕಾಶ್, ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಬೆನಕನಹಳ್ಳಿ ಶಿವಮಲ್ಲಪ್ಪ, ಪುರಸಭೆ ಸದಸ್ಯ ಎಸ್.ಕೆ.ಕಿರಣ್, ರೂಪಾ ಪರಮೇಶ್, ಎಸ್.ಲೋಕೇಶ್, ತಾಲೂಕು ವೀರಶೈವ ಮಹಾಸಭಾದ ಕೋಶಾಧ್ಯಕ್ಷ ನಂಜುಂಡಸ್ವಾಮಿ, ಕಾರ್ಯದರ್ಶಿ ಶಿವಶಂಕರ್, ಬಸವ ಬಳಗದ ಅಧ್ಯಕ್ಷ ಪರಮೇಶ್ ಪಟೇಲ್, ಕಾರ್ಪ್ಪಲ್ಲ ವಿಶ್ವಾಸ್(?), ಪರಿಮಮೂರ್ತಿ, ರಾಜಣ್ಣ, ಸುಂದರರಾಜು, ಮಾಯಪ್ಪ ವಕೀಲ ಜ್ಞಾನೇಂದ್ರ ಮೂರ್ತಿ, ಕುಮಾರಸ್ವಾಮಿ, ಜ್ಯೋತಿ ಪರಮೇಶ್ ಪಟೇಲ್ ಸೇರಿದಂತೆ ಹಲವು ಗುರು ಚರ ಮೂರ್ತಿಗಳು ಹಾಜರಿದ್ದರು.

> ಅನುಭವ ಮಂಟಪವನ್ನು ನಾವ್ಯಾರೂ ನೋಡಿಲ್ಲ ಕೇವಲ ರಾಜಕೀಯ ಭಾಷಣಗಳಲ್ಲಿ ಕೇಳಿದ್ದೇವೆ. ಅನುಭವ ಮಂಟಪ ಈ ಹಿಂದೆ ನಮಗೆ ಬೀದರ್‌ನ ಬಸವ ಕಲ್ಯಾಣದಲ್ಲಿತ್ತು ಆದರೆ ಈಗ ಸುತ್ತೂರಿನಲ್ಲೇ ಕಾಣಬಹುದಾಗಿದೆ. ಅವತ್ತು ಬಸವಣ್ಣ ಏನು ಕ್ರಾಂತಿ ಮಾಡಿದ್ದರೋ ಎಲ್ಲಾ ವರ್ಗದ ಜನರನ್ನು ಸೇರಿಸಿ, ಮಹಿಳೆಯರು, ಶರಣರಿಗೆ ಆದ್ಯತೆ ನೀಡಿದ್ದರೋ ಅದೇ ರೀತಿ ಇವತ್ತು ಸುತ್ತೂರು ಶ್ರೀಗಳು ಬಸವಣ್ಣನವರಂತೆ ವಿಶ್ವಕ್ಕೆ ಮಾದರಿಯಾಗಿದ್ದಾರೆ. ಸುತ್ತೂರು ಜಾತಿ, ಧರ್ಮ ಮೀರಿ ಬೆಳೆದ ಸಂಸ್ಥೆಯಾಗಿದೆ. ಸುತ್ತೂರು ಶ್ರೀಗಳ ಮಾರ್ಗದರ್ಶನ ಇಡೀ ದೇಶಕ್ಕೆ ಅಗತ್ಯವಿದೆ. ಸುತ್ತೂರು ಶ್ರೀಗಳು ಕಿರಿಯ ಶ್ರೀಗಳಿಗೆ ಪ್ರೋತ್ಸಾಹದಾಯಕರಾಗಿದ್ದಾರೆ. ಮಠ ಮಾನ್ಯಗಳ ಕುಂದು ಕೊರತೆ ಬಗ್ಗೆ ಗಮನಹರಿಸಿ ಸುಸಹ ನೀಡಿ ಮಠಗಳ ಏಳಿಗೆಗೆ ಕಾರಣರಾಗಿದ್ದಾರೆ. ಹಾಗಾಗಿ ಸುತ್ತೂರು ಶ್ರೀ ಕ್ಷೇತ್ರಕ್ಕೆ ಎಲ್ಲಾ ಜನಾಂಗದವರಿಗೂ ಒಗ್ಗೂಡಿಸುವ ಶಕ್ತಿ ಇದೆ. – ಶ್ರೀಗೌರಿ ಶಂಕರ ಸ್ವಾಮೀಜಿ, ಎಂ.ಎಲ್.ಹುಂಡಿ ವಿರಕ್ತಮಠ.

ವಿದ್ಯುತ್ ದೀಪಾಲಂಕಾರ, ಧ್ವನಿವರ್ಧಕ, ಶಾಮಿಯಾನ ಮಾಲೀಕರ ಸಂಘಕ್ಕೆ ವಾಸುಕಿ ನಾಗೇಶ್ ಅಧ್ಯಕ್ಷ



ಸಂಘಕ್ಕೆ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಸರಗೂರು, ಜು.22– ತಾಲೂಕು ವಿದ್ಯುತ್ ದೀಪಾಲಂಕಾರ ಹಾಗೂ ಧ್ವನಿವರ್ಧಕ ಮತ್ತು ಶಾಮಿಯಾನ ಮಾಲೀಕರ ಸಂಘದ ನೂತನ ಅಧ್ಯಕ್ಷರಾಗಿ ವಾಸುಕಿ ನಾಗೇಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪಟ್ಟಣದಲ್ಲಿ ಶಿವರಾತ್ರಿ ಶಿವಾನುಭವ ಮಂದಿರದ ಹೊರಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷರಾಗಿ ನಾಗೇಶ್, ಗೌರವಾಧ್ಯಕ್ಷ ಅನ್ನಪೂರ್ಣೇಶ್ವರಿ ಶಾಮಿಯಾನ ಮಾಲೀಕ ಎಸ್.ನಾರಾಯಣ್, ಉಪಾಧ್ಯಕ್ಷರಾಗಿ ಆದಿಶಕ್ತಿ ಗಣೇಶ್, ಬಸಾಪುರ ರೇವಣ್ಣ, ನ್ಯಾಷನಲ್ ಶಾಮಿಯಾನ ರಾಹೀಲ್ ಪಾಷ, ಕಾರ್ಯದರ್ಶಿ ಆಗತ್ತೂರು ಪಿ.ಜವರನಾಯಕ, ಸಹ ಕಾರ್ಯದರ್ಶಿ ಜನನಿ ವಿಜಯ್‌ಕುಮಾರ್, ಖಜಾಂಚಿ ಚೌಡೇಶ್ವರಿ ರಂಗಸ್ವಾಮಿ, ನಿರ್ದೇಶಕರಾಗಿ ಸಿದ್ದನಾಯಕ, ಅಶ್ವತ್ ನಾರಾಯಣ, ಪ್ರಕಾಶ್, ಮಹೇಶ್, ಮಂಜು, ನಂದಿಗೌಡ, ಶಿವಣ್ಣ, ಸುರೇಂದ್ರ, ಹರೀಶ್, ಚಿನ್ನಯ್ಯ, ಸೋಮೇಶ, ನಂದಿ, ಕೇಬಲ್ ಕುಮಾರ್, ಕುಮಾರ್, ನಂದೀಶ್ ಬುದ್ದಿ, ನಾಗರಾಜು, ರಮೇಶ್, ಸಚ್ಚಿನ್, ಸತೀಶ್, ಸಿದ್ದಪ್ಪಾಜಿ, ನಾಗ, ಸುರೇಶ್, ವೆಂಕಟೇಶ್ ಆಯ್ಕೆಯಾಗಿದ್ದಾರೆ.

ಹಣಕ್ಕಾಗಿ ದರೋಡೆ ಕಥೆ: ಚಾಲಕ ಸೇರಿ ಮೂವರ ಬಂಧನ



ತಿ.ನರಸೀಪುರ, ಜು.22– ಹಣಕ್ಕಾಗಿ ದರೋಡೆ ಕಥೆ ಎಣೆದ ಲಾರಿ ಚಾಲಕ ಸೇರಿದಂತೆ ಮೂವರನ್ನು ಬಂಧಿಸುವಲ್ಲಿ ತಿ.ನರಸೀಪುರ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಈಚರ್ ಲಾರಿ ಚಾಲಕ ತಾಲೂಕಿನ ಹನುಮನಹಳ್ಳಿ ಗ್ರಾಮದ ನಿವಾಸಿ ಹರೀಶ್, ಮೈಸೂರಿನ ಹಿನಕಲ್ ನಿವಾಸಿ ಸುನೀಲ್, ನಂಜನಗೂಡು ತಾಲೂಕು ಕರಾಳಪುರ ಗ್ರಾಮದ ನಿವಾಸಿ ತೇಜು ಬಂಧಿತ ಆರೋಪಿಗಳು. ಇವರಿಂದ ಕೃತ್ಯಕ್ಕೆ ಬಳಸಿದ 2 ಮೊಬೈಲ್, ಒಂದು ದ್ವಿಚಕ್ರ ವಾಹನ ವಶಪಡಿಸಿಕೊಳ್ಳಲಾಗಿದೆ.

ವಿವರ: ಚಾಲಕ ಹರೀಶ್ ತನ್ನ ಇಬ್ಬರು ಕೆಲಸಗಾರರಾದ ಧರ್ಮೇಂದರ್ ಯಾದವ್ ಮತ್ತು ರೋಶನ್ ಯಾದವ್ ಅವರೊಂದಿಗೆ (ಕೆಎಲ್–13, ಡಬ್ಲ್ಯೂ–5361) ಈಚರ್ ಲಾರಿಯಲ್ಲಿ ತಿ.ನರಸೀಪುರ ಪೊಲೀಸ್ ಠಾಣಾ ವ್ಯಾಪ್ತಿಯ ತಿ.ನರಸೀಪುರ–ಮೈಸೂರು ಮುಖ್ಯ ರಸ್ತೆಯ ಹಳೇ ಕೆಂಪಯ್ಯನಹುಂಡಿ ಗ್ರಾಮದ ಬಳಿ ಹೋಗುತ್ತಿದ್ದ ವೇಳೆ ಬೈಕ್‌ನಲ್ಲಿ ಬಂದ ಇಬ್ಬರು ಲಾರಿ ಅಡ್ಡಗಟ್ಟಿ ಚಾಕುವಿನಿಂದ ಹೆದರಿಸಿ, ಹಲ್ಲೆ ನಡೆಸಿ 3 ಮೊಬೈಲ್, ಹಣವನ್ನು ಕಿತ್ತು ಕೊಂಡು ಪರಾರಿಯಾಗಿದ್ದರು. ಈ ಸಂಬಂಧ ಈಚರ್ ಚಾಲಕ ಹರೀಶ್ ನೀಡಿದ್ದ ದೂರಿನ ಮೇರೆಗೆ ತಿ.ನರಸೀಪುರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

ಜಿಲ್ಲಾ ಎಸ್ಪಿ ಎನ್.ವಿಷ್ಣುವರ್ಧನ್ ಹಾಗೂ ಅಪರ ಪೊಲೀಸ್ ಅಧೀಕ್ಷಕ ಸಿ.ಮಲ್ಲಿಕ್ ಹಾಗೂ ಎಲ್.ನಾಗೇಶ್ ಅವರ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಜಿ.ಎಸ್.ರಘು, ಸಿಪಿಐ ಧನಂಜಯ ಅವರ ನೇತೃತ್ವದಲ್ಲಿ ಅಪರಾಧ ಪತ್ತೆದಳ ರಚಿಸಿ ತನಿಖೆ ಕೈಗೊಂಡಿದ್ದ ಪೊಲೀಸರು ಹಿನಕಲ್‌ನಿವಾಸಿ ಸುನೀಲ್, ತೇಜು ಅವರನ್ನು ಬಂಧಿಸಿ ವಿಚಾರಣೆಗೊಳಪಡಿಸಿದಾಗ ಪ್ರಕರಣ ಸಂಬಂಧ ದೂರು ನೀಡಿದ ಹರೀಶನೇ ಈ ಕೃತ್ಯ ಮಾಡಿಸಿದವನು ಎಂದು ತಿಳಿದು ಬಂಧ ಹಿನ್ನೆಲೆಯಲ್ಲಿ ಆತನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದ ಇನ್ಸ್‌ಪೆಕ್ಟರ್ ಧನಂಜಯ, ಎಸ್‌ಐ ಜಗದೀಶ್ ಧೂಳಶೆಟ್ಟಿ, ಎಎಸ್‌ಐ ಚೆಲುವರಾಜ್, ಜಿಲ್ಲಾ ಮಟ್ಟದ ಪತ್ತೆದಳದ ಸಿಬ್ಬಂದಿಗಳಾದ ಎಎಸ್‌ಐ ಸತೀಶ್, ಸಿಬ್ಬಂದಿಗಳಾದ ಅಬ್ದುಲ್ ಲತೀಫ್, ಭಾಸ್ಕರ, ಅಶೋಕ, ಶಿವಸ್ವಾಮಿ ಹಾಗೂ ಟೆಕ್ನಿಕಲ್ ಸೆಲ್ ಸಿಬ್ಬಂದಿಗಳಾದ ವಸಂತಕುಮಾರ್, ಸುನೀತ ಅವರ ಕಾರ್ಯವನ್ನು ಎಸ್ಪಿ ವಿಷ್ಣುವರ್ಧನ್ ಪ್ರಶಂಸಿಸಿದ್ದಾರೆ.

ವಿದ್ಯುತ್ ಕಂಬಕ್ಕೆ ಸಾರಿಗೆ ಬಸ್ ಡಿಕ್ಕಿ



ನಂಜನಗೂಡು, ಜು.22– ಚಾಲಕನ ನಿಯಂತ್ರಣ ತಪ್ಪಿದ ಸಾರಿಗೆ ಬಸ್ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿರುವ ಘಟನೆ ನಂಜನಗೂಡು–ತಿ.ನರಸೀಪುರ ಮುಖ್ಯ ರಸ್ತೆಯ ತಾಲೂಕಿನ ಕಲ್ಮಹಳ್ಳಿ ಗೇಟ್ ಬಳಿ ಜರುಗಿದೆ.

ನಂಜನಗೂಡಿನಿಂದ ತಿ.ನರಸೀಪುರ ಮಾರ್ಗವಾಗಿ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನ 2 ಚಕ್ರಗಳು ಜಾಮ್ ಆಗಿ, ಸ್ಟೇರಿಂಗ್ ಲಾಕ್ ಆಗಿದ್ದರಿಂದ ಚಾಲಕನ ನಿಯಂತ್ರಣ ತಪ್ಪಿದ ಬಸ್ ರಸ್ತೆ ಬದಿಯಲ್ಲಿದ್ದ ವಿದ್ಯತ್ ಕಂಬಕ್ಕೆ ಡಿಕ್ಕಿ ಹೊಡೆದಿದ್ದು, 2 ವಿದ್ಯುತ್ ಕಂಬಗಳು ಮುರಿದು ಬಿದ್ದಿವೆ. ಈ ವೇಳೆ ಯಾವುದೇ ಅನಾಹುತ ಸಂಭವಿಸಿಲ್ಲ. ಈ ಸಂಬಂಧ ಬೆಳಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಜ್ಯ ಪರಿಷತ್ ಸದಸ್ಯರಾಗಿ ರೇವಣ್ಣ ಆಯ್ಕೆ



ಬನ್ನೂರು, ಜು.22– ಕರ್ನಾಟಕ ರಾಜ್ಯ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯರಾಗಿ ಕೊಡಗಹಳ್ಳಿ ಶಾಲೆ ಶಿಕ್ಷಕ ಎನ್.ರೇವಣ್ಣ ಆಯ್ಕೆಯಾಗಿದ್ದಾರೆ.

ಹುರದಲ್ಲಿ ಯಶಸ್ವಿ ನವದುರ್ಗಾ ಹೋಮ



ಹುರದಲ್ಲಿ ನವದುರ್ಗಾ ಹೋಮ ನಡೆಯಿತು.

ನಂಜನಗೂಡು, ಜು.22– ತಾಲೂಕಿನ ಹುರ ಗ್ರಾಮದಲ್ಲಿರುವ 800 ವರ್ಷ ಹಳೆಯ ಶ್ರೀ ಭ್ರಮರಾಂಬ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನದಲ್ಲಿ ಭಾನುವಾರ ಲಲಿತಾ ಸಹಸ್ರ ನಾಮ ಪಾರಾಯಣ, ಕುಂಕುಮಾರ್ಚನೆ ಮತ್ತು ನವದುರ್ಗಾ ಹೋಮವನ್ನು ಯಶಸ್ವಿಯಾಗಿ ನಡೆಸಲಾಯಿತು.

ಬೆಳಿಗ್ಗೆ ಶ್ರೀ ಮಲ್ಲಿಕಾರ್ಜುನ ಸ್ವಾಮಿ ಮತ್ತು ತಾಯಿ ಭ್ರಮರಾಂಭ ದೇವರಿಗೆ ಪಂಚಾಮೃತ ಅಭಿಷೇಕ ನಡೆಯಿತು. ಹುರ ವಿಪ್ರ ಬಳಗದಿಂದ ರುದ್ರಾಭಿಷೇಕ ಸೇವೆ ಮಾಡಲಾಯಿತು.

ಶ್ರೀ ಶ್ರೀಕಂಠ ಶರ್ಮ ಕುಟುಂಬ ವರ್ಗದವರು ತಾಯಿ ಭ್ರಮರಾಂಭ ದೇವಿಗೆ ಬೆಣ್ಣೆ ಅಲಂಕಾರದ ಸೇವೆ ಮಾಡಿದ್ದರು, ಶ್ರೀ ಸತ್ಯಪ್ರಸಾದ ಮತ್ತು ಶ್ರೀಮತಿ ನಾಗಶ್ರೀ ದಂಪತಿಗಳು ನವಚಂಡಿ ಹೋಮ, ಸುಹಾಸಿನಿ ಪೂಜೆ, ದಂಪತಿ ಪೂಜೆ, ಕನ್ಯೆ ಪೂಜೆ ಮತ್ತು ಅನ್ನ ಸಂತರ್ಪಣೆ ಸೇವೆ ಮಾಡಿಸಿದ್ದರು. ವೇ.ಬ್ರ.ಶ್ರೀ ಜಯರಾಮ ಶಾಸ್ತ್ರಿ ಅವರ ನೇತೃತ್ವದಲ್ಲಿ ಕೊಯಮತ್ತೂರಿನಿಂದ ಆಗಮಿಸಿದ್ದ ಪುರೋಹಿತರು ಮತ್ತು ಮೈಸೂರಿನ ವೇದ ಬಳಗದವರು ಶಾಸ್ತ್ರೋಕ್ತವಾಗಿ ನಡೆಸಿದ ನವ ದುರ್ಗಾ ಹೋಮ ಸಾಂಗವಾಗಿ ನೆರವೇರಿತು.

ಭಕ್ತಾಧಿಗಳಿಗೆ ಬೆಳಗ್ಗೆ ತಿಂಡಿ ಮತ್ತು ಮಧ್ಯಾಹ್ನ ಮಹಾ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಮೈಸೂರಿನ ಬ್ರಾಹ್ಮಣ ಮುಖಂಡರಾದ ಹೆಚ್.ವಿ.ರಾಜೀವ್, ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದ ಅಧ್ಯಕ್ಷ ವಿಶ್ವನಾಥಯ್ಯ, ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದ ಕಾರ್ಯದರ್ಶಿ ಮಂಜುನಾಥ್ ಮತ್ತು ಹಲವಾರು ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಕೆಸರು ಗದ್ದೆಯಂತಾದ ಮಹದೇವ ನಗರ ರಸ್ತೆ



ಕೆಸರುಗದ್ದೆಯಂತಾಗಿರುವ ಮಹದೇವನಗರ ರಸ್ತೆ

ಮಲ್ಕುಂಡಿ, ಜು.22– ನಂಜನಗೂಡು ತಾಲೂಕಿನ ಕಾಡಂಚಿನ ಗ್ರಾಮವಾದ ಹೆಡಿಯಾಲ ಗ್ರಾಪಂ ವ್ಯಾಪ್ತಿಯ ಮಹದೇವನಗರ ಗ್ರಾಮದ ರಸ್ತೆ ಕೆಸರು ಗದ್ದೆಯಂತಾಗಿದ್ದು, ಸಾರ್ವಜನಿಕರು ತಿರುಗಾಡಲು ಹರಸಾಹಸ ಪಡುವಂತಾಗಿದೆ.

ಈ ಹಿಂದೆ ಶಾಸಕರಾಗಿದ್ದ ದಿ.ಎಂ.ಮಹದೇವು ಅವರ ಅವಧಿಯಲ್ಲಿ ಚರಂಡಿ, ರಸ್ತೆ ಸೇರಿದಂತೆ ಎಲ್ಲಾ ರೀತಿಯ ಮೂಲ ಸೌಕರ್ಯಗಳೊಂದಿಗೆ ಹೊಸ ಬಡಾವಣೆ ನಿರ್ಮಿಸಿ 80 ಬಡವರಿಗೆ ಸೂರು ಕಲ್ಪಿಸಿ ಮಹದೇವನಗರ ಎಂದು ನಾಮಕರಣ ಮಾಡಲಾಯಿತು. ಆದರೆ ಇದೀಗ ಮಹದೇವನಗರಕ್ಕೆ ತೆರಳುವ ರಸ್ತೆ ಮಳೆ ಬಂದರೆ ಕೆಸರು ಗದ್ದೆಯಂತಾಗಿ ಸಾರ್ವಜನಿಕರು ಓಡಾಡಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿದ್ದು, ಅಲ್ಲದೇ ಈ ರಸ್ತೆಯಲ್ಲಿ ಸಾಗುವ ಶಾಲಾ ಮಕ್ಕಳು, ಮಹಿಳೆಯರು, ರೈತರು ಸೇರಿದಂತೆ ಸಾರ್ವಜನಿಕರು ಎಚ್ಚರಿಕೆಯಿಂದ ನಡೆದು ಹೋಗಬೇಕಿದೆ. ಇಲ್ಲಿನ ಚರಂಡಿಗಳು ಗಬ್ಬೆದ್ದು ನಾರುತ್ತಿದ್ದು ಸ್ವಚ್ಛಗೊಳಿಸುವಲ್ಲಿ ಸ್ಥಳೀಯ ಗ್ರಾಪಂ ಅಧಿಕಾರಿಗಳು ವಿಫಲರಾಗಿದ್ದಾರೆ. ಚರಂಡಿಯಲ್ಲಿ ಕಸ ಕಟ್ಟಿ ನಿಂತಿರುವುದರಿಂದ ಸೊಳ್ಳೆಗಳು ಹೆಚ್ಚಾಗಿ ರೋಗಗಳು ಹರಡುವ ಸಂಭವವಿದೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ರಸ್ತೆ ಚರಂಡಿ ದುರಸ್ತಿ ಕೈಗೊಳ್ಳುವ ಜೊತೆಗೆ ಮೂಲ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಮಹದೇವನಗರ ನಿವಾಸಿಗಳು ಒತ್ತಾಯಿಸಿದ್ದಾರೆ.

ಹುಣಸೂರಲ್ಲಿ ರೈತ ಹುತಾತ್ಮ ದಿನಾಚರಣೆ



ಹುಣಸೂರಲ್ಲಿ ರೈತ ಹುತಾತ್ಮ ದಿನಾಚರಣೆ ನಡೆಯಿತು.

ಹುಣಸೂರು, ಜು.22– ವಿಶ್ವದ ಸಮಸ್ತ ಜೀವ ಸಂಕುಲಕ್ಕೆ ಅನ್ನ ನೀಡುವ ರೈತ ನಿಜವಾದ ಅನ್ನದಾತ ಎಂದು ತಹಸೀಲ್ದಾರ್ ಮಂಜುನಾಥ್ ಬಣ್ಣಿಸಿದರು.

ನಗರದ ತಾಪಂ ಸಭಾಂಗಣದಲ್ಲಿ ನಡೆದ ಹುತಾತ್ಮ ರೈತ ದಿನಾಚರಣೆಯಲ್ಲಿ ಮಾತನಾಡಿದ ಅವರು, 1900ರ ದಶಕದಲ್ಲಿ ಬ್ರಿಟಿಷ್ ಆಳ್ವಿಕೆ ವಿರುದ್ಧ ಅವರು ಸೂಚಿಸಿದ ಬೆಳೆ ವಿರೋಧಿಸಿ ಅಂದೇ ಭತ್ತ ಬೆಳೆದು ರೈತರು ತಮ್ಮ ಬದ್ಧತೆ ಪ್ರದರ್ಶಿಸಿದ್ದರು. ಅದೇ ರೀತಿ 1980–81ರಲ್ಲಿ ನರಗುಂದ ಘಟನೆ ಹೋರಾಟದ ಫಲವಾಗಿ ಗುಂಡುರಾಯರ ಸರ್ಕಾರ ಕೆಡವಿದ ಕೀರ್ತಿ ರೈತರಿಗಿದೆ. ಆದ್ದರಿಂದ ಅಧಿಕಾರಿಗಳು ಮತ್ತು ರೈತರಲ್ಲಿ ಸಮನ್ವ ಯತೆ ಇರಬೇಕೆಂದರು.

ರೈತ ಸಂಘದ ಜಿಲ್ಲಾಧ್ಯಕ್ಷ ಕುಮಾರ್ ಮಾತನಾಡಿ, ದೇವನಹಳ್ಳಿ, ಚನ್ನರಾಯಪಟ್ಟಣದಲ್ಲಿ 1777 ಎಕರೆ ಭೂಸ್ವಾಧೀನ ಕೈಬಿಟ್ಟಿದ್ದು, ಸರ್ಕಾರ ಕೊಟ್ಟ ಮಾತಿನಂತೆ ಕೂಡಲೇ ಆದೇಶ ಹೊರಡಿಸಬೇಕು. ಭೂ ಸುಧಾರಣೆ ತಿದ್ದುಪಡಿ ಕಾಯ್ದೆಯನ್ನು ಮುಂಬರುವ ಅಧಿವೇಶನದಲ್ಲಿ ವಾಪಸ್ ಪಡೆಯಬೇಕು. ಎಪಿಎಂಸಿ ಕಾಯ್ದೆಯನ್ನು ಮತ್ತಷ್ಟು ಗಟ್ಟಿಗೊಳಿಸಬೇಕು. ಕಾರ್ಮಿಕ ತಿದ್ದುಪಡಿ, ರಸಗೊಬ್ಬರ ಕೊರತೆ, ರೈತರು ಬೆಳೆದ ಬೆಳೆಗೆ ವೈಜ್ಞಾನಿಕ ಬೆಲೆ ನೀಡುವ ಮೂಲಕ ಸರ್ಕಾರ ರೈತರ ಪರ ನಿಲ್ಲಬೇಕು ಎಂದು ಒತ್ತಾಯಿಸಿದರು.

ಜೆ.ಮಹದೇವ್, ನಿಂಗರಾಜ ಮಲ್ಲಾಡಿ ಮಾತನಾಡಿದರು. ಕಾರ್ಯಕ್ರಮದಲ್ಲಿ ತಾಲೂಕು ರೈತ ಸಂಘದ ಅಧ್ಯಕ್ಷ ಚಿಕ್ಕಣ್ಣ, ಪ್ರಧಾನ ಕಾರ್ಯದರ್ಶಿ ರಾಮೇಗೌಡ, ರೈತ ಸಂಘದ ಸತೀಶ್, ವಿಷಕಂಠಪ್ಪ, ಬಸವರಾಜು, ಕೆಂಪರಾಜು, ರಾಜು, ಗಜೇಂದ್ರ ಇದ್ದರು.

ಮುಡಾ ಹಗರಣದಲ್ಲಿ ಬಿಜೆಪಿಯಿಂದ ಇಡಿ ದುರ್ಬಳಕೆ



ನಂಜನಗೂಡು, ಜು.22– ಮುಡಾ ನಿವೇಶನ ಹಂಚಿಕೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರ ವಿರುದ್ಧ ತನಿಖೆ ನಡೆಸಲು ಜಾರಿ ನಿರ್ದೇಶನಾಲಯ ಸಲ್ಲಿಸಿದ್ದ ಮೇಲ್ಮನವಿಯನ್ನು ಸುಪ್ರೀಂ ಕೋರ್ಟ್ ವಜಾ ಮಾಡಿರುವುದು ಕೇಂದ್ರ ಸರ್ಕಾರದ ಪಕ್ಷಪಾತ ಧೋರಣೆಯನ್ನು ನ್ಯಾಯಾಲಯವೇ ತೋರಿಸಿ ಕೊಟ್ಟಂತಾಗಿದೆ ಎಂದು ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು ಹೇಳಿದ್ದಾರೆ.

ಸುಪ್ರೀಂಕೋರ್ಟ್ ಆದೇಶ ಹೊರಬರುತ್ತಿದ್ದಂತೆ ಬಿಜೆಪಿ ಮುಖಂಡರ ಸದ್ದು ಅಡಗಿ ಹೋಗಿದೆ. ಮುಖ್ಯಮಂತ್ರಿಗಳನ್ನು, ರಾಜಕೀಯವಾಗಿ ಎದುರಿಸಲಾಗದ ಬಿಜೆಪಿ ಮತ್ತು ಅದರ ಮಿತ್ರ ಪಕ್ಷಗಳು ಸಂವಿಧಾನಿಕ ತನಿಖಾ ಸಂಸ್ಥೆಗಳಾದ ಸಿಬಿಐ ಮತ್ತು ಇಡಿಯನ್ನು ದುರ್ಬಳಕೆ ಮಾಡಿಕೊಂಡಿರುವುದನ್ನು ನ್ಯಾಯಾಲಯವೇ ಜನರಿಗೆ ತೋರಿಸಿಕೊಟ್ಟಿದೆ. ಸಿದ್ದರಾಮಯ್ಯ ಅವರ ಪತ್ನಿ ವಿರುದ್ಧ ಸುಳ್ಳು ಪ್ರಕರಣ ಸೃಷ್ಟಿಸಿ, ಸಾರ್ವಜನಿಕವಾಗಿ ಎಂದೂ ಕಾಣಿಸಿಕೊಳ್ಳದ ಅವರಿಗೆ ನೀಡಿರುವ ಕಿರುಕುಳ ಅತ್ಯಂತ ಹೇಯವಾದುದು. ಇದರಿಂದ ಮುಖ್ಯಮಂತ್ರಿಗಳ ಕುಟುಂಬ ಅನುಭವಿಸಿದ ಮಾನಸಿಕ ಕಿರುಕುಳವನ್ನು ರಾಜ್ಯದ ಜನರು ಗಮನಿಸಿದ್ದಾರೆ.

ಸಿದ್ದರಾಮಯ್ಯ ಅವರು ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ಸಂವಿಧಾನ ಮತ್ತು ನೆಲದ ಕಾನೂನಿಗೆ ತಲೆಬಾಗುತ್ತಾ ಬಂದವರು. ಅವರ ಈ ನಂಬಿಕೆಯನ್ನು ಸರ್ವೋಚ್ಚ ನ್ಯಾಯಾಲಯದ ಆದೇಶ ಉಳಿಸಿದೆ. ಇದರಿಂದ ಸಿದ್ದರಾಮಯ್ಯ ಅವರ ಕುಟುಂಬ ಕಾನೂನು ಬಾಹಿರ ಕೆಲಸಗಳಿಗೆ ಎಂದು ಮುಂದಾಗುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಿದೆ.

ಯಾವುದೇ ಮುಖಂಡರಾಗಲಿ ರಾಜಕೀಯ ಸಮರಕ್ಕೆ ಮತದಾರರನ್ನು ಬಳಸಿಕೊಳ್ಳಬೇಕೇ ಹೊರತು, ಜಾರಿ ನಿರ್ದೇಶನಾಲಯದಂತಹ ಸಂವಿಧಾನಿಕ ಸಂಸ್ಥೆಗಳ ದುರ್ಬಳಕೆ ಮಾಡಬಾರದು. ಇದು ಬಹಳ ಅಪಾಯಕಾರಿ ಬೆಳವಣಿಗೆ. ಈಗಲಾದರೂ ಬಿಜೆಪಿ, ಜಾತ್ಯಾತೀತ ಜನತಾದಳದ ಮುಖಂಡರು ರಾಜ್ಯದ ಜನರ ಕ್ಷಮೆ ಕೇಳಬೇಕು ಎಂದರು.

ದೊಡ್ಡ ಕವಲಂದೆಯಲ್ಲಿ ಕಾಲೇಜು ಕಟ್ಟಡ ಉದ್ಘಾಟನೆ



ನೂತನ ಕಾಲೇಜು ಕಟ್ಟಡವನ್ನು ಶಾಸಕ ದರ್ಶನ್ ಉದ್ಘಾಟಿಸಿದರು.

ನಂಜನಗೂಡು, ಜು.22– ಸುಮಾರು 1.50 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಕಾಲೇಜು ಕಟ್ಟಡ ಗ್ರಾಮೀಣ ಭಾಗದ ಶಿಕ್ಷಣ ವಿಕಾಸದ ಹೆಜ್ಜೆಯಾಗಿದ್ದು, ಗ್ರಾಮೀಣ ಯುವಕ ಮತ್ತು ಯುವತಿಯರ ಭವಿಷ್ಯಕ್ಕೆ ದಾರಿಯಾಗಲಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ತಾಲೂಕಿನ ದೊಡ್ಡ ಕವಲಂದೆ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಕಾಲೇಜು ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬ ಹಿತದೃಷ್ಟಿಯಿಂದ ನೂತನ ಕಾಲೇಜು ಕಟ್ಟಡ ನಿರ್ಮಾಣ ಮಾಡಲಾಗಿದೆ. ಈ ಕಾಲೇಜು ಕಟ್ಟಡ ಗ್ರಾಮೀಣ ಭಾಗದ ಶಿಕ್ಷಣದ ವಿಕಾಸದ ಹೆಜ್ಜೆಯಾಗಿದ್ದು, ಶಿಕ್ಷಣದ ಬೆಳಕು ಎಲ್ಲಾ ವಿದ್ಯಾರ್ಥಿಗಳನ್ನು ತಲುಪಲಿ ಎಂದು ಆಶಯ ವ್ಯಕ್ತಪಡಿಸಿದ ಅವರು ಗುದ್ದಲಿ ಪೂಜೆಯಾಗಿ ಬರೀ 4 ತಿಂಗಳಲ್ಲಿ ಕಾಲೇಜು ಕಟ್ಟಡ ಕಾಮಗಾರಿ ಪೂರ್ಣಗೊಳಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಟ್ಟಿರುವ ಲೋಕೋಪಯೋಗಿ ಇಲಾಖೆ ಕೆಲಸ ಶ್ಲಾಘನೀಯ ಎಂದರು.

ವಿದ್ಯಾರ್ಥಿಗಳು ನಿಮ್ಮ ತಂದೆ ತಾಯಿ ಪರಿಶ್ರಮ ಅರಿತು, ಸಮಯ ಪಾಲನೆ ಮಾಡುವ ಮೂಲಕ ವ್ಯಾಸಂಗದಲ್ಲಿ ತೊಡಗಿಕೊಳ್ಳಬೇಕು. ಮುಖ್ಯವಾಗಿ ದುಶ್ಚಟಗಳಿಂದ ದೂರವಿದ್ದು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

2.5 ಕೋಟಿ ವೆಚ್ಚದ ಕಾಮಗಾರಿಗಳಿಗೆ ಗುದ್ದಲಿ ಪೂಜೆ ತಾಲೂಕಿನ ಕೆಆರ್.ಪುರ ಗ್ರಾಮದಲ್ಲಿ ಸಾಮಾನ್ಯ ವರ್ಗದ ಬೀದಿಯಲ್ಲಿ 30 ಲಕ್ಷ, ದೊಡ್ಡಕೌಲಂದೆ ಗ್ರಾಮದ ಮುಸ್ಲಿಂ ಬೀದಿಯಲ್ಲಿ 25 ಲಕ್ಷದ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿ, ದೊಡ್ಡ ಕವಲಂದೆ ಗ್ರಾಮದಲ್ಲಿ 75 ಲಕ್ಷ ವೆಚ್ಚದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿ, ಗಟ್ಟವಾಡಿ ಗ್ರಾಮದ ಸಾಮಾನ್ಯ ವರ್ಗದ ಬೀದಿಯಲ್ಲಿ 30 ಲಕ್ಷ, ಎಸ್‌ಇಪಿ ಯೋಜನೆಯಲ್ಲಿ ಪ.ಜನಾಂಗದವರ ಬೀದಿಯಲ್ಲಿ 45 ಲಕ್ಷ, ಗಟ್ಟವಾಡಿಪುರ ಗ್ರಾಮದಲ್ಲಿ ಸಾಮಾನ್ಯ ವರ್ಗದ ಬೀದಿಯಲ್ಲಿ 15 ಲಕ್ಷ, ಹರಗನಪುರ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ, ಹೆಳವರಹುಂಡಿ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿ ಸೇರಿದಂತೆ 2.50 ಕೋಟಿ ವೆಚ್ಚದ ಅಭಿವೃದ್ಧಿ ಕೆಲಸಗಳಿಗೆ ಚಾಲನೆ ನೀಡಲಾಗಿದೆ. 1.50 ಕೋಟಿ ರೂ. ವೆಚ್ಚದ ಕಾಲೇಜು ಕಟ್ಟಡ, 20 ಲಕ್ಷ ವೆಚ್ಚದ ಅಂಗನವಾಡಿ ಕಟ್ಟಡ ಉದ್ಘಾಟನೆ ಸೇರಿದಂತೆ ಒಟ್ಟು 4.59 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದರು.

ಈ ವೇಳೆ ಮಾಜಿ ಶಾಸಕ ಕಳಲೆ ಕೇಶವ ಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಕೆ.ಜಿ.ಮಹೇಶ್, ಎಸ್‌ಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉಪ್ಪಿನಹಳ್ಳಿ ಶಿವಣ್ಣ, ತಾಪಂ ಮಾಜಿ ಸದಸ್ಯ ಮಹೇಂದ್ರ ಕವಲಂದೆ ಗ್ರಾಪಂ ಅಧ್ಯಕ್ಷೆ ಪರ್ವೀನ್ ಬೇಗಂ, ಉಪಾಧ್ಯಕ್ಷ ಮಂಜುನಾಥ್, ಮುಖಂಡರಾದ ದೊರೆಸ್ವಾಮಿ ನಾಯಕ, ಕುಳ್ಳಯ್ಯ, ನಾಜಿಮ್, ರಾಹುಲ್, ನವೀನ್, ಮಾದಪ್ಪ, ಪ್ರಶಾಂತ್ ಸೇರಿದಂತೆ ಹಲವರಿದ್ದರು.

ರೈತರ ಅಭಿವೃದ್ಧಿಗೆ ಸರ್ಕಾರ ಬದ್ಧ: ಶಾಸಕ ಅನಿಲ್



ಹೆಚ್.ಡಿ.ಕೋಟೆಯಲ್ಲಿ 45ನೇ ವರ್ಷದ ರೈತರ ಹುತಾತ್ಮ ದಿನಾಚರಣೆ ನಡೆಯಿತು.

ಹೆಚ್.ಡಿ.ಕೋಟೆ, ಜು.22– ರೈತರ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದ್ದು, ಈ ಬಾರಿಯ ಬಜೆಟ್‌ನಲ್ಲಿ 52 ಸಾವಿರ ಕೋಟಿ ರೂ. ಅನುದಾನ ಮೀಸಲಿಡಲಾಗಿದೆ ಎಂದು ಶಾಸಕ ಅನಿಲ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ಆಯೋಜಿಸಿದ್ದ 45ನೇ ವರ್ಷದ ರೈತರ ಹುತಾತ್ಮ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮದು ಕೃಷಿ ಕುಟುಂಬ. ನನ್ನ ತಂದೆ ಚಿಕ್ಕಮಾದು ಅವರು ಕೃಷಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದರು. ಹಾಗೆಯೇ ನಾನು ಕೂಡ ಹೆಚ್.ಡಿ.ಕೋಟೆ, ಸರಗೂರು ತಾಲೂಕಿನ ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತಿದ್ದೇನೆ. ಕೋಟೆ, ಸರಗೂರು ಭಾಗದಲ್ಲಿ ವಿದ್ಯುತ್ ಸಮಸ್ಯೆ ನೀಗಿ ಸಲು ಮುಳ್ಳೂರು, ಪಡುಕೋಟೆ, ಚಕ್ಕೋಡನಹಳ್ಳಿಗಳಲ್ಲಿ ವಿದ್ಯುತ್ ಉಪ ಘಟಕಗಳನ್ನು ತೆರೆಯಲು ಈಗಾಗಲೇ ಕಾರ್ಯೋನ್ಮುಖರಾಗಿದ್ದೇವೆ. ತಾಲೂಕಿನಲ್ಲಿ 220 ವಿದ್ಯುತ್ ಘಟಕ ಸ್ಥಾವರ ಸ್ಥಾಪಿಸಲು 80 ಎಕರೆ ಜಮೀನು ಅವಶ್ಯಕತೆ ಇದ್ದು, ಜಮೀನು ದೊರೆತ ನಂತರ ವಿದ್ಯುತ್ ಘಟಕ ತೆರೆಯಲು ಮುಂದಾಗುತ್ತೇವೆ. ಇದರಿಂದ ಶೇ.90 ರಷ್ಟು ವಿದ್ಯುತ್ ಕೊರತೆ ನೀಗಿಸಬಹುದು ಎಂದರು.

ಕೃಷಿ ಸಚಿವರ ಜೊತೆ ಮುಂದಿನ ವರ್ಷದಿಂದ ರೈತರ ದಿನ ಮತ್ತು ರೈತರ ಹುತಾತ್ಮ ದಿನವನ್ನು ಸರ್ಕಾರದಿಂದಲೇ ಆಚರಿಸಲು ಚರ್ಚಿಸುತ್ತೇನೆ ಎಂದರು.

ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ರಾಷ್ಟ್ರೀಯ ಅಧ್ಯಕ್ಷ ಎಂ.ಎನ್ ಕುಕುನೂರ್ ಮಾತನಾಡಿ, ರೈತರಲ್ಲಿ ಒಗ್ಗಟ್ಟಿದರೆ ಏನನ್ನು ಬೇಕಾದರೂ ಸಾಧಿಸಬಹುದು ಎಂಬುದಕ್ಕೆ ಕೇಂದ್ರ ಸರ್ಕಾರದ 3 ಕೃಷಿ ಕಾಯ್ದೆಗಳಿಗೆ ತಡೆ ತಂದಿದ್ದು ಹಾಗೂ ದೇವನಹಳ್ಳಿಯಲ್ಲಿ ರೈತರ ಭೂಮಿಯನ್ನು ಉಳಿಸಿದ್ದು ರೈತ ಸಂಘಟನೆಗಳ ಹೋರಾಟದ ಫಲವೇ ಎಂದ ಅವರು, ರೈತರು ಬದುಕು ಕಟ್ಟಿಕೊಳ್ಳಬೇಕು. ರೈತರಿಗೆ ಅನ್ಯಾಯವಾದಾಗ ಸಂಘಟಿತರಾಗಿ ಹೋರಾಟ ಮಾಡಬೇಕು. ರೈತರ ಮತ್ತು ಕಾರ್ಯಕರ್ತರ ಬಲವೇ ಸಂಘಟನೆ ಎಂದರು.

ಕಾರ್ಯಕ್ರಮಕ್ಕೂ ಮುನ್ನಾ ಬೈಕ್, ಟ್ರಾಕ್ಟರ್ ಮೂಲಕ ಪಟ್ಟಣದ ಗದ್ದಿಗೆ ಸರ್ಕಲ್‌ನಿಂದ ಹ್ಯಾಂಡ್ ಪೋಸ್ಟ್‌ವರೆಗೆ ಮೆರವಣಿಗೆ ನಡೆಸಲಾಯಿತು. ಗದ್ದಿಗೆ ಸರ್ಕಲ್ ಬಳಿ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ರೈತರ ಮಕ್ಕಳಿಗೆ ಉಚಿತ ಕಂಪ್ಯೂಟರ್ ತರಬೇತಿ, ಮಹಿಳೆಯರಿಗೆ ಟೈಲರಿಂಗ್ ತರಬೇತಿ ಕೇಂದ್ರವನ್ನು ಶಾಸಕ ಅನಿಲ್, ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ತಾಲೂಕು ಅಧ್ಯಕ್ಷ ಬೂದನೂರು ಮಹದೇವ, ರಾಜ್ಯ ಯುವ ಘಟಕದ ಅಧ್ಯಕ್ಷ ರಫೀಉಲ್ಲಾ ಅವರ ಸಮ್ಮುಖದಲ್ಲಿ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಗಂಗಾಧರ್, ತಂಜಿಂ, ಶಶಿಕುಮಾರ್, ಗೋವಿಂದ್ ರಾಜ್, ಯಶೋಧ, ಈಶ್ವರ್ ರಾಜ್, ತಸ್ಲೀಮ್, ವೆಂಕಟಯ್ಯ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

ತುರ್ತು ಸಂದರ್ಭದಲ್ಲಿ ನೆರವಾಗಲು ಪೌರ ಸಂರಕ್ಷಣಾ ಸ್ವಯಂ ಸೇವಕರ ನೇಮಕ

●ಗೃಹ ರಕ್ಷಕ ದಳದ ಸುಪರ್ದಿಯಲ್ಲಿ ತರಬೇತಿ ●ಇವರಿಗೆ ನಿಗಧಿತ ವೇತನವಿಲ್ಲ; ಅನಿವಾರ್ಯ ಸಂದರ್ಭದಲ್ಲಿ ಪ್ರಯಾಣ, ಆಹಾರ ಭತ್ಯೆ

ಮೈಸೂರು, ಜು.22(ವಿವಿಹೆಚ್)– ತುರ್ತು ಸಂದರ್ಭಗಳಲ್ಲಿ ಜನ-ಜಾನುವಾರು ರಕ್ಷಣೆಗೆ ನಾಗರಿಕರನ್ನೇ ಸಜ್ಜುಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕ್ರಮ ವಹಿಸಿದೆ.

ಅಗ್ನಿ ಅನಾಹುತ, ಪ್ರಾಕೃತಿಕ ವಿಕೋಪಗಳು, ಇನ್ನಿತರ ಅವಘಡಗಳು ಸಂಭವಿಸಿದಾಗ ತಕ್ಷಣ ನೆರವಿಗೆ ಧಾವಿಸಲು 'ಪೌರ ಸಂರಕ್ಷಣಾ ಸ್ವಯಂ ಸೇವಕ'ರನ್ನು ನೇಮಕ ಮಾಡಿಕೊಳ್ಳಲು ನಿರ್ಧರಿಸಲಾಗಿದೆ. ಆತಂರಿಕ ಭದ್ರತೆ ದೃಷ್ಟಿಯಿಂದ 'ರಾಜ್ಯ ಪೌರ ರಕ್ಷಣೆ' ವಿನೂತನಾ ರಕ್ಷಣಾ ಸೇವೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಮೋದನೆ ನೀಡಿದ್ದು, ಸಿವಿಲ್ ಡಿಫೆನ್ಸ್ ಆಕ್ಟ್ ಅಡಿಯಲ್ಲಿ ಈ ಸ್ವಯಂ ಸೇವಕರನ್ನು ನೇಮಿಸಿಕೊಳ್ಳುವ ಸಂಬಂಧ ಇತ್ತೀಚೆಗೆ ಎಲ್ಲಾ ಜಿಲ್ಲೆಗಳ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸೂಚಿಸಿದ್ದಾರೆ.



ಈ ಹಿನ್ನೆಲೆಯಲ್ಲಿ ಅಗ್ನಿ ಅವಘಡ, ಪ್ರವಾಹ, ನೆರೆ ಹಾವಳಿ, ಕಟ್ಟಡ ಕುಸಿತ, ಭೂಕಂಪ ಇನ್ನಿತರ ತುರ್ತು ಸಂದರ್ಭಗಳಲ್ಲಿ ರಕ್ಷಣಾ ಕಾರ್ಯಾಚರಣೆಗೆ ಪ್ರತೀ ಜಿಲ್ಲೆಯಲ್ಲೂ ಕನಿಷ್ಟ 1 ಸಾವಿರ ಸ್ವಯಂ ಸೇವಕರ ತಂಡ ರಚಿಸಲು ಕ್ರಮ ವಹಿಸಲಾಗಿದೆ. ಈ ಸ್ವಯಂ ಸೇವಕರು ಪೊಲೀಸ್, ಅಗ್ನಿಶಾಮಕ, ಗೃಹರಕ್ಷಕ ಸಿಬ್ಬಂದಿಯೊಂದಿಗೆ ಕೈಜೋಡಿಸಲಿದ್ದಾರೆ. ಇದಕ್ಕಾಗಿ ಅಗತ್ಯ ಮಾರ್ಗದರ್ಶನದ ಜೊತೆಗೆ ಸಣ್ಣ ತರಬೇತಿಯನ್ನೂ ನೀಡಲಾಗುತ್ತದೆ.

ಆಯ್ಕೆ ಪ್ರಕ್ರಿಯೆ: ದೇಶ ಹಾಗೂ ನಾಡು ರಕ್ಷಣೆಗೆ ತುಡಿಯುವ ಮನಸ್ಸುಗಳು ಈ ಮಹತ್ವದ ಸೇವೆಗೆ ನೋಂದಾಯಿಸಿಕೊಳ್ಳಬಹುದು. ಕನಿಷ್ಠ 18 ತುಂಬಿದ 4ನೇ ತರಗತಿಯಲ್ಲಿ ತೇರ್ಗಡೆ ಹೊಂದಿದವರು ಅರ್ಜಿ ಸಲ್ಲಿಸಬಹುದು. ಆಸಕ್ತರು ಜಿಲ್ಲೆಯ ಗೃಹ ರಕ್ಷಕ ದಳದ ಕಚೇರಿಗೆ ಖುದ್ದು ಭೇಟಿ ನೀಡಿ, ತಮ್ಮ ಆಧಾರ್ ಕಾರ್ಡ್, ವಿದ್ಯಾರ್ಹತೆ ದಾಖಲೆ ನಕಲು, ಭಾವಚಿತ್ರವನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ತಮ್ಮ ಜಿಲ್ಲೆಯಲ್ಲಿ ಮಾತ್ರ ಸೇವೆಗೆ ನೋಂದಾಯಿಸಿಕೊಳ್ಳಬಹುದು. ಅನಿವಾರ್ಯ ಸಂದರ್ಭಗಳಲ್ಲಿ ಈ ಸ್ವಯಂ ಸೇವಕರ ಸೇವೆ ಬಳಸಿಕೊಳ್ಳುವುದರಿಂದ ಇವರಿಗೆ ಯಾವುದೇ ನಿಗಧಿತ ಭತ್ಯೆ ಇರುವುದಿಲ್ಲ. ಆದರೆ ಕಾರ್ಯಾಚರಣೆಗೆ ಹೋಗಿಬರಲು ಹಾಗೂ ಆಹಾರ ವ್ಯವಸ್ಥೆಗೆ ಸರ್ಕಾರ ವೆಚ್ಚ ಭರಿಸಲಿದೆ.

ಆರು ದಿನ ತರಬೇತಿ: ಪ್ರತಿ ಜಿಲ್ಲೆಯಲ್ಲಿ ತಂಡ ಮಾದರಿಯಲ್ಲಿ ಸ್ವಯಂ ಸೇವಕರನ್ನು ನೇಮಿಸಿಕೊಳ್ಳಲಾಗುತ್ತದೆ. ಹೆಚ್ಚು ಸಂಖ್ಯೆಯಲ್ಲಿ ನೋಂದಾಯಿಸಿಕೊಂಡರೆ ತಾಲೂಕುವಾರು ತಂಡಗಳನ್ನು ರಚಿಸಿ, ಆಯಾ ಭಾಗದ ಅವಶ್ಯಕತೆಗೆ ಅನುಗುಣವಾಗಿ ಸಹಕಾರ ಪಡೆಯಲಾಗುತ್ತದೆ. ಸ್ವಯಂ ಸೇವಕರಾಗಿ ನೇಮಕವಾದವರಿಗೆ ಅಪಘಾತ, ಆರೋಗ್ಯ, ತುರ್ತು ಕಾರ್ಯ ನಿರ್ವಹಣೆ ಮಾಡುವ ಬಗ್ಗೆ ಗೃಹ ರಕ್ಷಕ ದಳದ ಬೆಂಗಳೂರು ಕೇಂದ್ರ ಕಚೇರಿಯಲ್ಲಿ 6 ದಿನಗಳ ಕಾಲ ತರಬೇತಿ ನೀಡಲಾಗುತ್ತದೆ. ಬಳಿಕ ಅವರನ್ನು ಸ್ವಯಂ ಸೇವಕರೆಂದು ಪರಿಗಣಿಸಲಾಗುತ್ತದೆ.



> ಮೈಸೂರು ದಸರಾ ಸಮೀಪಿಸುತ್ತಿದೆ. ಈ ಹಿನ್ನೆಲೆಯಲ್ಲಿ ಪೌರ ಸಂರಕ್ಷಣಾ ಸ್ವಯಂ ಸೇವಕರ ನೇಮಕ ಪ್ರಕ್ರಿಯೆಯನ್ನು ತ್ವರಿತವಾಗಿ ನಡೆಸಲಾಗುವುದು. ದಸರಾ ಮಹೋತ್ಸವದಲ್ಲಿ ಜನ ದಟ್ಟಣೆ ನಿಯಂತ್ರಣ, ಹೆಚ್ಚಿನ ಭದ್ರತೆಗೆ ಈ ಸ್ವಯಂ ಸೇವಕ ತಂಡಗಳನ್ನೂ ಬಳಸಲು ಯೋಚಿಸಲಾಗಿದೆ. ಸ್ವಯಂ ಸೇವಕ ಸೇವೆಗೆ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತರು ನಗರದ ಸರಸ್ವತಿಪುರಂನ ಗೃಹರಕ್ಷಕ ದಳ ಕಚೇರಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.
> -ಡಾ.ಕಾಂತರಾಜು, ಕಮಾಂಡೆಂಟ್, ಗೃಹರಕ್ಷಕ ದಳ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾರ್ಗನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಜೂನಿಯರ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಮಾಲಿಕ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಜೂನಿಯರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಎಕ್ಕ (ಕ)	4 ಪ್ರದರ್ಶನಗಳು
ರಾಜಕಮಲ್	
3 ಬಿಹೆಚ್‌ಕೆ (ತ)	4 ಪ್ರದರ್ಶನಗಳು
ಸಂಗಂ	
ಎಕ್ಕ (ಕ)	4 ಪ್ರದರ್ಶನಗಳು
ಲಿಡೋ	
ತಮ್ಮುಡು (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಮಾದೇವ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	28 ಇಯರ್ಸ್ ಲೇಟರ್ (ಇಂ): ಬೆ10.40ಕ್ಕೆ, ರಾ.7.55ಕ್ಕೆ, ಡಿಎನ್‌ಎ (ತ): ಮ.1.10ಕ್ಕೆ, ಕುಬೇರಾ (ತೆ): ಸಂ.4.05ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ರಾ.10.25ಕ್ಕೆ.
ಸ್ಕ್ರೀನ್ 2	ಇಲಿಯೋ (3ಡಿ)(ಇಂ): ಬೆ.11.30ಕ್ಕೆ, ಮ.1.45ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ಸಂ.4ಕ್ಕೆ, ರಾ.7.10ಕ್ಕೆ, ಯುನೈಟೆಡ್ ಕಿಂಗ್‌ಡಮ್ ಆಫ್ ಕೇರಳ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಮಾದೇವ (ಕ): ಬೆ.10.30ಕ್ಕೆ, ರಾ.7.10ಕ್ಕೆ, ಮಾತೊಂದ ಹೇಳುವೆ (ಕ): ಮ.1.15ಕ್ಕೆ, 28 ಇಯರ್ಸ್ ಲೇಟರ್ (ಇಂ): ಸಂ.4.30ಕ್ಕೆ, ವ್ಯಾಸನಸಮೇತಂ ಬಂಧುಮಿತ್ರ (ಮ): ರಾ.10ಕ್ಕೆ.
ಸ್ಕ್ರೀನ್ 4	ಕುಬೇರಾ (ತೆ): ಬೆ.10.30ಕ್ಕೆ, ಸಂ.6.25ಕ್ಕೆ, ರಾ.10.15ಕ್ಕೆ, ಕುಬೇರಾ (ತ): ಮ.2.20ಕ್ಕೆ.

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ಎಡಗೈಯೇ ಅಪಘಾತಕ್ಕೆ ಕಾರಣ (ಕ): ಮ.1.45ಕ್ಕೆ, ಸಂ.4.25ಕ್ಕೆ, ಸಂ.6.50ಕ್ಕೆ, ಮಾದೇವ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಮಾದೇವ (ಕ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ.
ಸ್ಕ್ರೀನ್ 3	ಯುದ್ಧಕಾಂಡ 2 (ಕ): ಸಂ.6.50ಕ್ಕೆ.
ಸ್ಕ್ರೀನ್ 4	ಹೌಸ್‌ಫುಲ್ 5ಎ (ಹಿಂ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.44ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆ ಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

'ಅಮ್ಮ ನಿನ್ನ ಎದೆಯಾಳದಿಂದ', 'ದೂರ ದೇಶದ ದೇವರು' ಕೃತಿಗಳ ಬಿಡುಗಡೆ



ಮೈಸೂರಿನ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಸಭಾಂಗಣದಲ್ಲಿ ಎರಡು ಕೃತಿಗಳನ್ನು ಲೋಕಾರ್ಪಣೆಗೊಳಿಸಲಾಯಿತು.

ಮೈಸೂರು, ಜು.22(ವಿವಿಹೆಚ್)– ಮೈಸೂರಿನ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಸಭಾಂಗಣದಲ್ಲಿ ಅವ್ವ ಪುಸ್ತಕಾಲಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಎರಡು ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಸಾಹಿತಿ ಕಿರಣ್ ಪಿ ಕೌಶಿಕ್ ಅವರ 'ಅಮ್ಮ ನಿನ್ನ ಎದೆಯಾಳದಿಂದ' ಮತ್ತು ಮಂಜುನಾಥ್ ಕುಣಿಗಲ್ ಅವರ 'ದೂರ ದೇಶದ ದೇವರು' ಕೃತಿಗಳನ್ನು ಬಿಡುಗಡೆಗೊಳಿಸಲಾಯಿತು.

ಈ ವೇಳೆ ಮಾತನಾಡಿದ ಪತ್ರಕರ್ತ ಸಿ.ಕೆ.ಮಹೇಂದ್ರ, ಕೃತಿಗಳು ವ್ಯಕ್ತಿ, ವ್ಯಕ್ತಿತ್ವ ಮತ್ತು ವಾಸ್ತವ ಅಂಶಗಳನ್ನು ಒಳಗೊಂಡು ಜನರ ಮನಸ್ಸಿಗೆ ನೇರವಾಗಿ ನಾಟುವಂತಿರಬೇಕು. ಅಂತಹ ಕೃತಿಗಳನ್ನು ಇಂದಿನ ಸಾಹಿತಿಗಳು ನೀಡುವಲ್ಲಿ ಸಫಲರಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಅಮ್ಮನ ಅವಶ್ಯಕತೆ, ನೋವು-ನಲಿವು, ಪಶ್ಚಾತ್ತಾಪ, ಜಗಳ, ಪ್ರೀತಿ ಸೇರಿದಂತೆ ತಾಯಿಯೊಂದಿಗಿನ ಎಲ್ಲಾ ಒಡನಾಟಗಳನ್ನು ಅಮ್ಮ ನಿನ್ನ ಎದೆಯಾಳದಿಂದ ಕೃತಿ ನೀಡಿದೆ. ಈ ಕೃತಿ ಪ್ರತಿ ಅಮ್ಮಂದಿರ ಕಥೆಯಾಗಿದ್ದು, ತ್ಯಾಗಮಯಿ ತಾಯಿಯನ್ನು ಈ ಕೃತಿ ಸದಾ ಹಿಂಬಾಲಿಸುತ್ತದೆ. ದೂರ ದೇಶದ ದೇವರು ಕೃತಿ ಪ್ರತಿಯೊಬ್ಬರ ಹೃದಯಕ್ಕೆ ಹತ್ತಿರವಾದ ಕಥೆಯನ್ನು ಒಳಗೊಂಡಿದ್ದು, ಸರಳ ಭಾಷೆಯ ಮೂಲಕ ಜನರಿಗೆ ಬೇಗ ಹತ್ತಿರವಾಗಿಬಿಡುತ್ತದೆ ಎಂದು ತಿಳಿಸಿದರು.

ಅವ್ವ ಪುಸ್ತಕಾಲಯದ ಸಂಸ್ಥಾಪಕ, ಪ್ರಕಾಶಕ ಅನಂತ್ ಕುಣಿಗಲ್ ಮಾತನಾಡಿ, ಓದು, ಸಾಹಿತ್ಯ ಕೇವಲ ಬರಹಗಾರರನ್ನಷ್ಟೆ ಅಲ್ಲದೇ ಎಲ್ಲಾ ಮನಸ್ಥಿತಿಗಳನ್ನೊಳಗೊಂಡ ಮನುಷ್ಯರನ್ನು ತಲುಪುವಲ್ಲಿ ಯಶಸ್ವಿಯಾಗುವುದು ನೇರ, ಸರಳ ಮತ್ತು ವಾಸ್ತವ ಅಂಶಗಳನ್ನು ಒಳಗೊಂಡಾಗ ಮಾತ್ರ. ಈ ರೀತಿ ಎಲ್ಲಾ ಮಾದರಿಯ ಸಾಹಿತ್ಯ ಆಸಕ್ತರನ್ನು ತನ್ನ ವ್ಯಾಪ್ತಿಗೆ ಸೆಳೆಯುವಲ್ಲಿ ಈ ಎರಡೂ ಕೃತಿಗಳು ಸಫಲವಾಗಿವೆ. ಪುಸ್ತಕಗಳೇ ಮಾತನಾಡುವಾಗ ನಾವು ಮಾತನಾಡುವ ಅಗತ್ಯತೆ ಇರುವುದಿಲ್ಲ ಎಂದು ಹೇಳಿದರು. ಸಾಹಿತಿಗಳಾದ ಮಂಜುನಾಥ್ ಕುಣಿಗಲ್, ಕಿರಣ್ ಪಿ.ಕೌಶಿಕ್, ಮೂಕನಹಳ್ಳಿ ರಂಗಸ್ವಾಮಿ ಹಾಜರಿದ್ದರು. ತೃಪ್ತಿ ಪಟಗಾರ ನಿರೂಪಿಸಿದರು. ಸುನೀಲ್ ನಾಗರಾಜ್ ಸ್ವಾಗತಿಸಿ, ವಂದಿಸಿದರು.

ಹಾಲು ಸಂಗ್ರಹಣೆಯಲ್ಲಿ ಮೈಮುಲ್ ಮುಖ್ಯ ಕಾರ್ಯನಿರ್ವಾಹಕರ ಪರಿಶ್ರಮವಿದೆ

ಮೈಮುಲ್ ಅಧ್ಯಕ್ಷ ಚೆಲುವರಾಜು ಪ್ರಶಂಸೆ



ಮೈಸೂರಿನ ಸಿದ್ಧಾರ್ಥನಗರದ ಶಿಕ್ಷಕರ ಭವನದಲ್ಲಿ ಮಂಗಳವಾರ ಮೈಮುಲ್ ಮುಖ್ಯ ಕಾರ್ಯನಿರ್ವಾಹಕರಿಗೆ ಆಯೋಜಿಸಿದ್ದ ಆಟೋಟ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಮೈಸೂರು, 22(ಬಿಎಲ್‌ಯು)– ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದಲ್ಲಿ 10 ಲಕ್ಷಕ್ಕೂ ಹೆಚ್ಚು ಲೀಟರ್ ಹಾಲು ಸಂಗ್ರಹಣೆಯಲ್ಲಿ ಒಕ್ಕೂಟದ ಮುಖ್ಯ ಕಾರ್ಯನಿರ್ವಾಹಕರ ಪರಿಶ್ರಮವಿದೆ ಎಂದು ಮೈಮುಲ್ ಅಧ್ಯಕ್ಷ ಚೆಲುವರಾಜು ಪ್ರಶಂಸಿಸಿದರು.

ಮೈಸೂರಿನ ಸಿದ್ಧಾರ್ಥನಗರದ ಶಿಕ್ಷಕರ ಭವನದಲ್ಲಿ ಇಂದು ಮುಖ್ಯ ಕಾರ್ಯನಿರ್ವಾಹಕರಿಗೆ ಆಯೋಜಿಸಿದ್ದ ಆಟೋಟ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಿ ಮಾತನಾಡಿದ ಅವರು, ಸೊಸೈಟಿಯ ಬೆಳವಣಿಗೆಯನ್ನು ವೈಯಕ್ತಿಕ ಬದುಕಿನಷ್ಟೆ ಪ್ರೀತಿಸುತ್ತಿದ್ದೀರಾ ಎಂದು ಹೇಳಿದರು.

ಇಂದು ಪ್ರತಿಯೊಂದು ವಸ್ತುವಿನ ಬೆಲೆ ಹೆಚ್ಚಳವಾಗುತ್ತಿದೆ. ಪಶು ಆಹಾರ, ಔಷಧಿ ಮತ್ತು ರೈತರ ದಿನ ಬಳಕೆಯ ಪ್ರತಿಯೊಂದು ವಸ್ತುವಿನ ಬೆಲೆ ಗಗನಕ್ಕೇರುತ್ತಿದೆ. ಇದರಿಂದ ಹಾಲಿನ ದರ ಹೆಚ್ಚಳ ಮಾಡುವ ಅನಿವಾರ್ಯತೆ ಎದುರಾಗಿದೆ ಎಂದು ತಿಳಿಸಿದರು.

ಇಡೀ ಕರ್ನಾಟಕದಲ್ಲಿ ದಕ್ಷಿಣ ಕನ್ನಡ ಬಿಟ್ಟರೆ ಅತೀ ಹೆಚ್ಚು ಹಾಲಿನ ದರವನ್ನು ಮೈಮುಲ್ ನೀಡುತ್ತಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಕೊಡಲು ಪ್ರಯತ್ನ ಮಾಡೋಣ ಎಂದು ಚೆಲುವರಾಜು ಹೇಳಿದರು.

ಇದೇ ವೇಳೆ ಮಾತನಾಡಿದ ಮೈಮುಲ್ ನಿರ್ದೇಶಕ ಎ.ಟಿ.ಸೋಮಶೇಖರ್, ಅತ್ಯಂತ ಒತ್ತಡದಲ್ಲಿ ಕೆಲಸ ಮಾಡುವ ಕಾರ್ಯದರ್ಶಿಗಳಿಗೆ ಇಂತಹ ಸ್ಪರ್ಧೆ ಆಯೋಜನೆ ಮಾಡಿರುವುದು ಒಳ್ಳೆಯ ಬೆಳವಣಿಗೆ ಎಂದು ಹೇಳಿದರು.

ಮೈಸೂರು ಜಿಲ್ಲೆಯ 1200 ಕಾರ್ಯನಿರ್ವಾಹಕ ಅಧಿಕಾರಿಗಳ ಪೈಕಿ ತಾಲೂಕು ಮಟ್ಟದಲ್ಲಿ ವಿಜೇತರಾದ 195 ಮಂದಿಗೆ ಪದಕ ನೀಡಿ ಗೌರವಿಸಲಾಯಿತು. ಜಿಲ್ಲಾ ಮಟ್ಟದ ಹಗ್ಗ ಜಗ್ಗಾಟದಲ್ಲಿ ಪಿರಿಯಾಪಟ್ಟಣಕ್ಕೆ ಮೊದಲ ಹಾಗೂ ಹುಣಸೂರಿಗೆ ದ್ವಿತೀಯ ಸ್ಥಾನ ಲಭಿಸಿತು.

ರಂಗೋಲಿ ಸ್ಪರ್ಧೆಯಲ್ಲಿ ಮೈಸೂರು ತಾಲೂಕು ಮೈದನಹಳ್ಳಿಯ ಸುಮಲತಾ ಪ್ರಥಮ ಸ್ಥಾನವನ್ನು, ಹೆಚ್.ಡಿ.ಕೋಟೆಯ ಮುದ್ದಯ್ಯನಹುಂಡಿಯ ರೇಣುಕಾ ದ್ವಿತೀಯ ಸ್ಥಾನವನ್ನು ಹಾಗೂ ಹುಣಸೂರು ತಾಲೂಕಿನ ಹಂಚ್ಯಾದ ಕವಿತಾ ತೃತೀಯ ಸ್ಥಾನ ಪಡೆದರು.

ಮೈಮುಲ್ ನಿರ್ದೇಶಕರಾದ ಕೆ.ಜಿ.ಮಹೇಶ್, ಕೆ.ಉಮಾಶಂಕರ್, ಸಿ.ಓಂ ಪ್ರಕಾಶ್, ಪಿ.ಎಂ.ಪ್ರಸನ್ನ, ಕೆ.ಈರೇಗೌಡ, ಕೆ.ಎಸ್.ಕುಮಾರ್, ದ್ರಾಕ್ಷಾಯಿಣಿ, ಬಸವ ರಾಜಪ್ಪ, ಲೀಲಾ ಬಿ.ಕೆ., ನಾಗರಾಜು, ನೀಲಾಂಬಿಕೆ, ಮಹೇಶ್ ಕುರಹಟ್ಟಿ, ಶಿವಗಾಮಿ ಷಣ್ಮುಗಂ, ಬಿ.ಗುರುಸ್ವಾಮಿ, ಬಿ.ಎ.ಪ್ರಕಾಶ್, ಎ.ಬಿ.ಮಲ್ಲಿಕಾ, ರವಿಕುಮಾರ್, ವ್ಯವಸ್ಥಾಪಕ ನಿರ್ದೇಶಕ ಕೆ.ಎನ್.ಸುರೇಶ್ ನಾಯಕ್, ಮಾರುಕಟ್ಟೆ ವ್ಯವಸ್ಥಾಪಕ ಹೆಚ್.ಕೆ.ಜಯಶಂಕರ್, ಪಿ ಅಂಡ್ ಐ ವ್ಯವಸ್ಥಾಪಕ ಕರಿಬಸವರಾಜು ಇತರರು ಹಾಜರಿದ್ದರು.

ಇಂದಿನಿಂದ ಭಾರಿ ಮಳೆ

ಮೈಸೂರು, ಜು.22– ಮೈಸೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗುವ ಮುನ್ಸೂಚನೆ ಲಭ್ಯವಾಗಿದೆ.



ಕೊಡಗು ಜಿಲ್ಲೆಯಲ್ಲಿ ನಾಳೆ(ಜು.23)ಯಿಂದ ಐದು ದಿನ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗಬಹುದು. ಮೈಸೂರು ಜಿಲ್ಲೆಯಲ್ಲೂ ಜು.26 ಹಾಗೂ 27ರಂದು ಬಿರುಗಾಳಿಯೊಂದಿಗೆ ಮಳೆ ಸುರಿಯುವ ಸಾಧ್ಯತೆ ಇದೆ. ಇನ್ನು ಚಾಮರಾಜನಗರ ಹಾಗೂ ಮಂಡ್ಯ ಜಿಲ್ಲೆಗಳಲ್ಲಿ ತುಂತುರು ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮಾಹಿತಿ ನೀಡಿರುವುದಾಗಿ ಮೈಸೂರು ನಾಗನಹಳ್ಳಿ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಜಿಲ್ಲಾಧಿಕಾರಿಗೆ ಮನವಿ



ಮೈಸೂರಿನ ಕಾರ್ಮಿಕರ ಕಚೇರಿಯನ್ನು 3 ನೇ ಅಂತಸ್ತಿಗೆ ಸ್ಥಳಾಂತರ ಮಾಡದಂತೆ ಕಾರ್ಮಿಕ ಸಂಘಟನೆಯ ಪದಾಧಿಕಾರಿಗಳು ಮಂಗಳವಾರ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ಅವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಿದರು.

ಮುಡಾ ನಿವೇಶನ ಹಗರಣ

ಸುಪ್ರೀಂ ತೀರ್ಪು ಸತ್ಯಕ್ಕೆ ಸಂದ ಜಯ


ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಅಭಿಮತ

ಮೈಸೂರು, ಜು.22(ಎಂಕೆ)– ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿಗೆ ಸುಪ್ರೀಂ ಕೋರ್ಟ್ ರಿಲೀಫ್ ನೀಡಿರುವುದು ಸತ್ಯಕ್ಕೆ ಸಿಕ್ಕ ಜಯವಾಗಿದೆ ಎಂದು ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಹರ್ಷ ವ್ಯಕ್ತಪಡಿಸಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಇಡಿ(ಜಾರಿ ನಿರ್ದೇಶನಾಲಯ) ಬಳಸಿಕೊಂಡು ಸಿಎಂ ಸಿದ್ದರಾಮಯ್ಯ ಅವರನ್ನು ಇಕ್ಕಟ್ಟಿಗೆ ಸಿಲುಕಿಸಲು ಕೇಂದ್ರ ಸರ್ಕಾರ ಪ್ರಯತ್ನಿಸಿತು. ಇಡಿ ಜೊತೆಗೆ ಬಿಜೆಪಿಗೂ ಸುಪ್ರೀಂ ಕೋರ್ಟ್ ಛೀಮಾರಿ ಹಾಕಿದೆ ಎಂದರು.

ಇಡಿ, ಸಿಬಿಐ ನಂತಹ ಸಂಸ್ಥೆಗಳನ್ನು ಬಿಜೆಪಿ ತನ್ನ ಅಸ್ತ್ರವನ್ನಾಗಿ ಬಳಸಿಕೊಂಡಿದೆ. ಬಿಜೆಪಿ ಬಗ್ಗೆ ಯಾರೇ ಮಾತನಾಡಿದರು ಅವರ ಮನೆಯ ಮುಂದೆ ಬೆಳ್ಳಂಬೆಳಗ್ಗೆ ರೈಡ್ ಮಾಡಿಸುವ ಕೆಲಸವನ್ನು ಬಿಜೆಪಿ ಮಾಡುತ್ತಿತ್ತು. ಈ ಹಿಂದೆಯೂ ವಿರೋಧ ಪಕ್ಷಗಳ ನಾಯಕರನ್ನು ಗುರಿಯಾಗಿಸಿಕೊಂಡು ಇಡಿ ದಾಳಿ ನಡೆಸಲಾಗಿದೆ. ಇದೆಲ್ಲವನ್ನೂ ಪರಿಶೀಲಿಸಿದ ಸುಪ್ರೀಂಕೋರ್ಟ್ ಕೇಂದ್ರಕ್ಕೆ ಎಚ್ಚರಿಕೆ ನೀಡಿದೆ. ನ್ಯಾಯಾಲಯದ ತೀರ್ಪಿನಿಂದ ಸಿಎಂ ಸಿದ್ದರಾಮಯ್ಯನವರ ಆತ್ಮಸ್ಥೈರ್ಯ ಮತ್ತಷ್ಟು ಹೆಚ್ಚಾಗಿದೆ ಎಂದರು.

ದಸರಾ ವೇಳೆಗೆಲ್ಲಾ ಕಾಮಗಾರಿಗಳು ಪೂರ್ಣ...!




ದಸರಾ ವಸ್ತುಪ್ರದರ್ಶನ ಆವರಣದಲ್ಲಿ ನಡೆಯುತ್ತಿರುವ ಕಾಮಗಾರಿಗಳು ದಸರಾ ವೇಳೆಗೆ ಪೂರ್ಣವಾಗಲಿದೆ. ರಾಜ್ಯ ಸರ್ಕಾರದಿಂದ ಸುಮಾರು 24 ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ಕಳೆದ 15-20 ದಿನಗಳ ಹಿಂದೆ ಅನುದಾನ ಬಂದಿದ್ದು, ಟೆಂಡರ್ ಕರೆದು ಕಾಮಗಾರಿ ಆರಂಭಿಸಿದ್ದೇವೆ. ಈ ದಸರಾ ಉದ್ಘಾಟನೆ ವೇಳೆಯೇ ಕೈಗೊಂಡಿರುವ ಯೋಜನೆಗಳ ಉದ್ಘಾಟನೆಯನ್ನೂ ಮಾಡಬೇಕು ಎಂದು ಹಗಲು ರಾತ್ರಿ ಕೆಲಸ ಮಾಡುತ್ತಿದ್ದೇವೆ. ದಸರಾ ಉದ್ಘಾಟನೆ ವೇಳೆಗೆ ಪೂರ್ಣಗೊಳಿಸುವ ವಿಶ್ವಾಸವಿದೆ.
– ಅಯೂಬ್ ಖಾನ್

ಮುಡಾ ಪ್ರಕರಣದಲ್ಲಿ ಸಿಎಂ ಪತ್ನಿ ವಿರುದ್ಧದ ಸಮನ್ಸ್ ರದ್ದು

ಮೈಸೂರಲ್ಲಿ ಸಿದ್ದರಾಮಯ್ಯ, ಹೆಚ್.ವಿ.ರಾಜೀವ್ ಅಭಿಮಾನಿ ಬಳಗದಿಂದ ಸಂಭ್ರಮಾಚರಣೆ

ಮೈಸೂರು, ಜು.22(ಎಂಕೆ)– ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಪತ್ನಿ ಪಾರ್ವತಿ ಅವರಿಗೆ ಜಾರಿ ನಿರ್ದೇಶನಾಲಯ ನೀಡಿದ್ದ ಸಮನ್ಸ್ ರದ್ದುಪಡಿಸಿದ್ದ ಹೈಕೋರ್ಟ್ ಆದೇಶವನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿದಿರುವ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅಭಿಮಾನಿ ಬಳಗ ಹಾಗೂ ಹೆಚ್.ವಿ.ರಾಜೀವ್ ಸ್ನೇಹ ಬಳಗದ ವತಿಯಿಂದ ನಗರದ 101 ಗಣಪತಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಸಿಹಿ ಹಂಚಿ ಸಂಭ್ರಮಿಸಲಾಯಿತು.



ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಪತ್ನಿ ಪಾರ್ವತಿ ಅವರಿಗೆ ಇಡಿ ನೀಡಿದ್ದ ಸಮನ್ಸ್ ರದ್ದು ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಹೆಚ್.ವಿ.ರಾಜೀವ್ ಸ್ನೇಹ ಬಳಗದ ವತಿಯಿಂದ ಸಿಹಿ ಹಂಚಿ ಸಂಭ್ರಮಿಸಲಾಯಿತು.

ಸಿದ್ದರಾಮಯ್ಯ ಅವರ ಭಾವಚಿತ್ರಗಳನ್ನು ಹಿಡಿದು ಜಮಾಯಿಸಿದ ಅಭಿಮಾನಿಗಳು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಶ್ರೀಮತಿ ಪಾರ್ವತಿ ಅವರ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಸತ್ಯಮೇವ ಜಯತೆ ಘೋಷಣೆ ಕೂಗಿ ಸಾರ್ವಜನಿಕರಿಗೆ ಸಿಹಿ ವಿತರಿಸಿದರು.

ಬಳಿಕ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಮಾತನಾಡಿ, ಭಾರತರತ್ನ ಡಾ.ಬಿ ಆರ್.ಅಂಬೇಡ್ಕರ್ ದೇಶಕ್ಕೆ ರಚಿಸಿಕೊಟ್ಟ ಸಂವಿಧಾನದ ಅಡಿಯಲ್ಲಿ ನ್ಯಾಯಾಂಗ, ಕಾರ್ಯಾಂಗ ಮತ್ತು ಶಾಸಕಾಂಗ ವ್ಯವಸ್ಥೆ ಬಲಿಷ್ಠವಾಗಿದೆ, ಪಾರದರ್ಶಕವಾಗಿದೆ ಎಂಬುದಕ್ಕೆ ಶ್ರೀಮತಿ ಪಾರ್ವತಿ ಅವರು, ಭೂ ಪರಿಹಾರವಾಗಿ ನಿವೇಶನಗಳನ್ನು ಪಡೆದುಕೊಂಡ ಪ್ರಕ್ರಿಯೆಯಲ್ಲಿ ಮುಡಾ ಸರಿಯಾಗಿ ಕಾರ್ಯನಿರ್ವಹಿಸಿದೆ ಎಂದಿರುವ ಸುಪ್ರಿಂ ಕೋರ್ಟ್ ಹೇಳಿಕೆ ನಿದರ್ಶನ ಎಂದರು.

2014ರಲ್ಲಿ ಭೂ ಕಾಯ್ದೆ ಜಾರಿಗೆ ಬಂದ ನಂತರ ಭೂ ಮಾಲೀಕರಿಗೆ ಮಾರುಕಟ್ಟೆ ಬೆಲೆಗಿಂತ ಮೂರು ಪಟ್ಟು ಪರಿಹಾರವನ್ನ ನೀಡಬೇಕು ಎಂಬ ನಿಯಮಾವಳಿ ಜಾರಿಯಾಗಿದೆ. ಅಲ್ಲದೆ ಕೇಂದ್ರ ಮತ್ತು ರಾಜ್ಯ ಬಿಜೆಪಿ ಆಡಳಿತದಲ್ಲಿದ್ದ ಜನಪ್ರತಿನಿಧಿಗಳ ಸಮಿತಿಯಿಂದಲೂ ಕೂಡ ಮುಡಾ ನಿವೇಶನ ಭೂ ಪರಿಹಾರ ಮತ್ತು ಬದಲಿ ನಿವೇಶನಕ್ಕೆ ಒಪ್ಪಿಗೆ ನೀಡಲಾಗಿತ್ತು. ಆದರೆ, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಇಡಿ(ಜಾರಿ ನಿರ್ದೇಶನಾಲಯ)ಯನ್ನು ದುರ್ಬಳಕೆ ಮಾಡಿಕೊಂಡು ವ್ಯವಸ್ಥೆಯನ್ನೆ ಅತಂತ್ರ ಮಾಡಲು ಹೊರಟಿತ್ತು ಎಂದು ದೂರಿದರು.

ಆದರೆ, ಈಗ ಬಿಜೆಪಿ ಷಡ್ಯಂತ್ರಕ್ಕೆ ನ್ಯಾಯಾಲಯದ ತೀರ್ಪು ಭಾರಿ ಮುಖಭಂಗವಾಗಿದ್ದು, ಬಿಜೆಪಿ ನಡೆಸಿದ ಬೆಂಗಳೂರು-ಮೈಸೂರು ಕಾಲ್ನಡಿಗೆ ಎಲ್ಲವೂ ಹೈಡ್ರಾಮಾ ಎಂಬುದು ಕರ್ನಾಟಕದ ಜನತೆಗೆ ಮನವರಿಕೆಯಾಗಿದೆ. ಈ ಕೂಡಲೇ ತಮ್ಮ ತಪ್ಪನ್ನ ಅರಿತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಮತ್ತು ಕರ್ನಾಟಕ ಬಿಜೆಪಿ ಸಮಿತಿ ರಾಜ್ಯದ ಜನತೆಗೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

ನಗರ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿ ಶಿವಕುಮಾರ್, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಕೆಆರ್.ಬ್ಯಾಂಕ್ ಅಧ್ಯಕ್ಷ ಬಸವರಾಜ ಬಸಪ್ಪ, ಮುಖಂಡರಾದ ಕಂಸಾಳೆ ರವಿ, ಮೋಹನ್ ಕುಮಾರ್, ಮಲ್ಲೇಶ್ ಮಲ್ಲು, ಶ್ರೀಕಾಂತ್ ಯಾದವ್, ಹೇಮಂತ್, ಉಮೇಶ್, ಎಸ್.ಎನ್.ರಾಜೇಶ್ ಮತ್ತಿತರರಿದ್ದರು.

ಗೋ.ಮಧುಸೂದನ್‌ಗೆ ಸಿಹಿ...!

ಮುಡಾ ಪ್ರಕರಣದಲ್ಲಿ ಸಿಎಂ ಪತ್ನಿಗೆ ಸುಪ್ರೀಂ ಕೋರ್ಟ್‌ನಿಂದ ರಿಲೀಫ್ ಸಿಕ್ಕಿದ ಹಿನ್ನೆಲೆಯಲ್ಲಿ 101 ಗಣಪತಿ ದೇವಸ್ಥಾನದದ ಬಳಿ ಸಿಹಿ ಹಂಚುತ್ತಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮಾನಿಗಳು, ಕಾರಿನಲ್ಲಿ ಅದೇ ಮಾರ್ಗದಲ್ಲಿ ಬಂದ ಬಿಜೆಪಿ ಹಿರಿಯ ಮುಖಂಡ, ಮಾಜಿ ವಿಧಾನಪರಿಷತ್ ಸದಸ್ಯ ಗೋ ಮಧುಸೂದನ್ ಅವರಿಗೂ ಸಿಹಿ ನೀಡಿದರು. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಸಿಹಿ ಸ್ವೀಕರಿಸಿದ ಗೋ ಮಧುಸೂದನ್, ಸಿದ್ದರಾಮಯ್ಯನವರಿಗೆ ಸೂಪರ್ ಜೈ ಎಂದಿದ್ದಾರೆ.

ಮೈಸೂರು ಬೇಸಿಗೆ ರೇಸ್

9ನೇ ದಿನ, ಬುಧವಾರ, 23-7-2025

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 1.30 ಗಂಟೆಗೆ

I. ಕೊನಾರ್ಕ್ ಪ್ಲೇಟ್ ಡಿII–1200 ಮೀ. ರೇಟೆಡ್ 20 ರಿಂದ 45. ಮ.1.30ಕ್ಕೆ
1. ಬಯೋಮೆಟ್ರಿಕ್ 2. ಸೆರೆಯ್ 3. ಲಕ್ಕಿ ಪಾಯಿಂಟ್

II. ಪಶ್ಚಿಮವಾಹಿನಿ ಪ್ಲೇಟ್–1100 ಮೀ. ರೇಟೆಡ್ 00 ರಿಂದ 25. ಮ.2.00ಕ್ಕೆ
1 ಅನುಸ್ತುಭ 2. ಸಿಟಿ ಅಪ್ ಹಸ್ಲ್ 3. ಜನ್ನತ್

III. ಕೊನಾರ್ಕ್ ಪ್ಲೇಟ್ ಡಿI–1200 ಮೀ. ರೇಟೆಡ್ 20 ರಿಂದ 45. ಮ.2.30ಕ್ಕೆ
1. ಮಾರ್ಕ್ ಒನ್ 2 ಫಿಲಿಸಿಟಾ 3. ರೆಡ್ ಹಿಲ್ಸ್

IV. ಕುಂಟಿಕೊಪ್ಪ ಪ್ಲೇಟ್ ಡಿII –1400 ಮೀ. ರೇಟೆಡ್ 20 ರಿಂದ 45. ಮ.3.00ಕ್ಕೆ
1. ಡಿವೈನ್ ಆರ್ಟ್ 2. ಸೀ ದ ಸನ್ 3. ಒಪಸ್ ಒನ್

V. ದೊಡ್ಡಬಳ್ಳಾಪುರ ಪ್ಲೇಟ್–1600 ಮೀ. ರೇಟೆಡ್ 20 ರಿಂದ 45. ಮ.3.30ಕ್ಕೆ
1. ಸ್ಯಾಂಡಲ್ ಕಿಂಗ್ 2. ಸಪಿಯಂಟ್ 3. ಒನ್ ನೈಷನ್

VI. ಮೈಸೂರ್ ಬೇಸಿಗೆ ಮಿಲಿಯನ್–1400 ಮೀ. 4 ವರ್ಷ (ಟರ್ಮ್ಸ್). ಸಂ.4.00ಕ್ಕೆ
1. ಕ್ಯಾಸ್ಟೀಲ್ 2. ಉಚ್ಚೈ ಶ್ರವಸ್ 3. ಪ್ಯೂರ್ ಫಾರ್ ಶ್ಯೂರ್

VII. ಕುಂಟಿಕೊಪ್ಪ ಪ್ಲೇಟ್ ಡಿI –1400 ಮೀ. ರೇಟೆಡ್ 20 ರಿಂದ 45. ಸಂ.4.30ಕ್ಕೆ
1. ರೈಸ್ ಅಗೇನ್ 2. ಕನ್ಯಾರಾಶಿ 3. ಹಿರೋಯಿಸಮ್

VIII. ಇಟಾರ್ಸಿ ಪ್ಲೇಟ್–1400 ಮೀ. ರೇಟೆಡ್ 40 ರಿಂದ 65. ಸಂ5.00ಕ್ಕೆ
1. ನ್ಯಾಚುರಲ್ ವಾರಿಯರ್ 2. ಸರ್ ಕ್ಯಾಲುಕಸ್ 3. ಮಿಸ್ಟಿಕ್ ಡಿವೈನ್

ದಿನದ ಅತ್ಯುತ್ತಮ	: ಕ್ಯಾಸ್ಟೀಲ್
ಡಬ್ಬಲ್	: ಬಯೋಮೆಟ್ರಿಕ್, ರೈಸ್ ಅಗೇನ್
ಜಾಕ್‌ಪಾಟ್	: 4, 5, 6, 7 ಮತ್ತು 8
ಮಿನಿ ಜಾಕ್‌ಪಾಟ್	: 5, 6, 7 ಮತ್ತು 8
I ಟ್ರಿಬಲ್	: 1, 2 ಮತ್ತು 3
II ಟ್ರಿಬಲ್	: 3, 4 ಮತ್ತು 5
III ಟ್ರಿಬಲ್	: 6, 7 ಮತ್ತು 8
ಎಕ್ಸ್‌ಆಕ್ಸ್	: 1 ರಿಂದ 8

ಟಿಪ್‌ಸ್ಟರ್ ಪಿಜಿಸಿ

ಕೊರಟಗೆರೆ ಬಳಿ ಬೇಕರಿಗೆ ನುಗ್ಗಿದ ಲಾರಿ: ಮೂವರು ಸಾವು

ತುಮಕೂರು, ಜು.22– ತುಮಕೂರು ಜಿಲ್ಲೆಯ ಕೊರಟಗೆರೆ ತಾಲೂಕಿನ ಕೋಳಾಲದಲ್ಲಿ ಮಂಗಳವಾರ ಗೊಬ್ಬರ ತುಂಬಿದ್ದ ಲಾರಿಯೊಂದು ರಸ್ತೆ ಬದಿಯ ಬೇಕರಿಗೆ ನುಗ್ಗಿದ ಪರಿಣಾಮ ಮೂವರು ಮೃತಪಟ್ಟಿದ್ದು, ನಾಲ್ವರು ಗಾಯಗೊಂಡಿದ್ದಾರೆ. ಮಂಗಳವಾರ ಬೆಳಗ್ಗೆ ಗೊಬ್ಬರ ತುಂಬಿದ್ದ ಲಾರಿ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಬೇಕರಿಗೆ ನುಗ್ಗಿದೆ. ಭೀಕರ ಅಪಘಾತದಲ್ಲಿ ಕಾಟೇನಹಳ್ಳಿ ನಿವಾಸಿ ರಂಗಶಾಮಯ್ಯ(65) ಹಾಗೂ ಪುರದಹಳ್ಳಿಯ ಬೈಲಪ್ಪ(65) ಸೇರಿ ಮೂವರು ಮೃತಪಟ್ಟಿದ್ದಾರೆ. ಅಪಘಾತದಲ್ಲಿ ಕಾಂತರಾಜು, ಸಿದ್ಧಗಂಗಮ್ಮ, ಜಯಣ್ಣ ಹಾಗೂ ಮೋಹನ್ ಕುಮಾರ್ ಅವರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಈ ಸಂಬಂಧ ಕೋಳಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ನಾಳೆ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿರುವ
ಜನಪ್ರಿಯ ಶಾಸಕರು ಮತ್ತು ಆತ್ಮೀಯ ಸ್ನೇಹಿತರಾದ
ಶ್ರೀ ಕೆ.ಹರೀಶ್‌ಗೌಡ
ರವರಿಗೆ
ಜನ್ಮದಿನದ ಶುಭಾಶಯಗಳು
ದಿನಾಂಕ: 24.07.2025
ಶುಭಾಶಯಕೋರುವವರು
ಸಾ.ರಾ.ನಂದೀಶ್ ಮಾಜಿ ಅಧ್ಯಕ್ಷರು ಜಿಲ್ಲಾ ಪಂಚಾಯತ್ ಮತ್ತು ಸ್ನೇಹಿತರು